ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಮೇ 12 ಮಂಗಳವಾರ 2026

47

ಸಂಪುಟ: 47 | ಸಂಚಿಕೆ: 26 | ಪುಟಗಳು: 12

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4

ಮೈಸೂರು ಮಿತ್ರ

ಮೇ 17, 'ಒಳಚರಂಡಿ ಪುರಾಣ' ನಾಟಕ



ಮೈಸೂರು,ಮೇ 11(ಪಿಎಂ)– ಅಂತ ರಂಗ ತಂಡದ ಹೊಸ ನಾಟಕ 'ಒಳಚರಂಡಿ ಪುರಾಣ' ಮೈಸೂರಿನ ನಟನ ರಂಗ ತಂಡದ ಸಹಯೋಗದಲ್ಲಿ ಮೇ 17ರಂದು ಸಂಜೆ 6.30ಕ್ಕೆ ಮೈಸೂರಿನ ರಾಮಕೃಷ್ಣನಗರ ದಲ್ಲಿನ ವಾಸು ಬಡಾವಣೆಯ ನಟನ ಸಭಾಂಗಣದಲ್ಲಿ ಪ್ರದರ್ಶನಗೊಳ್ಳಲಿದೆ.

ಅಂತರಂಗ ತಂಡ 46 ವರ್ಷಗಳಿಂದ ಕ್ರಿಯಾಶೀಲ ರಂಗಕ್ರಿಯೆಯನ್ನು ನಡೆಸಿ ಕೊಂಡು ಬರುತ್ತಿದೆ. 'ಒಳಚರಂಡಿ ಪುರಾಣ' ನಾಟಕ ಪ್ರಸ್ತುತ ವ್ಯವಸ್ಥೆಗೆ ಹಿಡಿದ ಕನ್ನಡಿ. ಸರ್ಕಾರಿ ಕಚೇರಿಗಳ ಕಾರ್ಯವೈಖರಿ ಯನ್ನು ವಿಡಂಬನಾತ್ಮಕವಾಗಿ ತೋರಿಸುವ ಪ್ರಯತ್ನವನ್ನು ನಾಟಕದಲ್ಲಿ ಮಾಡಲಾಗಿದೆ. ಲೋಕಪ್ಪ ಎನ್ನುವ ವ್ಯಕ್ತಿ ಅವ್ಯವಸ್ಥೆಗಳ ಬಗ್ಗೆ ಸದಾ ಹೋರಾಟವನ್ನು ಮಾಡುತ್ತ ಕಚೇರಿ ಯಿಂದ ಕಚೇರಿಗೆ ಅಲೆಯುತ್ತಾನೆ. ತನ್ನ ರೋಡಿನಲ್ಲಿ ತೋಡಿರುವ ಗುಂಡಿ ಮತ್ತು ಅದರಿಂದ ಆಗುತ್ತಿರುವ ಸಂಕಷ್ಟಗಳನ್ನು ಜನ ಪ್ರತಿನಿಧಿಗಳಿಗೆ ಮನದಟ್ಟು ಮಾಡಿ ಪರಿಹಾರ ಸಿಗುವಲ್ಲಿ ಆತನ ಬವಣೆಯನ್ನು ನಾಟಕದಲ್ಲಿ ಕಟ್ಟಿಕೊಡಲಾಗಿದೆ.

ಈ ವಿಶಿಷ್ಟ ನಾಟಕದ ಮೂಲ ಕಥೆಯು ಲೇಖಕ ಮತ್ತು ಚಲನಚಿತ್ರ ನಿರ್ದೇಶಕ ಡಾ.ನಾಗತಿಹಳ್ಳಿ ಚಂದ್ರಶೇಖರ ಅವರದು. ಇದನ್ನು ಆಧಾರಿಸಿ ಪ್ರತಿಭಾನ್ವಿತ ನಾಟಕ ಕಾರ ಡಾ.ಗೌರೀಶ್ ಜೋಶಿ ಸುಂದರ ನಾಟಕ ರಚಿಸಿದ್ದಾರೆ. ಅರ್ಚನಾ ಶ್ಯಾಮ್ ಅವರ ವಸ್ತ್ರವಿನ್ಯಾಸ, ರಂಗ ವಿನ್ಯಾಸ ಮತ್ತು ನಿರ್ದೇಶನದಲ್ಲಿ ಈ ನಾಟಕ ಮೂಡಿ ಬಂದಿದೆ. ನಾಟಕದ ಟಿಕೆಟ್‌ಗಳಿಗಾಗಿ ಬುಕ್ ಮೈ ಶೋ (ಆನ್‌ಲೈನ್ ಬುಕಿಂಗ್) ಸಂಪರ್ಕಿಸಬಹುದು. ಟಿಕೆಟ್ ದರ 150 ರೂ. ಮಾಹಿತಿಗಾಗಿ ಅಂಕಲ್ ಶ್ಯಾಮ್ (9880914509), ನಟನ ಮೈಸೂರು (7259537777) ಸಂಪರ್ಕಿಸಿ ಎಂದು ಪ್ರಕಟಣೆ ತಿಳಿಸಿದೆ.

ಬನ್ನೂರು ಲಯನ್ಸ್ ಎಜುಕೇಷನ್ ಸೊಸೈಟಿಗೆ ಉತ್ತಮ ಫಲಿತಾಂಶ


ವೈಷ್ಣವಿ


ಕಲ್ಪನಾ


ಅಮಿತಾ


ವಿಶಾಲಾಕ್ಷಿ


ಪಲ್ಲವಿ


ಸುಶ್ಮಿತಾ


ದೀಕ್ಷಿತಾ


ತ್ರಿಪುರಾಂಬ


ಯಶಸ್ವಿನಿ


ನೀತುಶ್ರೀ

ಮೈಸೂರು: ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಬನ್ನೂರು ಲಯನ್ಸ್ ಎಜುಕೇಷನ್ ಸೊಸೈಟಿಗೆ ಶೇ.98 ಫಲಿತಾಂಶ ಬಂದಿದೆ. ಎಂ.ಎಸ್.ವೈಷ್ಣವಿ–608, ಕಲ್ಪನಾ–580, ಅಮಿತಾ–571, ವಿಶಾಲಾಕ್ಷಿ–563, ಬಿ.ವಿ.ಪಲ್ಲವಿ–548, ಎಂ.ಸುಶ್ಮಿತಾ–541, ಕೆ.ಆರ್.ದೀಕ್ಷಿತಾ–530, ಜಿ.ಎಸ್.ತ್ರಿಪುರಾಂಬ–523, ಜಿ.ಎಸ್.ಯಶಸ್ವಿನಿ–522, ನೀತುಶ್ರೀ ಎಂ.ಹೆಚ್.–497 ಅಂಕಗಳಿಸಿ ಉನ್ನತ ಶ್ರೇಣಿಯಲ್ಲಿ ತೇರ್ಗಡೆಯಾಗಿದ್ದಾರೆ.

ದೆಹಲಿಯಲ್ಲಿ ಮೇ 24ರಂದು ಜನಜಾತಿ ಸಾಂಸ್ಕೃತಿಕ ಸಮಾಗಮ


ಮೈಸೂರು, ಮೇ.11(ಜಿಎ)–ನವ ದೆಹಲಿ ಯಲ್ಲಿ ಮೇ 24 ರಂದು ನಡೆಯುವ ಜನಜಾತಿ ಸಾಂಸ್ಕೃತಿಕ ಸಮಾಗಮದಲ್ಲಿ ದೇಶದಾದ್ಯಂತದಿಂದ ಒಂದೂವರೆ ಲಕ್ಷ ಬುಡಕಟ್ಟು ಜಾತಿಯವರು ಪಾಲ್ಗೊಳ್ಳಲಿ ದ್ದಾರೆ. ಮೈಸೂರು ಜಿಲ್ಲೆಯಿಂದಲೂ ಸುಮಾರು 1200 ಮಂದಿ ಭಾಗವಹಿ ಸಲಿದ್ದಾರೆ ಎಂದು ಗಿರಿಜನ ಸುರಕ್ಷಾ ವೇದಿಕೆ ಅಧ್ಯಕ್ಷ ಡಾ.ಗಣೇಶ್ ಹೆಚ್.ಡಿ. ಕೋಟೆ ಮಾಹಿತಿ ನೀಡಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನ ದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂದು ಮಹಾನ್ ಜನ ನಾಯಕ ಭಗವಾನ್ ಬಿರ್ಸಾ ಮುಂಡಾ ಅವರ 150ನೇ ಜಯಂತಿ ಅಂಗವಾಗಿ ಈ ಕಾರ್ಯಕ್ರಮ ನಡೆಯಲಿದೆ. ದೇಶದ ವಿವಿಧ ಭಾಗಗ ಳಿಂದ ಸುಮಾರು 500 ಜನಜಾತಿಗಳ ಎಸ್‌ಟಿ ಸಮುದಾಯದ ಸುಮಾರು ಒಂದೂವರೆ ಲಕ್ಷಕ್ಕೂ ಹೆಚ್ಚು ಪ್ರತಿನಿಧಿಗಳು ಪಾಲ್ಗೊಳ್ಳಲಿದ್ದಾರೆ ಎಂದರು.

ಸಂಯೋಜಕ ಗಂಗಾಧರ ನಾಯಕ್ ತಿಂಥಣಿ ಮಾತನಾಡಿ, ಅಂದು ಮಧ್ಯಾಹ್ನ 3ಗಂಟೆಗೆ ದೆಹಲಿಯ ಐದು ಭಾಗಗಳಿಂದ ಭವ್ಯ ಶೋಭಾಯಾತ್ರೆ ಹೊರಡಲಿದೆ. ಇದ ರಲ್ಲಿ ಗಿರಿಜನರು ತಮ್ಮದೇ ಆದ ಉಡುಗೆ, ತೊಡುಗೆ, ವಾದ್ಯಗಳೊಂದಿಗೆ ಪಾಲ್ಗೊಳ್ಳಲಿ ದ್ದಾರೆ. ನಂತರ ಕೆಂಪು ಕೋಟೆ ಆವರಣ ದಲ್ಲಿ ಸಮಾವೇಶದಲ್ಲಿ ಪಾಲ್ಗೊಳ್ಳಲಿದ್ದಾರೆ. ಕೇಂದ್ರ ಗೃಹ ಸಚಿವ ಅಮಿತ್ ಶಾ ಇದರಲ್ಲಿ ಭಾಗಿಯಾಗಲಿದ್ದಾರೆ. ಮೇ 20 ರಂದು ರಾತ್ರಿ ನಗರದ ರೈಲ್ವೆ ನಿಲ್ದಾಣದಿಂದ ವಿಶೇಷ ರೈಲಿನಲ್ಲಿ ಹೆಚ್.ಡಿ.ಕೋಟೆ, ಪಿರಿಯಾ ಪಟ್ಟಣ, ಹುಣಸೂರು ಮೊದಲಾದ ಕಡೆಗ ಳಿಂದ ಸುಮಾರು 1200 ಮಂದಿ ದೆಹಲಿಗೆ ಪ್ರಯಾಣಿಸಲಿದ್ದಾರೆ. ಇವರೆಲ್ಲ ತಮ್ಮದೇ ಹಣ ಹಾಕಿಕೊಂಡು ಪ್ರಯಾಣಿಸುತ್ತಿರುವುದು ವಿಶೇಷವಾಗಿದೆ. ಸಮಾವೇಶದಲ್ಲಿ ಗಿರಿಜನರ ವಿಶಿಷ್ಟ ಪ್ರತಿನಿಧಿಗಳು, ಸಾಧಕರು, ಮುಖಂ ಡರು ವಿಷಯ ಮಂಡಿಸಲಿದ್ದಾರೆ ಎಂದರು.

ಈ ವೇಳೆ ಸುದ್ದಿಗೋಷ್ಠಿಯಲ್ಲಿ ರಾಜು, ಕಾಮರಾಜ್, ದೇವವಾಜ್ ಟಿ.ಕಾಟೂರು ಮತ್ತಿತರರು ಉಪಸ್ಥಿತರಿದ್ದರು.

ಮಾತಾ ವಿಜಯಕುಮಾರಿ ವಿ.ರಾವ್ ಪ್ರಶಸ್ತಿ ಪ್ರದಾನ


ವಿಜಯಕುಮಾರಿ ವಿ.ರಾವ್


ಶ್ರೀಮತಿ ಲಕ್ಷ್ಮೀ ಪೆಲಕಂಡ


ವಿದುಷಿ ಎಂ.ಆರ್. ಸುಧಾ

ಮೈಸೂರು, ಮೇ 11– ಶ್ರೀ ವಾಸುದೇವ ಮಹಾರಾಜ್ ಫೌಂಡೇಷನ್ ವತಿಯಿಂದ ವಿಶ್ವ ಅಮ್ಮನ ದಿನಾಚರಣೆ ಅಂಗವಾಗಿ ಮೇ 14 ರಂದು ಬೆಳಗ್ಗೆ 11.30ಕ್ಕೆ ಜಿಲ್ಲಾ ಪತ್ರಕರ್ತ ಭವನದಲ್ಲಿ ಮಾತಾ ವಿಜಯಕುಮಾರಿ ವಿ. ರಾವ್ ಪ್ರಶಸ್ತಿ ಪ್ರದಾನ ಸಮಾರಂಭ ಏರ್ಪಡಿಸಲಾಗಿದೆ.

ಹಿರಿಯ ಸಮಾಜ ಸೇವಕ ಡಾ.ಕೆ. ರಘು ರಾಂ ವಾಜಪೇಯಿ ಮಾತೆಗೆ ಪುಷ್ಪಾರ್ಚನೆ ಮಾಡುವರು. ಸಂಸ್ಕೃತ ವಿದುಷಿ ಡಾ.ಕೆ. ಲೀಲಾಪ್ರಕಾಶ್ ಪ್ರಶಸ್ತಿ ಪ್ರದಾನ ಮಾಡಲಿದ್ದು, ಜಿಲ್ಲಾ ಕಸಾಪ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್ ಅಧ್ಯಕ್ಷತೆ ವಹಿಸಲಿದ್ದಾರೆ.


ಅಲಯನ್ಸ್ ಸಂಸ್ಥೆ ನಿಕಟಪೂರ್ವ ಗವ ರ್ನರ್ ಡಾ. ವೆಂಕಟೇಶ್, ಶ್ರೀ ಯೋಗನರ ಸಿಂಹ ದೇವಸ್ಥಾನದ ಮುಖ್ಯ ಆಡಳಿತಾಧಿ ಕಾರಿ ಎನ್. ಶ್ರೀನಿವಾಸನ್, ಸಂಗೀತ ಶಿಕ್ಷಕಿ ಶ್ರೀಮತಿ ಎಂ.ವಿ.ಅನಿತಾ, ಶ್ರೀ ಲಕ್ಷ್ಮೀನರಸಿಂಹ ಸ್ವಾಮಿ ದೇವಸ್ಥಾನದ ಸಿಇಓ ಕೆ.ಆರ್. ಯೋಗನರಸಿಂಹನ್ ಉಪಸ್ಥಿತರಿರುವರು. ಇದೇ ವೇಳೆ ಲೇಖಕಿ ಶ್ರೀಮತಿ ಲಕ್ಷ್ಮೀ ಪೆಲಕಂಡ ಮತ್ತು ಕರ್ನಾಟಕ ಶಾಸ್ತ್ರೀಯ ಸಂಗೀತ ವಿದುಷಿ ಎಂ.ಆರ್. ಸುಧಾ ಅವರಿಗೆ ಬೆಳ್ಳಿ ಪದಕ, ಪ್ರಶಸ್ತಿ ಫಲಕ ಹಾಗೂ ಫಲತಾಂಬೂಲಗಳೊಂದಿಗೆ ಮಾತಾ ವಿಜಯಕುಮಾರಿ ವಿ. ರಾವ್ ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದು ಸಂಸ್ಥಾಪಕ ಅಧ್ಯಕ್ಷ ಎಂ.ವಿ. ನಾಗೇಂದ್ರ ಬಾಬು, ಸಂಚಾಲಕ ಎನ್. ಅನಂತ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮೇ 14, ಲೋಕಾಯುಕ್ತರಿಂದ ದೂರು ಸ್ವೀಕಾರ

ಮೈಸೂರು, ಮೇ 11– ಕರ್ನಾಟಕ ಲೋಕಾಯುಕ್ತ ಮೈಸೂರು ವಿಭಾಗ ಅಧಿಕಾರಿಗಳಿಂದ ಮೇ 14 ರಂದು ಬೆಳಗ್ಗೆ 11 ಗಂಟೆಯಿಂದ ಮಧ್ಯಾಹ್ನ 1 ಗಂಟೆಯವರೆಗೆ ಮೈಸೂರು ಜಿಲ್ಲೆ, ಮೈಸೂರು ತಾಲೂಕು, ತಹಶೀಲ್ದಾರರ ಕಚೇರಿ ಸಭಾಂಗಣದಲ್ಲಿ ದೂರು ಸ್ವೀಕರಿಸುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಸರ್ಕಾರಿ ಕಚೇರಿಗಳಲ್ಲಿ ಸಾರ್ವಜನಿಕರ ಅಧಿಕೃತ ಕೆಲಸಗಳ ಅನಗತ್ಯ ವಿಳಂಬ, ಲಂಚದ ಹಣದ ಬೇಡಿಕೆ ಇತ್ಯಾದಿ ತೊಂದ ರೆಗಳನ್ನು ನೀಡುತ್ತಿರುವ ಸಾರ್ವಜನಿಕ, ಸರ್ಕಾರಿ ಅಧಿಕಾರಿ, ನೌಕರರ ವಿರುದ್ಧ ಅಗತ್ಯ ದಾಖಲಾತಿಗಳೊಡನೆ ಸಾರ್ವಜ ನಿಕರು ದೂರು ನೀಡಬಹುದು ಎಂದು ಕರ್ನಾಟಕ ಲೋಕಾಯುಕ್ತ ಪೊಲೀಸ್ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


ನಿಧನ



ಮಹದೇವಪ್ಪ

ಮೈಸೂರು, ಮೇ 11– ಮೈಸೂರಿನ ಕೃಷ್ಣರಾಜ ಕ್ಷೇತ್ರದ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ಅಧ್ಯಕ್ಷರು ಹಾಗೂ ಕುವೆಂಪುನಗರದ ಶ್ರೀ ವೀರಶೈವ ಸ್ನೇಹ ಬಳಗದ ಖಜಾಂಚಿಗಳಾದ ಪ್ರಸಾದ್ ಬಾಬು ಅವರ ತಂದೆ ಮಹದೇವಪ್ಪ (79) ಭಾನುವಾರ ಸಂಜೆ ನಿಧನರಾದರು. ಸೋಮವಾರ ಬೆಳಗ್ಗೆ 10 ಗಂಟೆಯ ವರೆಗೆ ಶ್ರೀರಾಂಪುರದ ಅವರ ಮನೆಯಲ್ಲಿ ಅಂತಿಮ ದರ್ಶನಕ್ಕೆ ಪಾರ್ಥೀವ ಶರೀರವನ್ನು ಇರಿಸಲಾಗಿತ್ತು. ನಂತರ ಅಂತಿಮ ವಿಧಿವಿಧಾನಕ್ಕಾಗಿ ಅವರ ಸ್ವಗ್ರಾಮವಾದ ಚುಂಚನಹಳ್ಳಿಗೆ ಕೊಂಡೊಯ್ಯಲಾಯ್ತು.

ರಘು ಕೌಟಿಲ್ಯ ನಿರೂಪಣೆ, ಪರಿಕಲ್ಪನೆಯ ಬಿಎಸ್‌ವೈ ಕುರಿತ ಕೃತಿಗಳ ಲೋಕಾರ್ಪಣೆ


ಚಿತ್ರದುರ್ಗದಲ್ಲಿ ನಡೆದ 'ಬಿಎಸ್‌ವೈ ಅಭಿಮಾನೋತ್ಸವ'ದಲ್ಲಿ ಬಿಎಸ್‌ವೈ ಕುರಿತ ಎರಡು ಪುಸ್ತಕಗಳನ್ನು ಕೇಂದ್ರ ಗೃಹ ಹಾಗೂ ಸಹಕಾರ ಸಚಿವ ಅಮಿತ್ ಶಾ ಬಿಡುಗಡೆಗೊಳಿಸಿದರು.

ಮೈಸೂರು, ಮೇ 11– ಮಾಜಿ ಮುಖ್ಯ ಮಂತ್ರಿ, ಹಿರಿಯ ಮುತ್ಸದ್ದಿ ಬಿ.ಎಸ್. ಯಡಿಯೂರಪ್ಪ ಅವರನ್ನು ಕುರಿತ, ಬಿಜೆಪಿ ಹಿಂದುಳಿದ ವರ್ಗಗಳ ಮೋರ್ಚಾ ರಾಜ್ಯಾಧ್ಯಕ್ಷರೂ ಆದ ಲೇಖಕ ಮೈಸೂರಿನ ಆರ್.ರಘು ಕೌಟಿಲ್ಯ ಅವರ ಪರಿಕಲ್ಪನೆ ಯಲ್ಲಿ ಹೊರತರಲಾಗಿರುವ ಎರಡು ಪುಸ್ತಕಗಳನ್ನು ಕೇಂದ್ರ ಗೃಹ ಹಾಗೂ ಸಹಕಾರ ಸಚಿವ ಅಮಿತ್ ಶಾ ಅವರು ಬಿಡುಗಡೆಗೊಳಿಸಿದರು.

ಚಿತ್ರದುರ್ಗದಲ್ಲಿ ಇತ್ತೀಚೆಗೆ ನಡೆದ 'ಬಿಎಸ್‌ವೈ ಅಭಿಮಾನೋತ್ಸವ' ಸಮಾ ರಂಭದಲ್ಲಿ ಬಿ.ಎಸ್.ಯಡಿಯೂರಪ್ಪ ಅವರ ಬದುಕಿನ ಮೈಲುಗಲ್ಲುಗಳನ್ನು ಸಾರುವ 'ಕೆಂದಾವರೆ–ಕಮಲ ಅರಳಿದ ಕಥೆ' ಹಾಗೂ ಅವರ ಸುದೀರ್ಘ ಶಾಸಕ ತ್ವದ ಅವಧಿಯಲ್ಲಿ ಸದನದಲ್ಲಿ ಮಾಡಿದ ಭಾಷಣಗಳ ಸಂಗ್ರಹ 'ಸದನ ಶಿಕಾರಿ– ಯಡಿಯೂರಪ್ಪನವರ ಗುಡುಗಿನ ನುಡಿ ಗಳು' ಪುಸ್ತಕಗಳನ್ನು ಲೋಕಾರ್ಪಣೆ ಗೊಳಿಸಿ ಅಮಿತ್ ಶಾ, ಶುಭಕೋರಿದರು.

'ಕೆಂದಾವರೆ–ಕಮಲ ಅರಳಿದ ಕಥೆ' ಕೃತಿಯಲ್ಲಿ ಬಿಎಸ್‌ವೈ ಅವರ ಜೀವನ ಗಾಥೆಯನ್ನು ಆರ್.ರಘು ಕೌಟಿಲ್ಯ ನಿರೂ ಪಿಸಿದ್ದು, 'ಸದನ ಶಿಕಾರಿ–ಯಡಿಯೂರಪ್ಪ ನವರ ಗುಡುಗಿನ ನುಡಿಗಳು' ಕೃತಿಯನ್ನು ಡಾ.ರೇವಯ್ಯ ಒಡೆಯರ್ ಸಂಪಾದಿಸಿದ್ದಾರೆ.

ಇವು ಬಿಎಸ್‌ವೈ ಅಭಿಮಾನಿಗಳು, ಹಿತೈಷಿಗಳಿಗೆ ಮಾತ್ರವಲ್ಲದೆ ಸಾರ್ವಜನಿಕ ಕ್ಷೇತ್ರದ ಪ್ರತಿಯೊಬ್ಬರಿಗೂ ಆಸಕ್ತಿಕರ ಮಾಹಿತಿಯನ್ನೊಳಗೊಂಡ ಸಂಗ್ರಹ ಯೋಗ್ಯ ಕೃತಿಗಳಾಗಿವೆ. ಆಸಕ್ತರು ಓದಿ, ಪ್ರೇರಣೆ ಪಡೆದಲ್ಲಿ ಕೃತಿಗಳು ಸಾರ್ಥಕತೆ ಪಡೆಯಲಿವೆ ಎಂದು ಕೃತಿಕಾರ ರಘು ಹೇಳಿದ್ದಾರೆ.

ಪುಸ್ತಕಗಳ ಲೋಕಾರ್ಪಣೆ ವೇಳೆ ರಂಭಾಪುರಿ ಶ್ರೀಗಳು, ಬಿ.ಎಸ್.ಯಡಿ ಯೂರಪ್ಪ, ಬಿಜೆಪಿ ರಾಷ್ಟ್ರೀಯ ಸಂಘ ಟನಾ ಪ್ರಧಾನ ಕಾರ್ಯದರ್ಶಿ ಬಿ.ಎಲ್. ಸಂತೋಷ್, ರಾಜ್ಯಾಧ್ಯಕ್ಷ ಬಿ.ವೈ.ವಿಜ ಯೇಂದ್ರ, ಮಾಜಿ ಮುಖ್ಯಮಂತ್ರಿಗಳಾದ ಬಸವರಾಜ ಬೊಮ್ಮಾಯಿ, ಡಿ.ವಿ.ಸದಾ ನಂದ ಗೌಡ, ಜಗದೀಶ್ ಶೆಟ್ಟರ್, ಕೇಂದ್ರ ಸಚಿವರಾದ ಪ್ರಹ್ಲಾದ್ ಜೋಶಿ, ವಿ. ಸೋಮಣ್ಣ, ಶೋಭಾ ಕರಂದ್ಲಾಜೆ, ಪ್ರತಿ ಪಕ್ಷ ನಾಯಕ ಆರ್.ಅಶೋಕ್, ವಿಧಾನ ಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ರಾಜ್ಯ ಉಸ್ತುವಾರಿ ಡಾ.ರಾಧಾ ಮೋಹನ್ ದಾಸ್ ಅಗರ್ವಾಲ್, ಸಹ ಉಸ್ತುವಾರಿ ಸುಧಾಕರ್ ರೆಡ್ಡಿ, ಮಾಜಿ ಸಚಿವರಾದ ಗೋವಿಂದ ಕಾರ್ಜೋಳ, ಶ್ರೀರಾಮುಲು, ಸಿ.ಟಿ.ರವಿ, ಮುಖಂಡ ತಮ್ಮೇಶ್ ಗೌಡ, ಲೇಖಕರಾದ ಆರ್.ರಘು, ರೇವಯ್ಯ ಒಡೆಯರ್ ಸೇರಿದಂತೆ ವಿವಿಧ ಮಠಾಧೀಶರು, ಸಾಧು–ಸಂತರು, ಸಂಸದರು, ಶಾಸಕರು, ಪದಾಧಿಕಾರಿಗಳು, ಪ್ರಮುಖರು, ಕಾರ್ಯಕರ್ತರು ಮತ್ತು ಅಭಿಮಾನಿಗಳು ಉಪಸ್ಥಿತರಿದ್ದರು.

ಗೆಲುವಿನ ಅಂತರದ ಬಗ್ಗೆ ಹೊಸದಾಗಿ ಅರ್ಜಿ ಸಲ್ಲಿಸಿ

ಮಮತಾಗೆ ಸುಪ್ರೀಂಕೋರ್ಟ್ ಸೂಚನೆ

ನವದೆಹಲಿ: ವಿವಿಧ ವಿಧಾನಸಭಾ ಕ್ಷೇತ್ರಗಳಲ್ಲಿ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆಯ ಸಮಯದಲ್ಲಿ ಗೆಲುವಿನ ಅಂತರವು ಡಿಲೀಟ್ ಮಾಡಿದ ಮತಗಳಿಗಿಂತ ಕಡಿಮೆಯಾಗಿದೆ ಎಂದು ಆರೋಪಿಸಿದ ಹಿನ್ನೆಲೆಯಲ್ಲಿ ಪಶ್ಚಿಮ ಬಂಗಾಳ ಮಾಜಿ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಮತ್ತು ಇತರರಿಗೆ ಹೊಸದಾಗಿ ಅರ್ಜಿಗಳನ್ನು ಸಲ್ಲಿಸಬಹುದು ಎಂದು ಸುಪ್ರೀಂಕೋರ್ಟ್ ಸೋಮವಾರ ಹೇಳಿದೆ.

ಹಿರಿಯ ವಕೀಲ ಮತ್ತು ಟಿಎಂಸಿ ಸಂಸದ ಕಲ್ಯಾಣ್ ಬ್ಯಾನರ್ಜಿ ಅವರು 31 ಸ್ಥಾನಗಳಲ್ಲಿ, ಗೆಲುವಿನ ಅಂತರವು ಡಿಲೀಟ್ ಮಾಡಲಾದ ಮತಗಳ ಸಂಖ್ಯೆಗಿಂತ ಕಡಿಮೆಯಾಗಿದೆ ಎಂದು ಆರೋಪಿಸಿ ಸಲ್ಲಿಸಿದ್ದ ಅರ್ಜಿಯನ್ನು ಮುಖ್ಯ ನ್ಯಾಯಮೂರ್ತಿ ಸೂರ್ಯ ಕಾಂತ್ ಮತ್ತು ನ್ಯಾಯಮೂರ್ತಿ ಜೋಯ್ಮಲ್ಯ ಬಾಗ್ಚಿ ಅವರನ್ನೊಳಗೊಂಡ ಪೀಠ ವಿಚಾರಣೆ ನಡೆಸಿತು.

ಚುನಾವಣಾ ಆಯೋಗವು, ಈ ಅರ್ಜಿಗಳಿಗೆ ತೀವ್ರ ವಿರೋಧ ವ್ಯಕ್ತಪಡಿಸಿದ್ದು, ಇದು ಚುನಾವಣೆಗೆ ಸಂಬಂಧಿಸಿದ ಅರ್ಜಿಯಾಗಿದೆ. ಎಸ್‌ಐಆರ್‌ಗೆ ಸಂಬಂಧಿಸಿದ ವಿಷಯಗಳು ಮತ್ತು ಮತಗಳ ಸೇರ್ಪಡೆ ಅಥವಾ ಅಳಿಸುವಿಕೆಗೆ ಸಂಬಂಧಿಸಿದಂತೆ ಆಯೋಗಕ್ಕೆ ಮೇಲ್ಮನವಿ ಸಲ್ಲಿಸಬಹುದು ಎಂದು ಹೇಳಿದೆ.

ರಾಜ್ಯದಲ್ಲಿ ಇತ್ತೀಚೆಗೆ ಮುಕ್ತಾಯಗೊಂಡ ವಿಧಾನಸಭಾ ಚುನಾವಣೆಯಲ್ಲಿ, ಬಿಜೆಪಿ 294 ಸದಸ್ಯ ಬಲದ ಪಶ್ಚಿಮ ಬಂಗಾಳ ವಿಧಾನಸಭೆಯಲ್ಲಿ 207 ಸ್ಥಾನಗಳನ್ನು ಪಡೆದುಕೊಂಡಿದ್ದು, ಟಿಎಂಸಿ ಕೇವಲ 80 ಸ್ಥಾನಗಳನ್ನು ಗೆದ್ದಿದೆ.

ಧರ್ಮ ಪ್ರಚಾರಕ್ಕೆ ರಕ್ಷಣೆ, ಬಲವಂತದ ಮತಾಂತರಕ್ಕಲ್ಲ

ಮೈಸೂರು, ಮೇ 11(ಜಿಎ)–ದೇಶದಲ್ಲಿ ಧರ್ಮ ಪ್ರಚಾರಕ್ಕೆ ರಕ್ಷಣೆಯಿದೆ. ಆದರೆ ಬಲವಂತದ ಮತಾಂತರಕ್ಕಲ್ಲ ಎಂದು ಸುಪ್ರೀಂಕೋರ್ಟ್ ತಿಳಿಸಿದೆ. ಇದರೊಡನೆ ದೇಶದ ಎಲ್ಲರೂ ಸರ್ವ ಧರ್ಮಗಳಿಗೂ ಗೌರವ ಕೊಡುವ ಮೂಲಕ ಪರಸ್ಪರ ಶಾಂತಿ, ಸೌಹಾರ್ದತೆಯಿಂದ ಬದುಕ ಬೇಕಾದ ಅಗತ್ಯವಿದೆ ಎಂದು ಇಂಡಿಯಾ ಬೈಬಲ್ ಲಿಟರೇಚರ್ ಸಂಸ್ಥೆಯ ಸಂಸ್ಥಾಪಕ ನಿರ್ದೇಶಕ ರೆ.ಫಾ. ಬೆಂಜಮಿನ್ ವಾಸ್ ಮನವಿ ಮಾಡಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬಲವಂತ, ಬೆದರಿಕೆ ಅಥವಾ ಭೌತಿಕ ಪ್ರಲೋ ಭನೆಯನ್ನು ಒಳಗೊಂಡ ಯಾವುದೇ ಮತಾಂತರ ಸರಿಯಲ್ಲ. ಅದು ಸದಾ ಸ್ವಯಿಚ್ಛಿಕವಾಗಿರಬೇಕು. ಬಲವಂತದ ಮತಾಂತರಕ್ಕೆ ಶಿಕ್ಷೆಯಿದೆ ಎಂಬ ಅರಿವು ಎಲ್ಲರಿಗೂ ಇದೆ. ಇದರೊಡನೆ ಕ್ರೈಸ್ತರು ಎಂದಿಗೂ ಬಲವಂತದ ಮತಾಂತರ ಮಾಡಿಲ್ಲ. ಆ ರೀತಿ ಮಾಡಿದ್ದಿದ್ದರೆ ದೇಶದಲ್ಲಿ ಈ ಸಮುದಾಯದ ಜನಸಂಖ್ಯೆ ಇಷ್ಟು ಕಡಿಮೆ ಇರುತ್ತಿರಲಿಲ್ಲ. ನೆಮ್ಮದಿ ಬಯಸುವವರಿಗೆ ನೆರವು ನೀಡುವ ಕೆಲಸವನ್ನಷ್ಟೇ ಮಾಡುತ್ತಿದ್ದಾರೆ. ತಮ್ಮ ಮನೆಯಲ್ಲಿಯೂ ಹಿಂದೂ ದೇವರ ವಿಗ್ರಹಗಳಿವೆ, ತಮ್ಮ ಕುಟುಂಬದವರೂ ಸಹಾ ಅತಿ ಹೆಚ್ಚಿನ ಗೌರವ ನೀಡುತ್ತಿದ್ದಾರೆ. ಹೀಗಾಗಿ ದೇಶವನ್ನು ಸರ್ವ ಜನಾಂಗದ ಶಾಂತಿಯ ತೋಟವಾಗಿಸುವತ್ತ ಎಲ್ಲರೂ ಶ್ರಮಿಸಬೇಕೆಂದು ಕೋರಿದರು. ಈ ವೇಳೆ ಸುದ್ದಿಗೋಷ್ಠಿಯಲ್ಲಿ ಸತ್ಯನಾರಾಯಣ್ ಉಪಸ್ಥಿತರಿದ್ದರು.

ಗುಡುಮಾದನಹಳ್ಳಿಯಲ್ಲೇ ನಿಮ್ಹಾನ್ಸ್ ಘಟಕ ನಿರ್ಮಿಸಲು ಸೂಕ್ತವಾದ ಜಾಗ

ನಾಳೆ ಡಿಸಿ ಕಚೇರಿ ಮುಂಭಾಗ ಪ್ರತಿಭಟನೆ

ಮೈಸೂರು, ಮೇ 11(ಜಿಎ)–ಮೈಸೂರು ಹೊರ ವಲಯದ ಗುಡುಮಾದನಹಳ್ಳಿಯೇ ನಿಮ್ಹಾನ್ಸ್ ಘಟಕ ನಿರ್ಮಾಣಕ್ಕೆ ಸೂಕ್ತ, ಯಾರದೇ ವಿರೋಧವಿದ್ದರೂ ನಿರ್ಮಾಣ ಕಾರ್ಯ ಶೀಘ್ರವಾಗಿ ಆರಂಭಿಸುವಂತೆ ಆಗ್ರಹಿಸಿ ಮೇ 13ರಂದು ಜಿಲ್ಲಾಧಿಕಾರಿ ಕಚೇರಿ ಮುಂಭಾಗ ಕರ್ನಾಟಕ ಪೌರ ಕಾರ್ಮಿಕರ ಸಂಘಟನೆಗಳ ಒಕ್ಕೂಟದ ಜಿಲ್ಲಾ ಸಮಿತಿ ವತಿಯಿಂದ ಪ್ರತಿಭಟನೆ ಹಮ್ಮಿಕೊಳ್ಳ ಲಾಗಿದೆ ಎಂದು ಸಮಿತಿ ಸದಸ್ಯೆ ಅಂಜಲಿ ತಿಳಿಸಿದರು.

ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಗುಡುಮಾದನಹಳ್ಳಿಯ ಸರ್ವೆ ನಂ.8, 60, 68ರಲ್ಲಿ ಸುಮಾರು 20 ಎಕರೆ ಸರ್ಕಾರಿ ಜಾಗವಿದೆ. ಈ ಹಿಂದೆ ವಿಮಾನ ನಿಲ್ದಾಣ ವಿಸ್ತರಣೆಗೆ ಎಕರೆಗೆ ಸುಮಾರು ಒಂದೂವರೆ ಕೋಟಿ ಪರಿಹಾರ ನೀಡಿದ ಉದಾಹರಣೆಯಿದೆ. ಇದು ಸರ್ಕಾರಿ ಜಾಗವಾಗಿದ್ದು, ಹಲವಾರು ಮಂದಿ ಇದರಲ್ಲಿ ವ್ಯವಸಾಯ ಮಾಡಿ ಈಗಾಗಲೇ ಸಾಕಷ್ಟು ಸಂಪಾದನೆ ಮಾಡಿಕೊಂಡಿದ್ದಾರೆ. ಹೀಗಾಗಿ ನಿಜಕ್ಕೂ ಇವರು ಬಡವರಾಗಿದ್ದರೆ ಬೇರೆ ಕಡೆ ಜಾಗ ಕೊಡಲಿ. ಆದರೆ ಇದೇ ಜಾಗದಲ್ಲಿ ನಿಮ್ಹಾನ್ಸ್ ನಿರ್ಮಾಣವಾಗಲೆಂದು ಒತ್ತಾಯಿಸಿದರು.

ಇಲ್ಲಿ ಆಸ್ಪತ್ರೆ ನಿರ್ಮಾಣ ಮಾಡುವುದರಿಂದ ಮೈಸೂರು ಜಿಲ್ಲೆ ಯವರು ಮಾತ್ರವಲ್ಲ, ಮಂಡ್ಯ, ಚಾಮರಾಜನಗರ ಜಿಲ್ಲೆಯವರಿಗೂ ಮಾನಸಿಕ ಅನಾರೋಗ್ಯ ಮತ್ತು ನರರೋಗಕ್ಕೆ ಸಂಬಂಧಿಸಿದ ಚಿಕಿತ್ಸೆ ಪಡೆಯಲು ಅನುಕೂಲವಾಗುತ್ತದೆ. ಈಗ ಇದಕ್ಕಾಗಿ ಬೆಂಗಳೂರಿಗೆ ಹೋಗಬೇಕಾಗಿ ಬಂದಿದ್ದು, ಇದು ತಪ್ಪುತ್ತದೆ. ಈ ಕಾರಣದಿಂದಾಗಿ ಇಲ್ಲಿಯೇ ನಿರ್ಮಾಣ ಆಗ್ರಹಿಸಿ ಮೇ 13 ರಂದು ಬೆಳಗ್ಗೆ 11ಕ್ಕೆ ಡಿಸಿ ಕಚೇರಿ ಎದುರು ಒಕ್ಕೂಟದ ವತಿಯಿಂದ ಪ್ರತಿಭಟನೆ ಹಮ್ಮಿಕೊಳ್ಳುತ್ತಿರುವುದಾಗಿ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಪದಾಧಿಕಾರಿಗಳಾದ ಡಿ.ಆರ್.ರಾಜು, ಶಿವ ಶ್ರೀನಿವಾಸ್, ಸಿ.ಆರ್.ವಿಜಯ್, ವಸಂತಕುಮಾರಿ ಉಪಸ್ಥಿತರಿದ್ದರು.

ಅಭಿನಂದನೆ


ಆಧ್ಯಾತ್ಮಿಕ ಮೌಲ್ಯಗಳನ್ನು ಮೈಗೂಡಿಸಿಕೊಂಡಿರುವ, ಸಮಾಜಮುಖಿ ಚಿಂತನೆಯ ಅಪರೂಪದ ಪ್ರಸಿದ್ಧ ವೈದ್ಯರಾದ ಡಾ.ಎಸ್.ಪಿ.ಯೋಗಣ್ಣನವರ 72ನೇ ಜನ್ಮದಿನೋತ್ಸವದ ಅಂಗವಾಗಿ ಯೋಗ ಶಿಕ್ಷಕರು ಅವರನ್ನು ಅಭಿನಂದಿಸಿದರು. ಈ ವೇಳೆ ಅಂತಾರಾಷ್ಟ್ರೀಯ ಯೋಗ ಶಿಕ್ಷಕ ಡಾ.ಬಿ.ಶ್ರೀನಾಥ್, ಪತಂಜಲಿ ಯೋಗ ಸಮಿತಿಯ ಸತ್ಯನಾರಾಯಣ್, ಶಶಿಕುಮಾರ್, ಮೈಸೂರು ಯೋಗ ಒಕ್ಕೂಟದ ಕಾರ್ಯದರ್ಶಿ ಬಿ.ಪಿ.ಮೂರ್ತಿ, ಮೈಸೂರು ಯೋಗ ಅಸೋಸಿಯೇಷನ್ ಉಪಾಧ್ಯಕ್ಷ ಎನ್.ಪಶುಪತಿ, ಕಾರ್ಯ ದರ್ಶಿ ಎನ್.ಅನಂತ, ಪ್ರಣವ ಯೋಗ ಕೇಂದ್ರದ ಜಯಕುಮಾರ್, ಗೀತಾಕುಮಾರ್, ಶೈಲಜಾ, ಮಣಿಕಂಠ, ಹರ್ಷವರ್ಧನ ಮೊದಲಾದವರು ಉಪಸ್ಥಿತರಿದ್ದರು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

12.5.2026 ಮಂಗಳವಾರ, ಮಳೆ ನಕ್ಷತ್ರ: ಕೃತ್ತಿಕ 11.05.2026ರಿಂದ 24.05.2026ರವರೆಗೆ
ಪರಾಭವ ನಾಮ ಸಂವತ್ಸರ, ಉತ್ತರಾಯಣ, ವಸಂತ ಋತು, ವೈಶಾಖ ಮಾಸ, ಕೃಷ್ಣ ಪಕ್ಷ,
ತಿಥಿ: ದಶಮಿ, ನಕ್ಷತ್ರ: ಪೂರ್ವಭಾದ್ರ, ರಾಹುಕಾಲ: ಮಧ್ಯಾಹ್ನ 3ರಿಂದ 4.30ರವರೆಗೆ

- **ಜೆಎಸ್‌ಎಸ್ ನರ್ಸಿಂಗ್ ಕಾಲೇಜು** : ವಿಶ್ವ ಶುಶ್ರೂಷಕರ ದಿನಾಚರಣೆ ಅಂಗವಾಗಿ ನಶಾಮುಕ್ತ ಮೈಸೂರು ಘೋಷಣೆಯೊಂದಿಗೆ ಯುವಕರಲ್ಲಿ ಮಾದಕ ವ್ಯಸನದ ಕುರಿತು ಜಾಗೃತಿ ಮೂಡಿಸುವ ಸಲುವಾಗಿ ಮ್ಯಾರಥಾನ್, ಉಪಸ್ಥಿತರು : ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ, ಸೈಕ್ಲಿಸ್ಟ್ ಡಾ. ಬೃಂದಾ ಸುಹಾಸ್, ಸ್ಥಳ: ಅರಮನೆ ಕೋಟೆ ಆಂಜನೇಯಸ್ವಾಮಿ ದೇವಸ್ಥಾನದ ಆವರಣ, ಬೆಳಗ್ಗೆ 6.45ಕ್ಕೆ
- **ರಾಮ್‌ಸನ್ಸ್ ಕ್ರೀಡಾ ಕೌಶಲ್ಯ** : ಪಾರಂಪರಿಕ ಹಾಸು ಆಟಗಳ 11 ನೇ ದ್ವೈವಾರ್ಷಿಕ ಪ್ರದರ್ಶನ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, ನಜರ್‌ಬಾದ್, ಬೆಳಗ್ಗೆ 10 ರಿಂದ.
- **ಹೈಲೈಫ್ ಶಾಪಿಂಗ್ ಮಹೋತ್ಸವ:** 18ನೇ ವರ್ಷದ ಹೈಲೈಫ್ ಶಾಪಿಂಗ್ ಮಹೋತ್ಸವ, ಅತ್ಯುತ್ತಮ ಉಡುಪು, ಆಭರಣ, ಫ್ಯಾಷನ್ ವಸ್ತುಗಳ ಪ್ರದರ್ಶನ–ಮಾರಾಟ, ಸ್ಥಳ: ರ್‍ಯಾಡಿಸನ್ ಬ್ಲೂ ಹೋಟೆಲ್, ಬೆಳಗ್ಗೆ 10 ರಿಂದ.
- **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ:** ಬೆಳಗ್ಗೆ 6.30ರಿಂದ ದೇಹ–ಮನಸ್ಸುಗಳ ಆರೋಗ್ಯಕ್ಕಾಗಿ ಯೋಗಾಭ್ಯಾಸ ತರಗತಿ, ಬೆಳಗ್ಗೆ 9ರಿಂದ ಚರ್ಮ, ಬೆನ್ನುಮೂಳೆ ಮತ್ತು ಕೀಲು ನೋವು ಸಮಸ್ಯೆ, ಬೊಜ್ಜು, ಸಕ್ಕರೆ ಕಾಯಿಲೆ, ಬಿಪಿ, ಒತ್ತಡ, ಆತಂಕ, ಬಾಲನೆರೆ, ದೃಷ್ಟಿಮಾಂದ್ಯ, ತಲೆನೋವು, ಕೆಮ್ಮು, ಅಸ್ತಮಾ, ಪಿಸಿಓಡಿ, ಪುರುಷ ಹಾಗೂ ಸ್ತ್ರೀ ಬಂಜೆತನ, ಅರ್ಥರೈಟಿಸ್, ಸಂಧಿವಾತ, ಆಮವಾತ, ಗೌಟ್, ಕುತ್ತಿಗೆನೋವು ತಪಾಸಣೆ ಮತ್ತು ಚಿಕಿತ್ಸಾ ಶಿಬಿರ, ವೆರಿಕೋಸ್ ವೇನ್ಸ್ ಚಿಕಿತ್ಸಾ ಶಿಬಿರ, ಸ್ಥಳ: ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ, ಲಲಿತಾದ್ರಿಪುರ ರಸ್ತೆ, ಆಲನಹಳ್ಳಿ.
- **ಸೂತ್ರ ಆಯುರ್ಧಾಮ**: ವೆರಿಕೋಸ್ ವೇನ್ಸ್ ಉಚಿತ ತಪಾಸಣೆ ಮತ್ತು ಸಲಹಾ ಶಿಬಿರ, ಕಾಲಿನ ರಕ್ತನಾಳ ಊತ, ಕಾಲಿನ ನೋವು, ಉಬ್ಬರೆ, ಚರ್ಮದ ಬಣ್ಣ ಬದಲಾವಣೆ, ಕಾಲಿನಲ್ಲಿ ಜೋಮು ಹಿಡಿಯುವುದು, ವಾಸಿಯಾಗದ ಗಾಯಗಳ ತಪಾಸಣೆ ಮತ್ತು ಸಲಹಾ ಶಿಬಿರ, ಸ್ಥಳ: ಸೂತ್ರ ಆಯುರ್ಧಾಮ, ಜೆಎಲ್‌ಬಿ ರಸ್ತೆ, ಚಾಮುಂಡಿಪುರಂ. ಬೆಳಗ್ಗೆ 10 ರಿಂದ.
- **ಸುಯೋಗ್ ಆಸ್ಪತ್ರೆ, ಸುಯೋಗ್ ವೈದ್ಯಕೀಯ ಶಿಕ್ಷಣ ಸಂಸ್ಥೆಗಳ ಸಮೂಹ, ಸುಯೋಗ್ ನರ್ಸಿಂಗ್ ಕಾಲೇಜು** : ಅಂತರರಾಷ್ಟ್ರೀಯ ಶುಶ್ರೂಷಕರ ದಿನಾಚರಣೆ, ಉದ್ಘಾಟನೆ : ಸಾಹಿತಿ ಎಂ.ಆರ್. ಚಂದ್ರ ಶೇಖರ್, ಅಧ್ಯಕ್ಷತೆ : ಸುಯೋಗ್ ಆಸ್ಪತ್ರೆ ಅಧ್ಯಕ್ಷ ಡಾ. ಎಸ್.ಪಿ. ಯೋಗಣ್ಣ, ಉಪಸ್ಥಿತರು : ಶ್ರೀಮತಿ ಸುಧಾ ಯೋಗಣ್ಣ, ಡಾ. ಸುಯೋಗ್ ಯೋಗಣ್ಣ, ಡಾ. ರಾಜೇಂದ್ರ ಪ್ರಸಾದ್, ಡಾ. ಸೀಮಾ ಯೋಗಣ್ಣ, ಡಾ. ಯಶಿತಾ ರಾಜ್, ಸ್ಥಳ: ಸುಯೋಗ್ ಆಸ್ಪತ್ರೆ ಸಭಾಂಗಣ, ರಾಮಕೃಷ್ಣನಗರ, ಬೆಳಗ್ಗೆ 10.30ಕ್ಕೆ
- **ನವೋ ಪ್ರಮತಿ ಇನ್‌ಸ್ಟಿಟ್ಯೂಟ್ ಆಫ್ ಸಿವಿಲ್ ಸರ್ವೀಸಸ್** : ಸಿವಿಲ್ ಸರ್ವೀಸ್ ಪರೀಕ್ಷೆಯಲ್ಲಿ ಅತ್ಯುತ್ತಮ ಸಾಧನೆ ಮಾಡಿದ ಯುಪಿಎಸ್‌ಸಿ ಸಾಧಕರಿಗೆ ಅಭಿನಂದನಾ ಸಮಾರಂಭ, ಮುಖ್ಯ ಅತಿಥಿಗಳು : ನಗರ ಪಾಲಿಕೆ ಆಯುಕ್ತ ಆಸಿಫ್ ತನ್ವೀರ್, ಹೆಚ್ಚುವರಿ ಜಿಲ್ಲಾಧಿಕಾರಿ ಆರ್. ಐಶ್ವರ್ಯ, ಸ್ಥಳ: ಜಿಲ್ಲಾ ಪತ್ರಕರ್ತರ ಭವನ, ಬೆಳಗ್ಗೆ 11.45ಕ್ಕೆ.
- **ಜೆಎಸ್‌ಎಸ್ ನರ್ಸಿಂಗ್ ಕಾಲೇಜು** : ವಿಶ್ವ ಶುಶ್ರೂಷಕರ ದಿನಾಚರಣೆ, ಮುಖ್ಯ ಅತಿಥಿಗಳು : ಪ್ರಾದೇಶಿಕ ಆಯುಕ್ತ ನಿತೇಶ್ ಪಾಟೀಲ್, ವೈದ್ಯಕೀಯ ಶಿಕ್ಷಣ ವಿಭಾಗದ ನಿರ್ದೇಶಕ ಆರ್. ಮಹೇಶ್, ಜೆಎಸ್‌ಎಸ್ ಆಸ್ಪತ್ರೆ ನಿರ್ದೇಶಕ ಡಾ. ಸಿ.ಪಿ. ಮಧು, ಶ್ರೀಮತಿ ಮೃತ್ಯುಂಜಯಪ್ಪ, ಅಧ್ಯಕ್ಷತೆ : ಡಾ.ಸಿ.ಜಿ. ಬೆಟಸೂರ ಮಠ, ಸ್ಥಳ: ಜೆಎಸ್‌ಎಸ್ ಆಸ್ಪತ್ರೆ ಆವರಣ, ಮಧ್ಯಾಹ್ನ 3ಕ್ಕೆ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಗೀತಾರಾಧನ, 6.30 ಚಿಂತನ, 6.35 ಮತ್ತು ಸಂಜೆ 6.10 ಸಾಧಕರ ಸೋಪಾನ – ಲೇಖನ ಮತ್ತು ಪ್ರಸ್ತುತಿ: ಟಿ. ಎಸ್. ಗೋಪಾಲ್, ಪ್ರಾಯೋಜಕರು: ಸಹಬಾಳ್ವೆ, ಬೆಂಗಳೂರು, 6.40 ಪದಸಂಸ್ಕೃತಿ–ಕನ್ನಡ ಪದಗಳ ಬಳಕೆ ಕಲಿಕೆಯ ವಿಶಿಷ್ಟ ಬಾನುಲಿ ಸರಣಿ, 6.50 ರೈತರಿಗೆ ಸಲಹೆ, 7.15 ಮತ್ತು ಸಂಜೆ 5.40–ಪ್ರಾಯೋಜಿತ ಕಾರ್ಯಕ್ರಮ ಕೆ.ಎಸ್.ಓ.ಯು ಮುಕ್ತವಾಣಿ. ಪ್ರಾಯೋಜಕರು : ಪ್ರಸಾರಾಂಗ, ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ, ಮೈಸೂರು. ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಸಸ್ಯಶಾಸ್ತ್ರ ಅಧ್ಯಯನ ವಿಭಾಗದಲ್ಲಿರುವ ಅಧ್ಯಯನ ಅವಕಾಶಗಳನ್ನು ಕುರಿತು ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ಡಾ. ಕೃಷ್ಣಮೂರ್ತಿ ಚಮರಂ ಅವರೊಂದಿಗೆ ಸಂದರ್ಶನ, ಸಂದರ್ಶಕರು : ಲಕ್ಷ್ಮೀನಾರಾಯಣ .ಎಸ್., ನಿರ್ವಹಣೆ: ಎನ್.ಕೇಶವಮೂರ್ತಿ, 8.30 ಮತ್ತು ಸಂಜೆ 5.30 ಚೂಟಿ ಚೂಟಿ ಚುಟುಕ್ ಗುಲುಂ ಗುಟುಕ್–ಶಿಶುಗೀತೆಗಳ ಕಾರ್ಯಕ್ರಮ, 8.35 ಕರೆಗೊಂದು ಗೀತೆ–ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 10.00 ಕರ್ನಾಟಕ ಶಾಸ್ತ್ರೀಯ ಸಂಗೀತ : ತ್ಯಾಗರಾಜರ ಕೃತಿಗಳ ಹಾಡು ಗಾರಿಕೆ ಎಂ. ನಾರಾಯಣ ಶರ್ಮ ಅವರಿಂದ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ– 'ವಿಶ್ವ ದಾದಿಯರ ದಿನದ ಸಂದರ್ಭದಲ್ಲಿ ವಿಶೇಷ ಹೊಂಗಿರಣ', ಪ್ರಸ್ತುತಿ: ಎಸ್. ಲಕ್ಷ್ಮೀನಾರಾಯಣ ಹಾಗೂ ಬಿ. ಜಿ. ಕವಿತಾ

ಮಧ್ಯಾಹ್ನ: 12.05 ವನಿತಾ ವಿಹಾರ, ಭುವನದ ಭಾಗ್ಯ ಅಹಲ್ಯಬಾಯಿ ಹೋಳ್ಕರ್, ರಚನೆ– ಶ್ರೀಲತಾ ಬಾಳಿಗಾ, ಪ್ರಸ್ತುತಿ–ಸಮುಧ್ಯತಾ ಶ್ರೋತೃ ಬಳಗದ ಸದಸ್ಯೆಯರು, 12.35 ದೇವರನಾಮ 12.45 ಕನ್ನಡದಲ್ಲಿ ಭಾಷಣ, 1.00 ಪ್ರಗತಿ ಪಥ–ಕೇಂದ್ರ ಸರ್ಕಾರದ ವಿವಿಧ ಅಭಿವೃದ್ಧಿ ಯೋಜನೆಗಳ ಕುರಿತು ಸರಣಿ, 1.20 ಭಾವಗೀತೆಗಳು–ಕೆ.ಎಸ್. ಸುರೇಖಾ, 2.40 ಚಿತ್ರಗೀತೆಗಳು, 3.00 ಕರ್ನಾಟಕ ಶಾಸ್ತ್ರೀಯ ಸಂಗೀತ, ಅನುರಾಧ ಕೃಷ್ಣಮೂರ್ತಿ – ಹಾಡುಗಾರಿಕೆ, 3.30 ರಾಷ್ಟ್ರೀಯ ಶೈಕ್ಷಣಿಕ ಕಾರ್ಯ ಕ್ರಮ–ಉಮಂಗ್, 4.00 ಕಥಾಕಾಲಕ್ಷೇಪ, 5.00 ವಿಶೇಷ ನಮ್ಮ ಆರೋಗ್ಯ ಕಾರ್ಯಕ್ರಮ – ವಿಶ್ವ ದಾದಿಯರ ದಿನದ ಸಂದರ್ಭದಲ್ಲಿ ಶುಶ್ರೂಷಕರಾದ ಶ್ರೀಮತಿ ಯೋಗಲಕ್ಷ್ಮೀ .ಕೆ ಹಾಗೂ ಶ್ರೀ ದರ್ಶನ್ ಎನ್. ಆರ್. ಅವರೊಂದಿಗೆ ಸಂದರ್ಶನ. ಸಂದರ್ಶಕರು –ಡಾ. ಕುಲದೀಪ್ .ಎನ್., 6.50 ಕೃಷಿರಂಗ– ಕಿಸಾನ್‌ವಾಣಿ, ಭಾರತ ಸರ್ಕಾರದ ಕೃಷಿ ಹಾಗೂ ರೈತ ಕಲ್ಯಾಣ ಸಚಿವಾಲಯ ಪ್ರಾಯೋಜಿತ ಕಾರ್ಯಕ್ರಮ. ಬಾಳೆ ರೋಗಗಳ ಸಮಗ್ರ ನಿರ್ವಹಣೆ ಈ ಕುರಿತು ಮಂಡ್ಯದ ವಿ.ಸಿ. ಫಾರಂ ವಲಯ ಕೃಷಿ ಸಂಶೋಧನಾ ಕೇಂದ್ರದ ಪ್ರಾಧ್ಯಾಪಕರಾದ ಡಾ. ವಿ. ಬಿ. ಸನತ್ ಕುಮಾರ್ ಅವರೊಂದಿಗೆ ಸಂದರ್ಶನ. ಸಂದರ್ಶಕರು : ಎನ್.ಕೇಶವಮೂರ್ತಿ, 7.45 ಮೈಸೂರು ಜಂಕ್ಷನ್, ಸಾಪ್ತಾಹಿಕ ಸಂಚಿಕೆ. ಪ್ರಸ್ತುತಿ–ದಿಗ್ವಿಜಯ್ .ಬಿ, 8.00 ಹಿಂದೂಸ್ಥಾನಿ ಶಾಸ್ತ್ರೀಯ ಸಂಗೀತ, ಪಂಡಿತ್ ಶಿವಶಂಕರ್ ಶರ್ಮ–ಸಂತೂರ್ ವಾದನ, 8.30 ರಂಗಗೀತೆಗಳು, 9.30 ಕರ್ನಾಟಕ ಶಾಸ್ತ್ರೀಯ ಸಂಗೀತ, ಬಾಲಕೃಷ್ಣ .ಡಿ– ವೀಣಾವಾದನ, 10.00 ಚೈತ್ರವನ–ಲಕ್ಷ್ಮೀಶನ ಜೈಮಿನಿ ಭಾರತದ ಸಮಗ್ರ ವಾಚನ ಹಾಗೂ ವ್ಯಾಖ್ಯಾನ, ಪ್ರಸ್ತುತಿ–ಡಾ. ಎ. ಎಸ್. ಶಂಕರನಾರಾಯಣ, 10.30 ಸವಿನೆನಪು

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಮೇ 12 ಮಂಗಳವಾರ 2026

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್.ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸಂಪುಟ: 47 | ಸಂಚಿಕೆ: 26 | ಪುಟಗಳು: 12
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4

ಕೊಡಗಲ್ಲಿ ಜಾರ್ಖಂಡ್ ಮುಖ್ಯಮಂತ್ರಿ ಹೇಮಂತ್ ಸೊರೇನ್ ವಿಹಾರ

ಮಡಿಕೇರಿ, ಮೇ 11– ಜಾರ್ಖಂಡ್ ಮುಖ್ಯಮಂತ್ರಿ ಹೇಮಂತ್ ಸೊರೇನ್ ಕುಟುಂಬ ಸಹಿತ ಮೂರು ದಿನಗಳ ಕಾಲ ಕೊಡಗು ಜಿಲ್ಲಾ ಪ್ರವಾಸ ಕೈಗೊಂಡಿದ್ದಾರೆ.

ನಿನ್ನೆ ಸಂಜೆ ಮಡಿಕೇರಿಗೆ ಆಗಮಿಸಿದ ಹೇಮಂತ್ ಅವರನ್ನು ಜಿಲ್ಲಾಡಳಿತದ ಪರವಾಗಿ ಉಪವಿಭಾಗಾಧಿಕಾರಿ ಮಿಥುನ್ ಚಕ್ರವರ್ತಿ ಬರಮಾಡಿಕೊಂಡರು. ಕುಶಾಲನಗರ ತಹಶೀಲ್ದಾರ್ ಶ್ರೀಧರ್ ಅವರನ್ನು ಶಿಷ್ಟಾಚಾರದ ಅಧಿಕಾರಿ ಯಾಗಿ ನಿಯೋಜಿಸಿ, ಮುಖ್ಯಮಂತ್ರಿ ಸೊರೇನ್ ಪ್ರವಾಸದ ಉಸ್ತುವಾರಿ ವಹಿಸಲಾಗಿದೆ.

ತಮ್ಮ ಕುಟುಂಬ ಸಹಿತ ಮಡಿಕೇರಿ ಹೊರವಲಯದ ಕಡಗದಾಳು ಗ್ರಾಮದಲ್ಲಿರುವ ಪ್ರತಿಷ್ಠಿತ ಲೀಲಾ ಪ್ಯಾಲೆಸ್‌ನಲ್ಲಿ ತಂಗಿರುವ ಮುಖ್ಯಮಂತ್ರಿಗಳು ಮತ್ತವರ ಕುಟುಂಬ ವರ್ಗ, ಕುಶಾಲನಗರದ ಪ್ರವಾಸಿ ತಾಣಗಳಾದ ದುಬಾರೆ, ಕಾವೇರಿ ನಿಸರ್ಗಧಾಮಕ್ಕೆ ಭೇಟಿ ನೀಡಿದ್ದರು.

ಇಂದು ಬೆಳಗ್ಗೆ ದುಬಾರೆ ಸಾಕಾನೆ ಶಿಬಿರಕ್ಕೆ ಭೇಟಿ ನೀಡಿದ ಅವರಿಗೆ ಸಾಕಾನೆ ಶ್ರೀರಾಮ ಸೊಂಡಿಲೆತ್ತಿ ಸ್ವಾಗತಿಸಿತು.




ಇದರಿಂದ ರೋಮಾಂಚನಗೊಂಡ ಮುಖ್ಯಮಂತ್ರಿಗಳು, ಅದರೊಂದಿಗೆ ಫೋಟೊ ತೆಗೆಸಿಕೊಂಡರು. ಅಲ್ಲಿಂದ ಕಾವೇರಿ ನಿಸರ್ಗಧಾಮಕ್ಕೆ ಭೇಟಿ ನೀಡಿದ್ದ ಮುಖ್ಯಮಂತ್ರಿ ಹೇಮಂತ್ ಸೊರೇನ್ ನದಿ ನೀರಲ್ಲಿ ಕೆಲ ಕಾಲ ಕಳೆದು ತಾವೇ ಸ್ವತಃ ಕೆಲ ಫೋಟೊಗಳನ್ನು ಕ್ಲಿಕ್ಕಿಸಿಕೊಂಡರು. ಇನ್ನೂ ಎರಡು ದಿನಗಳ ಕಾಲ ಇಲ್ಲೇ ವಾಸ್ತವ್ಯ ಹೂಡಿದ್ದು, ಬಳಿಕ ಜಾರ್ಖಂಡ್‌ಗೆ ಮರಳಲಿದ್ದಾರೆ ಎಂದು ವಿಶ್ವಸನೀಯ ಮೂಲಗಳು ತಿಳಿಸಿವೆ

ಬಿಗಿ ಭದ್ರತೆ: ಕೊಡಗಿಗೆ ಆಗಮಿಸಿರುವ ಮುಖ್ಯಮಂತ್ರಿ ಹೇಮಂತ್ ಸೊರೇನ್ ಅವರಿಗೆ 'ಝಡ್ ಪ್ಲಸ್' ಶ್ರೇಣಿಯ ಭದ್ರತೆ ಒದಗಿಸಲಾಗಿದ್ದು, ಸಾರ್ವಜನಿಕರ ಭೇಟಿಗೆ ನಿರ್ಬಂಧ ಹೇರಲಾಗಿದೆ. ರಕ್ಷಣೆಯ ದೃಷ್ಟಿಯಿಂದ ಅವರ ಪ್ರವಾಸದ ವಿವರಗಳನ್ನು ನೀಡಲು ಸಾಧ್ಯವಿಲ್ಲ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ಆರ್. ಬಿಂಧುಮಣಿ ತಮ್ಮನ್ನು ಸಂಪರ್ಕಿಸಿದ 'ಮೈಸೂರು ಮಿತ್ರ'ನಿಗೆ ತಿಳಿಸಿದ್ದಾರೆ.

'ಮರುಎಣಿಕೆ' ಫಲಿತಾಂಶಕ್ಕೆ ಸುಪ್ರೀಂ ತಡೆ; ಶೃಂಗೇರಿ ಶಾಸಕರಾಗಿ ರಾಜೇಗೌಡ ಮುಂದುವರಿಕೆ

ನವದೆಹಲಿ: ಮೂರು ವರ್ಷಗಳ ಸುದೀರ್ಘ ಕಾನೂನು ಹೋರಾಟದ ನಂತರ ಅಂಚೆ ಮತಗಳ ಮರು ಎಣಿಕೆಯಲ್ಲಿ 'ರೋಚಕ' ಗೆಲುವು ಸಾಧಿಸಿ ಕಳೆದ ಬುಧವಾರ ಶಾಸಕರಾಗಿ ಪ್ರಮಾಣ ವಚನ ಸ್ವೀಕರಿಸಿದ್ದ ಬಿಜೆಪಿ ನಾಯಕ ಡಿ ಎನ್ ಜೀವರಾಜ್ ಅವರಿಗೆ ಸುಪ್ರೀಂಕೋರ್ಟ್ ಸೋಮವಾರ ಬಿಗ್ ಶಾಕ್ ನೀಡಿದೆ.



ರಾಜೇಗೌಡ

ಶೃಂಗೇರಿ ವಿಧಾನಸಭಾ ಕ್ಷೇತ್ರದ ಅಂಚೆ ಮತಗಳ ಮರು ಎಣಿಕೆ ಫಲಿತಾಂಶ ಮತ್ತು ಬಿಜೆಪಿ ಅಭ್ಯರ್ಥಿಯ ಗೆಲುವನ್ನು ಪ್ರಶ್ನಿಸಿ ಕಾಂಗ್ರೆಸ್‌ನ ಪರಾಜಿತ ಅಭ್ಯರ್ಥಿ ಟಿ.ಡಿ ರಾಜೇಗೌಡ ಅವರು ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ಸುಪ್ರೀಂಕೋರ್ಟ್, ಇಂದು ಮಹತ್ವದ ಆದೇಶ ನೀಡಿದೆ. ಮತಗಳ ಮರು ಎಣಿಕೆ ಫಲಿತಾಂಶಕ್ಕೆ ತಡೆ ನೀಡಿರುವ ಸುಪ್ರೀಂಕೋರ್ಟ್, 'ಯಥಾಸ್ಥಿತಿ' ಕಾಯ್ದುಕೊಳ್ಳುವಂತೆ ಸೂಚಿಸಿರುವುದರಿಂದ, ಬಿಜೆಪಿ ಅಭ್ಯರ್ಥಿ ಡಿ.ಎನ್. ಜೀವರಾಜ್ ಅವರು ಶಾಸಕರಾಗಿ ಪ್ರಮಾಣವಚನ ಸ್ವೀಕರಿಸಿದ ಕೇವಲ ಒಂದೇ ವಾರದಲ್ಲಿ ತಮ್ಮ ಸ್ಥಾನವನ್ನು ಕಳೆದುಕೊಳ್ಳುವಂತಾಗಿದೆ. ರಾಜೇಗೌಡ ಅವರ ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಸಂಜಯ್ ಕುಮಾರ್ ನೇತೃತ್ವದ ದ್ವಿಸದಸ್ಯ ಪೀಠ, 'ಯಥಾಸ್ಥಿತಿ' ಕಾಯ್ದುಕೊಳ್ಳುವಂತೆ ಆದೇಶಿಸಿದೆ.

ರಾಜ್ಯ ಸರ್ಕಾರಿ ನೌಕರರ ತುಟ್ಟಿಭತ್ಯೆ ಶೇ. 1.50 ಹೆಚ್ಚಳ

ಬೆಂಗಳೂರು, ಮೇ 11(ಕೆಎಂಶಿ)– ರಾಜ್ಯ ಸರ್ಕಾರಿ ನೌಕರರು ಮತ್ತು ಪಿಂಚಣಿದಾರರ ತುಟ್ಟಿಭತ್ಯೆ ಶೇಕಡ 1.50ರಷ್ಟು ಹೆಚ್ಚಳ ಮಾಡಿ ಆದೇಶ ಹೊರಡಿಸಲಾಗಿದೆ. ಮೂಲವೇತನದ ಶೇಕಡ 14.25ರಿಂದ ಶೇ.15.75ಕ್ಕೆ ಹೆಚ್ಚಿಸಿ ಆದೇಶ ಹೊರಡಿಸಲಾಗಿದ್ದು, ಜನವರಿ 1ರಿಂದಲೇ ಪೂರ್ವಾನ್ವಯವಾಗಿ ಜಾರಿಗೆ ಬರುವಂತೆ ತುಟ್ಟಿಭತ್ಯೆ ಪರಿಷ್ಕರಿಸಲಾಗಿದೆ.

ವಿರೋಧ ಪಕ್ಷದ ನಾಯಕನಾಗಿ ಉದಯನಿಧಿ ಸ್ಟಾಲಿನ್ ನೇಮಿಸಿದ ಡಿಎಂಕೆ

ಚೆನ್ನೈ: ತಮಿಳುನಾಡು ಮಾಜಿ ಡಿಸಿಎಂ ಉದಯನಿಧಿ ಸ್ಟಾಲಿನ್‌ನನ್ನು ರಾಜ್ಯ ವಿಧಾನಸಭೆಯ ಶಾಸಕಾಂಗ ಪಕ್ಷದ ನಾಯಕನನ್ನಾಗಿ ದ್ರಾವಿಡ ಮುನ್ನೇತ್ರ ಕಳಗಂ ಆಯ್ಕೆ ಮಾಡಲಾಗಿದೆ.



ಉದಯನಿಧಿ

ಅವರು 17ನೇ ತಮಿಳುನಾಡು ವಿಧಾನಸಭೆಯಲ್ಲಿ ವಿರೋಧ ಪಕ್ಷದ ನಾಯಕನಾಗಲಿದ್ದಾರೆ. ಇದರ ಜೊತೆಗೆ, ಪಕ್ಷದ ಹಿರಿಯ ನಾಯಕರಾದ ಕೆ.ಎನ್. ನೆಹರು ಮತ್ತು ಇ.ವಿ.ವೇಲು ಅವರನ್ನು ಕ್ರಮವಾಗಿ ಉಪನಾಯಕ ಮತ್ತು ಪಕ್ಷದ ಸಚೇತಕರನ್ನಾಗಿ ನೇಮಿಸಲಾಗಿದೆ. ಗುರುವಾರ ಅಣ್ಣಾ ಅರಿವಾಲಯಂನಲ್ಲಿ ನಡೆದ ಡಿಎಂಕೆ ಶಾಸಕರ ಉನ್ನತ ಮಟ್ಟದ ಸಭೆಯಲ್ಲಿ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ.

ತಮಿಳುನಾಡು ವೆಟ್ರಿ ಕಳಗಂ (ಟಿವಿಕೆ) ಮುಖ್ಯಸ್ಥ ವಿಜಯ್ ತಮಿಳುನಾಡಿನ ಒಂಬತ್ತನೇ ಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸಿದ ಸ್ವಲ್ಪ ಸಮಯದ ನಂತರ ಈ ಘೋಷಣೆ ಹೊರಬಿದ್ದಿದೆ. ಟಿವಿಕೆಯ ಸೆಲ್ವಂ ಅವರನ್ನು ಉದಯನಿಧಿ 7,140 ಮತಗಳ ಅಂತರದಿಂದ ಸೋಲಿಸಿದ್ದರು. ವಿಜಯ್ ಸಿಎಂ ಆಗಿ ಪ್ರಮಾಣವಚನ ಸ್ವೀಕರಿಸಿರುವುದು ರಾಜ್ಯ ರಾಜಕೀಯದಲ್ಲಿ ಒಂದು ಪ್ರಮುಖ ಬದಲಾವಣೆಯನ್ನು ಸೂಚಿಸುತ್ತದೆ.

ಜುಲೈ 1 ರಿಂದ ದೇಶದಾದ್ಯಂತ ವಿಬಿ ಜಿ ರಾಮ್ ಜಿ ಕಾಯ್ದೆ ಜಾರಿ

ನವದೆಹಲಿ: ಮಹಾತ್ಮ ಗಾಂಧಿ ಗ್ರಾಮೀಣ ಉದ್ಯೋಗ ಖಾತರಿ (ನರೇಗಾ) ಬದಲಿಗೆ ಕೇಂದ್ರ ಸರ್ಕಾರವು ರೂಪಿಸಿರುವ ವಿಕಸಿತ ಭಾರತ ರೋಜ್‌ಗಾರ್ ಮತ್ತು ಅಜೀವಿಕಾ ಮಿಷನ್ (ಗ್ರಾಮೀಣ) (ವಿಬಿ ಜಿರಾಮ್‌ಜಿ) ಕಾಯ್ದೆಯು ಜುಲೈ 1 ರಿಂದ ಅನುಷ್ಠಾನಗೊಳ್ಳಲಿದೆ ಎಂದು ಕೇಂದ್ರ ಸರ್ಕಾರ ಸೋಮವಾರ ತಿಳಿಸಿದೆ.

ಈ ಕುರಿತು ಗ್ರಾಮೀಣಾಭಿವೃದ್ಧಿ ಸಚಿವಾಲಯ ಅಧಿಸೂಚನೆ ಹೊರಡಿಸಿದ್ದು, ಜುಲೈ 1 ರಿಂದ ಎಲ್ಲಾ ರಾಜ್ಯ ಮತ್ತು ಕೇಂದ್ರಾಡಳಿತ ಪ್ರದೇಶದಲ್ಲಿ ಕಾಯ್ದೆ ಜಾರಿಯಾಗಲಿದೆ ಎಂದು ತಿಳಿಸಿದೆ. ಇನ್ನು ಹಳೆಯ ಕಾಯ್ದೆಯ ಬಗ್ಗೆಯೂ ಪ್ರಕಟಣೆ ಹೊರಡಿಸಿದ್ದು, 'ಮಹಾತ್ಮಾ ಗಾಂಧಿ ಗ್ರಾಮೀಣ ಉದ್ಯೋಗ ಗ್ಯಾರಂಟಿ ಕಾಯ್ದೆ–2005 (ನರೇಗಾ) ರದ್ದಾಗಲಿದ್ದು, ಅದರ ಬದಲು ವಿಬಿ ಜಿರಾಮ್‌ಜಿ ಇರಲಿದೆ ಎಂದು ಸ್ಪಷ್ಟಪಡಿಸಿದೆ.



ಸಂಗ್ರಹ ಚಿತ್ರ


ಜೂನ್ 30 ರಿಂದ ನರೇಗಾ ಅಡಿಯಲ್ಲಿ ನಡೆಯುತ್ತಿರುವ ಕೆಲಸಗಳನ್ನು ಬಾಕಿ ಉಳಿಸಿ ಹೊಸ ಚೌಕಟ್ಟಿಗೆ ವರ್ಗಾಯಿಸಲಾಗುತ್ತದೆ ಎಂದು ಅಧಿಸೂಚನೆಯಲ್ಲಿ ತಿಳಿಸಲಾಗಿದ್ದು, ಅಸ್ತಿತ್ವದಲ್ಲಿರುವ ಇ-ಕೆವೈಸಿಯಾದ ನರೇಗಾ ಉದ್ಯೋಗ ಕಾರ್ಡ್‌ಗಳು ಹೊಸ ಗ್ರಾಮೀಣ ರೋಜ್‌ಗಾರ್ ಗ್ಯಾರಂಟಿ ಕಾರ್ಡ್‌ಗಳನ್ನು ನೀಡುವವರೆಗೆ ಮಾನ್ಯವಾಗಿರುತ್ತವೆ ಎಂದೂ ಮಾಹಿತಿ ನೀಡಲಾಗಿದೆ. ಇ–ಕೆವೈಸಿ ಬಾಕಿ ಇರುವ ಕಾರ್ಮಿಕರಿಗೆ ಉದ್ಯೋಗಕ್ಕೆ ಯಾವುದೇ ತೊಂದರೆಯಾಗದು, ಜತೆಗೆ ಜಾಬ್ ಕಾರ್ಡ್ ಇಲ್ಲದವರ ನೋಂದಣಿ ಗ್ರಾಮ ಪಂಚಾಯತ್ ಮಟ್ಟದಲ್ಲಿ ಮುಂದುವರಿಯುತ್ತದೆ ಎಂದೂ ತಿಳಿಸಿದೆ.

ವೇತನ ಪಾವತಿ, ಕುಂದುಕೊರತೆ ಪರಿಹಾರ, ಹಂಚಿಕೆ ಮಾನದಂಡಗಳು ಮತ್ತು ಇತರ ನಿಬಂಧನೆಗಳಿಗೆ ಸಂಬಂಧಿಸಿದ ಕರಡು ನಿಯಮಗಳನ್ನು ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳೊಂದಿಗೆ ಸಮಾಲೋಚಿಸಿ ಸಿದ್ಧಪಡಿಸಲಾಗುತ್ತಿದೆ, ಶೀಘ್ರದಲ್ಲೇ ಸಾರ್ವಜನಿಕ ಸಮಾಲೋಚನೆಗಾಗಿ ಪ್ರಕಟಿಸಲಾಗುವುದು ಎಂದು ಸಚಿವಾಲಯ ತಿಳಿಸಿದೆ.

ಗ್ರಾಮೀಣ ಪ್ರದೇಶದ ಅಭಿವೃದ್ಧಿಯಲ್ಲಿ ಗ್ರಾಮ ಪಂಚಾಯಿತಿಗಳು ಪ್ರಮುಖ ಆಧಾರಸ್ತಂಭವಿದ್ದಂತೆ. ಹೊಸ ಕಾಯ್ದೆಯು ಹೆಚ್ಚು ಹೆಚ್ಚು ಉದ್ಯೋಗವನ್ನು ಸೃಜಿಸಲಿದೆ. ಜತೆಗೆ ಗ್ರಾಮೀಣ ಪ್ರದೇಶದ ಮೂಲ ಸೌಕರ್ಯಗಳ ಅಭಿವೃದ್ಧಿ ಮತ್ತು ಸ್ವಾವಲಂಬನೆಯನ್ನು ಹೆಚ್ಚಿಸಲಿದೆ ಎಂದು ಸರ್ಕಾರ ಬಣ್ಣಿಸಿದೆ.

ಭಾರತ ಎಂದಿಗೂ ಯಾರ ಮುಂದೆಯೂ ತಲೆಬಾಗದು

ಸೋಮನಾಥದಲ್ಲಿ ಪ್ರಧಾನಿ ನರೇಂದ್ರ ಮೋದಿ



ಸೋಮನಾಥೇಶ್ವರನಿಗೆ ಪ್ರಧಾನಿ ಮೋದಿ ವಿಶೇಷ ಭಕ್ತಿ ಸಮರ್ಪಣೆ.

ಸೋಮನಾಥ (ಗುಜರಾತ್): ಭಾರತ ಯಾವುದೇ ಜಾಗತಿಕ ಒತ್ತಡಗಳಿಗೆ ಮಣಿಯುವುದಿಲ್ಲ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.

ಸೋಮನಾಥ ದೇವಾಲಯದ ಪುನರ್ ಪ್ರತಿಷ್ಠಾಪನೆಯ 75ನೇ ವರ್ಷದ 'ಅಮೃತ ಮಹೋತ್ಸವ'ದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ಭಾರತವು ಯಾರ ಮುಂದೆಯೂ ತಲೆಬಾಗದು ಎಂದ ಅವರು, 1998ರ ಪೋಖ್ರಾನ್ ಅಣ್ವಸ್ತ್ರ ಪರೀಕ್ಷೆ ಮತ್ತು ಸೋಮನಾಥದ ಪುನರುತ್ಥಾನದ ಇತಿಹಾಸವನ್ನು ಸ್ಮರಿಸಿದ್ದಾರೆ. ಇದೇ ವೇಳೆ ಪ್ರತಿಪಕ್ಷಗಳ 'ತುಷ್ಟೀಕರಣ' ರಾಜಕಾರಣದ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ. 1951ರ ಮೇ 11ರಂದು ಸೋಮನಾಥ ದೇವಾಲಯದ ಪ್ರಾಣ ಪ್ರತಿಷ್ಠಾಪನೆ ನಡೆಯಿತು. ಇದು ಸ್ವತಂತ್ರ ಭಾರತದ ಜಾಗೃತ ಪ್ರಜ್ಞೆಯ ಘೋಷಣೆಯಾಗಿತ್ತು ಎಂದು ಬಣ್ಣಿಸಿದ್ದಾರೆ.

1998ರ ಇದೇ ದಿನ ಅಟಲ್ ಬಿಹಾರಿ ವಾಜಪೇಯಿ ಅವರ ನೇತೃತ್ವದಲ್ಲಿ ಭಾರತ ಅಣ್ವಸ್ತ್ರ ಪರೀಕ್ಷೆ ನಡೆಸಿ ■9ನೇ ಪುಟಕ್ಕೆ

ಪ್ರಧಾನಿ ಮೋದಿ ಹಾದಿಯಲ್ಲಿ ಮಹಾ ಸ್ಫೋಟಕ ಜಿಲೆಟಿನ್ ಕಡ್ಡಿ ಪತ್ತೆ!

ತಮಿಳ್ನಾಡಿನಿಂದ ತಂದಿರುವ ಬಗ್ಗೆ ಶಂಕೆ; ಎನ್‌ಐಎಯಿಂದ ಪರಿಶೀಲನೆ

- ರಾಜ್ಯ ಪೊಲೀಸ್ ವಲಯದಲ್ಲಿ ಆತಂಕ
- ಹಿರಿಯ ಅಧಿಕಾರಿಗಳ ವಿರುದ್ಧ ಕ್ರಮ ಸಾಧ್ಯತೆ
- ಕೇಂದ್ರ ತನಿಖಾ ತಂಡಗಳಿಂದ ಪರಿಶೀಲನೆ
- ಭಾನುವಾರ ಕನಕಪುರ ರಸ್ತೆಯ ಆರ್ಟ್ ಆಫ್ ಲಿವಿಂಗ್ ಸಂಸ್ಥೆಯ ಕಾರ್ಯಕ್ರಮದಲ್ಲಿ ಮೋದಿ ಪಾಲ್ಗೊಂಡಿದ್ದರು
- ಈಗ, ಅವರು ಹಾದು ಹೋದ ರಸ್ತೆ ಬದಿ ಜಿಲೆಟಿನ್ ಕಡ್ಡಿ ಬಾಕ್ಸ್ ದೊರೆತಿದೆ.

ಬೆಂಗಳೂರು, ಮೇ 11 (ಕೆಎಂಶಿ)– ಪ್ರಧಾನಿ ನರೇಂದ್ರ ಮೋದಿ ನಿನ್ನೆ ನಗರದಲ್ಲಿ ಸಂಚರಿಸಿದ ಮಾರ್ಗದಲ್ಲಿ ಪತ್ತೆಯಾದ ಜಿಲೆಟಿನ್ ಕಡ್ಡಿಗಳು ತಮಿಳುನಾಡಿನಿಂದ ಬಂದಿದ್ದವು ಎಂಬ ಶಂಕೆ ವ್ಯಕ್ತವಾಗಿದೆ ಆರ್ಟ್ ಆಫ್ ಲಿವಿಂಗ್ ಸಂಸ್ಥೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲು ನಗರಕ್ಕೆ ಆಗಮಿಸಿದ್ದ ಪ್ರಧಾನಿ ಮೋದಿ ಸಂಚರಿಸುವ ಮಾರ್ಗದಲ್ಲಿ ಜಿಲೆಟಿನ್ ಕಡ್ಡಿಗಳು ಪತ್ತೆಯಾದ ಪ್ರಕರಣವನ್ನು ಕೇಂದ್ರ ಸರ್ಕಾರ ಅತ್ಯಂತ ಗಂಭೀರವಾಗಿ ಪರಿಗಣಿಸಿ, ತನಿಖೆ ತೀವ್ರಗೊಳಿಸಿದೆ.



ವ್ಯಕ್ತಿಯೊಬ್ಬ ಈ ಸ್ಫೋಟಕಗಳನ್ನು ಇರಿಸಿದ ಕುರಿತು ಬಲವಾದ ಮಾಹಿತಿ ದೊರೆತಿದ್ದು, ಇದರ ಆಧಾರದ ಮೇಲೆ ನಗರ ಪೊಲೀಸರು ತಮಿಳುನಾಡಿಗೆ ತೆರಳಿದ್ದಾರೆ. ಇದರ ಜೊತೆಯಲ್ಲೇ ಕೇಂದ್ರದ ವಿವಿಧ ತನಿಖಾ ತಂಡಗಳು ನಗರಕ್ಕೆ ಧಾವಿಸಿ ವಿವಿಧ ಕೋನಗಳಿಂದ ತನಿಖೆ ನಡೆಸಿವೆ. ■9ನೇ ಪುಟಕ್ಕೆ

ಕೇರಳಂನ ಸಿಎಂ ಆಯ್ಕೆ ಕಗ್ಗಂಟು

ಇನ್ನು 48 ಗಂಟೆಗಳಲ್ಲಿ ತೀರ್ಮಾನ ಹೊರಬೀಳಲಿದೆ

ತಿರುವನಂತಪುರ: ಕೇರಳಂನ ನೂತನ ಮುಖ್ಯಮಂತ್ರಿ ಯಾರಾಗಬೇಕು ಎಂಬುದರ ಬಗ್ಗೆ ಮುಂದಿನ 48 ಗಂಟೆಗಳ ಒಳಗಾಗಿ ತೀರ್ಮಾನ ಹೊರ ಬೀಳಲಿದೆ ಎಂದು ಕಾಂಗ್ರೆಸ್ ನಾಯಕ ಕೆ. ಮುರಳೀಧರನ್ ಹೇಳಿದ್ದಾರೆ.

ಮುಖ್ಯಮಂತ್ರಿ ಯಾರಾಗುತ್ತಾರೆ ಎಂಬ ಬಗ್ಗೆ ನಡೆಯುತ್ತಿರುವ ಚರ್ಚೆಯ ಕುರಿತು ಪತ್ರಕರ್ತರು ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು, ನನ್ನ ಪ್ರಕಾರ ಮುಂದಿನ 48 ಗಂಟೆಗಳ ಒಳಗಾಗಿ ತೀರ್ಮಾನ ಹೊರಬೀಳಲಿದೆ. ಕಾಂಗ್ರೆಸ್ ಒಂದು ಪ್ರಜಾ ಪ್ರಭುತ್ವವಾದಿ ಪಕ್ಷ. ಹೈಕಮಾಂಡ್ ನಾಯಕರು ಶಾಸಕರು ಹಾಗೂ ಮೈತ್ರಿಕೂಟದ ಪಾಲುದಾರರೊಂದಿಗೆ ಚರ್ಚಿಸಿ ತೀರ್ಮಾನ ಕೈಗೊಳ್ಳುತ್ತಾರೆ ಎಂದು ತಿಳಿಸಿದ್ದಾರೆ. ಹೈಕಮಾಂಡ್ ನಾಯಕರು ನಾಳೆ (ಮಂಗಳವಾರ) ಮಾಜಿ ಪಿಸಿಸಿ ಅಧ್ಯಕ್ಷರೊಂದಿಗೆ ಚರ್ಚಿಸಲಿದ್ದಾರೆ.

ಮೋದಿ ಪ್ರಧಾನಿಯೇ ಇಲ್ಲ ಬಿಜೆಪಿ ಅಧ್ಯಕ್ಷರೋ... ವಿಪಕ್ಷ ನಾಯಕರೋ

ಬೆಂಗಳೂರು: ಕರ್ನಾಟಕದಲ್ಲಿನ ಕಾಂಗ್ರೆಸ್ ಸರ್ಕಾರದಲ್ಲಿ ಒಳಜಗಳವೇ ತುಂಬಿಹೋಗಿದ್ದು, ಮುಖ್ಯಮಂತ್ರಿ ಕುರ್ಚಿ ಅಲುಗಾಡುತ್ತಿದೆ ಎಂಬ ಪ್ರಧಾನಿ ನರೇಂದ್ರ ಮೋದಿ ಹೇಳಿಕೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ತಿರುಗೇಟು ನೀಡಿದ್ದಾರೆ.



ಪ್ರಧಾನಿ ಮೋದಿ ಅವರು ಭಾನುವಾರ ಬೆಂಗಳೂರಿನಲ್ಲಿ ಮಾತನಾಡಿದ್ದು ದೇಶದ ಪ್ರಧಾನಿಯಾಗಿಯೋ, ಇಲ್ಲವೇ ರಾಜ್ಯ ಬಿಜೆಪಿ ಅಧ್ಯಕ್ಷರೋ! ಇಲ್ಲವೇ ರಾಜ್ಯದ ವಿರೋಧ ಪಕ್ಷದ ನಾಯಕರಾಗಿಯೋ ಎನ್ನುವುದನ್ನು ಅವರೇ ಸ್ಪಷ್ಟಪಡಿಸಿ, ಸಾರ್ವಜನಿಕರಲ್ಲಿ ಮೂಡಿರುವ ಗೊಂದಲವನ್ನು ಬಗೆಹರಿಸಬೇಕು ಎಂದು ಸಿದ್ದರಾಮಯ್ಯ ಒತ್ತಾಯಿಸಿದ್ದಾರೆ.

ಮೋದಿ ಅವರು ರಾಜ್ಯದ ಕಾಂಗ್ರೆಸ್ ಸರ್ಕಾರವನ್ನು ಉದ್ದೇಶಿಸಿ ಮಾತನಾಡಿದ್ದರೂ ಅವರ ಮಾತಿನಲ್ಲಿ ಕೇಂದ್ರದಲ್ಲಿರುವ ಅವರದ್ದೇ ಸರ್ಕಾರದ ವೈಫಲ್ಯ ಮತ್ತು ರಾಜ್ಯದಲ್ಲಿರುವ ಅವರ ಪಕ್ಷದ ದುಸ್ಥಿತಿಯಯನ್ನು ಸರಿಪಡಿಸಲಾಗದ ಅಸಹಾಯಕತೆ ಇತ್ತು. ತನ್ನ ಎಲೆ ಮೇಲೆ ಆನೆ ಸತ್ತು ಬಿದ್ದಿದ್ದರೂ ಎದುರಿನವರ ಎಲೆ ಮೇಲೆ ಸತ್ತುಬಿದ್ದ ನೊಣವನ್ನು ಹುಡುಕಾಡುವ ಢೋಂಗಿ ಬುದ್ಧಿಯೂ ಅವರ ಭಾಷಣದಲ್ಲಿ ಇತ್ತು ಎಂದು ಸಿದ್ದರಾಮಯ್ಯ ಕಿಡಿಕಾರಿದ್ದಾರೆ.

ಪಂಡಿತ್ ಜವಾಹರಲಾಲ್ ನೆಹರೂ, ಇಂದಿರಾ ಗಾಂಧಿ, ಅಟಲ್ ಬಿಹಾರಿ ವಾಜಪೇಯಿಯವರೂ ಸೇರಿದಂತೆ ದೇಶದ ಪ್ರಧಾನಮಂತ್ರಿಯಾದವರು ಎಂದೂ ಕೆಟ್ಟ ರಾಜಕಾರಣಿಗಳ ರೀತಿ ಬೀದಿ ಭಾಷಣ ಮಾಡಿ ವಿರೋಧ ಪಕ್ಷಗಳನ್ನು ಹಳಿಯಲು ಹೋಗಿಲ್ಲ. ಅವರೆಲ್ಲರೂ ಕಾಪಾಡಿಕೊಂಡು ಬಂದಿದ್ದ ಪ್ರಧಾನಿ ಕುರ್ಚಿಯ ಘನತೆ, ಗಾಂಭೀರ್ಯ ಮತ್ತು ಔಚಿತ್ಯವನ್ನು ಮೋದಿಯವರು ತಮ್ಮ ಸುಳ್ಳು, ಕೀಳು ಅಭಿರುಚಿ ಮತ್ತು ■9ನೇ ಪುಟಕ್ಕೆ

ಸುಪ್ರೀಂಕೋರ್ಟ್ ನಿರ್ದೇಶನದಂತೆ ಸರ್ಕಾರ ದೇವರಾಜ ಮಾರುಕಟ್ಟೆ, ಲ್ಯಾನ್ಸ್‌ಡೌನ್ ಬಿಲ್ಡಿಂಗ್ ಸಂರಕ್ಷಣೆ ಮಾಡಬೇಕು

ಮೈಸೂರು, ಮೇ 11(ಪಿಎಂ)– ಸುಪ್ರೀಂಕೋರ್ಟ್ ನಿರ್ದೇಶನದಂತೆ ದೇವರಾಜ ಮಾರುಕಟ್ಟೆ ಹಾಗೂ ಲ್ಯಾನ್ಸ್‌ಡೌನ್ ಬಿಲ್ಡಿಂಗ್ ಸಂರಕ್ಷಣೆಗೆ ಸರ್ಕಾರ ಮುಂದಾಗಬೇಕು ಎಂದು ಮೈಸೂರು–ಕೊಡಗು ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಆಗ್ರಹಿಸಿದರು.

ದೇವರಾಜ ಮಾರುಕಟ್ಟೆ ವ್ಯಾಪಾರಸ್ಥರ ಆಹ್ವಾನದ ಮೇರೆಗೆ ಸೋಮವಾರ ಮಾರುಕಟ್ಟೆಗೆ ಭೇಟಿ ನೀಡಿದ್ದ ಅವರು ವ್ಯಾಪಾರಸ್ಥರಿಂದ ಅಭಿನಂದನೆ ಸ್ವೀಕರಿಸಿ ಬಳಿಕ ಮಾಧ್ಯಮದವರೊಂದಿಗೆ ಮಾತನಾಡಿದರು. ಮೈಸೂರಿನ ದೇವರಾಜ ಮಾರುಕಟ್ಟೆ ಐತಿಹಾಸಿಕ ಹಿನ್ನೆಲೆ ಹೊಂದಿದೆ. ಇತ್ತೀಚೆಗಷ್ಟೆ ಸುಪ್ರೀಂಕೋರ್ಟ್ ದೇವರಾಜ ಮಾರುಕಟ್ಟೆ ಹಾಗೂ ಲ್ಯಾನ್ಸ್‌ಡೌನ್ ಬಿಲ್ಡಿಂಗ್ ನೆಲಸಮಗೊಳಿಸದೇ ಸಂರಕ್ಷಣೆ ಮಾಡಬೇಕೆಂದು ರಾಜ್ಯ ಸರ್ಕಾರಕ್ಕೆ ನಿರ್ದೇಶನ ನೀಡಿದೆ. ಇದನ್ನು ನಾವೆಲ್ಲರೂ ಸ್ವಾಗತ ಮಾಡುತ್ತೇವೆ ಎಂದು ತಿಳಿಸಿದರು.

ದೇವರಾಜ ಮಾರುಕಟ್ಟೆಯನ್ನು ನೆಲಸಮಗೊಳಿಸದೇ ಸಂರಕ್ಷಣೆ ಮೂಲಕ ಪುನರುಜ್ಜೀವನಗೊಳಿಸಬೇಕೆಂದು ನಾನು ಅರಮನೆಗೆ ಬರುವ ಮುಂಚೆಯಿಂದಲೇ ಸ್ಥಳೀಯರು ಹೋರಾಟ ನಡೆಸಿಕೊಂಡು ಬಂದಿದ್ದಾರೆ. ನನಗೂ ಹೋರಾಟದಲ್ಲಿ ಕೈಜೋಡಿಸಲು ಅವಕಾಶ ಕೊಟ್ಟಿದ್ದಾರೆ. ಅವರ ಹೋರಾಟಕ್ಕೆ ಇಂದು ಜಯ ಸಿಕ್ಕಿದಂತಾಗಿದೆ. ರಾಜ್ಯ ಸರ್ಕಾರ ಕೂಡ ಸಕಾರಾತ್ಮಕ ರೀತಿಯಲ್ಲಿ ಸ್ಪಂದಿಸಬೇಕು. ಈ ವಿಚಾರ ಸಂಬಂಧ ಮೇಲ್ಮನವಿ ಮೂಲಕ ಕೋರ್ಟ್‌ನಲ್ಲಿ ಮುಂದುವರೆಯುವುದು ಸೂಕ್ತವಲ್ಲ ಎಂಬುದನ್ನು ಸರ್ಕಾರ ಅರ್ಥ ಮಾಡಿಕೊಳ್ಳಬೇಕು. ಮೇಲ್ಮನವಿ ಮೂಲಕ ಮುಂದುವರೆಯುತ್ತೇವೆ ಎಂದು ಜಿಲ್ಲಾಧಿಕಾರಿಗಳು ನಿಲುವು ವ್ಯಕ್ತಪಡಿಸಿದ್ದಾರೆ. ದಯವಿಟ್ಟು ಅದನ್ನು ಮಾಡಬಾರದೆಂದು ಆಗ್ರಹಿಸುತ್ತೇನೆ ಎಂದರು.

ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಆಗ್ರಹ



ಮೈಸೂರಿನ ದೇವರಾಜ ಮಾರುಕಟ್ಟೆಗೆ ಸಂಸದ ಯದುವೀರ ಒಡೆಯರ್ ಸೋಮವಾರ ಭೇಟಿ ನೀಡಿದರು.

ಮುಖ್ಯಮಂತ್ರಿಗೆ ಪತ್ರ: ಈ ಎರಡೂ ಪಾರಂಪರಿಕ ಕಟ್ಟಡಗಳನ್ನು ನೆಲಸಮಗೊಳಿಸಿ ಪುನರ್ ನಿರ್ಮಾಣಕ್ಕೆ ಮೀಸಲಿಟ್ಟ ಹಣವನ್ನು ಸಂರಕ್ಷಣೆ ಕಾಮಗಾರಿಗೆ (ನೆಲಸಮಗೊಳಿಸದೇ) ಬಳಸಬೇಕೆಂದು ಈಗಾಗಲೇ ಮುಖ್ಯಮಂತ್ರಿಗಳಿಗೆ ಪತ್ರ ಬರೆದಿದ್ದೇನೆ. ಒಂದೊಂದು ಭಾಗ ಬಿಟ್ಟುಕೊಟ್ಟು ಸಂರಕ್ಷಣೆ ಕಾಮಗಾರಿಗೆ ಎಲ್ಲಾ ಅಗತ್ಯ ಸಹಕಾರ ನೀಡಲು ದೇವರಾಜ ಮಾರುಕಟ್ಟೆ ವ್ಯಾಪಾರಸ್ಥರು ಸಿದ್ಧರಿದ್ದಾರೆ. ಬಹಳಷ್ಟು ಐತಿಹಾಸಿಕ ಮಾರುಕಟ್ಟೆಗಳನ್ನು ಸಂರಕ್ಷಣೆ ಮಾಡಿರು ವುದಕ್ಕೆ ವಿಶ್ವದಾದ್ಯಂತ ಉದಾಹರಣೆಗಳಿವೆ.

> ದೇವರಾಜ ಮಾರುಕಟ್ಟೆಯ ಸಂರಕ್ಷಣೆಗಾಗಿ ವ್ಯಾಪಾರಸ್ಥರ ಹೋರಾಟದ ಜೊತೆಗೆ ಅನೇಕರು ಪಾರ್ಟಿಯಾಗಿ ಕಾನೂನು ಹೋರಾಟ ಮಾಡುತ್ತಿದ್ದಾರೆ. ಸಂರಕ್ಷಣೆ ಮಾಡಬೇಕೆಂದು ಕೋರ್ಟ್ ನಿರ್ದೇಶನ ನೀಡಿದ್ದು, ಅದಕ್ಕೆ ಈ ಎಲ್ಲರಿಗೂ ಶ್ರೇಯಸ್ಸು ಸಲ್ಲಬೇಕಿದೆ. ನನ್ನ ಸಣ್ಣ ಪಾಲು ಇದ್ದರೆ ಅದಕ್ಕೂ ನೀವೇ (ಮಾರುಕಟ್ಟೆ ವ್ಯಾಪಾರಸ್ಥರು) ಪ್ರೇರಣೆ. ಅರಮನೆ ಜೊತೆಗೆ ಇದು ಒಂದೂ ಪಾರಂಪರಿಕ ಕಟ್ಟಡ. ಸಂರಕ್ಷಣೆ ಸಂಬಂಧ ಮುಖ್ಯಮಂತ್ರಿಗಳಿಗೂ ಪತ್ರ ಬರೆದಿದ್ದೇನೆ. ಇದರಲ್ಲಿ ಯಾವುದೇ ರಾಜಕೀಯ ಬೇಡ. ಇದನ್ನು ಉಳಿಸುವ ನಿಟ್ಟಿನಲ್ಲಿ ಮುಂದುವರೆದರೆ ಎಲ್ಲಗೂ ಒಳ್ಳೆಯದೇ. ಆ ನಿಟ್ಟಿನಲ್ಲಿ ಅವರೂ ಮುಂದುವರೆಯಲಿ ಎಂದು ಮನವಿ ಮಾಡುತ್ತೇನೆ.
>
> -ಯದುವೀರ ಒಡೆಯರ್

ಅದೇನು ಕಷ್ಟವಲ್ಲ. ಮನಸ್ಸು ಬೇಕಷ್ಟೆ ಎಂದು ತಿಳಿಸಿದರು.

ಶಿಥಿಲಾವಸ್ಥೆ ಪ್ರಮಾಣ ತಗ್ಗಿಸಬಹುದಿತ್ತು: ದೇವರಾಜ ಮಾರುಕಟ್ಟೆಯನ್ನು ನೆಲಸಮಗೊಳಿಸಿ ಪುನರ್ ನಿರ್ಮಿಸುವುದರ ವಿರುದ್ಧ 2005ರಿಂದಲೂ ಹೋರಾಟ ನಡೆಯುತ್ತಿದ್ದು, ಆಗಲೇ ಹೋರಾಟಗಾರರ ಮನವಿಗೆ ಸ್ಪಂದಿಸಿ ಸಂರಕ್ಷಣೆ ಕಾಮಗಾರಿ ಕೈಗೊಂಡಿದ್ದರೆ ಕಟ್ಟಡದ ಶಿಥಿಲಾವಸ್ಥೆ ಪ್ರಮಾಣ ತಗ್ಗಿಸಬಹುದಿತ್ತು ಎಂದು ಸಂಸದರು ಹೇಳಿದರು.

ಮಾರುಕಟ್ಟೆ ಸಂರಕ್ಷಣೆಗಾಗಿ 2005ರಿಂದಲೂ ನಾನಾ ಹೋರಾಟ ನಡೆಯುತ್ತಲೇ ಇದೆ. ಈವರೆಗೂ ಸತತವಾಗಿ ನೆಲಸಮಗೊಳಿಸಿಯೇ ಪುನರ್ ನಿರ್ಮಾಣ ಮಾಡಬೇಕೆಂಬ ನಿಲುವು ಹೊಂದುತ್ತಾ ಬರಲಾಗಿದೆ. ಆಗಲೇ ಸ್ಪಂದಿಸಿದ್ದರೆ ಕಟ್ಟಡ ಇಷ್ಟು ಶಿಥಿಲಾವಸ್ಥೆ ತಲುಪುತ್ತಿರಲಿಲ್ಲ ಎಂದು ■9ನೇ ಪುಟಕ್ಕೆ

ನಕ್ಕರೆ ಅದೇ ಸ್ವರ್ಗ

ಹೆಂಡತಿ : ರೀ... ಇಲ್ನೋಡಿ ಚಿನ್ನ ಕದ್ದವನಿಗೆ ಒಂದು ವರ್ಷ ಜೈಲು ಶಿಕ್ಷೆ ಕೊಟ್ಟಿದ್ದಾರಂತೆ?

ಗಂಡ : ಅದರಲ್ಲೇನು ವಿಶೇಷ? ತಾಳಿ ಕಟ್ಟಿದ್ದಕ್ಕೆ ನನಗೆ ಜೀವಾವಧಿ ಶಿಕ್ಷೆ ಕೊಟ್ಟಿಲ್ವಾ...!

ಮೈಸೂರು ಮಿತ್ರ
ಮಂಗಳವಾರ, ಮೇ 12, 2026
ಸತ್ಯೇನೋತ್ತಭಿತಾ ಭೂಮಿಃ ನ ಹಿ ಸತ್ಯಾತ್ಪರೋ ಧರ್ಮಃ
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)
ಸಂಪಾದಕ: ಎಂ.ಗೋವಿಂದೇಗೌಡ M.A.

ಅಮೃತ ವಾಹಿನಿ..........

ಗುರಿ ಇಟ್ಟುಕೊಂಡು ಸಾಗುವವರು ಸಾಧಕರಾಗುತ್ತಾರೆ. ಕೇವಲ ಆಸೆಗಳನ್ನು ಇಟ್ಟುಕೊಂಡವರು ಸಾಮಾನ್ಯರಾಗಿ ಉಳಿಯುತ್ತಾರೆ.

–ವಾಷಿಂಗ್ಟನ್ ಇರ್ವಿಂಗ್, ಅಮೆರಿಕ ಕಥೆಗಾರ

ವೇದ ಸುಳ್ಳಾದರೂ ಗಾದೆ ಸುಳ್ಳಾಗದು } ಒಗ್ಗಟ್ಟಿಲ್ಲದ ಊರಲ್ಲಿ ಒಪ್ಪತ್ತೂ ಇರಬೇಡ.

ನಿಮ್ಮ ಪತ್ರಗಳು

ಬೂಕನಕೆರೆಯ ದೊಡ್ಡಕೆರೆ ತುಂಬಿಸಿ

ಮಾನ್ಯರೆ,

ಮಂಡ್ಯ ಜಿಲ್ಲೆಯ ಕೆ.ಆರ್.ಪೇಟೆ ತಾಲೂಕಿನ, ಬಹುಪಾಲು ಪ್ರದೇಶಗಳಲ್ಲಿ ಈ ವರ್ಷ ಪೂರ್ವ ಮುಂಗಾರು ಮಳೆ ಆಗದೇ, ಬೆಳೆ ಬೆಳೆಯಲು ಮತ್ತು ಜನ – ಜಾನುವಾರುಗಳಿಗೆ ಕುಡಿಯುವ ನೀರಿಗೂ ಪರದಾಟ ಪ್ರಾರಂಭವಾಗಿದೆ,.

ಈ ಪ್ರದೇಶದಲ್ಲಿ ಕಳೆದ ಆರು ತಿಂಗಳಿಂದ ಮಳೆಯೇ ಆಗಿಲ್ಲ, ಅದರಲ್ಲೂ ಮಳೆಯನ್ನೇ ನಂಬಿ ಬದುಕುವ ಬೂಕನಕೆರೆ ಹೋಬಳಿಯ ಸುತ್ತ– ಮುತ್ತಲಿನ ಪ್ರದೇಶವು ಈ ವರ್ಷ ಮಳೆಯ ಕೊರತೆಯಿಂದಾಗಿ ರೈತರು ಯಾವುದೇ ಮುಂಗಾರಿನ ಬೆಳೆಯನ್ನು ಬೆಳೆಯಲು ಸಾಧ್ಯವಾಗಿಲ್ಲ, ಜನ–ಜಾನುವಾರುಗಳಿಗೆ ಮೇವು ಮತ್ತು ಕುಡಿಯುವ ನೀರಿಗೆ ತೊಂದರೆ ಆಗುತ್ತಿರುವುದರಿಂದ, ಬೂಕನಕೆರೆ ಗ್ರಾಮದ 'ದೊಡ್ಡ ಕೆರೆ'ಯು ಸೇರಿದಂತೆ ಈ ಗ್ರಾಮದ ಸುತ್ತಮುತ್ತಲಿನ ಕೆರೆಗಳಿಗೆ ಹೇಮಾವತಿ ಜಲಾಶಯದಿಂದ ನೀರು ತುಂಬಿಸಲು ಜಿಲ್ಲಾಡಳಿತ ಕ್ರಮ ಕೈಗೊಳ್ಳಬೇಕು, ಜನ – ಜಾನುವಾರುಗಳಿಗೆ ಕುಡಿಯುವ ನೀರಿಗೆ ಅನುಕೂಲ ಮಾಡಿಕೊಡಬೇಕು.

– ಬೂಕನಕೆರೆ ವಿಜೇಂದ್ರ, ಕುವೆಂಪುನಗರ ಮೈಸೂರು

ಸಣ್ಣ ಕೈಗಾರಿಕೆಗಳಿಗೆ ಇಂಧನ ಬಿಕ್ಕಟ್ಟು ನಿವಾರಿಸಿ

ಮಾನ್ಯರೆ,

ರಾಜ್ಯದಲ್ಲಿ 4000ಕ್ಕೂ ಹೆಚ್ಚು ಸಣ್ಣ ಕೈಗಾರಿಕ ಘಟಕಗಳು ಮುಚ್ಚುವ ಭೀತಿಯಲ್ಲಿರುವ ವರದಿ ಆತಂಕಕಾರಿ. ವಾಣಿಜ್ಯ ಸಿಲಿಂಡರ್ ಬೆಲೆ ದಿಢೀರನೆ ರೂಪಾಯಿ 3,152ಕ್ಕೆ ಏರಿದ್ದಲ್ಲದೆ, ಕಾಳಸಂತೆಯಲ್ಲಿ 4,500ರವರೆಗೆ ಮಾರಾಟವಾಗುತ್ತಿರುವುದು ಸಣ್ಣ ಉದ್ದಿಮೆದಾರರ ಪಾಲಿಗೆ ಮರಣಶಾಸನವಾಗಿದೆ. ವಾರಕ್ಕೆ 20 ಸಿಲಿಂಡರ್ ಅಗತ್ಯವಿರುವ ಘಟಕಗಳಿಗೆ ಕೇವಲ 3 ಪೂರೈಕೆಯಾಗುತ್ತಿರುವುದು ಉತ್ಪಾದನಾ ಸರಪಳಿಯನ್ನೇ ಕಡಿದುಹಾಕಿದೆ. ಇಂಧನ ವೆಚ್ಚ ಮೂರು ಪಟ್ಟು ಹೆಚ್ಚಾಗಿದ್ದರೂ, ಮುಂಚಿತವಾಗಿ ಮಾಡಿಕೊಂಡ ಒಪ್ಪಂದಗಳಿಂದಾಗಿ ಬೆಲೆ ಏರಿಸಲಾಗದೆ ಉದ್ದಿಮೆಗಳು ನಲುಗುತ್ತಿವೆ. ಜಾಗತಿಕ ಸಂಘರ್ಷಗಳ ನೆಪವೊಡ್ಡಿ ಪೂರೈಕೆ ಸ್ಥಗಿತಗೊಳಿಸಿರುವುದು ಸರಿಯಲ್ಲ. ಕೇವಲ 19 ಕೆ.ಜಿ. ಸಿಲಿಂಡರ್ ಬೆಲೆ ಏರಿಕೆಯು ಲಕ್ಷಾಂತರ ಕಾರ್ಮಿಕರ ಜೀವನದ ಮೇಲೆ ಬರೆ ಎಳೆಯುತ್ತಿದೆ. ಸರ್ಕಾರವು ಮಧ್ಯಪ್ರವೇಶಿಸಿ ಕೃತಕ ಅಭಾವ ಸೃಷ್ಟಿಸುವವರ ವಿರುದ್ಧ ಕ್ರಮ ಜರುಗಿಸಬೇಕು. ಎಂ.ಎಸ್.ಎಂ.ಇ ವಲಯಕ್ಕೆ ವಿಶೇಷ ಇಂಧನ ರಿಯಾಯಿತಿ ನೀಡದಿದ್ದರೆ ರಾಜ್ಯದ ಆರ್ಥಿಕ ಬೆನ್ನೆಲುಬು ಮುರಿಯುವುದರಲ್ಲಿ ಸಂಶಯವಿಲ್ಲ.

–ಡಾ. ಎಚ್.ಕೆ. ವಿಜಯಕುಮಾರ್, ಮೈಸೂರು.

ಅರಮನೆ ಸುತ್ತಲು ಪಾದಚಾರಿ ಮಾರ್ಗ ಸರಿಪಡಿಸಿ



ಮಾನ್ಯರೆ,

ಸಾಂಸ್ಕೃತಿಕ ನಗರಿ ಮೈಸೂರಿನ ವಿಶೇಷತೆ ಎಂದರೆ ಅದು ನಮ್ಮ ರಾಜ ಮನೆತನದ ಮೈಸೂರು ಅರಮನೆ. ವಿಶ್ವ ಮಟ್ಟದಲ್ಲಿ ಪ್ರಸಿದ್ಧಿ ಪ್ರವಾಸಿ ತಾಣಗಳಲ್ಲಿ ಸಹ ಒಂದಾಗಿದೆ. ಪ್ರತಿನಿತ್ಯ ವಿದೇಶಿಗರು ಸೇರಿ ಭಾರತದ ಅನೇಕ ಭಾಗಗಳಿಂದ ಪ್ರವಾಸಿಗರು ಮೈಸೂರಿಗೆ ಬಂದು ಅರಮನೆಯನ್ನು ನೋಡಲು ಭೇಟಿ ನೀಡುತ್ತಾರೆ. ಇಂತಹ ಅರಮನೆಯ ಸುತ್ತಲು ನಿರ್ಮಾಣವಾಗಿರುವ ಪಾದಚಾರಿ ಮಾರ್ಗಗಳು ಹಲವಾರು ಕಾರಣಗಳಿಂದ ಕೆಲವು ಭಾಗಗಳಲ್ಲಿ ಹಾಳಾಗುತ್ತಿದ್ದು, ಜೊತೆಗೆ ಪಾದಚಾರಿ ಮಾರ್ಗದಲ್ಲಿ ಅಳವಡಿಸಿರುವ ಚಪ್ಪಡಿ ಕಲ್ಲುಗಳು ಹಾಳಾಗುತ್ತಿವೆ. ಇದರಿಂದ ಸಾರ್ವಜನಿಕರಿಗೆ ಮತ್ತು ಪ್ರವಾಸಿಗರಿಗೆ ತೊಂದರೆಯಾಗುತ್ತಿದೆ. ಆದ್ದರಿಂದ ಸಂಬಂಧಪಟ್ಟ ಸಂಸದರು, ಶಾಸಕರು ಸೇರಿದಂತೆ ಮೈಸೂರು ನಗರ ಪಾಲಿಕೆಯ ಅಧಿಕಾರಿಗಳು ಕೂಡಲೇ ಪಾದಚಾರಿ ಮಾರ್ಗ ಸರಿಪಡಿಸಬೇಕೆಂದು ಮನವಿ.

–ನಾಗೇಶ್, ಮಾನಸಗಂಗೋತ್ರಿ, ಮೈಸೂರು

ತೋಳ ಬಂತು ತೋಳ !

ಮಾನ್ಯರೆ,

ಕೊಲ್ಲಿ ಯುದ್ಧಕ್ಕೆ ಸಂಬಂಧಿಸಿದಂತೆ, ಅಮೆರಿಕದ ಅಧ್ಯಕ್ಷರಾದ ಡೊನಾಲ್ಡ್ ಟ್ರಂಪ್ ಅವರು ಇರಾನಿಗೆ ಒಪ್ಪಂದ ಮಾಡಿಕೊಳ್ಳುವಂತೆ ನಿರಂತರವಾಗಿ ಬೆದರಿಕೆ ಹಾಕುತ್ತಿರುವುದು ಹಾಸ್ಯಾಸ್ಪದವಾಗಿದೆ. ಕಳೆದ ಸುಮಾರು 45 ದಿನಗಳಿಂದ ಈ ರೀತಿಯ ಧಮಕಿ ಹಾಕುತ್ತಿರುವ ಟ್ರಂಪ್ ಹತ್ತು ಹಲವು ಬಾರಿ ಭೀಕರ ದಾಳಿ ನಡೆಸುವುದಾಗಿ ಹೇಳಿಕೊಂಡು ಬರುತ್ತಿದ್ದರೂ ಸಹ, ಇದುವರೆಗೂ ಆ ಭೀಕರ ದಾಳಿಯನ್ನು ನಡೆಸದೇ ಕಾಲ ತಳ್ಳುತ್ತಾ ಬರುತ್ತಿರುವುದು 'ತೋಳ ಬಂತು ತೋಳ' ಕಥೆಯನ್ನು ಜ್ಞಾಪಕಕ್ಕೆ ತರುತ್ತದೆ. ಅಮೆರಿಕ ಅಧ್ಯಕ್ಷರು ಈ ರೀತಿ ಗೊಡ್ಡು ಬೆದರಿಕೆ ಹಾಕುವುದನ್ನು ನಿಲ್ಲಿಸಿ, ತಮ್ಮ ಹುದ್ದೆಯ ಘನತೆ ಮತ್ತು ಗೌರವವನ್ನು ಕಾಪಾಡಿಕೊಳ್ಳಲಿ.

–ಕೆ.ವಿ.ವಾಸು, ವಕೀಲರು ಮತ್ತು ನೋಟರಿ, ಮೈಸೂರು

ರಾಮಕೃಷ್ಣನಗರ ಐ ಬ್ಲಾಕ್‌ನಲ್ಲಿ ಯುಜಿಡಿ ಸರಿಪಡಿಸಿ

ಮಾನ್ಯರೆ,

ನಾನು ಮೈಸೂರಿನ ರಾಮಕೃಷ್ಣ ನಗರ 'ಐ' ಬ್ಲಾಕ್ 5ನೇ ಮೇನ್‌ನಲ್ಲಿ ವಾಸವಿರುತ್ತೇನೆ. ನಮ್ಮ ಮನೆಯ ಮುಂದೆ ರಸ್ತೆಯ ಎಡಭಾಗದಲ್ಲಿರುವ ಮ್ಯಾನ್ ಹೋಲ್‌ನಿಂದ ದುರ್ವಾಸನೆಯುಕ್ತ ನೀರು ಲೀಕ್ ಆಗಿ ರಸ್ತೆಯ ಮೇಲೆ ಹರಿಯುತ್ತಿದೆ. ನಮ್ಮ ಮನೆಯ ಮುಂದೆಯೇ ಹರಿಯುತ್ತಿದ್ದು, ಜನರು ಓಡಾಡಲು ಬಹಳ ಕಷ್ಟವಾಗುತ್ತಿದೆ. ಇದರಿಂದ ಬಹಳ ದುರ್ವಾಸನೆ ಬರುತ್ತಿದ್ದು, ಮನೆಯಲ್ಲಿ ವಾಸಿಸಲು ಬಹಳ ಕಷ್ಟವಾಗುತ್ತಿದೆ. ಇದು ಆಗಿಂದಾಗ್ಗೆ ಮರುಕಳಿಸುತ್ತಿದ್ದು, ನಮ್ಮ ಮನವಿಯನ್ನು ಸಂಬಂಧಪಟ್ಟ UGD ಇಲಾಖೆಯವರಿಗೆ ತಿಳಿಸಿದರೂ ಸಮಸ್ಯೆಗೆ ಪರಿಹಾರ ಸಿಗುತ್ತಿಲ್ಲ. ಈಗಲಾದರೂ ಈ ಭಾಗದ ಶಾಸಕರು ಈ ಕೂಡಲೇ ಮಧ್ಯೆ ಪ್ರವೇಶಿಸಿ ಇಲ್ಲಿನ ಜನರ ಸಮಸ್ಯೆಯನ್ನು ತಕ್ಷಣ ಬಗೆಹರಿಸಲು ಹಾಗೂ ಶಾಶ್ವತ ಪರಿಹಾರವನ್ನು ನೀಡಲು ಒಳಚರಂಡಿ ಇಲಾಖೆಯವರಿಗೆ ಸೂಚಿಸಲು ಕೋರುತ್ತೇವೆ.


–ಎ. ಸಚ್ಚಿನ್, 5ನೇ ಮುಖ್ಯರಸ್ತೆ, ರಾಮಕೃಷ್ಣನಗರ ಐ ಬ್ಲಾಕ್, ಮೈಸೂರು.

ಸುಂದರ ಮೈಸೂರಿಗಾಗಿ ಮತ್ತೆ ಹುಟ್ಟಿ ಬನ್ನಿ ರಾಜರ್ಷಿ ನಾಲ್ವಡಿ ಪ್ರಭುಗಳೇ...

> “ ರಾಜರ್ಷಿ ನಾಲ್ವಡಿ ಕೃಷ್ಣರಾಜ ಒಡೆಯರ್ ಕಟ್ಟಿದ ಸುಂದರ ಮೈಸೂರನ್ನು ಸುಂದರವಾಗಿಯೇ ಉಳಿಸಿಕೊಂಡು ಬೆಳೆಸುವ ಬಗೆ ಹೇಗೆ ಎಂಬುದು ಸದ್ಯದ ಪರಿಸ್ಥಿತಿ ಹಾಗೂ ವ್ಯವಸ್ಥೆಯಲ್ಲಿ ಸುಂದರ ಮೈಸೂರಿಗಾಗಿ ಮತ್ತೇ ಹುಟ್ಟಿ ಬರಲಿ 'ರಾಜರ್ಷಿ ನಾಲ್ವಡಿ ಪ್ರಭುಗಳು' ಎಂಬುದಾಗಿ ದೇವರಲ್ಲಿ ಮೊರೆ ಹೋಗುವುದನ್ನು ಹೊರತುಪಡಿಸಿ ಬೇರೆ ಮಾರ್ಗ ಸದ್ಯಕಂತೂ ಕಾಣುತ್ತಿಲ್ಲ!.



ಮಿರ್ಲೆ ಚಂದ್ರಶೇಖರ
ಲೇಖಕರು,
ಮೊ: 9916129654



ಮೈಸೂರು ಸಂಸ್ಥಾನದ ರಾಜರ ಆಡಳಿತದಲ್ಲಿ ರಾಜರ್ಷಿ ನಾಲ್ವಡಿ ಕೃಷ್ಣರಾಜ ಒಡೆಯರ್ ಕಾಲಘಟ್ಟವು ಅಭಿವೃದ್ಧಿಯ ಪರ್ವಕಾಲವಾಗಿತ್ತು. ತಂದೆ ಮಹಾರಾಜ ಚಾಮರಾಜೇಂದ್ರ ಒಡೆಯರ್ ಕಾಲವಾದ ನಂತರ ನಾಲ್ವಡಿಯವರು ಫೆಬ್ರವರಿ 1, 1895ರಲ್ಲಿ ಸಿಂಹಾಸನಾಧೀಶರಾದರೂ ಬಾಲಕನಾಗಿದ್ದರಿಂದ ತಾಯಿ ಮಹಾರಾಣಿ ಕೆಂಪನಂಜಮ್ಮಣ್ಣಿ ದೇವಿಯವರು ಅವರ ಪರ ಆಡಳಿತ ನಡೆಸಿದರು. ನಾಲ್ವಡಿಯವರ ಅಧಿಕಾರಾವಧಿ 8 ಫೆಬ್ರವರಿ 1902 ರಿಂದ ಮರಣವಾದ ದಿನ ಆಗಸ್ಟ್ 3, 1940ರವರೆಗಿನ ಅವರ ಅಭಿವೃದ್ಧಿಯನ್ನು ಇಂದಿನವರೆಗೂ ಸಂಸ್ಥಾನ ವ್ಯಾಪ್ತಿಯ ನಾಗರಿಕರು ನೆನೆಸಿಕೊಳ್ಳುತ್ತಿದ್ದಾರೆ ಹಾಗೂ ಅವುಗಳ ಉಪಯೋಗವನ್ನು ಪಡೆದುಕೊಳ್ಳುತ್ತಿದ್ದಾರೆ. ನಾಲ್ವಡಿಯವರ ಆಡಳಿತದ ಅವಧಿಯಲ್ಲಿ ಸಂಸ್ಥಾನವು ಒಂಬತ್ತು ದಿವಾನರುಗಳನ್ನು ಕಂಡಿದೆ, ಅವರು ಕ್ರಮವಾಗಿ ಕೆ.ಶೇಷಾದ್ರಿ ಅಯ್ಯರ್(1894–1900), ಟಿ.ಆರ್.ಎ.ತುಂಬುಚೆಟ್ಟಿ(1900–1901), ಪಿ.ಎನ್.ಕೃಷ್ಣಮೂರ್ತಿ(1901–1906), ವಿ.ಪಿ.ಮಾದವರಾವ್(1906–1909), ಟಿ.ಆನಂದ ರಾವ್(1909–1912), ಎಂ.ವಿಶ್ವೇಶ್ವರಯ್ಯ (1912–1918), ಎಂ.ಕಾಂತರಾಜ ಅರಸ್ (1918–1922), ಎ.ಆರ್.ಬ್ಯಾನರ್ಜಿ(1922–1926) ಮತ್ತು ಮಿರ್ಜಾ ಇಸ್ಮಾಯಿಲ್(1926–1941) ರವರು. ಇವರುಗಳಲ್ಲಿ ಅತೀ ಹೆಚ್ಚು ಅವಧಿಗೆ ದಿವಾನರಾಗಿದ್ದವರು ಮಿರ್ಜಾ ಇಸ್ಮಾಯಿಲ್‌ರವರು. ಬರೋಬ್ಬರಿ ಹದಿನೈದು ವರ್ಷಗಳ ಕಾಲ ದಿವಾನರಾಗಿದ್ದರು.

ನಾಲ್ವಡಿ ಕೃಷ್ಣರಾಜ ಒಡೆಯರ್‌ರವರ ಆಡಳಿತದ ಅವಧಿಯಲ್ಲಿ ಮೈಸೂರು ನಗರವು ಸರ್ವತೋಮುಖ ಬೆಳವಣಿಗೆಯನ್ನು ಕಂಡಿದ್ದರಿಂದ ಆ ಅವಧಿಯನ್ನು ಮೈಸೂರು ಸಂಸ್ಥಾನದ ಪಾಲಿಗೆ ಸುವರ್ಣಕಾಲವೆಂದು ಕರೆಯಲಾಗುತ್ತದೆ. ಎಲ್ಲಾ ದಿವಾನರುಗಳು ತಮ್ಮದೇ ಶೈಲಿಯಲ್ಲಿ ಸುಂದರ ಹಾಗೂ ಪಾರಂಪರಿಕ ನಗರ ನಿರ್ಮಾಣದಲ್ಲಿ ಕಾರ್ಯನಿರ್ವಹಿಸಿದ್ದಾರೆ. ವಿಶೇಷವಾಗಿ ಸರ್ ಎಂ. ವಿಶ್ವೇಶ್ವರಯ್ಯ ಮತ್ತು ಮಿರ್ಜಾ ಇಸ್ಮಾಯಿಲ್ ಅವರನ್ನು ಸಂಸ್ಥಾನದ ಜನರು ಹೆಚ್ಚು ಸ್ಮರಿಸುತ್ತಾರೆ. 1897ರಲ್ಲಿ ಕಟ್ಟಲು ಆರಂಭಿಸಿ 1912ರಲ್ಲಿ ಪೂರ್ಣಗೊಂಡ ಇಂಡೋ ಸಾರ್ಸೆನಿಕ್ ಶೈಲಿಯ ಅಂಬಾವಿಲಾಸ ಅರಮನೆ ಇನ್ನೂ ನೂರಾರು ವರ್ಷ ನಾಲ್ವಡಿಯವರ ಹೆಸರನ್ನು ಜೀವಂತವಾಗಿರಿಸುತ್ತದೆ.

ನಾಲ್ವಡಿಯವರು ಬದುಕಿದ್ದು ಕೇವಲ 45 ವರ್ಷ 6 ತಿಂಗಳು ಮಾತ್ರ, ಬಾಲ್ಯದ ವಯಸ್ಸನ್ನು ಹೊರತುಪಡಿಸಿ ಪ್ರೌಢಿಮೆಯ ವಯಸ್ಸನ್ನು ಪರಿಗಣಿಸಿದರೆ 27 ವರ್ಷಗಳು, ಕಡಿಮೆ ವಯಸ್ಸಿನ ಮಹಾರಾಜರುಗಳಲ್ಲಿ ಅತೀ ಹೆಚ್ಚು ಅಭಿವೃದ್ಧಿ ಕೆಲಸಗಳನ್ನು ಮಾಡಿಸಿದವರಲ್ಲಿ ಇವರು ಮೊದಲಿಗರಾಗುತ್ತಾರೆ. ಇವರು ಪೂರ್ಣ ಆಯಸ್ಸು ಪಡೆದುಕೊಂಡು ಆಡಳಿತ ನಡೆಸಿದ್ದಿದ್ದರೆ ಮೈಸೂರು ನಗರವು ವಿಶ್ವದಲ್ಲಿ ನಂ.1 ಸ್ಥಾನ ಪಡೆಯುತ್ತಿತ್ತು ಎಂಬುದನ್ನು ಪಕ್ಷಾತೀತವಾಗಿ ಎಲ್ಲರೂ ಒಪ್ಪುತ್ತಾರೆ. ಕಾರಣ ಪ್ರಜಾಪ್ರಭುತ್ವ ಆಡಳಿತದಲ್ಲಿ ನೆನಪಿನಲ್ಲುಳಿಯುವ ಶಾಶ್ವತ ಯೋಜನೆಗಳು ಏನೂ ಆಗಿಲ್ಲ ಎಂಬುದು ಗೊತ್ತಿರುವಂತಹದ್ದೆ.

ಮೈಸೂರಿನಲ್ಲಿ ಇರುವ ಅಂಬಾವಿಲಾಸ ಅರಮನೆ, ಲಲಿತ್‌ಮಹಲ್ ಅರಮನೆ, ಜಗನ್ಮೋಹನ ಅರಮನೆ, ಚೆಲುವಾಂಬ ಮ್ಯಾನ್ಷನ್, ಜಯಲಕ್ಷ್ಮಿವಿಲಾಸ, ರಾಜೇಂದ್ರವಿಲಾಸ ಮತ್ತು ಚಿತ್ತರಂಜನ್ ಅರಮನೆ ಸೇರಿ ಒಟ್ಟು ಏಳು ಅರಮನೆಗಳು ಸೇರಿ 'ಸೆವೆನ್ ಪ್ಯಾಲೆಸ್ ಸಿಟಿ' ಎಂದು ನಮ್ಮ ಮೈಸೂರು ಕರೆಸಿಕೊಂಡಿದೆ. ಗುಮ್ಮಟಗಳಿರುವ ಅರಮನೆಗಳಿಂದಾಗಿ ಅರಮನೆ ನಗರಿ ಎಂತಲೂ ಪ್ರಸಿದ್ಧ ಪಡೆದಿದೆ.

ರಾಜರ ಅವಧಿಯಲ್ಲಿ ಸಂಸ್ಥಾನದ ಅಭಿವೃದ್ಧಿಗೆಂದು ಶ್ರಮಿಸಿದವರು ಕೇವಲ ಒಂಬತ್ತು ದಿವಾನರುಗಳು, ಸ್ವಾತಂತ್ರ್ಯ ಬಂದು 80 ವರ್ಷಗಳಾಗುತ್ತಿದೆ 21 ಜನ ಮುಖ್ಯಮಂತ್ರಿಗಳನ್ನು ಕಂಡಿದೆ, ದಿವಾನರುಗಳ ಬದಲಿಗೆ ಬಹಳಷ್ಟು ಐಎಎಸ್ ಅಧಿಕಾರಿಗಳು ಕರ್ತವ್ಯ ನಿರ್ವಹಿಸಿದ್ದಾರೆ, ಮೈಸೂರು ಜಿಲ್ಲೆಗೆಂದೇ ವಿಭಾಗಾಧಿಕಾರಿಗಳು, ಜಿಲ್ಲಾಧಿಕಾರಿಗಳು, ಸಿಇಓ ಇರುತ್ತಾರೆ, ನಗರದ ಅಭಿವೃದ್ಧಿಗೆಂದು ಮಹಾನಗರ ಪಾಲಿಕೆ ಮತ್ತು ಮೈಸೂರು ಅಭಿವೃದ್ಧಿ ಪ್ರಾಧಿಕಾರ ಇವೆ. ಅಲ್ಲಿಯೂ ಐಎಎಸ್ ಅಧಿಕಾರಿಗಳಿರುತ್ತಾರೆ. ಇಂಥಹ ಉತ್ತಮ ಆಡಳಿತ ವ್ಯವಸ್ಥೆಯ ಜೊತೆಗೆ ಇಂದು ತಂತ್ರಜ್ಞಾನವಿದೆ. ಆಧುನಿಕ ಯಂತ್ರೋಪಕರಣಗಳಿವೆ, ಅತ್ಯುತ್ತಮವಾದ ಸಾರಿಗೆ ಮತ್ತು ಸಂವಹನ ಸಂಪರ್ಕಗಳಿವೆ. ಯೋಜನೆಗಳಿಗೆ ಹಣ ಹೊಂದಿಸಲು ಕಷ್ಟವಿಲ್ಲ, ಬೇಕುಬೇಡವಾದುದ್ದಕ್ಕೆಲ್ಲಾ ಮನಸ್ಸೋ ಇಚ್ಛೆ ತೆರಿಗೆ ಹೆಚ್ಚಿಸಿ ಹಣ ವಸೂಲಿ ಮಾಡುವ ವ್ಯವಸ್ಥೆ ಚೆನ್ನಾಗಿದೆ. ಕೊರತೆ ಇರುವುದು ಇಚ್ಛಾಶಕ್ತಿಯಲ್ಲಿ ಮತ್ತು ಭ್ರಷ್ಟರಹಿತವಾಗಿ ಆಡಳಿತ ನಡೆಸುವುದರಲ್ಲಿ.

ನಗರದಲ್ಲಿ ಯಾವುದೇ ದೊಡ್ಡ ಯೋಜನೆ ಪ್ರಾರಂಭವಾದರೆ ಸಾಕು ಅಲ್ಲಿ ಅಡ್ಡಿ, ಅದಕ್ಕೂ ಕಾರಣಗಳು ಇರುತ್ತವೆ. ದೂರದೃಷ್ಟಿ ಇಲ್ಲದ ಯೋಜನೆಗಳಲ್ಲಿ ದಂಡಿಯಾಗಿ ಇರುವ ನ್ಯೂನತೆಗಳು. ವಿಸ್ತೃತ ಯೋಜನಾ ವರದಿಯ(ಡಿಪಿಆರ್) ತಯಾರಿಕೆಯಲ್ಲಿ ಮಾಡಿಕೊಳ್ಳುವ ಎಡವಟ್ಟುಗಳಿಂದ, ಯೋಜನೆ ಟೇಕಾಫ್ ಆಗುವಾಗಲೇ ನೂರೆಂಟು ತೊಡಕುಗಳು. ಕೆಲವು ಡಿಪಿಆರ್ ಹಂತದಲ್ಲೇ ಹಳ್ಳ ಹಿಡಿದುಬಿಡುತ್ತವೆ ಪುಣ್ಯಾತ್ಮರು ಎಲಿವೇಟೆಡ್ ನಂತಹ ಬಹುದೊಡ್ಡ ಯೋಜನೆಗೆ ಇಪ್ಪತ್ತು ವರ್ಷಗಳ ದೂರದೃಷ್ಟಿಯ ಪ್ರಾಜೆಕ್ಟ್ ಎಂದು ಹೇಳುತ್ತಾರೆ, ಪ್ರಾರಂಭಿಸಿ ಪೂರ್ಣಗೊಳಿಸುವುದಕ್ಕೆ ಐದು ವರ್ಷಗಳಾಗುತ್ತದೆ. ಉಳಿದ ಹದಿನೈದು ವರ್ಷಕ್ಕೆ ಔಟ್‌ಡೇಟೆಡ್ ಆಗುವ ಯೋಜನೆ ಇದಾಗುತ್ತದೆ.

ಪಾರಂಪರಿಕ ಕಟ್ಟಡಗಳನ್ನು ಸಂರಕ್ಷಿಸಿಕೊಳ್ಳುವಲ್ಲಿ ಹಾಗೂ ಕುಸಿದ ಕಟ್ಟಡಗಳನ್ನು ಪುನರುಜ್ಜೀವನಗೊಳಿಸಲು ಪರಿಣಿತರು ಇಲ್ಲವೆಂಬಂತೆ ಕಾಲಹರಣ ಮಾಡಲಾಗುತ್ತಿದೆ. ನೆಲಸಮ ಆಗಬೇಕಾಗಿರುವ ಕೆಲವು ಕಟ್ಟಡಗಳನ್ನು ಪಾರಂಪರಿಕತೆಯ ಹೆಸರಿನಲ್ಲಿ ಇಟ್ಟುಕೊಂಡಿದ್ದೇವೆ. ಅವು ಯಾವಾಗ ತಮ್ಮಷ್ಟಕ್ಕೇ ನೆಲಸಮ ಆಗುತ್ತವೆಯೋ ಕಾದುನೋಡಬೇಕು. ಕಟ್ಟಡಗಳ ಗೋಡೆಗಳನ್ನು ಬರಿ ಕೈಯ್ಯಲ್ಲಿ ಕೆರೆದರೆ ಪ್ಲಾಸ್ಟರ್ ಮತ್ತು ಒಳಗಿನ ಇಟ್ಟಿಗೆಯ ಮಣ್ಣು ಉದುರುತ್ತದೆ, ಅಂತಹವುಗಳಿಗೆ ಸದೃಢವಾಗಿದೆ ಎಂಬ ದೃಢೀಕರಣ ಕೊಡುತ್ತಾರೆ. ಸಾಮಾನ್ಯ ವ್ಯಕ್ತಿ ಕೂಡ ಕಟ್ಟಡ ಸ್ಟ್ರೆಂತ್ ಇಲ್ಲವೆಂದು ಹೇಳುತ್ತಾನೆ. ಎಲ್ಲದಕ್ಕೂ ಪರಿಹಾರಗಳುಂಟು, ಆದರೂ ಬಗೆಹರಿಯವುದಿಲ್ಲ, 'ಶೀಘ್ರವೇ ಇದಕ್ಕೊಂದು ಪರಿಹಾರ ಸಿಗಲಿದೆ' ಎಂಬುದು ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳ ಆಶ್ವಾಸನೆ ಪ್ರತೀ ಅನಾಹುತಗಳ ಸಂದರ್ಭದಲ್ಲಿ ಗ್ಯಾರಂಟಿ.

ಪಾರಂಪರಿಕತೆಯ ಹೆಗ್ಗುರುತಾಗಿದ್ದ ದೇವರಾಜ ಮಾರುಕಟ್ಟೆ ಮತ್ತು ಲ್ಯಾನ್ಸ್ ಡೌನ್ ಬಿಲ್ಡಿಂಗ್ ಗೋಡೆಗಳು ಫ್ರೀ ಶೌಚಾಲಯಗಳಾಗಿ, ಇಲ್ಲಿನ ಮಳಿಗೆಗಳು ಕಸದ ತೊಟ್ಟಿಗಳಾಗಿ ಸಿಟಿಗೆ ಬರುವ ಜನರ ಉಪಯೋಗಕ್ಕೆ ಬರುತ್ತಿದೆ. ಆಗಸ್ಟ್ 25, 2012ರಲ್ಲಿ ಲ್ಯಾನ್ಸ್ ಡೌನ್‌ನ ಮೇಲ್ಛಾವಣಿ ಕುಸಿದು ನಾಲ್ವರನ್ನು ಬಲಿತೆಗೆದುಕೊಂಡಿದ್ದನ್ನು ಮರೆತಿದ್ದೇವೆ. ಘಟನೆ ಸಂಭವಿಸಿ ಬರೋಬ್ಬರಿ 15 ವರ್ಷಗಳು ಮುಗಿಯಿತು, ಹೊಸದನ್ನು ನಿರ್ಮಿಸಬೇಕೇ ಅಥವಾ ಇರುವುದನ್ನೇ ನವೀಕರಿಸಬೇಕೆ? ಎಂಬ ಗೊಂದಲದಲ್ಲೇ ಕಾಲ ಕಳೆಯುತ್ತಿದ್ದೇವೆ. ಮಹಾರಾಜ ಹತ್ತನೇ ಚಾಮರಾಜ ಒಡೆಯರ್‌ರವರು ಅರಮನೆಗೆ ಕೂಗಳತೆ ದೂರದಲ್ಲಿ ಕಟ್ಟಿಸಿದ ಸುಂದರ ಕಟ್ಟಡಕ್ಕೆ 1927ರಲ್ಲಿ ಮಹಾತ್ಮ ಗಾಂಧೀಜಿಯವರು ಭೇಟಿ ನೀಡಿದ್ದರಂತೆ. 1886ರಲ್ಲಿ ನಿರ್ಮಿಸಿದ ದೇವರಾಜ ಮಾರುಕಟ್ಟೆಯ ಉತ್ತರ ಪ್ರವೇಶ ದ್ವಾರವು ಆಗಸ್ಟ್ 2016ರಲ್ಲಿ ಕುಸಿದು ಬಿತ್ತು, ಹತ್ತು ವರ್ಷಗಳು ಕಳೆದರೂ ಕ್ರಮವಿಲ್ಲ.

ರೂರ್ಕಿಯ ಭಾರತೀಯ ತಂತ್ರಜ್ಞಾನ ಸಂಸ್ಥೆಯು (ಐಐಟಿ) ನೀಡಿರುವ ವರದಿಯ ಮೇರೆಗೆ ಎರಡೂ ಕಟ್ಟಡಗಳನ್ನು ನೆಲಸಮ ಗೊಳಿಸುವ ಪ್ರಸ್ತಾವನೆಯನ್ನು ತಿರಸ್ಕರಿಸಿ ಪುನಃಸ್ಥಾಪಿಸಲು ಮತ್ತು ಸಂರಕ್ಷಿಸಲು ಈಗಷ್ಟೇ ಸುಪ್ರೀಂಕೋರ್ಟ್ ಆದೇಶ ನೀಡಿದೆ, ಅನುಷ್ಠಾನಕ್ಕೆ ಇನ್ನೆಷ್ಟು ಕಾಲ ಬೇಕಾಗಬಹುದೋ, ಮೈಸೂರಿಗರು ಕಾಯಲೇಬೇಕು.

ನಗರದ ಹೃದಯ ಭಾಗದ ದಿವಾನ್ಸ್ ರಸ್ತೆಯಲ್ಲಿ ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರ ಹೆಸರಿನಲ್ಲಿ ನಿರ್ಮಾಣವಾಗುತ್ತಿರುವ ಭವನವು ರೂ. 14.66 ಕೋಟಿ ಅಂದಾಜು ಮೊತ್ತಕ್ಕೆ 2012ರಲ್ಲಿ ಪ್ರಾರಂಭವಾಗಿ ಪರಿಷ್ಕರಣ ಮೊತ್ತ ರೂ.20.66 ಕೋಟಿಗೆ ಏರಿತಾದರೂ ಪೂರ್ಣಗೊಳಿಸಲಾಗಲಿಲ್ಲ, ಇಂದಿಗೆ 14ವರ್ಷಗಳು ಕಳೆಯಿತು, ಇದೇ ವೇಗದಲ್ಲಿ ನಡೆದರೆ ಪೂರ್ಣಗೊಳಿಸುವಷ್ಟರಲ್ಲಿ ಅಡಿಪಾಯವೇ ಶಿಥಿಲಾವಸ್ಥೆಗೆ ಬರಬಹುದು!.

ಪುರಭವನದ ಆವರಣದಲ್ಲಿ ನಿರ್ಮಾಣವಾದ ಪಾರ್ಕಿಂಗ್ ಲಾಟ್ ಕೂಡ ಆಮೆಗತಿಯಲ್ಲಿ ನಡೆದು ಬಳಕೆಗೆ ಯೋಗ್ಯವಾದರು ಈಗ ಉಪಯೋಗಕ್ಕೆ ಬಾರದಾಗಿದೆ. ಇದಕ್ಕೆ ಮಾಡಿದ ಖರ್ಚು–ವೆಚ್ಚ ಕೋಟಿ ಕೋಟಿಗಳು! ಅರಮನೆಯ ಸುತ್ತ ಹಾಗೂ ರಾಜಮಾರ್ಗವನ್ನು ಸೌಂದರ್ಯಗೊಳಿಸುವ ಉದ್ದೇಶದಿಂದ ನಿರ್ಮಾಣವಾದ ಕಲ್ಲಿನಿಂದ ಕಟ್ಟಿದ ಅಲಂಕಾರಿಕ ಕೈಪಿಡಿಗಳು ಉದ್ದಕ್ಕೂ ಅಲ್ಲಲ್ಲಿ ತುಂಡರಿಸಿ ಬಿದ್ದಿವೆ. ದುಷ್ಕರ್ಮಿಗಳು ಇವುಗಳ ಮುರಿಯುವ ಸಾಹಸಕ್ಕೂ ಕೈ ಹಾಕಿದ್ದಾರೆ. ಬರುವ ಪ್ರವಾಸಿಗರು ಅರಮನೆಯ ಸಮೀಪ ಇರುವ ಇವುಗಳೆಲ್ಲವನ್ನು ನೋಡಿಯೇ ಹೋಗುವುದು. ಸುಂದರ ಮೈಸೂರಿನ ಕಲ್ಪನೆ ಇಟ್ಟುಕೊಂಡು ಬರುವ ಪ್ರವಾಸಿಗರಿಗೆ ಏನನ್ನಿಸಬೇಡ?. ರಸ್ತೆಗಳ ಸ್ಥಿತಿಗತಿಗಳನ್ನು ಮನಗಾಣಿಸಬೇಕಾದರೆ ಮತ್ತೊಂದು ಲೇಖನವನ್ನೇ ಸಿದ್ಧಪಡಿಸಬೇಕು.

ಮುಗಿಯಲು ಬಹಳಷ್ಟು ಸಮಯ ತೆಗೆದುಕೊಂಡ ಮತ್ತೊಂದು ಕಾಮಗಾರಿಯನ್ನು ಇಲ್ಲಿ ಪ್ರಸ್ತಾಪಿಸಲೇಬೇಕು, ಚಾಮುಂಡಿಬೆಟ್ಟದ ನಂದಿ ರಸ್ತೆ ಕೆಲವು ಮೀಟರು ದೂರ ಕುಸಿದು ಆರು ವರ್ಷಗಳ ನಂತರ ಈಗ ಸಂಚಾರಕ್ಕೆ ಮುಕ್ತವಾಗಿದೆ. ಹೆವಿ ಅರ್ಥ್ ಮೂವಿಂಗ್ ಯಂತ್ರಗಳು ಇದ್ದಾಗಿಯೂ ಪೂರ್ಣಗೊಳಿಸಲು ಎಷ್ಟೊಂದು ಸಮಯ ಬೇಕಾಯಿತು. 140 ಕಿಮೀ ಉದ್ದ ಹಾಗೂ 7400 ಕೋಟಿ ಮೊತ್ತದ ಬೆಂಗಳೂರು–ಮೈಸೂರು ಎಕ್ಸ್‌ಪ್ರೆಸ್ ರಸ್ತೆಯನ್ನು ಎರಡು ವರ್ಷಗಳಲ್ಲಿ ಮುಗಿಸಿರುವಾಗ, ಕೆಲವು ಮೀಟರುಗಳ ಉದ್ದದ ನಂದಿ ರಸ್ತೆಯನ್ನು ನಿರ್ಮಿಸಲು ಆರು ವರ್ಷಗಳನ್ನು ತೆಗೆದುಕೊಂಡಿರುವುದಕ್ಕೆ ಬದ್ಧತೆ ಇಲ್ಲದಿರುವುದೇ ಮುಖ್ಯ ಕಾರಣ.

ಅಮೆರಿಕದ ನಿರ್ವಹಣಾ ಸಲಹೆಗಾರ ಮತ್ತು ಶಿಕ್ಷಣ ತಜ್ಞ ಆಸ್ಟ್ರಿಯನ್ ಪೀಟರ್ ಫರ್ಡಿನಾಂಡ್ ಡ್ರಕ್ಕರ್ ಎಂಬಾತ ಹೇಳಿರುವಂತೆ 'ಬದ್ಧತೆಯನ್ನು ಮಾಡದ ಹೊರತು, ಆಶ್ವಾಸನೆಗಳು ಮತ್ತು ಭರವಸೆಗಳು ಮಾತ್ರ ಇರುತ್ತವೆ, ಆದರೆ ಯಾವುದೇ ಯೋಜನೆಗಳಿಲ್ಲ'.

ನಮ್ಮ ಮೈಸೂರಿನ ಅಭಿವೃದ್ಧಿಯಲ್ಲಿ ಆಗುತ್ತಿರುವುದು ಇದೇ...., ಸರ್ಕಾರವು ಬೃಹತ್ ಮೈಸೂರು ಎನ್ನುತ್ತಿದ್ದಂತೆ ರಿಯಲ್ ಎಸ್ಟೇಟ್ ಉದ್ಯಮ ಚಿಗುರುತ್ತಿದೆ. ಈ ಉದ್ಯಮವೂ ಕೂಡ ಮೈಸೂರು ಅಡ್ಡಾದಿಡ್ಡಿ ಬೆಳೆಯುವುದಕ್ಕೆ ಕಾರಣವಾಗಿದೆ. ಖಾಸಗಿಯವರು ಎರಡುಮೂರು ಎಕರೆಗಳಿಗೆಲ್ಲಾ ಬಡಾವಣೆಗಳನ್ನು ನಿರ್ಮಿಸುವುದರಿಂದ ಶಿಸ್ತುಬದ್ಧವಾಗಿ ನಗರವು ಬೆಳೆಯುತ್ತಿಲ್ಲ ಹಾಗೂ ಸೌಂದರ್ಯಕ್ಕೆ ದಕ್ಕೆಯಾಗುತ್ತಿರುವುದಲ್ಲದೆ ಸ್ಥಳೀಯ ಸಂಸ್ಥೆಗಳು ಮೂಲಭೂತ ಸೌಕರ್ಯಗಳನ್ನು ಕೊಡಲು ಕಷ್ಟವಾಗುತ್ತದೆ.

ನಮ್ಮ ಮೈಸೂರಿನ ಬಗ್ಗೆ ಬರೆಯುತ್ತಿದ್ದರೆ ಕೊನೆ ಎಂಬುದು ಇರುವುದಿಲ್ಲ, ಪ್ರಶ್ನೆ ಮತ್ತು ಸಮಸ್ಯೆ ಇರುವುದು ರಾಜರ್ಷಿ ನಾಲ್ವಡಿ ಕೃಷ್ಣರಾಜ ಒಡೆಯರ್ ಕಟ್ಟಿದ ಸುಂದರ ಮೈಸೂರನ್ನು ಸುಂದರವಾಗಿಯೇ ಇರುವಂತೆ ಉಳಿಸಿಕೊಂಡು ಬೆಳೆಸುವ ಬಗೆ ಹೇಗೆ ಎಂಬುದು?!, ಸದ್ಯದ ಪರಿಸ್ಥಿತಿ ಹಾಗೂ ವ್ಯವಸ್ಥೆಯಲ್ಲಿ ಸುಂದರ ಮೈಸೂರಿಗಾಗಿ ಮತ್ತೇ ಹುಟ್ಟಿ ಬರಲಿ 'ರಾಜರ್ಷಿ ನಾಲ್ವಡಿ ಪ್ರಭುಗಳು...' ಎಂಬುದಾಗಿ ದೇವರಲ್ಲಿ ಮೊರೆ ಹೋಗುವುದನ್ನು ಹೊರತುಪಡಿಸಿ ಬೇರೆ ಮಾರ್ಗ ಕಾಣುತ್ತಿಲ್ಲ!.

ಆದಿವಾಸಿ ವಸತಿ ಶಾಲೆಗೆ ಶಿಕ್ಷಕರು, ಸಿಬ್ಬಂದಿ ನೇಮಕಾತಿಗೆ ಅರ್ಜಿ ಆಹ್ವಾನ

ಮೈಸೂರು, ಮೇ 11– ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ ಕಾರ್ಯನಿರ್ವಹಿಸುತ್ತಿರುವ ಹುಣಸೂರು ತಾಲೂಕಿನ ನೆಲ್ಲೂರು ಪಾಲದ ಸರ್ಕಾರಿ ಮಹರ್ಷಿ ವಾಲ್ಮೀಕಿ ಬುಡಕಟ್ಟು ಆದಿವಾಸಿ ವಸತಿ ಶಾಲೆಯನ್ನು 2025–26ನೇ ಸಾಲಿನಿಂದ 1 ರಿಂದ 12ನೇ ತರಗತಿಯವರೆಗೆ ಮೇಲ್ದರ್ಜೆಗೇರಿಸಲಾಗಿದೆ ಈ ಹಿನ್ನೆಲೆಯಲ್ಲಿ, 2026–27ನೇ ಶೈಕ್ಷಣಿಕ ಸಾಲಿಗೆ ಆಂಗ್ಲ, ಗಣಕಯಂತ್ರ, ಕ್ರಾಫ್ಟ್ ವಿಷಯಗಳ ಶಿಕ್ಷಕರು ಹಾಗೂ ಸಿಬ್ಬಂದಿಗಳನ್ನು ಹೊರಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲು ಅರ್ಜಿ ಆಹ್ವಾನಿಸಲಾಗಿದೆ.

ಅರ್ಹ ಅಭ್ಯರ್ಥಿಗಳು ಜೂನ್ 30 ರೊಳಗೆ ತಾಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿ, ಎಂ.ಜಿ. ರಸ್ತೆ, ದ್ವಾರಕಾ ಸರ್ಕಲ್ ಹತ್ತಿರ, ರತ್ನಪುರಿ ರಸ್ತೆ ಹುಣಸೂರು ತಾಲೂಕು ಇಲ್ಲಿಗೆ ಸೂಕ್ತ ದಾಖಲೆಗಳೊಂದಿಗೆ ತಮ್ಮ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ttwohunsur@gmail.com ಇ–ಮೇಲ್ ವಿಳಾಸ ಹಾಗೂ 08222–252812 ನ್ನು ಸಂಪರ್ಕಿಸಬಹುದೆಂದು ಹುಣಸೂರು ತಾಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನೂತನ ಶೈಕ್ಷಣಿಕ ವರ್ಷಾರಂಭ ಹಿನ್ನೆಲೆ

ನೈಪುಣ್ಯ ಶಿಕ್ಷಣ ಸಂಸ್ಥೆ ಶಿಕ್ಷಕ ವರ್ಗಕ್ಕೆ ಕಾರ್ಯಾಗಾರ



ಮೈಸೂರಿನ ನೈಪುಣ್ಯ ಶಿಕ್ಷಣ ಸಂಸ್ಥೆಯ ಶಿಕ್ಷಕರಿಗಾಗಿ ಏರ್ಪಡಿಸಿರುವ ಕಾರ್ಯಾಗಾರ ಉದ್ಘಾಟನಾ ಸಮಾರಂಭದಲ್ಲಿ ಸಂಸ್ಥೆಯ ಅಧ್ಯಕ್ಷ ಆರ್.ರಘು ದೀಪ ಬೆಳಗಿದರು. ಈ ವೇಳೆ ಖ್ಯಾತ ಅನ್ವಯಿಕ ಗಣಿತಜ್ಞ ಡಾ.ಗುರುರಾಜ ಶ್ರೀಧರ ಮತ್ತಿತರರಿದ್ದರು.

ಮೈಸೂರು, ಮೇ 11– ಮಕ್ಕಳಿಗೆ ನೈಜ ಗುಣಮಟ್ಟದ ಶಿಕ್ಷಣ ನೀಡುವುದೇ ಶಿಕ್ಷಕರ ಗುರಿಯಾಗಿರಬೇಕು ಎಂದು ಖ್ಯಾತ ಅನ್ವಯಿಕ ಗಣಿತಜ್ಞ ಡಾ.ಗುರುರಾಜ ಶ್ರೀಧರ ಅಭಿಪ್ರಾಯಿಸಿದರು.

ನೂತನ ಶೈಕ್ಷಣಿಕ ವರ್ಷಾರಂಭಕ್ಕೆ ಚಾಲನೆ ನೀಡುವ ನಿಟ್ಟಿನಲ್ಲಿ ಮೈಸೂರಿನ ನೈಪುಣ್ಯ ಶಿಕ್ಷಣ ಸಂಸ್ಥೆಯ ದಟ್ಟಗಳ್ಳಿ ಸಿಬಿಎಸ್‌ಇ ಕ್ಯಾಂಪಸ್ ಹಾಗೂ ಆರ್‌ಟಿ ನಗರದ ಐಸಿಎಸ್‌ಇ ಕ್ಯಾಂಪಸ್‌ನ ಶಿಕ್ಷಕರಿಗಾಗಿ ಏರ್ಪಡಿಸಿರುವ ಎರಡು ದಿನಗಳ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದ ಅವರು, ಶಿಕ್ಷಕರು ನೈಜ ಗುಣಮಟ್ಟದ ಶಿಕ್ಷಣದ ಗುರಿಯೊಂದಿಗೆ ನಿರಂತರ ಕಲಿಕೆಗಳ ಮೂಲಕ ತಮ್ಮನ್ನು ತಾವೇ ಉನ್ನತೀಕರಿಸಿಕೊಳ್ಳುವ ಮೂಲಕ ಮಕ್ಕಳ ಸರ್ವತೋಮುಖ ಬೆಳವಣಿಗೆಯಲ್ಲಿ ಮಹತ್ವದ ಪಾತ್ರ ವಹಿಸಬೇಕು ಎಂದರು.

ತಂತ್ರಜ್ಞಾನ ಪ್ರಧಾನವಾದ ಈ ಕಾಲಘಟ್ಟದಲ್ಲಿ ಪ್ರಾಥಮಿಕ ಶಿಕ್ಷಣ ಹಲವು ಸವಾಲುಗಳನ್ನು ಎದುರಿಸಬೇಕಿದೆ. ಆದರೆ, ಎಷ್ಟೇ ತಂತ್ರಜ್ಞಾನಗಳು ಬಂದರೂ ಸಾಂಪ್ರದಾಯಿಕ ಶಿಕ್ಷಣ ಪದ್ಧತಿ ಹೊರತುಪಡಿಸಿ ಪ್ರಾಥಮಿಕ ಶಿಕ್ಷಣವನ್ನು ಕಲ್ಪಿಸಿಕೊಳ್ಳಲು ಸಾಧ್ಯವಿಲ್ಲ. ಹಾಗಾಗಿ ಅವಶ್ಯವಿರುವಷ್ಟೇ ತಂತ್ರಜ್ಞಾನ ಬಳಸಿಕೊಂಡು, ಸಾಂಪ್ರದಾಯಿಕ ನೆಲೆಗಟ್ಟಿನಲ್ಲಿ ಶಿಕ್ಷಣ ನೀಡಬೇಕಿದೆ. ಮಕ್ಕಳು ಭವಿಷ್ಯತ್ತಿನಲ್ಲಿ ಎದುರಿಸಬೇಕಾದ ಸವಾಲುಗಳು ಹಾಗೂ ಅವಕಾಶಗಳನ್ನು ದೃಷ್ಟಿಯಲ್ಲಿಟ್ಟುಕೊಂಡು ಶಿಕ್ಷಣವನ್ನು ರೂಪಿಸಬೇಕಿದೆ. ಈ ನಿಟ್ಟಿನಲ್ಲಿ ನೈಪುಣ್ಯ ಶಿಕ್ಷಣ ಸಂಸ್ಥೆಯು ಪ್ರಾಥಮಿಕ ಶಿಕ್ಷಣದ ಪ್ರಯೋಗಾಲಯದಂತೆ ಕೆಲಸ ಮಾಡುತ್ತಿರುವುದು ಶ್ಲಾಘನೀಯ. ಪ್ರತಿಯೊಬ್ಬ ಶಿಕ್ಷಕರೂ ಸಂಶೋಧನಾ ವಿದ್ಯಾರ್ಥಿಯಂತೆ ತೊಡಗಿಸಿಕೊಳ್ಳಬೇಕಿದೆ ಎಂದು ಅವರು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ನೈಪುಣ್ಯ ಸಂಸ್ಥೆಯ ಅಧ್ಯಕ್ಷ ಆರ್.ರಘು, ಪ್ರಾಂಶುಪಾಲರಾದ ಗುರುಪ್ರಸಾದ್, ಶಿಕ್ಷಣ ಸಂಯೋಜಕಿ ಶ್ರೀಮತಿ ಕೆ.ಎಸ್.ಶ್ವೇತಾ ಮತ್ತು ಶಿಕ್ಷಕ ವರ್ಗದವರು ಉಪಸ್ಥಿತರಿದ್ದರು.

ಆರ್.ಶ್ರೀಷಾಗೆ ಪಿಎಚ್.ಡಿ ಪದವಿ



ಮೈಸೂರು, ಮೇ 11– ಡಾ. ಪ್ರಮುಕುಮಾರ್ ರಾಜೇ ಅರಸ್ ಎಂ.ಎನ್. ಅವರ ಮಾರ್ಗದರ್ಶನದಲ್ಲಿ ಆರ್. ಶ್ರೀಷಾ ಅವರು ವಿಜ್ಞಾನ ನಿರ್ವಹಣೆ ವಿಷಯದಲ್ಲಿ ಸಂಶೋಧನೆ ನಡೆಸಿ ಸಾದರಪಡಿಸಿದ ಮಹಾಪ್ರಬಂಧವನ್ನು ಮೈಸೂರು ವಿಶ್ವವಿದ್ಯಾನಿಲಯ ಪಿಎಚ್.ಡಿ ಪದವಿಗೆ ಅಂಗೀಕರಿಸಿದೆ.

ಮೇ 15ರೊಳಗೆ ಬೆಂಬಲ ಬೆಲೆಯಡಿ ರಾಗಿ ಮಾರಾಟಕ್ಕೆ ರೈತರಿಗೆ ಸೂಚನೆ



ಮೈಸೂರು, ಮೇ 11– 2025–26ನೇ ಸಾಲಿನಲ್ಲಿ ಕನಿಷ್ಠ ಬೆಂಬಲಬೆಲೆ ಯೋಜನೆಯಡಿ ರೈತರಿಂದ ರಾಗಿ ಖರೀದಿ ಸಂಬಂಧ ಜಿಲ್ಲೆಯಲ್ಲಿ ಖರೀದಿ ಕೇಂದ್ರಗಳನ್ನು ತೆರೆದು ಖರೀದಿ ಕಾರ್ಯವನ್ನು ನಿರ್ವಹಿಸಲಾಗುತ್ತಿರುತ್ತದೆ. ಮೇ ಮತ್ತು ಜೂನ್ ಮಾಹೆಗಳಿಗೆ ಎನ್.ಎಫ್.ಎಸ್‌ಎ ಅಡಿ ರಾಗಿ ವಿತರಣೆಗೆ ಕ್ರಮವಹಿಸಬೇಕಾಗಿರುವುದರಿಂದ ಖರೀದಿ ಕಾರ್ಯವನ್ನು ಮೇ 15 ರೊಳಗೆ ಮುಕ್ತಾಯಗೊಳಿಸುವಂತೆ ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ನಿಯಮಿತ ವ್ಯವಸ್ಥಾಪಕ ನಿರ್ದೇಶಕರು ಸೂಚಿಸಿದ್ದಾರೆ.

ಅದರಂತೆ ಬೆಂಬಲಬೆಲೆ ಯೋಜನೆಯಡಿ ರಾಗಿ ಖರೀದಿ ಮಾಡಲು ಜಿಲ್ಲೆಯಲ್ಲಿ ತೆರೆಯಲಾಗಿರುವ ಎಲ್ಲಾ ಖರೀದಿ ಕೇಂದ್ರಗಳಲ್ಲಿ ರಾಗಿ ಖರೀದಿ ಪ್ರಕ್ರಿಯೆಯನ್ನು ಮೇ 15 ರಂದು ಮುಕ್ತಾಯ ಗೊಳಿಸಲಾಗುವುದು. ಬೆಂಬಲ ಬೆಲೆ ಯೋಜನೆಯಡಿ ರಾಗಿಯನ್ನು ಸರ್ಕಾರಕ್ಕೆ ಕೊಡಲು ನೋಂದಾಯಿಸಿಕೊಂಡಿರುವ ರೈತರು ತಮ್ಮ ತಾಲ್ಲೂಕು ವ್ಯಾಪ್ತಿಯ ಖರೀದಿ ಅಧಿಕಾರಿಗಳನ್ನು ಸಂಪರ್ಕಿಸಿ ಸಂಬಂಧಪಟ್ಟ ಖರೀದಿ ಕೇಂದ್ರಗಳಿಗೆ ನೀಡುವಂತೆ ತಿಳಿಸಲಾಗಿದೆ ಎಂದು ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿಯ ಅಧ್ಯಕ್ಷರು ಹಾಗೂ ಜಿಲ್ಲಾಧಿಕಾರಿಗಳಾದ ಜಿ.ಲಕ್ಷ್ಮೀಕಾಂತರೆಡ್ಡಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ಮೈಸೂರು ಮಿತ್ರ

ಚಿನ್ನಾಭರಣ ತಯಾರಿಕೆಯಲ್ಲಿ ಬಳಸುವ ಮೇಜಾ ಕಳ್ಳತನ

ಇದುವರೆಗೆ 8 ಮೇಜಾಗಳ ಕಳವು: ಪೊಲೀಸ್ ಇಲಾಖೆಗೆ ಚಿನ್ನ-ಬೆಳ್ಳಿ ಕೆಲಸಗಾರರ ಅಭಿವೃದ್ಧಿ ಸಂಘದಿಂದ ದೂರು





ಮೇ 5ರಂದು ಮೈಸೂರಿನ ಕುಂಬಾರಗೇರಿಯಲ್ಲಿ ನಡೆದ ಕಳ್ಳತನದ ದೃಶ್ಯಗಳು ಸಿಸಿಟಿವಿಯಲ್ಲಿ ಸೆರೆಯಾಗಿವೆ.

ಮೈಸೂರು, ಮೇ.11(ಜಿಎ)– ಚಿನ್ನಾಭರಣ ವಿನ್ಯಾಸ ಹಾಗೂ ತಯಾರಿಕೆಯಲ್ಲಿ ಬಳಸುವ 'ಮೇಜಾ'ಗಳ ಕಳ್ಳತನ ಪ್ರಕರಣಗಳು ಮೈಸೂರಿನಲ್ಲಿ ಹೆಚ್ಚಳವಾಗಿದೆ. ಇದು ಚಿನ್ನಾಭರಣ ತಯಾರಿಕಾ ಸಮುದಾಯದಲ್ಲಿ ತಲೆನೋವಿಗೆ ಕಾರಣವಾಗಿದೆ.

ವಿಶೇಷವಾಗಿ ಲಷ್ಕರ್ ಮೊಹಲ್ಲಾದ ಕುಂಬಾರಗೇರಿ, ಗರಡಿಕೇರಿ ಮತ್ತು ಕುರುಬರಗೇರಿ ಪ್ರದೇಶಗಳಲ್ಲಿ ಈ ಕಳ್ಳತನಗಳು ಹೆಚ್ಚಾಗಿ ವರದಿಯಾಗಿವೆ. ಈ ಸಂಬಂಧ ಮೈಸೂರು ಜಿಲ್ಲಾ ಚಿನ್ನ ಮತ್ತು ಬೆಳ್ಳಿ ಕೆಲಸಗಾರರ ಅಭಿವೃದ್ಧಿ ಸಂಘದ ವತಿಯಿಂದ ಪೊಲೀಸರಿಗೆ ಮನವಿ ಸಲ್ಲಿಸಲಾಗಿದೆ.

ಈ ಪ್ರದೇಶದಲ್ಲಿ ಈವರೆಗೆ ಎಂಟಕ್ಕೂ ಹೆಚ್ಚು ಮೇಜಾಗಳ ಕಳ್ಳತನವಾಗಿದೆ. ಮೇ 5ರಂದು ಮಧ್ಯಾಹ್ನ 1.40ರಿಂದ 2.30ರ ನಡುವೆ ಕುಂಬಾರಗೇರಿಯ ಎಸ್.ರಘು ಎಂಬುವರಿಗೆ ಸೇರಿದ ಮೇಜಾ ವನ್ನು ಕಳ್ಳತನ ಮಾಡಿದ್ದು, ಕಳ್ಳತನದ ದೃಶ್ಯಗಳು ಸಿಸಿಟಿವಿಯಲ್ಲಿ ಸೆರೆಯಾಗಿವೆ.

ಮೇಜಾ'ಗಳು ಚಿನ್ನಾಭರಣ ತಯಾರಿಕೆಯಲ್ಲಿ ಅತ್ಯಂತ ಪ್ರಮುಖವಾಗಿದ್ದು, ಅವುಗಳಲ್ಲಿ ಸೂಕ್ಷ್ಮ ಉಪಕರಣಗಳು, ಚಿನ್ನದ ನಾರುಗಳು, ಸರ, ಕೊಂಡಿ, ಮಣಿ ಗಳು ಹಾಗೂ ಕೆಲಸದ ವೇಳೆ ಉಳಿಯುವ ಚಿನ್ನ ಮತ್ತು ಬೆಳ್ಳಿ ಪುಡಿ ಸಂಗ್ರಹಿಸಲಾಗಿರುತ್ತದೆ. ಹೀಗಾಗಿ ಈ ಕಳ್ಳತನಗಳಿಂದ ಕಾರ್ಮಿಕರಿಗೆ ಸಾಕಷ್ಟು ಆರ್ಥಿಕ ನಷ್ಟ ಉಂಟಾಗುತ್ತಿದೆ. ಈ ಕಳ್ಳತನ ಸಂಬಂಧ ಸಂಘದ ಪದಾಧಿಕಾರಿಗಳು ಮೇ 9ರಂದು ಅಪರಾಧ ಮತ್ತು ಸಂಚಾರ ವಿಭಾಗದ ಡಿಸಿಪಿ ಕೆ.ಎಸ್. ಸುಂದರ್ ರಾಜ್ ಅವರನ್ನು ಭೇಟಿ ಮಾಡಿ ಸಮಸ್ಯೆ ಕುರಿತು ಚರ್ಚಿಸಿದ್ದಾರೆ. ಸಭೆಯಲ್ಲಿ ಲಷ್ಕರ್ ಪೊಲೀಸ್ ಠಾಣೆ ಇನ್ಸ್‌ಪೆಕ್ಟರ್ ಲೋಲಾಕ್ಷಿ ಕೂಡ ಉಪಸ್ಥಿತರಿದ್ದರು. ಅವರಿಗೆ ಮನವಿ ಸಲ್ಲಿಸಿದರು. ಸಂಘದ ಗೌರವಾಧ್ಯಕ್ಷ ರವಿಪ್ರಕಾಶ್, ಉಪಾಧ್ಯಕ್ಷ ರಮೇಶ್, ಪ್ರಧಾನ ಕಾರ್ಯದರ್ಶಿ ಗುರು 'ಡೈಮಂಡ್', ಪದಾಧಿಕಾರಿ ಗಳಾದ ಅಣ್ಣಯ್ಯಾಚಾರ್ ಶಿವಕುಮಾರ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.



ಖದೀಮರ ಹಾವಳಿ ಹತ್ತಿಕ್ಕಲು ಮೈಸೂರು ಜಿಲ್ಲಾ ಚಿನ್ನ ಮತ್ತು ಬೆಳ್ಳಿ ಕೆಲಸಗಾರರ ಅಭಿವೃದ್ಧಿ ಸಂಘದ ವತಿಯಿಂದ ಲಷ್ಕರ್ ಪೊಲೀಸ್ ಠಾಣೆಯ ಇನ್ಸ್‌ಪೆಕ್ಟರ್ ಲೋಲಾಕ್ಷಿ ಅವರಿಗೆ ಮನವಿ ಸಲ್ಲಿಸುತ್ತಿರುವುದು ಕಾಣಬಹುದು

ಬೆಳಗಿನ ಜಾವ ಇಲ್ಲವೇ ಮಧ್ಯಾಹ್ನದ ವೇಳೆ ಕಳ್ಳರು ಸ್ವಚ್ಛತೆಗಾಗಿ ಅಂಗಡಿಗಳ ಮುಂದೆ ಇರಿಸಲಾಗಿರುವ 'ಮೇಜಾ' ಗಳನ್ನು ಕಳ್ಳತನ ಮಾಡುತ್ತಿದ್ದಾರೆ ಎಂದು ಮೈಸೂರು ಜಿಲ್ಲಾ ಚಿನ್ನ ಮತ್ತು ಬೆಳ್ಳಿ ಕೆಲಸಗಾರರ ಅಭಿವೃದ್ಧಿ ಸಂಘದ ಅಧ್ಯಕ್ಷ ಗೋಲ್ಡನ್ ಸುರೇಶ್ 'ಮೈಸೂರು ಮಿತ್ರ'ನಿಗೆ ತಿಳಿಸಿದ್ದಾರೆ. ಈಗಾಗಲೇ ಲಷ್ಕರ್ ಪೊಲೀಸ್ ಠಾಣೆಗೆ ಸಂಘದ ವತಿಯಿಂದ ಅಧಿಕೃತವಾಗಿ ದೂರು ಸಲ್ಲಿಸಲಾಗಿದೆ. ಕಳ್ಳತನ ತಡೆಗೆ ಹೆಚ್ಚಿನ ನಿಗಾ ವಹಿಸಲಾಗುವುದು ಎಂದು ಡಿಸಿಪಿ ಭರವಸೆ ನೀಡಿದ್ದು, ಚಿನ್ನ, ಬೆಳ್ಳಿ ಕಾರ್ಮಿಕರು ಹಾಗೂ ವ್ಯಾಪಾರಿಗಳಿಗೆ ಈ ಬಗ್ಗೆ ಜಾಗೃತಿ ಮೂಡಿಸಲು ಶೀಘ್ರದಲ್ಲೇ ಸಾಮಾನ್ಯ ಸಭೆ ಆಯೋಜಿಸುವುದಾಗಿ ಡಿಸಿಪಿ ತಿಳಿಸಿದ್ದಾರೆ ಎಂದರು.

ಜನರೊಂದಿಗೆ ಜನತಾದಳ ಕಾರ್ಯಕ್ರಮ ಹಿನ್ನೆಲೆ ಇಂದು ಸ್ಥಳ ಪರಿಶೀಲನೆ

ಮೈಸೂರು, ಮೇ 11– ವರುಣ ವಿಧಾನಸಭಾ ಕ್ಷೇತ್ರದ 'ಜನರೊಂದಿಗೆ ಜನತಾದಳ' ಕಾರ್ಯಕ್ರಮ ನಡೆಯಲಿರುವ ಮೆಲ್ಲಹಳ್ಳಿಯ ಶಾಂತಲಾ ಕುಮಾರ್



ಸಾ.ರಾ.ಮಹೇಶ್

ಕನ್ವೆನ್ಷನ್ ಹಾಲ್ ಹಿಂಭಾಗದ ಮೈದಾನಕ್ಕೆ ಕಾರ್ಯಕ್ರಮದ ಮೈಸೂರು ಜಿಲ್ಲೆ ಉಸ್ತುವಾರಿಯಾದ ಮಾಜಿ ಸಚಿವ ಸಾ.ರಾ. ಮಹೇಶ್ ಅವರ ನೇತೃತ್ವದಲ್ಲಿ ಜೆಡಿಎಸ್ ನಾಯಕರು ಹಾಗೂ ಮುಖಂಡರು ಮಂಗಳವಾರ(ಮೇ 12) ಬೆಳಗ್ಗೆ 10ಕ್ಕೆ ಭೇಟಿ ನೀಡಿ, ಪರಿಶೀಲನೆ ನಡೆಸಲಿದ್ದಾರೆ.

ಈ ವೇಳೆ ಹುಣಸೂರು ಕ್ಷೇತ್ರದ ಶಾಸಕ ಜಿ.ಡಿ.ಹರೀಶ್ ಗೌಡ, ವಿಧಾನ ಪರಿಷತ್ ಸದಸ್ಯರಾದ ಸಿ.ಎನ್.ಮಂಜೇಗೌಡ, ಕೆ.ವಿವೇಕಾನಂದ, ಮಾಜಿ ಶಾಸಕ ಕೆ.ಮಹದೇವ್ರು, ಹೆಚ್.ಡಿ.ಕೋಟೆ ಜೆಡಿಎಸ್ ಮುಖಂಡ ಕೃಷ್ಣ ನಾಯಕ್, ವರುಣ ಕ್ಷೇತ್ರದ ಮುಖಂಡ ಅಭಿಷೇಕ್ ಮಣೆಗಾರ್, ಮಾಜಿ ಮೇಯರ್‌ಗಳು ಉಪಸ್ಥಿತರಿರಲಿದ್ದು, ವಿವಿಧ ವಿಭಾಗದ ಅಧ್ಯಕ್ಷರು, ನಗರ ಪಾಲಿಕೆ ಮಾಜಿ ಸದಸ್ಯರು ಹಾಗೂ ಮುಖಂಡರು ಆಗಮಿಸುವಂತೆ ಜೆಡಿಎಸ್ ಮೈಸೂರು ನಗರಾಧ್ಯಕ್ಷ ಎಸ್‌ಬಿಎಂ ಮಂಜು ಮನವಿ ಮಾಡಿದ್ದಾರೆ.

ಸಿಎಂ, ಡಿಸಿಎಂ ಜೊತೆ ಸುರ್ಜೇವಾಲಾ ಸುದೀರ್ಘ ಚರ್ಚೆ

ಅಧಿಕಾರ ಹಸ್ತಾಂತರ ಗೊಂದಲ; ಜಿಬಿಎ ಚುನಾವಣೆ ಮುಂದೂಡುವ ಸಂಬಂಧ ಪ್ರಸ್ತಾಪ



ಬೆಂಗಳೂರು, ಮೇ 11(ಕೆಎಂಶಿ)– ಅಧಿಕಾರ ಹಸ್ತಾಂತರ ಗೊಂದಲ ಪರಿಹರಿಸುವ ಹಾಗೂ ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಜಿಬಿಎ) ವ್ಯಾಪ್ತಿಯ ಐದು ಪಾಲಿಕೆಗಳ ಚುನಾವಣೆ ಮುಂದೂಡುವ ಸಂಬಂಧ ರಾಜ್ಯ ಉಸ್ತುವಾರಿ ಹಾಗೂ ಎಐಸಿಸಿ ಪ್ರಧಾನಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲ, ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರೊಂದಿಗೆ ಸುದೀರ್ಘ ಚರ್ಚೆ ನಡೆಸಿದ್ದಾರೆ.

ನಗರದ ಪಂಚತಾರಾ ಹೋಟೆಲ್ ಒಂದರಲ್ಲಿ ಭಾನುವಾರ ತಡರಾತ್ರಿವರೆಗೂ ಈ ನಾಯಕರು ಸಭೆ ನಡೆಸಿದ್ದಲ್ಲದೆ, ಜಿಬಿಎ ಚುನಾವಣೆಗೆ ಕಾಲ ಪಕ್ವವಾಗಿಲ್ಲವಾದ್ದರಿಂದ ಮುಂದೂಡಲು ಕಾನೂನಿನ ಸಲಹೆ ಪಡೆದಿದ್ದಾರೆ.

ಸುಪ್ರೀಂಕೋರ್ಟ್ ಆದೇಶದ ಮೇರೆಗೆ ರಾಜ್ಯ ಚುನಾವಣಾ ಆಯೋಗ ಜಿಬಿಎ ವ್ಯಾಪ್ತಿಯ ಐದು ಪಾಲಿಕೆಗಳಿಗೆ ಚುನಾವಣೆ ನಡೆಸುವುದಾಗಿ ತಿಳಿಸಿದೆ.

ಮಹಾನಗರ ವ್ಯಾಪ್ತಿಯ ಈ ಚುನಾವಣೆ ಗೆಲುವು ಕಾಂಗ್ರೆಸ್‌ಗೆ ಸವಾಲಾಗಿ ಪರಿಣಮಿಸಿದ್ದು, ಸದ್ಯದ ಪರಿಸ್ಥಿತಿಯಲ್ಲಿ ಚುನಾವಣೆ ಎದುರಿಸಿದರೆ ಸೋಲಾಗಬಹುದೆಂಬ ಅಭಿಪ್ರಾಯ ವ್ಯಕ್ತವಾಗಿದೆ. ಈ ಹಿನ್ನೆಲೆಯಲ್ಲಿ ತಾತ್ಕಾಲಿಕವಾಗಿ ಚುನಾವಣೆ ಮುಂದೂಡುವ ಕುರಿತು ಸಲಹೆ ಪಡೆಯಲು ಅಡ್ವೊಕೇಟ್ ಜನರಲ್ ಶಶಿಕಿರಣ್ ಶೆಟ್ಟಿ ಹಾಗೂ ಮುಖ್ಯಮಂತ್ರಿ ಅವರ ಕಾನೂನು ಸಲಹೆಗಾರ ಎ.ಎಸ್. ಪೊನ್ನಣ್ಣ ಅವರೊಂದಿಗೆ ಸಮಾಲೋಚನೆ ನಡೆಸಿದ್ದಾರೆ.

ಸಮಾಲೋಚನೆ ನಂತರ ಮುಖ್ಯಮಂತ್ರಿ ಹಾಗೂ ಉಪಮುಖ್ಯಮಂತ್ರಿ ಅವರೊಂದಿಗೆ ಸುರ್ಜೇವಾಲ, ಪ್ರಸಕ್ತ ರಾಜಕೀಯ ವಿದ್ಯಮಾನಗಳ ಕುರಿತು ಚರ್ಚಿಸಿದ್ದಾರೆ.

ವರಿಷ್ಠರ ಭರವಸೆಯಂತೆ ಅಧಿಕಾರ ಹಸ್ತಾಂತರ ಪ್ರಕ್ರಿಯೆ ನಡೆಯಲಿ ಎಂದು ಸಿದ್ದರಾಮಯ್ಯ ಹಾಗೂ ಸುರ್ಜೇವಾಲ ಅವರನ್ನು ಶಿವಕುಮಾರ್ ಕೋರಿದ್ದಾರೆ.

ರಾಹುಲ್ ಗಾಂಧಿ ಸೂಚನೆ ನೀಡದೆ ನಾನು ಯಾವುದೇ ತೀರ್ಮಾನ ಕೈಗೊಳ್ಳಲು ಸಾಧ್ಯವಿಲ್ಲ. ಅವರ ಆದೇಶದಂತೆ ನಾನು ನಡೆದುಕೊಳ್ಳುವೆ ಎಂದು ಇದೇ ವೇಳೆ ಸಿದ್ದರಾಮಯ್ಯ ಸ್ಪಷ್ಟವಾಗಿ ತಿಳಿಸಿದ್ದಾರೆ. ಆಡಳಿತದ ಹಿತದೃಷ್ಟಿಯಿಂದ ಸಂಪುಟ ಪುನರ್ ರಚನೆ ಅಗತ್ಯವಿದೆ. ಇದಕ್ಕೆ ಅವಕಾಶ ಕಲ್ಪಿಸಲು, ದೆಹಲಿ ನಾಯಕರೊಂದಿಗೆ ಚರ್ಚೆ ಮಾಡಿ ಎಂದು ಸಿದ್ದರಾಮಯ್ಯ ಕೋರಿದ್ದಾರೆ. ಇಬ್ಬರ ಈ ಬೇಡಿಕೆಗಳ ಬಗ್ಗೆ ಸುದೀರ್ಘ ಚರ್ಚೆ ನಡೆಸಲಾಯಿತಾದರೂ ಸುರ್ಜೇವಾಲ ಯಾವುದೇ ನಿರ್ಧಾರಕ್ಕೆ ಬರಲಿಲ್ಲ. ಆದರೆ, ಇವರುಗಳ ಬೇಡಿಕೆಗಳನ್ನು ವರಿಷ್ಠರ ಮುಂದಿಡುವುದಾಗಿ ಭರವಸೆ ನೀಡಿದ್ದಾರೆ.

ಲಂಕಾದಿಂದ ಭಾರತಕ್ಕೆ 11 ಗಂಟೆಗಳ ಕಾಲ ಈಜಿದ ಬೆಂಗಳೂರು ದಂಪತಿ



ರಾಮೇಶ್ವರಂ: ಶ್ರೀಲಂಕಾದಿಂದ ಭಾರತಕ್ಕೆ ಸುಮಾರು 32 ಕಿ.ಮೀ. ಈಜುವ ಮೂಲಕ ಬೆಂಗಳೂರು ಮೂಲದ ಐಟಿ ವೃತ್ತಿಪರ ದಂಪತಿ ಇತಿಹಾಸ ನಿರ್ಮಿಸಿದ್ದಾರೆ.

ಡ್ಯಾನಿಶ್ ಅಬ್ದಿ ಮತ್ತು ವೃಶಾಲಿ ಪ್ರಸಾದೆ, ಐತಿಹಾಸಿಕ ರಾಮ ಸೇತು ಮಾರ್ಗದಲ್ಲಿ ಶ್ರೀಲಂಕಾದಿಂದ ಭಾರತಕ್ಕೆ ಈಜುವಿಕೆಯನ್ನು ಪೂರ್ಣಗೊಳಿಸಿದ ಮೊದಲ ದಂಪತಿಗಳಾಗಿದ್ದಾರೆ.

ಮೇ 7 ರಂದು, ಈ ಜೋಡಿ ಪಾಕ್ ಜಲಸಂಧಿಯಾದ್ಯಂತ ಸುಮಾರು 32 ಕಿ.ಮೀ. ಈಜಿದ್ದಾರೆ. ಶ್ರೀಲಂಕಾದ ತಲೈಮನ್ನಾರ್‌ನಿಂದ ಬೆಳಿಗ್ಗೆ 4:30 ರ ಸುಮಾರಿಗೆ ಪ್ರಾರಂಭಿಸಿ ಮಧ್ಯಾಹ್ನ 3:15ಕ್ಕೆ ತಮಿಳುನಾಡಿನ ಧನುಷ್ಕೋಟಿಯನ್ನು ತಲುಪಿತು. ಈ ಕಠಿಣ ಪ್ರಯಾಣ 10 ಗಂಟೆ 45 ನಿಮಿಷಗಳನ್ನು ತೆಗೆದುಕೊಂಡಿತು.

ದಂಪತಿ ಒರಟಾದ ಅಲೆಗಳು, ಬದಲಾಗುತ್ತಿರುವ ಗಾಳಿ ಮತ್ತು ಬಲವಾದ ಸಾಗರ ಪ್ರವಾಹಗಳೊಂದಿಗೆ ಹೋರಾಡುತ್ತಿರುವುದನ್ನು ಈ ಸಾಹಸದ ವೀಡಿಯೊ ತೋರಿಸಿದೆ. ಇತರರು ಜೋಡಿಯು ಪ್ರಕ್ಷುಬ್ಧ ಸಮುದ್ರಗಳ ಮೂಲಕ ಗಂಟೆಗಳ ಕಾಲ ಈಜುವುದನ್ನು ಮತ್ತು ಅಂತಿಮವಾಗಿ ಭಾರತದ ತೀರಕ್ಕೆ ಕಾಲಿಡುವುದನ್ನು ದಾಖಲಿಸಿದ್ದಾರೆ.

ಈಜುವಿಕೆಯನ್ನು ಕಟ್ಟುನಿಟ್ಟಾದ ಸುರಕ್ಷತಾ ಮೇಲ್ವಿಚಾರಣೆಯಲ್ಲಿ ನಡೆಸಲಾಗಿದೆ. ಬೆಂಬಲ ದೋಣಿಗಳು, ವೈದ್ಯರು ಮತ್ತು ಭಾರತೀಯ ಕೋಸ್ಟ್ ಗಾರ್ಡ್ ಸಿಬ್ಬಂದಿ ಮಾರ್ಗದುದ್ದಕ್ಕೂ ಈಜುಗಾರರೊಂದಿಗೆ ಇದ್ದರು. ಈ ಜೋಡಿಯ ಸಾಧನೆ ಆನ್‌ಲೈನ್‌ನಲ್ಲಿ ವ್ಯಾಪಕ ಪ್ರಶಂಸೆಗೆ ಪಾತ್ರವಾಗಿದೆ. ಅನೇಕ ಸಾಮಾಜಿಕ ಮಾಧ್ಯಮ ಬಳಕೆದಾರರು ದಂಪತಿಗಳ ಸಹಿಷ್ಣುತೆ, ಶಿಸ್ತು ಮತ್ತು ತಂಡದ ಕೆಲಸವನ್ನು ಶ್ಲಾಘಿಸಿದ್ದಾರೆ. ಅಬ್ದಿ ಮತ್ತು ಪ್ರಸಾದೆ ಇಬ್ಬರೂ ಸಾಫ್ಟ್‌ವೇರ್ ವೃತ್ತಿಪರರಾಗಿದ್ದು, ಅವರು ನಾಲ್ಕು ವರ್ಷಗಳ ಹಿಂದೆ ಈಜು ತರಬೇತಿಯನ್ನು ಪ್ರಾರಂಭಿಸಿದ್ದರು ಎಂದು ವರದಿಯಾಗಿದೆ.

ಈ ದಂಪತಿ ಮಹತ್ವಾಕಾಂಕ್ಷಿ ಕ್ರೀಡಾಪಟುಗಳು ಮತ್ತು ಸಾಹಸ ಉತ್ಸಾಹಿಗಳಿಗೆ ಸ್ಫೂರ್ತಿ ನೀಡಲು ಸಾಮಾಜಿಕ ಮಾಧ್ಯಮದಲ್ಲಿ ಸಂಪೂರ್ಣ ಸವಾಲನ್ನು ದಾಖಲಿಸಿದ್ದಾರೆ. ಭಾರತೀಯ ತೆರೆದ ನೀರಿನ ಈಜುವಿಕೆಯಲ್ಲಿ ಈ ದಂಪತಿ ದಾಖಲಿಸಿದ ಹೆಗ್ಗುರುತಿನ ಕ್ಷಣ ಎಂಬ ಮೆಚ್ಚುಗೆ ಜಾಲತಾಣದಾದ್ಯಂತ ವ್ಯಕ್ತವಾಗತೊಡಗಿದೆ. ಶ್ರೀಲಂಕಾದಿಂದ ಭಾರತಕ್ಕೆ ಬೇಡಿಕೆಯ ಮಾರ್ಗವನ್ನು ಒಟ್ಟಿಗೆ ಈಜಿರುವ ದಂಪತಿ ಹೊಸ ಮಾನದಂಡವನ್ನು ಸೃಷ್ಟಿಸಿದ್ದಾರೆ.

ತಮಿಳುನಾಡು ನೂತನ ಸಿಎಂ ವಿಜಯ್ ಅಭಿನಂದಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ



ಬೆಂಗಳೂರು, ಮೇ 11(ಕೆಎಂಶಿ)–ತಮಿಳುನಾಡು ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಿದ ಜೋಸೆಫ್ ವಿಜಯ್ ಅವರನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅಭಿನಂದಿಸಿದ್ದಾರೆ. ಅಧಿಕಾರ ಸ್ವೀಕರಿಸಿದ ಸ್ವಲ್ಪ ಸಮಯದಲ್ಲೇ ವಿಜಯ್ ಅವರಿಗೆ ಕರೆ ಮಾಡಿದ ಮುಖ್ಯಮಂತ್ರಿ, ನಾನು, ಸಿದ್ದರಾಮಯ್ಯ ಮಾತನಾಡುತ್ತಿದ್ದೇನೆ, ನೀವು ಇತಿಹಾಸ ಸೃಷ್ಟಿಸಿದ್ರಿ, ಅಭಿನಂದನೆಗಳು ಎಂದಿದ್ದಾರೆ.

ಬೆಂಗಳೂರಿಗೆ ಬನ್ನಿ ಎಂದು ಆಹ್ವಾನ ನೀಡಿರುವ ಮುಖ್ಯಮಂತ್ರಿ, ತಮ್ಮ ಎಕ್ಸ್ ಖಾತೆಯಲ್ಲೂ ವಿಜಯ್ ಸಾಧನೆ ಕೊಂಡಾಡಿದ್ದಾರೆ. ಸಿನಿಮಾ ಪ್ರಪಂಚದಿಂದ ಜನಸೇವೆ ಮಾಡಲು ಹೊರಟಿರುವುದು ಒಂದು ದೊಡ್ಡ ಸಾಧನೆ, ಅದನ್ನು ನೀವು ಮಾಡಿದ್ದೀರಿ. ಸಾಮಾಜಿಕ ನ್ಯಾಯಕ್ಕಾಗಿ ನಾವು ಒಟ್ಟಾಗಿ ಕೆಲಸ ಮಾಡೋಣ. ತಮಿಳುನಾಡಿನ ಜನರ ಸೇವೆಗೆ ಮುಂದಾಗಿರುವ ನಿಮ್ಮ ಪ್ರಯತ್ನಕ್ಕೆ ಯಶಸ್ಸು ಸಿಗಲಿ ಎಂದು ಹಾರೈಸಿದ್ದಾರೆ.

ಇಂದು ಕೆ–ಸೆಟ್, ಯುಜಿಸಿ ನೆಟ್ ಪರೀಕ್ಷಾ ತರಬೇತಿ ಶಿಬಿರಕ್ಕೆ ಚಾಲನೆ

ಮೈಸೂರು, ಮೇ 11– ಮೈಸೂರಿನಲ್ಲಿರುವ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ(ಕರಾಮುವಿ)ದ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರದಲ್ಲಿ ಕೆ–ಸೆಟ್ ಮತ್ತು ಯುಜಿಸಿ–ನೆಟ್ ಸ್ಪರ್ಧಾತ್ಮಕ ಪರೀಕ್ಷಾರ್ಥಿಗಳಿಗಾಗಿ ಆಯೋಜಿಸಿರುವ 45 ದಿನಗಳ ತರಬೇತಿ ಶಿಬಿರಕ್ಕೆ ಮಂಗಳವಾರ(ಮೇ 12) ಚಾಲನೆ ದೊರಕಲಿದೆ. ಕರಾಮುವಿಯ ಕಾವೇರಿ ಸಭಾಂಗಣದಲ್ಲಿ ಬೆಳಗ್ಗೆ 11ಕ್ಕೆ ಬೆಂಗಳೂರು ಉತ್ತರ ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ.ಬಿ.ಕೆ.ರವಿ ಅವರು ತರಬೇತಿ ಶಿಬಿರವನ್ನು ಉದ್ಘಾಟಿಸಲಿದ್ದು, ಮೈಸೂರಿನ ಆಡಳಿತ ತರಬೇತಿ ಸಂಸ್ಥೆಯ ಜಂಟಿ ನಿರ್ದೇಶಕರಾದ ಹಿರಿಯ ಕೆಎಎಸ್ ಅಧಿಕಾರಿ ಆರ್.ಸತ್ಯಶ್ರೀ ಮುಖ್ಯ ಅತಿಥಿಯಾಗಿ ಪಾಲ್ಗೊಳ್ಳಲಿದ್ದಾರೆ. ಕರಾಮುವಿ ಕುಲಪತಿ ಪ್ರೊ.ಶರಣಪ್ಪ ವಿ.ಹಲಸೆ ಅಧ್ಯಕ್ಷತೆ ವಹಿಸಲಿದ್ದು, ಕುಲಸಚಿವ ಪ್ರೊ.ಎಸ್.ಕೆ.ನವೀನ್‌ಕುಮಾರ್ ಮತ್ತಿತರರು ಉಪಸ್ಥಿತರಿರಲಿದ್ದಾರೆ ಎಂದು ಕೇಂದ್ರದ ಸಂಯೋಜನಾಧಿಕಾರಿ ಜೈನಹಳ್ಳಿ ಸತ್ಯನಾರಾಯಣಗೌಡ ತಿಳಿಸಿದ್ದಾರೆ.

ಮಹಾರಾಣಾ ಪ್ರತಾಪ ಸಿಂಹ ಜಯಂತಿ



ಚಕ್ರವರ್ತಿ ಮಹಾರಾಣಾ ಪ್ರತಾಪ ಸಿಂಹ ಅವರ 686ನೇ ಜಯಂತಿಯನ್ನು ಮೈಸೂರಿನ ಬಿಜೆಪಿ ಕಚೇರಿಯಲ್ಲಿ ಆಚರಿಸಲಾಯಿತು. ಈ ವೇಳೆ ಅವರ ಫೋಟೋಗೆ ಚಿತ್ರನಟರೂ ಆದ ಬಿಜೆಪಿ ಮುಖಂಡ ಎಸ್.ಜಯಪ್ರಕಾಶ್ ಜೆಪಿ ಪುಷ್ಪನಮನ ಸಲ್ಲಿಸಿದರು. ಈ ವೇಳೆ ಬಿಜೆಪಿ ಮುಖಂಡರಾದ ಶ್ರೀಮತಿ ಕವಿತಾ ಸಿಂಗ್, ವಕೀಲ ಶಿವರಾಜ್ ರಾವ್, ಮನೋಹರ್ ಸಿಂಗ್, ಪೃಥ್ವಿ ಸಿಂಗ್ ಸೇರಿದಂತೆ ವಿವಿಧ ಮೋರ್ಚಾಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಪಶ್ಚಿಮ ಬಂಗಾಳದ ಮುಖ್ಯ ಕಾರ್ಯದರ್ಶಿಯಾಗಿ ನೇಮಕಗೊಂಡ ಮುಖ್ಯ ಚುನಾವಣಾ ಅಧಿಕಾರಿ!



ಕೋಲ್ಕತ್ತಾ: ಹಿಂದೆ ಪಶ್ಚಿಮ ಬಂಗಾಳದ ಮುಖ್ಯ ಚುನಾವಣಾ ಅಧಿಕಾರಿಯಾಗಿದ್ದ ಮನೋಜ್ ಕುಮಾರ್ ಅಗರ್ವಾಲ್ ಅವರನ್ನು ಬಿಜೆಪಿ ಸರ್ಕಾರ ರಾಜ್ಯದ ಮುಖ್ಯ ಕಾರ್ಯದರ್ಶಿಯಾಗಿ ನೇಮಿಸಿದೆ. ಮನೋಜ್ ಕುಮಾರ್ ಅಗರ್ವಾಲ್ 1990ರ ಬ್ಯಾಚ್ ಐಎಎಸ್ ಅಧಿಕಾರಿ. ತೃಣಮೂಲ ಕಾಂಗ್ರೆಸ್ (ಟಿಎಂಸಿ) ಈ ವಿಷಯಕ್ಕೆ ತೀವ್ರವಾಗಿ ಪ್ರತಿಕ್ರಿಯಿಸಿದೆ.

ಟಿಎಂಸಿ ಸಂಸದೆ ಸಾಗರಿಕಾ ಘೋಷ್ ಇನ್‌ಸ್ಟಾಗ್ರಾಮ್‌ನಲ್ಲಿ, ಬಂಗಾಳದ ಮುಖ್ಯ ಚುನಾವಣಾ ಅಧಿಕಾರಿ (ಸಿಇಒ) ಮನೋಜ್ ಅಗರ್ವಾಲ್ ಈಗ ಬಂಗಾಳದ ಮುಖ್ಯ ಕಾರ್ಯದರ್ಶಿಯಾಗಲಿದ್ದಾರೆ. ಈ ನಿಷ್ಪಕ್ಷಪಾತ ಅಂಪೈರ್ ಅವರನ್ನು ಬಂಗಾಳದಲ್ಲಿ ಬಿಜೆಪಿ ಸರ್ಕಾರದ ಉನ್ನತ ಅಧಿಕಾರಿಯ ಸ್ಥಾನಕ್ಕೆ ಏರಿಸಲಾಗಿದೆ. 2026ರ ಪಶ್ಚಿಮ ಬಂಗಾಳ ಚುನಾವಣೆಗಳು ನ್ಯಾಯಯುತ ಮತ್ತು ಮುಕ್ತವಾಗಿದ್ದವು ಎಂದು ಯಾರಾದರೂ ಇನ್ನೂ ನಿಜವಾಗಿಯೂ ನಂಬುತ್ತಾರೆಯೇ, ಇದು ತುಂಬಾ ನಾಚಿಕೆ ಗೇಡಿನ ಮತ್ತು ನಾಚಿಕೆಯಿಲ್ಲದ ನಡೆ ಎಂದು ಬರೆದುಕೊಂಡಿದ್ದಾರೆ. ಮಮತಾ ಬ್ಯಾನರ್ಜಿ ಡಜನ್‌ಗಟ್ಟಲೆ ಅಧಿಕಾರಿಗಳನ್ನು ಬದಿಗಿಟ್ಟು, ಐಎಎಸ್ ಅನ್ನು ನಿಯಂತ್ರಿಸುವ ನಿಯಮಗಳನ್ನು ಸ್ಪಷ್ಟವಾಗಿ ಉಲ್ಲಂಘಿಸುವ ಮೂಲಕ ಅಧಿಕಾರಶಾಹಿಯನ್ನು ದುರ್ಬಲಗೊಳಿಸಿದ್ದಾರೆ ಎಂದು ಪಶ್ಚಿಮ ಬಂಗಾಳ ಬಿಜೆಪಿ ಹೇಳಿದೆ. ಪಶ್ಚಿಮ ಬಂಗಾಳದ ಬಿಜೆಪಿ ಸರ್ಕಾರವು ದೇಶದ ಕಾನೂನುಗಳ ಘನತೆಯನ್ನು ಪುನಃಸ್ಥಾಪಿಸುವ ಭರವಸೆಯನ್ನು ಅನುಸರಿಸಿ, ರಾಜ್ಯದಲ್ಲಿ ಸೇವೆ ಸಲ್ಲಿಸುತ್ತಿರುವ ಅತ್ಯಂತ ಹಿರಿಯ ಐಎಎಸ್ ಅಧಿಕಾರಿ ಮನೋಜ್ ಅಗರ್ವಾಲ್ ಅವರನ್ನು ಪಶ್ಚಿಮ ಬಂಗಾಳದ ಮುಖ್ಯ ಕಾರ್ಯದರ್ಶಿಯಾಗಿ ನೇಮಿಸಿದೆ ಎಂದು ಹೇಳಿದೆ.

ಎಂ.ಆರ್. ಲವ ಈಗ ವಿಜಯನಗರ ಇನ್ಸ್‌ಪೆಕ್ಟರ್



ಮೈಸೂರು, ಮೇ 11– ಮೈಸೂರು ವಿಜಯನಗರ ಪೊಲೀಸ್ ಠಾಣೆ ನೂತನ ಇನ್ಸ್‌ಪೆಕ್ಟರ್ ಆಗಿ ಎಂ.ಆರ್. ಲವ ಸೋಮವಾರ ಅಧಿಕಾರ ವಹಿಸಿಕೊಂಡರು. ಇವರು ಇದುವರೆಗೆ ಮೈಸೂರು ವಿವಿ ಪುರಂ ಸಂಚಾರಿ ಠಾಣೆ ಇನ್ಸ್‌ಪೆಕ್ಟರ್ ಆಗಿದ್ದರು. ಇದುವರೆಗೆ ತಿ.ನರಸೀಪುರ ಸೇರಿದಂತೆ ಹಲವೆಡೆ ದಕ್ಷ ರೀತಿ ಸೇವೆ ಸಲ್ಲಿಸಿದ್ದಾರೆ.

ಕೋವಿಡ್ ಗೆದ್ದಂತೇ ಪಶ್ಚಿಮ ಏಷ್ಯಾ ಸಂಘರ್ಷದ ಬಿಕ್ಕಟ್ಟು ಜಯಿಸುತ್ತೇವೆ

ಮತ್ತೆ 'ವೋಕಲ್ ಫಾರ್ ಲೋಕಲ್' ಮಂತ್ರ ಜಪಿಸಿದ ಮೋದಿ



ವಡೋದರಾ: ಕಳೆದ ಕೆಲವು ವರ್ಷಗಳಿಂದ ಜಗತ್ತು ನಿರಂತರವಾಗಿ ಅಸ್ಥಿರ ಪರಿಸ್ಥಿತಿಗಳ ಮೂಲಕ ಹಾದುಹೋಗುತ್ತಿದೆ ಮತ್ತು ಪಶ್ಚಿಮ ಏಷ್ಯಾ ಸಂಘರ್ಷದಿಂದ ಸೃಷ್ಟಿಯಾದ ಸನ್ನಿವೇಶಗಳು ದಶಕದ ಪ್ರಮುಖ ಬಿಕ್ಕಟ್ಟುಗಳಲ್ಲಿ ಒಂದಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಅವರು ಸೋಮವಾರ ಹೇಳಿದ್ದಾರೆ.

ದೇಶದ ನಾಗರಿಕರು ವಿದೇಶಗಳಿಂದ ಬರುವ ಉತ್ಪನ್ನಗಳ ಮೇಲಿನ ವೆಚ್ಚವನ್ನು ಕಡಿಮೆ ಮಾಡುವಂತೆ ಮತ್ತೆ ಕರೆ ನೀಡಿದ ಪ್ರಧಾನಿ ಮೋದಿ, 'ವೋಕಲ್ ಫಾರ್ ಲೋಕಲ್' ಮಂತ್ರ ಅನುಸರಿಸಬೇಕು ಎಂದು ಹೇಳಿದ್ದಾರೆ. ವಡೋದರಾದಲ್ಲಿ ನಡೆದ ಕಾರ್ಯಕ್ರಮ ವೊಂದರಲ್ಲಿ ಮಾತನಾಡಿದ ಮೋದಿ, ಆಮದು ಮಾಡಿಕೊಂಡ ಸರಕುಗಳ ಬೆಲೆಗಳು ಗಗನಕ್ಕೇರುತ್ತಿವೆ ಮತ್ತು ಪಶ್ಚಿಮ ಏಷ್ಯಾ ಸಂಘರ್ಷದ ದೃಷ್ಟಿಯಿಂದ ಜಾಗತಿಕ ಪೂರೈಕೆ ಸರಪಳಿಗೆ ತೀವ್ರ ಅಡ್ಡಿಯಾಗುತ್ತಿದೆ ಎಂದು ಹೇಳಿದ್ದಾರೆ.

ಪಶ್ಚಿಮ ಏಷ್ಯಾ ಸಂಘರ್ಷದಿಂದ ಸೃಷ್ಟಿಯಾದ ಸನ್ನಿವೇಶಗಳು ಈ ದಶಕದ ಪ್ರಮುಖ ಬಿಕ್ಕಟ್ಟುಗಳಲ್ಲಿ ಒಂದಾಗಿದೆ ಮತ್ತು ದೇಶವು ಕೋವಿಡ್ ಸವಾಲನ್ನು ಗೆದ್ದಂತೆಯೇ, ಈ ಬಿಕ್ಕಟ್ಟನ್ನು ಸಹ ಜಯಿಸುತ್ತದೆ ಎಂದು ಪ್ರಧಾನಿ ತಿಳಿಸಿದರು.

ಭಾರತವು ವಿದೇಶಗಳಿಂದ ಅನೇಕ ಉತ್ಪನ್ನಗಳನ್ನು ಆಮದು ಮಾಡಿಕೊಳ್ಳಲು ಲಕ್ಷಾಂತರ ಕೋಟಿ ರೂಪಾಯಿಗಳನ್ನು ವಿದೇಶಿ ವಿನಿಮಯದಲ್ಲಿ ಖರ್ಚು ಮಾಡುತ್ತಿದೆ ಎಂದ ಮೋದಿ, ನಾಗರಿಕರು ವಿದೇಶದಿಂದ ಬರುವ ಉತ್ಪನ್ನಗಳ ಬಳಕೆಯನ್ನು ಕಡಿಮೆ ಮಾಡಬೇಕು ಮತ್ತು ಆಮದು ಮಾಡಿಕೊಂಡ ಸರಕುಗಳ ಮೇಲೆ ಅನಗತ್ಯ ಅವಲಂಬನೆಯನ್ನು ತಪ್ಪಿಸಬೇಕು ಎಂದರು.

ಕೋವಿಡ್ ಸಾಂಕ್ರಾಮಿಕವು ಈ ಶತಮಾನದ ಅತಿದೊಡ್ಡ ಬಿಕ್ಕಟ್ಟಾಗಿದ್ದರೆ, ಪಶ್ಚಿಮ ಏಷ್ಯಾದಲ್ಲಿನ ಯುದ್ಧದಿಂದ ಸೃಷ್ಟಿಸಲ್ಪಟ್ಟ ಸಂದರ್ಭಗಳು ಈ ದಶಕದ ಪ್ರಮುಖ ಬಿಕ್ಕಟ್ಟುಗಳಲ್ಲಿ ಒಂದಾಗಿದೆ. ನಾವು ಒಟ್ಟಾಗಿ ಕೋವಿಡ್‌ನ ಸವಾಲನ್ನು ಜಯಿಸಿದಂತೆ ಖಂಡಿತವಾಗಿಯೂ ಈ ಬಿಕ್ಕಟ್ಟನ್ನು ಸಹ ನಿವಾರಿಸುತ್ತೇವೆ. ದೇಶದ ಜನರ ಮೇಲೆ ಅದರ ಪರಿಣಾಮ ಕಡಿಮೆ ಇರುವಂತೆ ನೋಡಿಕೊಳ್ಳಲು ಸರ್ಕಾರವು ನಿರಂತರವಾಗಿ ಪ್ರಯತ್ನಗಳನ್ನು ಮಾಡುತ್ತಿದೆ" ಎಂದು ಪ್ರಧಾನಿ ಹೇಳಿದರು.

ಮತದಾನ ಹಕ್ಕಿನ ಮಹತ್ವ ಅರಿಯದೆ ಅಸ್ಪೃಶ್ಯತೆ ಅಳಿವು ಅಸಾಧ್ಯ

ಡಾ.ಅಂಬೇಡ್ಕರ್ ಜಯಂತಿ ಕಾರ್ಯಕ್ರಮದಲ್ಲಿ ಬಿಎಸ್‌ಪಿ ಮುಖಂಡ ಡಾ.ಕೃಷ್ಣಮೂರ್ತಿ ಅಭಿಪ್ರಾಯ



ಡಾ.ಬಿ.ಆರ್.ಅಂಬೇಡ್ಕರ್ ಕ್ಷೇಮಾಭಿವೃದ್ಧಿ ಸಂಘ ಹಾಗೂ ವಿವಿಧ ಬಡಾವಣೆ ನಿವಾಸಿಗಳ ಸಹಯೋಗದಲ್ಲಿ ಆಯೋಜಿಸಿದ್ದ ಡಾ.ಅಂಬೇಡ್ಕರ್‌ರವರ 135ನೇ ಜಯಂತಿ ಕಾರ್ಯಕ್ರಮವನ್ನು ಗಣ್ಯರು ದೀಪ ಬೆಳಗಿಸಿ ಉದ್ಘಾಟಿಸಿದರು.

ಮೈಸೂರು, ಮೇ 11– ಡಾ.ಬಿ.ಆರ್. ಅಂಬೇಡ್ಕರ್ ಅವರು ಸಂವಿಧಾನದ ಮೂಲಕ ನೀಡಿರುವ ಮತದಾನ ಹಕ್ಕಿನ ಮಹತ್ವ ಅರಿಯದ ಹೊರತು ಸಮಾಜದಲ್ಲಿ ಅಸ್ಪೃಶ್ಯತೆ ಅಳಿಸುವುದು ಅಸಾಧ್ಯ ಎಂದು ಬಿಎಸ್‌ಪಿ ಮುಖಂಡ ಡಾ. ಕೃಷ್ಣಮೂರ್ತಿ ಅಭಿಪ್ರಾಯಿಸಿದರು.

ಮೈಸೂರಿನ ಲಾಲ್‌ಬಹದ್ದೂರ್ ಶಾಸ್ತ್ರಿ ನಗರ, ಗೋಪಾಲಗೌಡ ಶಾಂತವೇರಿ ನಗರ ಹಾಗೂ ಸಹೃದಯ ನಗರ ನಿವಾಸಿಗಳ ಸಹಯೋಗದೊಂದಿಗೆ ಡಾ.ಬಿ.ಆರ್.ಅಂಬೇಡ್ಕರ್ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ಆಯೋಜಿಸಿದ್ದ ಡಾ.ಅಂಬೇಡ್ಕರ್‌ರವರ 135ನೇ ಜಯಂತಿ ಆಚರಣೆ ಕಾರ್ಯಕ್ರಮದಲ್ಲಿ ಮುಖ್ಯ ಭಾಷಣ ಮಾಡಿದ ಅವರು, ಸಂವಿಧಾನದಲ್ಲಿ 18 ವರ್ಷ ತುಂಬಿದ ಎಲ್ಲರಿಗೂ ಮತದಾನದ ಹಕ್ಕು ನೀಡಿದ್ದು, ಇದರ ಮಹತ್ವವನ್ನು ಅರಿಯದೆ ಸಮಾನತೆ ತರಲು ಸಾಧ್ಯವಿಲ್ಲ ಎಂದರು.

ಸಮಾಜದಲ್ಲಿ ಅಸ್ಪೃಶ್ಯತೆ ನಿವಾರಣೆಗಾಗಿ ಡಾ.ಅಂಬೇಡ್ಕರ್‌ರವರು ತಮ್ಮ ಜೀವನದುದ್ದಕ್ಕೂ ಹೋರಾಟ ನಡೆಸಿದರು. ಅವರ ಹೋರಾಟ ಹಾಗೂ ಚಿಂತನೆಗಳನ್ನು ನಾವು ಅರ್ಥಮಾಡಿಕೊಳ್ಳದಿದ್ದರೆ 80 ವರ್ಷಗಳ ಹಿಂದಿನ ಜೀವನ ಸ್ಥಿತಿಯನ್ನು ನಾವೂ ಅನುಭವಿಸಬೇಕಾಗುತ್ತದೆ. ಇಂದು ನಾವು ಒಳ್ಳೆಯ ಬಟ್ಟೆ ಧರಿಸಿಕೊಂಡು ಸಭೆ–ಸಮಾರಂಭ ಮಾಡುತ್ತಿರುವುದಕ್ಕೆ ಡಾ. ಅಂಬೇಡ್ಕರ್ ಅವರು ಕಾರಣವೇ ಹೊರತು ಯಾವ ದೇವರು ಕೊಟ್ಟ ವರವಲ್ಲ ಎಂಬುದನ್ನು ಅರ್ಥಮಾಡಿಕೊಳ್ಳಬೇಕು ಎಂದು ಹೇಳಿದರು.

ನನ್ನ ಜೀವನದ ಹೋರಾಟವೇ ನನ್ನ ಸಂದೇಶ ಎಂದಿರುವ ಡಾ.ಅಂಬೇಡ್ಕರ್‌ರವರು, ನನ್ನ ವಿಮೋಚನಾ ರಥವನ್ನು ಹಲವಾರು ಅಡೆತಡೆಗಳ ನಡುವೆಯೂ ಇಲ್ಲಿ ತನಕ ಎಳೆದು ತಂದಿದ್ದೇನೆ. ನಿಮಗೆ ಸಾಧ್ಯವಾದರೆ ಮುಂದಕ್ಕೆ ಎಳೆಯಿರಿ, ಇಲ್ಲವೇ ಇಲ್ಲಿಯೇ ನಿಲ್ಲಲಿ. ಆದರೆ, ಹಿಂದಕ್ಕೆ ಮಾತ್ರ ಎಳೆಯಬೇಡಿ ಎಂದಿದ್ದಾರೆ. ಅಂಬೇಡ್ಕರರ ವಿಮೋಚನಾ ರಥದಲ್ಲಿ ಸಾಮಾಜಿಕ, ಆರ್ಥಿಕ, ರಾಜಕೀಯ ಹಾಗೂ ಧಾರ್ಮಿಕ ಚಕ್ರಗಳಿವೆ. ಸಮಾಜದಲ್ಲಿ ಪ್ರತಿಯೊಬ್ಬರೂ ಸಮಾನವಾಗಿ ಗೌರವಯುತವಾಗಿ ಬದುಕುವುದೇ ಸಾಮಾಜಿಕ ಚಕ್ರದ ಅರ್ಥ. ದೇಶದ ಸಂಪತ್ತಿನಲ್ಲಿ ಸಮಪಾಲು ಪಡೆಯುವುದೇ ಆರ್ಥಿಕ ಚಕ್ರ, ಮೂರನೇ ಚಕ್ರವಾದ ರಾಜಕೀಯ ಹಕ್ಕಿನಿಂದ ನಮ್ಮ ಜೀವನದ ಬದಲಾವಣೆಗೆ ಸಾಧ್ಯ. ಧಮ್ಮ ಮಾರ್ಗವೇ ನಾಲ್ಕನೆಯ ಧರ್ಮ ಚಕ್ರವಾಗಿದೆ ಎಂದು ತಿಳಿಸಿದರು.

ಸಂವಿಧಾನದಡಿಯಲ್ಲಿ ನಮಗೆ ಮೀಸಲಾತಿ ಇಲ್ಲದಿದ್ದರೆ ಯಾರೊಬ್ಬರೂ ಗ್ರಾಮ ಪಂಚಾಯಿತಿ ಸದಸ್ಯರಾಗಲೂ ಸಾಧ್ಯವಾಗುತ್ತಿರಲಿಲ್ಲ. ಅಸಮಾನತೆ ಆಚರಣೆಯ ಧರ್ಮವನ್ನು ಧಿಕ್ಕರಿಸಿ ಡಾ.ಅಂಬೇಡ್ಕರ್ ಅವರು ಅನುಸರಿಸಿದಂತೆ ಎಲ್ಲರೂ ಬೌದ್ಧ ಧರ್ಮವನ್ನು ಅನುಸರಿಸಬೇಕು, ಆಗ ಮಾತ್ರ ನಮಗೆ ಅಸ್ಪೃಶ್ಯತೆ ನಿವಾರಣೆ ಸಾಧ್ಯ ಎಂದರು.

ಇದಕ್ಕೂ ಮುನ್ನ ಉದ್ಘಾಟನೆ ನೆರವೇರಿಸಿದ ಮುಖಂಡ ಅಹಿಂದ ಜವರಪ್ಪ ಮಾತನಾಡಿ, ನಾವು ಅಂಬೇಡ್ಕರ್ ಜಯಂತಿ ಮಾಡುವುದರಲ್ಲೇ ಕಾಲ ಕಳೆಯುತ್ತಿದ್ದೇವೆಯೇ ಹೊರತು ಅವರ ಚಿಂತನೆಗಳು ಹಾಗೂ ಮಾರ್ಗಗಳನ್ನು ಅನುಸರಿಸುವುದರಲ್ಲಿ ವಿಫಲರಾಗುತ್ತಿದ್ದೇವೆ. ಸ್ವಾತಂತ್ರ್ಯ ಬಂದು 79 ವರ್ಷಗಳಾಗಿದ್ದರೂ ಇನ್ನೂ ಹಲವೆಡೆ ಅಸ್ಪೃಶ್ಯತೆ ಜೀವಂತವಾಗಿರುವುದು ನೋವಿನ ಸಂಗತಿ. ಯಾವುದೇ ಪಕ್ಷಗಳು ಸರ್ಕಾರ ನಡೆಸಿದರೂ ಎಲ್ಲಾ ಕ್ಷೇತ್ರಗಳಲ್ಲೂ ನಮಗೆ ಧಕ್ಕಬೇಕಾದ ಅವಕಾಶವನ್ನು ಒಂದಲ್ಲ ಒಂದು ಕಾರಣ ನೀಡಿ ವಂಚಿಸುತ್ತಾ ಬಂದಿದ್ದಾರೆ ಎಂದು ಬೇಸರ ವ್ಯಕ್ತಪಡಿಸಿದರು.

ಮುಖ್ಯ ಅತಿಥಿ ಪ್ರೊ.ಸೌಭಾಗ್ಯವತಿ ಮಾತನಾಡಿ, ಡಾ.ಅಂಬೇಡ್ಕರ್ ಅವರ ಮಹಿಳಾ ಪರ ಹೋರಾಟದ ಬಗ್ಗೆ ವಿವರಿಸಿದರು. ಸಂಘದ ಅಧ್ಯಕ್ಷ ಬಿ.ಸಿ.ಮಹದೇವಯ್ಯ, ಉಪಾಧ್ಯಕ್ಷ ಗಂಗಾಧರ್, ಎಲೆಕ್ಟ್ರಿಕಲ್ ಕಂಟ್ರಾಕ್ಟರ್ ಮಹದೇವಸ್ವಾಮಿ, ಸಹಾಯಕ ಪ್ರಾಧ್ಯಾಪಕ ಬಿ.ಪಿ.ನಾಗರಾಜು ಮತ್ತಿತರರು ಉಪಸ್ಥಿತರಿದ್ದರು.

ಮಂಡ್ಯ ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಪರಿಹಾರಕ್ಕೆ ತುರ್ತು ಕ್ರಮವಹಿಸಿ

ಅಧಿಕಾರಿಗಳು ಗ್ರಾಮಗಳಿಗೆ ಭೇಟಿ ನೀಡಿ ವಾಸ್ತವ ಸ್ಥಿತಿಯನ್ನು ಪರಿಶೀಲಿಸಬೇಕು


ಜಿಲ್ಲಾಧಿಕಾರಿ ಡಾ.ಕುಮಾರ್ ತಮ್ಮ ಕಚೇರಿಯಲ್ಲಿ ಸೋಮವಾರ ಗ್ರಾಮೀಣ ಹಾಗೂ ನಗರ ಕುಡಿಯುವ ನೀರಿನ ಸಮಸ್ಯೆಗಳ ಕುರಿತು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯನ್ನು ನಡೆಸಿದರು.

ಮಂಡ್ಯ, ಮೇ11– ಮಂಡ್ಯ ಜಿಲ್ಲೆಯ ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆಯನ್ನು ಆದ್ಯತೆ ಮೇರೆಗೆ ಪರಿಹರಿಸಲು ಅಧಿಕಾರಿಗಳು ತುರ್ತು ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಡಾ ಕುಮಾರ ತಿಳಿಸಿದರು.

ಇಂದು ತಮ್ಮ ಕಚೇರಿಯಲ್ಲಿ ಗ್ರಾಮೀಣ ಹಾಗೂ ನಗರ ಕುಡಿಯುವ ನೀರಿನ ಸಮಸ್ಯೆಗಳ ಕುರಿತು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ ಸಭೆಯ ಅಧ್ಯಕ್ಷತೆ ಯಲ್ಲಿ ಸಭೆ ನಡೆಸಿದರು.

ನೀರಿನ ಸಮಸ್ಯೆ ಇರುವ 15 ಗ್ರಾಮಗಳಲ್ಲಿ ಖಾಸಗಿ ಬೋರ್‌ವೆಲ್‌ಗಳ ಮೂಲಕ ನೀರು ನೀಡಲಾಗುತ್ತಿದೆ. 2 ಗ್ರಾಮಗಳಲ್ಲಿ ಟ್ಯಾಂಕರ್‌ಗಳ ಮೂಲಕ ನೀರು ಸರಬರಾಜು ಮಾಡಲಾಗುತ್ತಿದೆ. ಈ ಸಂಬಂಧ ತುಂಬಾ ಸಮಸ್ಯೆ ಇರುವ ಗ್ರಾಮಗಳಿಗೆ ಕಡ್ಡಾಯವಾಗಿ ಸ್ಥಳಕ್ಕೆ ಭೇಟಿ ವಾಸ್ತವ ವಿಷಯ ತಿಳಿದು ಅಲ್ಲಿನ ಸಮಸ್ಯೆಗಳನ್ನು ಬಗೆಹರಿಸಬೇಕು ಎಂದು ಅವರು ತಿಳಿಸಿದರು.

ಕೊಳವೆ ಬಾವಿಗಳಲ್ಲಿ ಇಳುವರಿ ಪರಿಶೀಲನೆ ಮಾಡಬೇಕು. ಬೇಸಿಗೆ ಮುಗಿಯುವವರೆಗೆ ಜನರಿಗೆ ಕುಡಿಯುವ ನೀರಿನ ಸಮಸ್ಯೆಯಾಗದಂತೆ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲು ಎಲ್ಲಾ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಜನರಿಂದ ನಮಗೆ ಕುಡಿಯುವ ನೀರಿನ ಬಗ್ಗೆ ದೂರಿನ ಸಮಸ್ಯೆ ಆಗದಂತೆ ಕುಡಿಯುವ ನೀರಿನ ಬಿಕ್ಕಟ್ಟನ್ನು ಪರಿಹರಿಸಲು ಮೊದಲ ಆದ್ಯತೆಯ ಮೇಲಿನ ತಹಸೀ ಲ್ದಾರ್‌ಗಳು, ತಾಲೂಕು ಪಂಚಾಯಿತಿ ಇಒಗಳು ಮತ್ತು ಗ್ರಾಮೀಣ ನೀರು ಸರಬರಾಜು ಇಲಾಖೆ ಅಧಿಕಾರಿಗಳು ಕ್ರಮಗಳನ್ನು ತೆಗೆದುಕೊಳ್ಳಬೇಕು ಎಂದು ಅವರು ತಿಳಿಸಿದರು.

ಕುಡಿಯುವ ನೀರಿನ ಸಮಸ್ಯೆಗಳನ್ನು ಪರಿಹರಿಸಲು ಯಾವುದೇ ಹಣದ ಕೊರತೆಯಿಲ್ಲ. ಇದನ್ನು ಗಮನದಲ್ಲಿ ಇಟ್ಟುಕೊಂಡು ಸಮಸ್ಯೆಗೆ ತುರ್ತು ಕ್ರಮವಹಿಸಿ ಎಂದು ತಿಳಿಸಿದರು.

ನದಿ, ಕೆರೆ ಅಥವಾ ಜಲಮೂಲಗಳಿಂದ ಅನಧಿಕೃತವಾಗಿ ಪಂಪ್‌ಸೆಟ್ ಬಳಸಿ ನೀರನ್ನು ಎತ್ತುವುದು ಕಾನೂನು ಬಾಹಿರ ಚಟುವಟಿಕೆಯಾಗಿದ್ದು ಇದರಿಂದ ಜನರಿಗೆ ಕುಡಿಯುವ ನೀರಿಗೆ ಸಮಸ್ಯೆ ಆಗುತ್ತದೆ. ಈ ಸಂಬಂಧ ನದಿ ತೀರದ ಸ್ಥಳಗಳಿಗೆ ತಹಸೀಲ್ದಾರ್ ಹಾಗೂ ತಾಪಂ ಕಾರ್ಯನಿರ್ವಾಹಕ ಅಧಿಕಾರಿ, ಚೆಸ್ಕಾಂ ಅಧಿಕಾರಿ ಹಾಗೂ ಪೊಲೀಸ್ ಇಲಾಖೆಯವರು ತಕ್ಷಣವೇ ಸ್ಥಳಕ್ಕೆ ಭೇಟಿ ನೀಡಿ ವಿದ್ಯುತ್ ಕಡಿತಗೊಳಿಸಬೇಕು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ನೀರು ಶುದ್ಧೀಕರಣ ಘಟಕಗಳ ಕಾರ್ಯ ನಿರ್ವಹಣೆ ಬಗ್ಗೆ ಹಾಗೂ ನೀರಿನ ಗುಣ ಮಟ್ಟದ ಬಗ್ಗೆ ಪರೀಕ್ಷೆ ನಡೆಸಬೇಕು ಎಂದು ಅವರು ತಿಳಿಸಿದರು. ಜಿಲ್ಲೆಯಲ್ಲಿ 40 ವಾರಗಳವರೆಗೂ ಮೇವಿನ ಸಮಸ್ಯೆಯಿರುವುದಿಲ್ಲ ಎಂದು ಅವರು ತಿಳಿಸಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಶಿವನಂದಮೂರ್ತಿ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ಕಾರ್ಯ ಪಾಲಕ ಇಂಜಿನಿಯರ್ ಎನ್.ಜಿ. ಪ್ರಮೋದ್‌ಕುಮಾರ್, ಜಂಟಿ ಕೃಷಿ ನಿರ್ದೇಶಕರಾದ ಅಶೋಕ್, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರಾದ ಟಿ.ಎನ್.ನರಸಿಂಹಮೂರ್ತಿ, ಪಶುಸಂಗೋಪನೆ ಇಲಾಖೆಯ ಉಪ ನಿರ್ದೇಶಕರಾದ ಶಿವಲಿಂಗಯ್ಯ, ಜಿಲ್ಲೆಯ ಎಲ್ಲಾ ತಹಶೀಲ್ದಾರರು, ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು, ಪೌರಾಯುಕ್ತರು, ನಗರಸಭೆ, ಪಟ್ಟಣ ಪಂಚಾಯಿತಿಗಳ ಮುಖ್ಯಾಧಿಕಾರಿಗಳು ಉಪಸ್ಥಿತರಿದ್ದರು.

ನಾಳೆ ಸರ್ಕಾರಿ ನೌಕರರ ದಿನಾಚರಣೆ

ಮಂಡ್ಯ, ಮೇ 11– ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಜಿಲ್ಲಾ ಮಂಡ್ಯ ಸಂಯುಕ್ತ ಆಶ್ರಯದಲ್ಲಿ ಸರ್ಕಾರಿ ನೌಕರರ ದಿನಾಚರಣೆ ಕಾರ್ಯಕ್ರಮ ಹಾಗೂ ನಾಗರೀಕ ಸೇವಾ ದಿನಾಚರಣೆ ಹಾಗೂ ಸರ್ವೋತ್ತಮ ಸೇವಾ ಪ್ರಶಸ್ತಿ ಪ್ರದಾನ ಸಮಾರಂಭ ಕಾರ್ಯಕ್ರಮವನ್ನು ಮೇ 13 ರಂದು ಮಧ್ಯಾಹ್ನ 2 ಗಂಟೆಗೆ ಅಂಬೇಡ್ಕರ್ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ

ಕೇಂದ್ರ ಉಕ್ಕು ಮತ್ತು ಬೃಹತ್ ಕೈಗಾರಿಕಾ ಸಚಿವ ಹೆಚ್.ಡಿ.ಕುಮಾರಸ್ವಾಮಿ ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸಲಿದ್ದಾರೆ. ಕೃಷಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎನ್.ಚಲುವರಾಯಸ್ವಾಮಿ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ.

ಮಂಡ್ಯ ವಿಧಾನಸಭಾ ಶಾಸಕರಾದ ಪಿ.ರವಿಕುಮಾರ್ ಅವರು ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಲಿದ್ದಾರೆ.

ಶ್ರೀ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ ಅಧ್ಯಕ್ಷರು ಹಾಗೂ ಶ್ರೀರಂಗಪಟ್ಟಣ ವಿಧಾನಸಭಾ ಶಾಸಕ ಎ.ಬಿ ರಮೇಶ ಬಂಡಿಸಿದ್ದೇಗೌಡ, ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಅಧ್ಯಕ್ಷರು ಹಾಗೂ ಮಳವಳ್ಳಿ ವಿಧಾನ ಸಭಾ ಕ್ಷೇತ್ರದ ಶಾಸಕರಾದ ಪಿ ಎಂ ನರೇಂದ್ರಸ್ವಾಮಿ, ರಾಜ್ಯ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಆಯೋಗದ ಅಧ್ಯಕ್ಷರಾದ ಡಾ.ಮೂರ್ತಿ ಅವರು ಕಾರ್ಯಕ್ರಮದ ಗೌರವ ಉಪಸ್ಥಿತಿ ವಹಿಸಲಿದ್ದಾರೆ.

ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರು ಹಾಗೂ ವಿಧಾನಪರಿಷತ್ ಸದಸ್ಯರಾದ ದಿನೇಶ್ ಗೂಳಿಗೌಡ, ವಿಧಾನ ಪರಿಷತ್ ಶಾಸಕರುಗಳಾದ ಮಧು ಜಿ. ಮಾದೇಗೌಡ, ಕೆ. ವಿವೇಕಾನಂದ, ವಿಧಾನಸಭಾ ಶಾಸಕರುಗಳಾದ ದರ್ಶನ್ ಪುಟ್ಟಣ್ಣಯ್ಯ, ಹೆಚ್.ಟಿ ಮಂಜು, ಕೆ.ಎಂ.ಉದಯ, ರಾಜ್ಯ ಒಕ್ಕಲಿಗ ಸಮುದಾಯ ಅಭಿವೃದ್ಧಿ ನಿಗಮದ ಅಧ್ಯಕ್ಷ ಎಂ.ಎಸ್.ಆತ್ಮಾನಂದ, ಕರ್ನಾಟಕ ರಾಜ್ಯ ಆಹಾರ ಆಯೋಗದ ಅಧ್ಯಕ್ಷರಾದ ಡಾ.ಹೆಚ್. ಕೃಷ್ಣ, ಮಂಡ್ಯ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಬಿ.ಪಿ ಪ್ರಕಾಶ್, ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದ ಉಪಾಧ್ಯಕ್ಷೆ ವಿಜಯಲಕ್ಷ್ಮಿ ರಘುನಂದನ್, ಮೈಸೂರು ಸಕ್ಕರೆ ಕಂಪನಿ ನಿಯಮಿತ ಅಧ್ಯಕ್ಷರಾದ ಸಿ.ಡಿ ಗಂಗಾಧರ, ಕೈಮಗ್ಗ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಬಿ. ನಾಗೇಂದ್ರ ಕುಮಾರ್, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ರಾಜ್ಯಾಧ್ಯಕ್ಷರಾದ ಸಿ. ಎಸ್. ಷಡಾಕ್ಷರಿ ಅವರು ಭಾಗವಹಿಸಲಿದ್ದಾರೆ.

ಚಂದ್ರೆ ಗ್ರಾಮದಲ್ಲಿ ಸಿಸಿ ರಸ್ತೆ, ಚರಂಡಿ ಅಭಿವೃದ್ಧಿ ಕಾಮಗಾರಿಗೆ ಭೂಮಿ ಪೂಜೆ

ಪಾಂಡವಪುರ, ಮೇ 11– ತಾಲೂಕಿನ ಚಂದ್ರೆ ಗ್ರಾಮದಲ್ಲಿ 1.50 ಕೋಟಿ ವೆಚ್ಚದ ಸಿಸಿ ರಸ್ತೆ ಹಾಗೂ ಚರಂಡಿ ಅಭಿವೃದ್ಧಿ ಕಾಮಗಾರಿಗೆ ಶಾಸಕ ದರ್ಶನ್ ಪುಟ್ಟಣ್ಣಯ್ಯ ಭೂಮಿಪೂಜೆ ನೆರವೇರಿಸಿದರು.

ಬಳಿಕ ಮಾತನಾಡಿದ ಅವರು, ಪಾಂಡವಪುರ ತಾಲೂಕನ್ನು ರಾಜ್ಯ ಸರಕಾರ ಸಾವಯವ ಕೃಷಿ ತಾಲೂಕು ಎಂಬುದಾಗಿ ಘೋಷಿಸಿದೆ. ಶೀಘ್ರವೇ ಅಧಿಕಾರಿಗಳು ಜನರಿಗೆ ಅರಿವು ಮೂಡಿಸಲಿದ್ದಾರೆ. ಹಾಗಾಗಿ ಪ್ರತಿಯೊಬ್ಬರು ರಾಸಾಯನಿಕ ಬಳಸದೆ ತಿಪ್ಪೆಗೊಬ್ಬರ ಬಳಕೆಮಾಡಿ ಸಾವಯವ ಕೃಷಿ ಮಾಡಬೇಕು, ಹಂತಹಂತವಾಗಿ ರಾಸಾಯನಿಕ ಕೃಷಿಯಿಂದ ವಿಮುಕ್ತರಾಗಬೇಕು. ಜತೆಗೆ ರೈತರ ಬೆಳೆಗೆ ಸೊಸೈಟಿ ಹಂತದಲ್ಲಿ ಖರೀದಿಸಲು ಕ್ರಮವಹಿಸಲಾಗಿದೆ.

ಚಂದ್ರೆ ಗ್ರಾಮಕ್ಕೆ 1.50 ಕೋಟಿ ವೆಚ್ಚದ ಕಾಮಗಾರಿಗೆ ಚಾಲನೆ ನೀಡಲಾಗಿದೆ. ಅಲ್ಲದೆ ಈ ಪಂಚಾಯಿತಿಗೆ 8.50 ಕೋಟಿಗೂ ಹೆಚ್ಚು ಅನುದಾನ ನೀಡಿದ್ದೇವೆ, ಇದರ ಜತೆಗೆ ಪಟ್ಟಣಗೇರಿ–ಶಂಕಹಳ್ಳಿ ರಸ್ತೆಗೂ ಶೀಘ್ರ


ಚಂದ್ರೆ ಗ್ರಾಮದಲ್ಲಿ 1.50 ಕೋಟಿ ವೆಚ್ಚದ ಸಿಸಿ ರಸ್ತೆ ಹಾಗೂ ಚರಂಡಿ ಅಭಿವೃದ್ಧಿ ಕಾಮಗಾರಿಗೆ ಶಾಸಕ ದರ್ಶನ್ ಪುಟ್ಟಣ್ಣಯ್ಯ ಭೂಮಿಪೂಜೆ ನೆರವೇರಿಸಿದರು.

ಭೂಮಿಪೂಜೆ ಮಾಡಲಾಗುತ್ತಿದೆ. ಅಭಿವೃದ್ಧಿ ಕೆಲಸಗಳು ನಡುಯುವಾಗ ಎದುರಾಗುವ ಸಣ್ಣ ಪುಟ್ಟ ಸಮಸ್ಯೆಗಳನ್ನು ಎದುರಾದರೆ ಗ್ರಾಮಸ್ಥರೇ ಬಗೆಹರಿಸಿಕೊಂಡು ಅಭಿವೃದ್ಧಿ ಮಾಡಿಸಿಕೊಳ್ಳಿ ಎಂದು ಮನವಿ ಮಾಡಿದರು.

ಮುಖಂಡ ಕೆ.ಟಿ.ಗೋವಿಂದೇಗೌಡ ಮಾತನಾಡಿದರು. ಈ ಸಂದರ್ಭದಲ್ಲಿ ರೈತ ಸಂಘದ ಅಧ್ಯಕ್ಷ ಮಂಜುನಾಥ್, ಸರ್ವೋದಯ ಕರ್ನಾಟಕ ಪಕ್ಷದ ಅಧ್ಯಕ್ಷ ಕೆ.ಎಸ್. ದಯಾನಂದ, ಮಹಿಳಾಧ್ಯಕ್ಷೆ ರೂಪನಿತಿನ್, ಟಿಎಪಿಸಿಎಂಎಸ್ ನಿರ್ದೇಶಕಿ ಸುನಂದ ಮರಿದೇವೇಗೌಡ, ಸ್ವಾಮೀಗೌಡ ನ್ಯಾಯಬೆಲೆ ಅಂಗಡಿ, ಆರ್.ಮರಿದೇವೇಗೌಡ, ಕಾಂತರಾಜು, ಡಿ.ವೆಂಕಟೇಶ್, ಅರುಣ್ ಕುಮಾರ್, ರಮೇಶ, ಸೋಮೇಗೌಡ, ಚರಣ್, ರಾಮಕೃಷ್ಣೇಗೌಡ ಹಾಜರಿದ್ದರು.

ಕೆರೆಯಲ್ಲಿ ಈಜಲು ಹೋದ ಇಬ್ಬರು ಬಾಲಕರು ನೀರಿನಲ್ಲಿ ಮುಳುಗಿ ದುರ್ಮರಣ


ನಾಗಮಂಗಲ: ತಾಲೂಕಿನ ಬಿಂಡಿಗನವಿಲೆ ಹೋಬಳಿಯ ಹೆರಗನಹಳ್ಳಿಯ ಕೆರೆಯಲ್ಲಿ ಶನಿವಾರ ಸಂಜೆ ಈಜಲು ಹೋದ ಇಬ್ಬರು ಬಾಲಕರು ನೀರಿನಲ್ಲಿ ಮುಳುಗಿ ಮೃತಪಟ್ಟಿದ್ದಾರೆ. ತಾಲೂಕಿನ ಬಿಂಡಿಗನವಿಲೆ ಹೋಬಳಿಯ ಅಳಿಸಂದ್ರ ಗ್ರಾಮದ ಸತ್ಯಪ್ರಕಾಶ್ (17) ಮತ್ತು ಬಿಂಡಿಗನವಿಲೆ ಹೋಬಳಿಯ ಹೆರಗನಹಳ್ಳಿ ಗ್ರಾಮದ ಯಶಸ್(17) ಮೃತರು. ಇಬ್ಬರೂ ಸ್ನೇಹಿತರಾಗಿದ್ದು, ಎಸ್ಸೆಸ್ಸೆಲ್ಸಿ ಮುಗಿಸಿ ಕಾಲೇಜಿಗೆ ಸೇರಲು ತಯಾರಿ ನಡೆಸುತ್ತಿದ್ದರು. ಶಾಲೆ–ಕಾಲೇಜುಗಳಿಗೆ ರಜೆ ಇರುವ ಕಾರಣ ಶನಿವಾರ ಸಂಜೆ 4 ಗಂಟೆ ಸಮಯದಲ್ಲಿ ಹೆರಗನಹಳ್ಳಿ ಗ್ರಾಮದ ಕೆರೆಯಲ್ಲಿ ಈಜಲು ತೆರಳಿ ನೀರಿನಲ್ಲಿ ಮುಳುಗಿ ಮೃತಪಟ್ಟಿದ್ದಾರೆ. ಮೃತ ಬಾಲಕರು ಮನೆಗೆ ಬಾರದಿರುವುದರಿಂದ ಗಾಬರಿಗೊಂಡ ಪಾಲಕರು, ಸ್ನೇಹಿತರು ಹಾಗೂ ಕುಟುಂಬಸ್ಥರ ಮನೆಗಳಲ್ಲಿ ವಿಚಾರಿಸಿ ನಂತರ ಕೆರೆಯ ಬಳಿಗೆ ಈಜಲು ತೆರಳಿರುವ ವಿಚಾರ ತಿಳಿದು ಕೆರೆಯ ಬಳಿ ಬಂದು ನೋಡಲಾಗಿ ಕೆರೆಯ ಕೋಡಿಯ ಬಳಿ ಮೃತ ಸತ್ಯಪ್ರಕಾಶ್ ತಂದಿದ್ದ ಬೈಕ್ ನಿಂತಿರುವುದು ಹಾಗೂ ಇಬ್ಬರು ಬಾಲಕರ ಬಟ್ಟೆಗಳು ಪತ್ತೆಯಾಗಿದ್ದವು. ಭಾನುವಾರ ಮುಂಜಾನೆಯೇ ಕಾರ್ಯಪ್ರವೃತ್ತರಾದ ಪೊಲೀಸರು ಹಾಗೂ ಅಗ್ನಿಶಾಮಕ ಸಿಬ್ಬಂದಿ ಮೃತದೇಹಗಳನ್ನು ಹೊರ ತೆಗೆದು ಆದಿಚುಂಚನಗಿರಿ ಆಸ್ಪತ್ರೆಯ ಶವಗಾರದಲ್ಲಿ ಮರಣೋತ್ತರ ಪರೀಕ್ಷೆ ನಡೆಸಿ ವಾರಸುದಾರರಿಗೆ ಹಸ್ತಾಂತರಿಸಲಾಯಿತು.

ಈ ಸಂಬಂಧ ಬಿಂಡಿಗನವಿಲೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಇಂದು ಕೆಲವೆಡೆ ವಿದ್ಯುತ್ ವ್ಯತ್ಯಯ

ಮಂಡ್ಯ: ಜಿ.ಮಲ್ಲಿಗೆರೆ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತ್ರೈಮಾಸಿಕ ಕಾರ್ಯನಿರ್ವಹಣೆ ಹಮ್ಮಿಕೊಂಡಿರುವುದರಿಂದ ಮೇ 12 ರಂದು ಬೆಳಿಗ್ಗೆ 9 ರಿಂದ ಸಂಜೆ 6 ಗಂಟೆಯವರೆಗೆ ಜಿ.ಮಲ್ಲಿಗೆರೆ ವಿದ್ಯುತ್ ವಿತರಣಾ ಕೇಂದ್ರಗಳಾದ ಜಿ.ಮಲ್ಲಿಗೆರೆ, ಹೊನ್ನೆಮಡು, ಹುನಗನಹಳ್ಳಿ, ನಂಜೇನಹಳ್ಳಿ, ಮುತ್ತೆಗೆರೆ, ತಿಪ್ಪಾಪುರ, ಬುಂಡಾರೆಕೊಪ್ಪಲು, ಎಂ.ಹಟ್ನ, ಸಂಗಾಪುರ ಜವನಹಳ್ಳಿ, ಮಲ್ಲೇನಹಳ್ಳಿ, ಛತ್ರನಹಳ್ಳಿ, ಬಿಲ್ಲೇನಹಳ್ಳಿ, ಬಂಕನಹಳ್ಳಿ ಹಾಗೂ ಸುತ್ತಮುತ್ತಲಿನ ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದೆ.

ನಾಳೆ ಕೆ.ಆರ್.ಪೇಟೆಯಲ್ಲಿ ಬುದ್ಧ, ಬಸವ, ಅಂಬೇಡ್ಕರ್ ಜಯಂತಿ


ಕೆ.ಆರ್.ಪೇಟೆ, ಮೇ11– ಕರ್ನಾಟಕ ದಲಿತ ಸಂಘರ್ಷ ಸಮಿತಿಯ(ಪ್ರೊ.ಬಿ.ಕೃಷ್ಣಪ್ಪ ಬಣ) ವತಿಯಿಂದ ಬುದ್ಧ ಬಸವ ಅಂಬೇಡ್ಕರ್ ಜಯಂತ್ಯೋತ್ಸವವನ್ನು ಮೇ.13ರಂದು ಬೆಳಿಗ್ಗೆ 11 ಗಂಟೆಗೆ ಪಟ್ಟಣದ ಸುಲೋಚನಮ್ಮ–ರಾಮದಾಸ್ ಸಭಾಂಗಣದಲ್ಲಿ ಆಯೋಜಿಸಲಾಗುವುದು ಎಂದು ಡಿಎಸ್‌ಎಸ್ ಜಿಲ್ಲಾ ಸಂಘಟನಾ ಸಂಚಾಲಕ ಲಕ್ಷ್ಮೀಪುರ ರಂಗಸ್ವಾಮಿ ತಿಳಿಸಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಕ್ರಿಸ್ತ ಪೂರ್ವ 500ರಲ್ಲಿ ಬೌದ್ಧ ಧರ್ಮವನ್ನು ಸ್ಥಾಪಿಸಿ ಜಾತಿ– ಧರ್ಮ ರಹಿತ ಸಮ ಸಮಾಜವನ್ನು ನಿರ್ಮಿಸಲು ಶ್ರಮಿಸಿದ್ದರು. ಅದೇ ರೀತಿ 12ನೇ ಶತಮಾನದಲ್ಲಿ ಜಗಜ್ಯೋತಿ ಬಸವೇಶ್ವರರು ಅನುಭವ ಮಂಟಪ ಸ್ಥಾಪನೆ ಮಾಡಿ ಪ್ರಪಂಚದಲ್ಲಿ ಹೆಣ್ಣು–ಗಂಡು ಎರಡೇ ಜಾತಿ ಇರುವುದು ಎಂದು ಜಾತಿ ರಹಿತ ಸಮಾಜ ನಿರ್ಮಾಣಕ್ಕಾಗಿ ಅಂತ ರ್ಜಾತಿ ವಿವಾಹಗಳನ್ನು ಮಾಡಿದರು. ಎಲ್ಲಾ ಜಾತಿಯವರಿಗೆ ಲಿಂಗಧಾರಣೆ ಮಾಡಿ ಕಾಯಕವೇ ಕೈಲಾಸ ಎಂಬ ಶ್ರೇಷ್ಠ ಸಂದೇಶವನ್ನು ಸಾರಿ ಎಲ್ಲರೂ ಸರಿ ಸಮಾನರು ಎಂಬುದನ್ನು ತಿಳಿಸಿಕೊಟ್ಟರು ಎಂದರು.

ಅದೇ ರೀತಿ 20ನೇ ಶತಮಾನದಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಅವರು ಸ್ವತಂತ್ರ ಭಾರತಕ್ಕೆ ಸರ್ವ ಶ್ರೇಷ್ಠ ಸಂವಿಧಾನವನ್ನು ಸುಮಾರು ಎರಡು ವರ್ಷ 11ತಿಂಗಳುಗಳ ಕಾಲ ಬರೆದು ಸರ್ವರಿಗೂ ಸಮಬಾಳು, ಸರ್ವರಿಗೂ ಸಮ ಪಾಲು ಸಿಗುವಂತಹ ಸಾಮಾಜಿಕ ನ್ಯಾಯವನ್ನು ಭಾರತದ ಎಲ್ಲಾ ಜನರಿಗೆ ನೀಡಿದರು. ಇಂತಹ ಮೂವರು ಗಣ್ಯ ಮಹನೀಯರ ಜಯಂತಿಯನ್ನು ಒಂದೇ ದಿನ ಆಯೋಜಿಸುವ ಮೂಲಕ ಸಮಾಜಕ್ಕೆ ಬುದ್ಧ–ಬಸವ–ಅಂಬೇಡ್ಕರ್ ಅವರ ಸಂದೇಶವನ್ನು ತಿಳಿಸಿ ಕೊಡಲು ಈ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಡಿಎಸ್‌ಎಸ್ ರಾಜ್ಯ ಸಂಘಟನಾ ಸಂಚಾಲಕ ಸೋಮನಹಳ್ಳಿ ಅಂದಾನಿ, ಹೈಕೋರ್ಟ್ ವಕೀಲ ಎಂ.ಬಿ. ಹರಿಪ್ರಸಾದ್, ಜಿಲ್ಲಾ ಸಂಚಾಲಕ ಮದ್ದೂರು ಎಂ.ಶಿವು, ರಾಜ್ಯ ಸಮಿತಿ ಸದಸ್ಯರಾದ ಬೆಸಗರಹಳ್ಳಿ ಬಿ.ಎಂ.ಸತ್ಯ, ವಿಭಾಗೀಯ ಸಂಚಾಲಕ ಡಿ.ಕೆ.ಅಂಕಯ್ಯ, ಕಂಚಿನ ಕೋಟೆ ಮೂರ್ತಿ, ತಗ್ಗಹಳ್ಳಿ ಬಸವರಾಜು, ಅಣ್ಣೂರು ರಾಜಣ್ಣ ಸೇರಿದಂತೆ ವಿವಿಧ ಗಣ್ಯರು ಭಾಗವಹಿಸುವರು.

ತಾಲೂಕಿನ ಜನತೆ ಹೆಚ್ಚಿನ ಸಂಖ್ಯೆಯಲ್ಲಿ ಭಾಗ ವಹಿಸುವ ಮೂಲಕ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಕಾರ್ಯಕ್ರಮದ ಉಸ್ತುವಾರಿಗಳಾದ ಲಕ್ಷ್ಮೀಪುರ ರಂಗಸ್ವಾಮಿ, ಬಂಡಿಹೊಳೆ ರಮೇಶ್, ತೆಂಡೇಕೆರೆ ನಿಂಗಯ್ಯ, ವೆಂಕಟಗಿರಿ, ಕತ್ತರಘಟ್ಟ ರಾಜೇಶ್, ಕೆ.ಆರ್.ಪೇಟೆ ಲೀಲಾವತಿ ಅವರುಗಳು ಮನವಿ ಮಾಡಿದರು.

ಮುತ್ತತ್ತಿ ಕಾವೇರಿ ನದಿಯಲ್ಲಿ ಕಾಲು ಜಾರಿ ವ್ಯಕ್ತಿ ಸಾವು

ಹಲಗೂರು: ಸಮೀಪದ ಮುತ್ತತ್ತಿ ಕಾವೇರಿ ನದಿಯಲ್ಲಿ ಕಾಲು ಜಾರಿ ಬಿದ್ದು ವ್ಯಕ್ತಿಯೋರ್ವ ಮೃತಪಟ್ಟ ದುರ್ಘಟನೆ ಸೋಮವಾರ ಮಧ್ಯಾಹ್ನ ಸಂಭವಿಸಿದೆ.

ಮೃತನನ್ನು ಚಾಮರಾಜನಗರ ಜಿಲ್ಲೆಯ ಹರದನಹಳ್ಳಿ ಹೋಬಳಿ ಬ್ಯಾಡಮೂಡ್ಲು ಗ್ರಾಮದ ಮಾದಶೆಟ್ಟಿ ಅವರ ಪುತ್ರ ಸಿದ್ದರಾಜು(44) ಎಂದು ಗುರುತಿಸಲಾಗಿದೆ.

ದೇವರ ಕಾರ್ಯದ ನಿಮಿತ್ತವಾಗಿ ಸ್ನೇಹಿತರಾದ ಹತ್ತು ಮಂದಿಯೊಂದಿಗೆ ಮುತ್ತತ್ತಿ ಪ್ರವಾಸಿ ತಾಣಕ್ಕೆ ತೆರಳಿದ್ದ ಸಿದ್ದರಾಜು, ಕಾವೇರಿ ನದಿಯಲ್ಲಿ ಈಜಲು ಇಳಿದ ವೇಳೆ ಕಾಲು ಜಾರಿ ನೀರಿನಲ್ಲಿ ಮುಳುಗಿ ಸಾವನ್ನಪ್ಪಿದ್ದಾನೆ ಎಂದು ತಿಳಿದುಬಂದಿದೆ. ಈ ಸಂಬಂಧ ಹಲಗೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ಮುಂದುವರಿದಿದೆ.

ತಾಲೂಕು ಬಿಜೆಪಿ ಮಹಿಳಾ ಘಟಕದ ಅಧ್ಯಕ್ಷರಾಗಿ ಶಿಲ್ಪಾ ಮಂಜುನಾಥ್ ನೇಮಕ


ಶ್ರೀಮತಿ ಶಿಲ್ಪಾ ಅವರಿಗೆ ನೇಮಕಾತಿ ಆದೇಶ ಪತ್ರ ನೀಡುತ್ತಿರುವುದು.

ಕೆ.ಆರ್.ಪೇಟೆ: ತಾಲೂಕಿನ ಬಿಜೆಪಿ ಮಹಿಳಾ ಘಟಕದ ಅಧ್ಯಕ್ಷರಾಗಿ ಶ್ರೀಮತಿ ಶಿಲ್ಪಾ ಅವರು ನೇಮಕಗೊಂಡಿದ್ದಾರೆ.

ತಾಲೂಕು ಮಹಿಳಾ ವಿಭಾಗದಲ್ಲಿ ಹಲವಾರು ವರ್ಷಗಳಿಂದ ಸಾಮಾನ್ಯ ಕಾರ್ಯಕರ್ತೆಯಾಗಿ ಸೇವೆ ಸಲ್ಲಿಸುತ್ತಿದ್ದ ಶಿಲ್ಪ ಮಂಜುನಾಥ್ ಅವರ ಕಾರ್ಯವೈಖರಿಯನ್ನು ಗುರುತಿಸಿ ಇಂದು ಜಿಲ್ಲಾ ಮಹಿಳಾ ಘಟಕದ ಅಧ್ಯಕ್ಷರಾದ ಮಂಗಳನವೀನ್ ಅವರು ಶಿಲ್ಪಾ ಮಂಜುನಾಥ್ ಅವರನ್ನು ಕೃಷ್ಣರಾಜಪೇಟೆ ವಿಧಾನಸಭಾ ಕ್ಷೇತ್ರದ ಬಿಜೆಪಿ ತಾಲ್ಲೋಕು ಘಟಕದ ನೂತನ ಮಹಿಳಾ ಅಧ್ಯಕ್ಷರಾಗಿ ನೇಮಕ ಮಾಡಿ ಜಿಲ್ಲಾಧ್ಯಕ್ಷರಾದ ಶ್ರೀಮತಿ ಮಂಗಳ ನವೀನ್ ಆದೇಶ ಹೊರಡಿಸಿದ್ದಾರೆ.

ಪಟ್ಟಣದ ಬಿಜೆಪಿ ಕಚೇರಿಯ ಆವರಣದಲ್ಲಿ ಕರೆಯಲಾಗಿದ್ದ ಬಿಜೆಪಿ ಪಕ್ಷದ ಕಾರ್ಯಕರ್ತರ ಸಭೆಯಲ್ಲಿ ಶಿಲ್ಪರವರು ನೂತನವಾಗಿ ಮಹಿಳಾ ಘಟಕದ ನೂತನ ಅಧ್ಯಕ್ಷರಾಗಿ ಆಯ್ಕೆಯಾಗಿದ್ದಾರೆಂದು ತಾಲೂಕು ಬಿಜೆಪಿ ಘಟಕದ ಅಧ್ಯಕ್ಷ ಸಾರಂಗಿ ನಾಗರಾಜು ನೇಮಕಾತಿ ಆದೇಶ ಪತ್ರವನ್ನು ನೀಡುವ ಮೂಲಕ ಘೋಷಣೆ ಮಾಡಿದರು.

ಬಿಜೆಪಿ ನೂತನ ಮಹಿಳಾ ಅಧ್ಯಕ್ಷೆ ಶಿಲ್ಪಾ ಮಂಜುನಾಥ್ ಮಾತನಾಡಿ, ಸರ್ವರಿಗೂ ಸಮಪಾಲು ಸರ್ವರಿಗೂ ಸಮಬಾಳು ಎಂಬುದನ್ನು ನೋಡಬಹುದಾದರೆ ಬಿಜೆಪಿ ಪಕ್ಷದಿಂದ ಮಾತ್ರ ಸಾಧ್ಯವಿದೆ. ನಾನು ತಾಲೂಕು ಅಧ್ಯಕ್ಷಳಾಗುತ್ತೇನೆಂದು ನಾನು ಕನಸಿನಲ್ಲು ಎಣಿಸಿರಲಿಲ್ಲ. ಸಾಮಾನ್ಯ ಕಾರ್ಯಕರ್ತೆಯಾಗಿದ್ದ ನನ್ನನ್ನು ಗುರುತಿಸಿ ಆಯ್ಕೆಮಾಡಿರುವುದು ನನ್ನ ಪೂರ್ವ ಜನ್ಮದ ಪುಣ್ಯ ನನಗೆ ತಾಲೂಕು ಘಟಕದ ಮಹಿಳಾ ಅಧ್ಯಕ್ಷೆಯಾಗಲೂ ಕಾರಣರಾದ ಬಿಜೆಪಿ ಅಧ್ಯಕ್ಷರಾದ ಬಿವೈ ವಿಜಯೇಂದ್ರ, ಮಾಜಿ ಸಚಿವ ಕೆ.ಸಿ.ನಾರಾ ಯಣಗೌಡ, ಜಿಲ್ಲಾ ಅಧ್ಯಕ್ಷರಾದ ಇಂದ್ರೇಶ್ ಮಹಿಳಾ ಅಧ್ಯಕ್ಷರಾದ ಮಂಜುಳ ನವೀನ್, ಹಾಗೂ ತಾಲೂಕಿನ ಎಲ್ಲಾ ಮುಖಂಡರಿಗೂ ತುಂಬು ಹೃದಯದ ಧನ್ಯವಾದಗಳನ್ನು ಅರ್ಪಿಸಿದರು.

ಇದೇ ಸಂದರ್ಭದಲ್ಲಿ ತಾಲೂಕು ಬಿಜೆಪಿ ಅಧ್ಯಕ್ಷ ಸಾರಂಗಿ ನಾಗರಾಜು, ಮಂಜುನಾಥ್, ರಾಮಯ್ಯ, ರಾಜು, ಕೆ.ಆರ್ ನೀಲಕಂಠ, ಮಂಡ್ಯ ಜಿಲ್ಲಾ ಮಹಿಳಾ ಘಟಕದ ವೀಣಾ, ಶೋಭ, ಪುಟ್ಟಮ್ಮ ಶೃತಿ, ಭಾಗ್ಯ, ದೇವಿರಮ್ಮ, ನಿರ್ಮಲ, ಸುಜಾತ, ಸುನಂದ ಸರೋಜಮ್ಮ, ಶಾಂತಮ್ಮ, ದೇವಮ್ಮ, ನಾಗಮಣಿ, ಸರೋಜ, ನಾಗಮ್ಮ, ರೂಪಶ್ರೀ, ಚೈತ್ರ, ನಾಗಮ್ಮ, ಲೋಲಾಕ್ಷಿ, ನೇತ್ರ, ಪ್ರಿಯ, ದೇವಕಿ ಚಂದ್ರಕಲಾ, ಸುನಂದ, ದಿವ್ಯ ಸೇರಿದಂತೆ ಹಲವಾರು ಮುಖಂಡರು ಮಹಿಳಾ ಕಾರ್ಯಕರ್ತರು ಉಪಸ್ಥಿತರಿದ್ದರು.

ಮಂಡ್ಯದಲ್ಲಿ ಅಂತರಾಷ್ಟ್ರೀಯ ಮಾದರಿಯ ಕ್ರಿಕೆಟ್ ಟೂರ್ನಿ



ಮಂಡ್ಯ: ಮಂಡ್ಯ ಜಿಲ್ಲೆಯ ಕ್ರೀಡಾ ಇತಿಹಾಸದಲ್ಲೇ ಹೊಸ ಅಧ್ಯಾಯ ಬರೆಯಲು ಶಾಸಕ ಪಿ.ರವಿಕುಮಾರ್ ಗೌಡ (ಗಣಿಗ) ಅವರು ಆರ್‌ಕೆಜಿ ಕಪ್– ಮಂಡ್ಯ ಪ್ರೀಮಿಯರ್ ಲೀಗ್ ಎಂಬ ಮಹತ್ವಾಕಾಂಕ್ಷೆಯ ಕ್ರಿಕೆಟ್ ಪಂದ್ಯಾವಳಿಯನ್ನು ಆಯೋಜಿಸಲು ಮುಂದಾಗಿದ್ದಾರೆ.

ಅಂತರಾಷ್ಟ್ರೀಯ ಮಟ್ಟದ ಪಂದ್ಯಾವಳಿಗಳ ಮಾದರಿಯಲ್ಲಿ ಈ ಟೂರ್ನಿಯನ್ನು ಅತ್ಯಂತ ಅದ್ದೂರಿಯಾಗಿ ನಡೆಸಲು ಸಿದ್ಧತೆ ನಡೆಯುತ್ತಿದ್ದು, ಗ್ರಾಮೀಣ ಪ್ರದೇಶದ ಕ್ರಿಕೆಟ್ ಪ್ರತಿಭೆಗಳಿಗೆ ದೊಡ್ಡ ವೇದಿಕೆ ಕಲ್ಪಿಸುವುದು ಮುಖ್ಯ ಉದ್ದೇಶವಾಗಿದೆ.

ಈ ಸಂಬಂಧ ಮಂಡ್ಯದ ಪ್ರವಾಸಿ ಮಂದಿರದಲ್ಲಿ ಮಂಡ್ಯ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಕ್ರಿಕೆಟ್ ಪ್ರೇಮಿಗಳು, ಆಟಗಾರರು ಹಾಗೂ ಆಯೋಜಕರೊಂದಿಗೆ ಪೂರ್ವಭಾವಿ ಸಭೆ ನಡೆಸಿ ಸಲಹೆ–ಸೂಚನೆಗಳನ್ನು ಸಂಗ್ರಹಿಸಲಾಯಿತು. ಸಭೆಯಲ್ಲಿ ಮಾತನಾಡಿದ ಶಾಸಕ ಪಿ.ರವಿಕುಮಾರ್‌ಗೌಡ ಗಣಿಗ ಅವರು, ಕ್ರೀಡೆಯ ಮೂಲಕ ಯುವಜನರಲ್ಲಿ ಶಿಸ್ತು, ನಾಯಕತ್ವ ಹಾಗೂ ಸ್ನೇಹ ಭಾವ ಬೆಳೆಸುವ ಉದ್ದೇಶದಿಂದ ಈ ಪಂದ್ಯಾವಳಿಯನ್ನು ಆಯೋಜಿಸಲಾಗುತ್ತಿದೆ. ಪಂದ್ಯಾವಳಿಗೆ 200ಕ್ಕೂ ಹೆಚ್ಚು ತಂಡಗಳಿಗೆ ಆಹ್ವಾನ ನೀಡಲಾಗಿದ್ದು, ಪ್ರತಿ ತಂಡದ 15 ಆಟಗಾರರಿಗೆ ಉಚಿತ ಟಿ–ಶರ್ಟ್, ಬ್ಯಾಟ್, ಬಾಲ್ ವಿತರಣೆ ಮಾಡಲಾಗುವುದು ಎಂದರು.

ಆನ್‌ಲೈನ್ ಅರ್ಜಿ ಸಲ್ಲಿಕೆಗೆ ಅವಧಿ ವಿಸ್ತರಣೆ

ಮಂಡ್ಯ, ಮೇ 11– ಮಳವಳ್ಳಿ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ 2026–27ನೇ ಶೈಕ್ಷಣಿಕ ಸಾಲಿಗೆ ವಿವಿಧ ವೃತ್ತಿ ತರಬೇತಿ ಗಳಿಗೆ ಏಪ್ರಿಲ್ 27ರಿಂದ ಮೇ 8 ರವರೆಗೆ ಆನ್–ಲೈನ್ ಮೂಲಕ ವೆಬ್ ಸೈಟ್ www.cite.karnataka.gov.in ಅರ್ಜಿ ಆಹ್ವಾನಿಸಲಾಗಿತ್ತು.

ವಿವಿಧ ಕೈಗಾರಿಕಾ ತರಬೇತಿ ಸಂಸ್ಥೆಗಳ ಪ್ರಾಚಾರ್ಯರ ಕೋರಿಕೆಯ ಮೇರೆಗೆ ಐ.ಟಿ.ಐ ಪ್ರವೇಶಕ್ಕೆ ಆನ್‌ಲೈನ್ ಅರ್ಜಿ ಸಲ್ಲಿಸುವ ಅವಧಿಯನ್ನು ಮೇ 15 ರವರೆಗೆ ವಿಸ್ತರಿಸಿದೆ. ಹೆಚ್ಚಿನ ಮಾಹಿತಿಗಾಗಿ 9108284304,9113283613,9972447565 ಅನ್ನು ಸಂಪರ್ಕಿಸಬಹುದು ಎಂದು ಮಳವಳ್ಳಿ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯರು ದರ್ಜೆ –1 ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಚರ್ಮವಾದ್ಯ ತರಬೇತಿಯಿಂದ ಸಂಸ್ಕೃತಿ ಜೊತೆಗೆ ಉದ್ಯೋಗ ಸೃಷ್ಟಿ

ಚರ್ಮ ವಾದ್ಯ ತರಬೇತಿ ಕಾರ್ಯಾಗಾರದ ಸಮಾರೋಪ ಸಮಾರಂಭ


ಚರ್ಮ ವಾದ್ಯ ತರಬೇತಿ ಕಾರ್ಯಾಗಾರದ ಸಮಾರೋಪ ಸಮಾರಂಭಕ್ಕೆ ಚರ್ಮವಾದ್ಯ ಭಾರಿಸುವ ಮೂಲಕ ಗಣ್ಯರು ಚಾಲನೆ ನೀಡಿದರು.

ಮದ್ದೂರು: ಚರ್ಮವಾದ್ಯ ತರಬೇತಿ ಪಡೆಯುವುದರಿಂದ ಸಂಸ್ಕೃತಿ ಉಳಿಸುವ ಜತೆಗೆ ಯುವಕರು ಉದ್ಯೋಗ ರೂಪಿಸಿಕೊಳ್ಳಲು ಸಹಕಾರಿಯಾಗಿದೆ ಎಂದು ಡಾ.ಬಾಬು ಜಗಜೀವನ ರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕಿ ಡಾ.ಕೆ.ಎಂ.ವಸುಂಧರಾ ತಿಳಿಸಿದರು.

ತಾಲೂಕಿನ ಚಾಮನಹಳ್ಳಿ ಲಿಡ್ಕರ್ ಭವನದಲ್ಲಿ ಡಾ.ಬಾಬು ಜಗಜೀವನ ರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ಬೆಂಗಳೂರು, ಅಖಿಲ ಕರ್ನಾಟಕ ಡಾ.ಬಾಬು ಜಗಜೀವನ್ ರಾಂ ಸಂಘಗಳ ಒಕ್ಕೂಟ, ಕರ್ನಾಟಕ ಜಾನಪದ ಪರಿಷತ್ ವತಿಯಿಂದ ಸೋಮವಾರ ಸಂಜೆ ಆಯೋಜಿಸಿದ್ದ ಚರ್ಮ ವಾದ್ಯ ತರಬೇತಿ ಕಾರ್ಯಾಗಾರದ ಸಮಾರೋಪ ಸಮಾರಂಭದಲ್ಲಿ ಭಾಗವಹಿಸಿ, ತರಬೇತಿ ಪಡೆದವರಿಗೆ ಪ್ರಶಸ್ತಿ ಪತ್ರ ಹಾಗೂ ಚರ್ಮವಾದ್ಯಗಳನ್ನು ವಿತರಣೆ ಮಾಡಿ ಮಾತನಾಡಿದರು.

ಡಾ.ಬಾಬು ಜಗಜೀವನ ರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮವು ಪರಿಶಿಷ್ಟ ಜಾತಿಯ (ಎಸ್ಸಿ) ಚರ್ಮ ಕುಶಲಕರ್ಮಿಗಳ ಆರ್ಥಿಕ ಮತ್ತು ಸಾಮಾಜಿಕ ಸಬಲೀಕರಣಕ್ಕಾಗಿ ಕಾರ್ಯ ನಿರ್ವಹಿಸುತ್ತಿದೆ. ಇದು ಸಮಾಜ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿದ್ದು, ಕೌಶಲ್ಯ ತರಬೇತಿ, ಸಾಲ ಸೌಲಭ್ಯ, ಮತ್ತು ಚರ್ಮ ಉತ್ಪನ್ನಗಳ ಮಾರುಕಟ್ಟೆ ಅವಕಾಶಗಳನ್ನು ಒದಗಿಸುತ್ತದೆ ಎಂದರು.

ಚರ್ಮ ಕುಶಲಕರ್ಮಿಗಳಿಗೆ ತರಬೇತಿ ನೀಡಿ, ಸುಧಾರಿತ ಉಪಕರಣಗಳನ್ನು ಒದಗಿಸಿ, ಅವರು ತಯಾರಿಸಿದ ಉತ್ಪನ್ನಗಳಿಗೆ (ಲಿಡ್ಕರ್ ಬ್ರಾಂಡ್ ಹೆಸರಿನಲ್ಲಿ) ಮಾರುಕಟ್ಟೆ ಒದಗಿಸುವ ಮೂಲಕ ಸ್ವಯಂ ಉದ್ಯೋಗವನ್ನು ಉತ್ತೇಜಿಸಲಾಗುವುದು ಎಂದರು.

ರಾಜ್ಯದಲ್ಲಿ ಈಗಾಗಲೇ ಸುಮಾರು 18 ಮಳಿಗೆಗಳನ್ನು ಆರಂಭಿಸಿದ್ದು, ಶೀಘ್ರವಾಗಿ ಮಂಡ್ಯದಲ್ಲೂ ಜೂನ್ ತಿಂಗಳಲ್ಲಿ ಲಿಡ್ಕರ್ ಮಳಿಗೆಯನ್ನು ಆರಂಭಿಸಲು ನಿಗಮದ ವತಿಯಿಂದ ಎಲ್ಲಾ ರೀತಿಯ ಕ್ರಮಗಳನ್ನು ಕೈಗೊಳ್ಳಲಾಗಿದೆ. ನಿಗಮದ ಚರ್ಮ ವಾದ್ಯ ತರಬೇತಿ ನೀಡುತ್ತಿದ್ದು ಇದರ ಸದುಪಯೋಗವನ್ನು ಪಡಿಸಿಕೊಂಡು ಉತ್ತಮ ಜೀವನ ರೂಪಿಸಿಕೊಳ್ಳಬೇಕೆಂದು ತರಬೇತಿ ಪಡೆದ ಯುವಕರಿಗೆ ಇದೆ ವೇಳೆ ಕಿವಿಮಾತು ಹೇಳಿದರು.

ತಮಟೆಯು ನಮ್ಮ ಸಂಸ್ಕೃತಿಯ ಸಂಕೇತ ಹಾಗೂ ಪ್ರತಿಭಟನೆ, ಭಕ್ತಿ, ಕೋಪ, ಆಕ್ರೋಶ ಸೇರಿದಂತೆ ಹಲವು ವಿಷಯಗಳಿಗೆ ತಮಟೆ ಸಾಕ್ಷಿಯಾಗಿದೆ ಎಂದರು.

ಹಲವಾರು ತಂಡಗಳು ಅಮೇರಿಕದಲ್ಲಿ ನಡೆಯುವ ಅಕ್ಕ ಸಮ್ಮೇಳನದಲ್ಲಿ ಹೋಗಿ ಜನಪದ ಪ್ರದರ್ಶನಗಳನ್ನ ಹಮ್ಮಿಕೊಂಡು ಪ್ರಶಸ್ತಿಗಳನ್ನ ಪಡೆದುಕೊಂಡು ಬಂದಿರುವುದು ಮೆಚ್ಚುಗೆಯ ವಿಷಯ ಎಂದರು.

ತಮಟೆ ವಾದ್ಯವು ಸಂಸ್ಕೃತಿ, ಶ್ರೀಮಂತಿಕೆ ಗಾಂಭೀರ್ಯ ಹಾಗೂ ಪರಂಪರೆಯನ್ನು ಸೂಚಿಸುತ್ತದೆ. ತರಬೇತಿ ಪಡೆದ ಯುವಕರು ಬೇರೆಯವರಿಗೂ ತರಬೇತಿ ನೀಡಬೇಕು ಎಂದರು.

ಕರ್ನಾಟಕ ಜಾನಪದ ಪರಿಷತ್ತಿನ ಜಿಲ್ಲಾಧ್ಯಕ್ಷ ಡಿ.ಪಿ.ಸ್ವಾಮಿ, ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ನಾಗರಾಜು, ತರಬೇತಿದಾರ ಸಿ.ಮಂಜುನಾಥ್ ಮಾತನಾಡಿದರು.

ಅಖಿಲ ಕರ್ನಾಟಕ ಡಾ.ಬಾಬು ಜಗಜೀವನ್ ರಾಮ್ ಸಂಘ ಚಾಮನಹಳ್ಳಿ ಮಂಜು ಮಾತನಾಡಿ, ಒಂದು ತಿಂಗಳಕಾಲ ನಡೆದ ತರಬೇತಿ ಕಾರ್ಯಾಗಾರದಲ್ಲಿ ಹಲವಾರು ಯುವಕರು ಅತ್ಯಂತ ಆಸಕ್ತಿಯಿಂದ ತರಬೇತಿ ಪಡೆದರು ಎಂದು ಹರ್ಷ ವ್ಯಕ್ತಪಡಿಸಿದರು.

ನಿಗಮದ ಜಿಲ್ಲಾ ಸಂಚಾಲಕ ಚೇತನ್, ಮುಖಂಡರಾದ ಪುಟ್ಟರಂಗಯ್ಯ, ಗುರುರಾಜ್, ಕಿರಣ್, ಲತಾಕುಮಾರಿ, ಹನುಮಂತು, ಆನಂದ್, ವಿನಯ್, ಕೇಶವ ಸೇರಿದಂತೆ ಇತರರು ಇದ್ದರು.

ಹುಚ್ಚಮ್ಮ ನಿಧನ



ನಾಗಮಂಗಲ: ಪಟ್ಟಣದ ಗದ್ದೆಭೂವನಹಳ್ಳಿ ಗ್ರಾಮದ ಪತ್ರಕರ್ತ ದೇವರಾಜು ಅವರ ಮಾತೃಶ್ರೀ ಲೇ. ವರದಯ್ಯನವರ ಧರ್ಮಪತ್ನಿ ಹುಚ್ಚಮ್ಮ (73) ಸೋಮವಾರ ಮಧ್ಯಾಹ್ನ ನಿಧನರಾದರು.

ಇವರ ಅಂತ್ಯಕ್ರಿಯೆ ಮಂಗಳವಾರ ನೆರವೇರಲಿದೆ ಎಂದು ಕುಟುಂಬ ವರ್ಗ ತಿಳಿಸಿದ್ದಾರೆ. ಮೃತರು ಇಬ್ಬರು ಪುತ್ರಿಯರು, ಅಳಿಯಂದಿರು ಹಾಗೂ ಓರ್ವ ಪುತ್ರ, ಸೊಸೆ ಮೊಮ್ಮಕ್ಕಳನ್ನು ಹಾಗೂ ಬಂಧು ಮಿತ್ರರನ್ನು ಅಗಲಿದ್ದಾರೆ.

ಮೈಸೂರು ಮಿತ್ರ

ವರಕೋಡು ಬೀರೇಶ್ವರಸ್ವಾಮಿ ದೇವಾಲಯದ ಬಸವ ಸಾವು

ಇಂದು ಧಾರ್ಮಿಕ ಮೆರವಣಿಗೆ ಬಳಿಕ ಅಂತ್ಯಕ್ರಿಯೆ

ಮೈಸೂರು,ಮೇ.11(ಎಂಟಿವೈ)– ಮೈಸೂರು ತಾಲೂಕಿನ ವರಕೋಡು ಬೀರೇಶ್ವರಸ್ವಾಮಿ ದೇವಾಲಯದ ಬಸವ(20 ವರ್ಷ) ಸೋಮವಾರ ಸಂಜೆ ವಯೋಸಹಜ ಸಮಸ್ಯೆಯಿಂದ ಅಸುನೀಗಿದೆ.



ಮೈಸೂರು ತಾಲೂಕಿನ ವರಕೋಡು, ಮೂಡಲಹುಂಡಿ, ಬಡಗಲಹುಂಡಿ, ಕೆಂಪೇಗೌಡನಹುಂಡಿ, ಹೊಸಹುಂಡಿಗೆ ಸೇರಿದ ಗಡಿಗ್ರಾಮದ ಬೀರೇಶ್ವರ, ಬನ್ನಿಮಹಾಕಾಳೇಶ್ವರಿ ದೇಗುಲದ ಬಸವನಾಗಿ ಕಳೆದ 20 ವರ್ಷದಿಂದ ವಿವಿಧ ಧಾರ್ಮಿಕ ಕೈಂಕರ್ಯದಲ್ಲಿ ಪಾಲ್ಗೊಳ್ಳುತ್ತಿದ್ದ ಬಸವ ಕಳೆದ ಒಂದು ತಿಂಗಳಿಂದ ವಯೋ ಸಹಜ ಸಮಸ್ಯೆಗೆ ತುತ್ತಾಗಿತ್ತು. ಪಶುಸಂಗೋಪನಾ ಇಲಾಖೆಯ ಉಪನಿರ್ದೇಶಕ ಡಾ.ನಾಗರಾಜ್ ನೇತೃತ್ವದ ಪಶುವೈದ್ಯರ ತಂಡ ಚಿಕಿತ್ಸೆ ನೀಡಿತ್ತು. ಸ್ವಲ್ಪಮಟ್ಟಿಗೆ ಚೇತರಿಸಿಕೊಂಡಿದ್ದ ಬೀರೇಶ್ವರ ದೇಗುಲ ಬಸವ ಇಂದು ಸಂಜೆ ಅಸುನೀಗಿದೆ.

ನಾಳೆ(ಮೇ.12)ರಂದು ಐದು ಗ್ರಾಮಗಳಲ್ಲೂ ಬಸವನ ಪಾರ್ಥೀವ ಶರೀರವನ್ನು ಮೆರವಣಿಗೆ ನಡೆಸಿ, ಪೂಜೆ ಸಲ್ಲಿಸಲಾಗುತ್ತದೆ. ಬಳಿಕ ಮಧ್ಯಾಹ್ನ ವರಕೋಡು ಬೀರೇಶ್ವರಸ್ವಾಮಿ ದೇವಾಲಯದ ಮುಂಭಾಗದ ಆವರಣದಲ್ಲಿ ವಿಧಿ ವಿಧಾನದಂತೆ ಅಂತ್ಯಕ್ರಿಯೆ ನೆರವೇರಿಸಲಾಗುತ್ತದೆ.

ಮೈಸೂರಿನ ಮಣಿಪಾಲ್ ಆಸ್ಪತ್ರೆಯಲ್ಲಿ ರೋಬೋಟಿಕ್ ತಂತ್ರಜ್ಞಾನದಿಂದ ಯಶಸ್ವಿ ಭಾಗಶಃ ಮೊಣಕಾಲು ಕಸಿ ಶಸ್ತ್ರಚಿಕಿತ್ಸೆ

ಮೈಸೂರು, ಮೇ 11– ಮೈಸೂರಿನ ಮಣಿಪಾಲ್ ಆಸ್ಪತ್ರೆಯಲ್ಲಿ ಅತ್ಯಾಧುನಿಕ ರೋಬೋಟಿಕ್ ತಂತ್ರಜ್ಞಾನದ ಮೂಲಕ 73 ವರ್ಷದ ಉದ್ಯಮಿಯೊಬ್ಬರಿಗೆ ಭಾಗಶಃ ಮೊಣಕಾಲು ಕಸಿ ಶಸ್ತ್ರಚಿಕಿತ್ಸೆಯನ್ನು ಯಶಸ್ವಿಯಾಗಿ ನಡೆಸಲಾಗಿದೆ.

ಉದ್ಯಮಿ, ಕಳೆದ ಮೂರು ವರ್ಷಗಳಿಂದ ತೀವ್ರ ಮೊಣಕಾಲು ನೋವಿನಿಂದ ಬಳಲುತ್ತಿದ್ದರು. ಸಕ್ರಿಯ ಜೀವನಶೈಲಿ ಹೊಂದಿದ್ದ ಅವರಿಗೆ ಸ್ವಲ್ಪ ದೂರ ನಡೆಯುವುದೂ ದುಸ್ತರವಾಗಿತ್ತು. ಫಿಸಿಯೋಥೆರಪಿ ಮತ್ತು ಔಷಧಿಗಳು ತಾತ್ಕಾಲಿಕ ಪರಿಹಾರ ಪಡೆದಿದ್ದ ಅವರಿಗೆ ಯಾವ ರೀತಿಯ ಪ್ರಯತ್ನಗಳಿಂದಲೂ ನೋವು ಶಮನವಾಗಿರಲಿಲ್ಲ. ಇವರು ಮೈಸೂರಿನ ಮಣಿಪಾಲ್ ಆಸ್ಪತ್ರೆಗೆ ಭೇಟಿ ನೀಡಿದಾಗ ಜಾಯಿಂಟ್ ರಿಪ್ಲೇಸ್‌ಮೆಂಟ್ ಸರ್ಜನ್ ಡಾ.ಬೋಗಾದಿ ಪ್ರಶಾಂತ್ ತಪಾಸಣೆ ನಡೆಸಿದರು. ಆ ವೇಳೆ ಮೊಣಕಾಲಿನ ಒಳಭಾಗದಲ್ಲಿ ಮಾತ್ರ ಒಸ್ಟಿಯೊ ಆರ್ಥ್ರೈಟಿಸ್(ಜಂಟಿಗಳ ಮಧ್ಯದ ಅಸ್ಥಿರಜ್ಜಿನ ಸವೆತದಿಂದ ಉಂಟಾಗುವ ಮೊಣಕಾಲು ನೋವು) ಪತ್ತೆಯಾಯಿತು. ಹಾಗಾಗಿ ವೈದ್ಯರು, ಇಡೀ ಮೊಣಕಾಲು ಬದಲಿಸುವ ಬದಲು, ಹಾನಿಗೊಳಗಾದ ಭಾಗವನ್ನು ಮಾತ್ರ ಸರಿಪಡಿಸುವ 'ಪಾರ್ಶಿಯಲ್ ನೀ ರಿಪ್ಲೇಸ್‌ಮೆಂಟ್' ವಿಧಾನವನ್ನು ಆಯ್ಕೆ ಮಾಡಿಕೊಂಡರು. ಬಳಿಕ ಡಾ. ಬೋಗಾದಿ ಪ್ರಶಾಂತ್ ಮಾರ್ಗದರ್ಶನದಲ್ಲಿ ವೈದ್ಯಕೀಯ ತಂಡವು ಶಸ್ತ್ರಚಿಕಿತ್ಸೆಯನ್ನು ಯಶಸ್ವಿಯಾಗಿ ನಡೆಸಿತು.



ಮಣಿಪಾಲ್ ಆಸ್ಪತ್ರೆಯಲ್ಲಿ ರೋಬೋಟಿಕ್ ತಂತ್ರಜ್ಞಾನದ ಭಾಗಶಃ ಮೊಣಕಾಲು ಕಸಿ ಶಸ್ತ್ರಚಿಕಿತ್ಸೆಗೆ ಒಳಗಾಗಿ ಶೀಘ್ರ ಗುಣಮುಖರಾದ 73 ವರ್ಷದ ಉದ್ಯಮಿಯೊಂದಿಗೆ ವೈದ್ಯರ ತಂಡ.

ಮೈಸೂರಿನಲ್ಲಿ ರೋಬೋಟಿಕ್ ಪಾರ್ಶಿಯಲ್ ನೀ ರಿಪ್ಲೇಸ್ಮೆಂಟ್ ಶಸ್ತ್ರಚಿಕಿತ್ಸೆ ಪರಿಚಯಿಸಿರುವುದು ಅಸ್ಥಿ ಚಿಕಿತ್ಸಾ ಕ್ಷೇತ್ರಕ್ಕೆ ಅಪರೂಪ ಮತ್ತು ಮಹತ್ವದ ಕೊಡುಗೆಯಾಗಿದೆ. ನಿಖರತೆಯಿಂದ ಹಾನಿಗೊಳಗಾದ ಭಾಗವನ್ನು ಮಾತ್ರ ಗುರಿಯಾಗಿಸಿ ಶಸ್ತ್ರಚಿಕಿತ್ಸೆ ಮಾಡಿದ್ದರಿಂದ ರೋಗಿಯ ನೈಸರ್ಗಿಕ ಮೂಳೆ, ಅಸ್ಥಿರಜ್ಜುಗಳು ಮತ್ತು ಸಹಜ ನಡಿಗೆಯನ್ನು ಯಥಾವತ್ತಾಗಿ ಕಾಪಾಡಿಕೊಳ್ಳಲು ಸಾಧ್ಯವಾಯಿತು. ಈ ಸುಧಾರಿತ ತಂತ್ರಜ್ಞಾನದ ಫಲವಾಗಿ, ಶಸ್ತ್ರಚಿಕಿತ್ಸೆಯಾದ ಕೇವಲ ಆರು ಗಂಟೆಗಳಲ್ಲೇ ರೋಗಿಯು ನೋವಿಲ್ಲದೆ ನಡೆದರು. ಸಾಂಪ್ರದಾಯಿಕ ಶಸ್ತ್ರಚಿಕಿತ್ಸೆಗೆ ಹೋಲಿಸಿದರೆ ರೋಬೋಟಿಕ್ ಚಿಕಿತ್ಸಾ ವಿಧಾನದಲ್ಲಿ ಗಾಯಗಳು ಸಣ್ಣದಾಗಿರಲಿದ್ದು, ರಕ್ತಸ್ರಾವ ಕನಿಷ್ಠವಾಗಿರುತ್ತದೆ ಮತ್ತು ರೋಗಿಯು ಬಹುಬೇಗ ಗುಣಮುಖರಾಗುತ್ತಾರೆ ಎಂಬುದು ತಜ್ಞ ವೈದ್ಯರ ಅಭಿಪ್ರಾಯವಾಗಿದೆ.

ಈ ಯಶಸ್ವಿ ಶಸ್ತ್ರಚಿಕಿತ್ಸೆಯ ಕುರಿತು ಮಾತನಾಡಿದ ಡಾ.ಬೋಗಾದಿ ಪ್ರಶಾಂತ್, ಸಕ್ರಿಯ ಜೀವನ ಬಯಸುವ ಹಿರಿಯರಿಗೆ ಕೇವಲ ನೋವು ನಿವಾರಣೆ ಸಾಲದು, ಅವರು ಮೊದಲಿನಂತೆಯೇ ಆತ್ಮವಿಶ್ವಾಸದಿಂದ ಓಡಾಡುವಂತಾಗಬೇಕು. ರೋಬೋಟಿಕ್ ಪಾರ್ಶಿಯಲ್ ನೀ ರಿಪ್ಲೇಸ್ ಮೆಂಟ್ ತಂತ್ರಜ್ಞಾನವು ನೈಸರ್ಗಿಕ ಮೊಣಕಾಲಿನ ಚಲನಶೀಲತೆಯನ್ನು ಉಳಿಸಿಕೊಡುವುದರ ಜೊತೆಗೆ ದೀರ್ಘಕಾಲದವರೆಗೆ ಅತ್ಯುತ್ತಮ ಕಾರ್ಯಕ್ಷಮತೆ ನೀಡುತ್ತದೆ ಎಂದು ತಿಳಿಸಿದರು.

ಮೈಸೂರಿನ ಮಣಿಪಾಲ್ ಆಸ್ಪತ್ರೆಯ ನಿರ್ದೇಶಕ ಬಿ.ಜೆ.ಸಂದೀಪ್ ಪಟೇಲ್ ಮಾತನಾಡಿ, ಮೈಸೂರಿನ ಮಣಿಪಾಲ್ ಆಸ್ಪತ್ರೆಯಲ್ಲಿ ರೋಗಿಗಳ ಶೀಘ್ರ ಚೇತರಿಕೆ ಮತ್ತು ಉತ್ತಮ ಜೀವನಕ್ಕಾಗಿ ನಾವು ಬದ್ಧರಾಗಿದ್ದೇವೆ. ನಮ್ಮಲ್ಲಿರುವ ಸುಧಾರಿತ ರೋಬೋಟಿಕ್ ಮೂಳೆ ಶಸ್ತ್ರಚಿಕಿತ್ಸಾ ತಂತ್ರಜ್ಞಾನವು ರೋಗಿಗಳ ಸಹಜ ಜೀವನಕ್ಕಾಗಿ ನಿಖರವಾದ ಚಿಕಿತ್ಸೆ ತೋರಿಸುತ್ತದೆ. ಇದು ಅಸ್ಥಿ ಚಿಕಿತ್ಸಾ ಕ್ಷೇತ್ರದಲ್ಲಿ ಮೈಲಿಗಲ್ಲಾಗಿದ್ದು, ಮೈಸೂರಿನ ಜನತೆಗೆ ಉನ್ನತ ಮಟ್ಟದ ಸುಧಾರಿತ ಆರೋಗ್ಯ ಸೇವೆಯನ್ನು ಒದಗಿಸುವಲ್ಲಿ ಮಹತ್ವದ ಹೆಜ್ಜೆಯಾಗಿದೆ ಎಂದರು.

ಹುಟ್ಟು ಹಬ್ಬ ಆಚರಣೆ



ಬೋಗಾದಿ ಗ್ರಾಮ ಪಂಚಾಯಿತಿ ಮಾಜಿ ಸದಸ್ಯರಾದ ಸೊಸೈಟಿ ಆನಂದ್‌ರವರ ಹುಟ್ಟು ಹಬ್ಬವನ್ನು ದುರ್ಗಾ ಗ್ರೂಪ್ ಸ್ನೇಹಿತರು ಕೇಕ್ ಕಟ್ ಮಾಡುವುದರ ಮುಖಾಂತರ ಆಚರಣೆ ಮಾಡಿದರು. ಈ ಸಂದರ್ಭದಲ್ಲಿ ಮಾಜಿ ಗ್ರಾಮ ಪಂಚಾಯಿತಿ ಸದಸ್ಯರಾದ ಚಂದ್ರಶೇಖರ್, ಜೆಡಿಎಸ್ ಮುಖಂಡರಾದ ಸುರೇಶ್, ವಕೀಲರಾದ ಸಿದ್ದರಾಜು, ಕೇಬಲ್ ರವಿ, ನಾಗಣ್ಣ, ಹೊನ್ನೇಗೌಡ, ಸಂಬಣ್ಣ, ಶಿವು ಮಹೇಶ್, ಲೋಕೇಶ್, ಗುರು, ಶಶಿ, ವೆಂಕಟೇಶ್, ಲಾರಿ ನವೀನ, ಮುಂತಾದವರಿದ್ದರು

ಬೆಂಗಳೂರಲ್ಲಿ ಕೂಲಿ ಕಾರ್ಮಿಕರ ಶೆಡ್‌ಗೆ ಬೆಂಕಿ; ಇಬ್ಬರು ಮಕ್ಕಳು ಸಜೀವ ದಹನ

ಬೆಂಗಳೂರು, ಮೇ 11: ಸಿಲಿಕಾನ್ ಸಿಟಿ ಬೆಂಗಳೂರಿನಲ್ಲಿ ಇಂದು ಮಧ್ಯಾಹ್ನ ಭಾರೀ ದುರಂತವೊಂದು ಸಂಭವಿಸಿದೆ. ಕೊತ್ತನೂರು ಪೊಲೀಸ್ ಠಾಣಾ ವ್ಯಾಪ್ತಿಯ ನಾರಾಯಣಪುರದಲ್ಲಿ ವಾಸವಿದ್ದ ತಾತ್ಕಾಲಿಕ ಶೆಡ್‌ಗೆ ಆಕಸ್ಮಿಕವಾಗಿ ಬೆಂಕಿ ಹೊತ್ತಿಕೊಂಡ ಪರಿಣಾಮ, ಇಬ್ಬರು ಪುಟ್ಟ ಮಕ್ಕಳು ಸಜೀವ ದಹನವಾಗಿದ್ದಾರೆ.

ಮಕ್ಕಳ ದಾರುಣ ಅಂತ್ಯ: ಈ ಭೀಕರ ಅಗ್ನಿ ಅವಘಡದಲ್ಲಿ ಐದು ವರ್ಷದ ಅರ್ಜುನ್ ಮತ್ತು ಮೂರು ವರ್ಷದ ಆಶಾ ಎಂಬ ಇಬ್ಬರು ಮಕ್ಕಳು ಮೃತಪಟ್ಟಿದ್ದಾರೆ. ಮೂಲತಃ ರಾಯಚೂರು ಜಿಲ್ಲೆಯವರಾದ ಈ ಮಕ್ಕಳು, ಪೋಷಕರೊಂದಿಗೆ ಬದುಕು ಕಟ್ಟಿಕೊಳ್ಳಲು ಬೆಂಗಳೂರಿಗೆ ಬಂದಿದ್ದರು. ಇಂದು ಮಧ್ಯಾಹ್ನ ಸುಮಾರು 1.30ರ ಹೊತ್ತಿಗೆ ಈ ಅವಘಡ ಸಂಭವಿಸಿದ್ದು, ಒಂದು ಮಗು ಸ್ಥಳದಲ್ಲೇ ಸುಟ್ಟು ಕರಕಲಾಗಿದ್ದರೆ, ಮತ್ತೊಂದು ಮಗು ಆಸ್ಪತ್ರೆಗೆ ಸಾಗಿಸುವ ಮಾರ್ಗಮಧ್ಯೆ ಪ್ರಾಣ ಬಿಟ್ಟಿದೆ.



ಪೊಲೀಸ್ ತಪಾಸಣೆ ಮತ್ತು ಶಾರ್ಟ್ ಸರ್ಕ್ಯೂಟ್ ಶಂಕೆ: ಸ್ಥಳಕ್ಕೆ ಕೊತ್ತನೂರು ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಪ್ರಾಥಮಿಕ ತನಿಖೆಯ ಪ್ರಕಾರ, ಶೆಡ್‌ನಲ್ಲಿ ಉಂಟಾದ ವಿದ್ಯುತ್ ಶಾರ್ಟ್ ಸರ್ಕ್ಯೂಟ್‌ನಿಂದಾಗಿ ಬೆಂಕಿ ಹೊತ್ತಿಕೊಂಡಿರಬಹುದು ಎಂದು ಶಂಕಿಸಲಾಗಿದೆ. ಬಡ ಕೂಲಿ ಕಾರ್ಮಿಕರ ಕನಸುಗಳು ಬೆಂಕಿಯಲ್ಲಿ ಬೂದಿಯಾಗಿದ್ದು, ರಾಯಚೂರಿನ ದಂಪತಿಯ ಆಕ್ರಂದನ ಮುಗಿಲು ಮುಟ್ಟಿದೆ. ಸದ್ಯ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದು, ಹೆಚ್ಚಿನ ತನಿಖೆ ಕೈಗೊಂಡಿದ್ದಾರೆ.

ಬ್ಯಾಡರ ಬಿಳಗೂಲಿ ಗ್ರಾಮದ ಹಾಲು ಉತ್ಪಾದಕರ ಸಂಘದ ಅಧ್ಯಕ್ಷ–ಉಪಾಧ್ಯಕ್ಷರ ಫಲಿತಾಂಶಕ್ಕೆ ಆಗ್ರಹಿಸಿ ಪ್ರತಿಭಟನೆ

ಮೈಸೂರು, ಮೇ 11(ಎಂಟಿವೈ)– ಪಿರಿಯಾಪಟ್ಟಣ ತಾಲೂಕು ಬ್ಯಾಡರ ಬಿಳಗೂಲಿ ಗ್ರಾಮದ ಹಾಲು ಉತ್ಪಾದಕರ ಸಂಘದ ಅಧ್ಯಕ್ಷ –ಉಪಾಧ್ಯಕ್ಷ ಸ್ಥಾನದ ಚುನಾವಣೆಯ ಫಲಿತಾಂಶ ಘೋಷಿಸದೆ ನಿರ್ಲಕ್ಷ್ಯ ವಹಿಸಲಾಗುತ್ತಿದೆ ಎಂದು ಆರೋಪಿಸಿ ರೈತ ಸಂಘಟನೆ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ಮೈಸೂರಿನ ಕಾಡ ಕಚೇರಿ ಬಳಿ ಸೋಮವಾರ ಮಧ್ಯಾಹ್ನ ಕರ್ನಾಟಕ ರಾಜ್ಯ ರೈತ ಸಂಘ ಮತ್ತು ಹಸಿರು ಸೇನೆ ವಾಸುದೇವ ಮೇಟಿ ಬಣದ ಸದಸ್ಯರು ಪ್ರತಿಭಟನೆ ನಡೆಸಿ, ಬ್ಯಾಡರ ಬಿಳಗೂಲಿ ಗ್ರಾಮದ ಹಾಲು ಉತ್ಪಾದಕರ ಸಂಘದ ಅಧ್ಯಕ್ಷ –ಉಪಾಧ್ಯಕ್ಷ ಸ್ಥಾನದ ಚುನಾವಣೆಯ ಫಲಿತಾಂಶ ಘೋಷಿಸಬೇಕು ಎಂದು ಆಗ್ರಹಿಸಿದರು.

ಬ್ಯಾಡರ ಬಿಳಗುಲಿ ಹಾಲು ಉತ್ಪಾದಕರ ಸಂಘದ ನಿರ್ದೇಶಕರ ಚುನಾವಣೆ ನಾಲ್ಕು ತಿಂಗಳ ಹಿಂದೆ ನಡೆದಿದೆ ಎರಡು ತಿಂಗಳ ಹಿಂದೆ ನಡೆದ ಅಧ್ಯಕ್ಷ, ಉಪಾಧ್ಯಕ್ಷ ಸ್ಥಾನದ ಚುನಾವಣೆಯಲ್ಲಿ 10 ನಿರ್ದೇಶಕರಲ್ಲಿ 6 ನಿರ್ದೇಶಕರು ಒಬ್ಬರನ್ನೇ ಆಯ್ಕೆ ಮಾಡಿದ್ದಾರೆ. ಆದರೆ ಚುನಾವಣಾಧಿಕಾರಿ ಈ ಬಗ್ಗೆ ಅಧಿಕೃತ ಘೋಷಣೆ ಹೊರಡಿಸುತ್ತಿಲ್ಲ. ಈಗ ಬಾಡಿ ಮಜಾ ಮಾಡಲಾಗಿದೆ ಎನ್ನುತ್ತಿದ್ದಾರೆ. ಸಂಘದಲ್ಲಿ ಆಡಳಿತ ಮಂಡಳಿ ಅಸ್ತಿತ್ವದಲ್ಲಿ ಇಲ್ಲದಿರುವುದರಿಂದ ಹಾಲು ಉತ್ಪಾದಕರಿಗೆ ತೊಂದರೆಗಳಾಗುತ್ತಿವೆ. ಕೂಡಲೇ ಸಂಬಂಧ ಪಟ್ಟ ಅಧಿಕಾರಿಗಳು ಈ ಬಗ್ಗೆ ವಿಚಾರಣೆ ನಡೆಸಿ, ಫಲಿತಾಂಶ ಘೋಷಿಸಬೇಕು ಎಂದು ಆಗ್ರಹಿಸಿದರು.



ಪಿರಿಯಾಪಟ್ಟಣ ತಾಲೂಕು ಬ್ಯಾಡರ ಬಿಳಗೂಲಿ ಗ್ರಾಮದ ಹಾಲು ಉತ್ಪಾದಕರ ಸಂಘದ ಅಧ್ಯಕ್ಷ –ಉಪಾಧ್ಯಕ್ಷ ಸ್ಥಾನದ ಚುನಾವಣೆಯ ಫಲಿತಾಂಶ ಘೋಷಿಸುವಂತೆ ಆಗ್ರಹಿಸಿ ರೈತರು ಮೈಸೂರಿನ ಕಾಡಾ ಕಚೇರಿ ಬಳಿ ಪ್ರತಿಭಟಿಸಿದರು.

ಪ್ರತಿಭಟನೆಯಲ್ಲಿ ಸಂಘಟನೆಯ ರಾಜ್ಯಾಧ್ಯಕ್ಷ ಲೋಕೇಶ್ ಜಿ., ಜಿಲ್ಲಾಧ್ಯಕ್ಷ ಲೋಕೇಶ್ ಗೌಡ ಜಿ., ರಾಜ್ಯ ಮಾಧ್ಯಮ ಕಾರ್ಯದರ್ಶಿ ಮೋಹನ್ ರಾಜ್, ತಾಲೂಕು ಅಧ್ಯಕ್ಷ ನಟರಾಜ್, ಜಯಣ್ಣ, ಮನು, ಜಗದೀಶ್, ರಾಮಸ್ವಾಮಿ, ಶೈಲಾ, ಬಸವರಾಜ್, ರುದ್ರೇಗೌಡ ಹಾಗೂ ಇನ್ನಿತರರು ಪಾಲ್ಗೊಂಡಿದ್ದರು.

ಅಭಿನಂದನೆ



ಹುಣಸೂರು ತಾಲೂಕು ಹಳೇಬಿಡು ಗ್ರಾಮದ ಪ್ರೀಮಿಯರ್ ಲೀಗ್ ಟೆನ್ನಿಸ್ ಬಾಲ್ ಕ್ರಿಕೆಟ್ ಪಂದ್ಯಾವಳಿಯನ್ನು ಶ್ರೀ ಮನೆ ಮಂಚಮ್ಮ ದೇವಸ್ಥಾನ ಸೇವಾ ಟ್ರಸ್ಟ್ ಅಧ್ಯಕ್ಷರಾದ ಹುಯಿಲಾಳು ರಾಮಸ್ವಾಮಿ ಉದ್ಘಾಟಿಸಿದ ಸಂದರ್ಭ ಅವರನ್ನು ಕ್ಯಾಪ್ಟನ್ ಹಳೇಬಿಡು ರಘು, ಚಂದು ಸಾಹೇಬ್, ಕಲಾವಿದರಾದ ಬಸವರಾಜು ಅಭಿನಂದಿಸಿದರು. ಈ ವೇಳೆ ಮಂಜುನಾಥ್ ಪ್ರಸಾದ್, ಬಿಳಿಕೆರೆ ಬಸವರಾಜು ಇನ್ನಿತರರು ಉಪಸ್ಥಿತರಿದ್ದರು

ವಿಷಮುಕ್ತ ಕೃಷಿಯಿಂದ ಬದುಕು ಹಸನು

ರಾಸಾಯನಿಕ ತ್ಯಜಿಸಿ, ಸಾವಯವ ಕೃಷಿಗೆ ಭೂಮಿಪುತ್ರ ಚಂದನ್‌ಗೌಡ ಮನವಿ



ಹುಣಸೂರು ತಾಲೂಕು ಹಳ್ಳಿಕೆರೆ ಗ್ರಾಮದಲ್ಲಿ 'ಮಣ್ಣಿಗೆ ಮರು ಜೀವ ಹಾಗೂ ಸಾಂಪ್ರದಾಯಿಕ ಕೃಷಿಗೆ ಚಾಲನೆ' ಅಭಿಯಾನವನ್ನು ಕರ್ನಾಟಕ ರಾಜ್ಯ ರೈತ ಕಲ್ಯಾಣ ಸಂಘದ ರಾಜ್ಯಾಧ್ಯಕ್ಷ ಭೂಮಿಪುತ್ರ ಸಿ.ಚಂದನ್ ಗೌಡ ಉದ್ಘಾಟಿಸಿ, ಮಾತನಾಡಿದರು.

ಹುಣಸೂರು, ಮೇ 11– ವಿಷಮುಕ್ತ ಕೃಷಿಯಿಂದ ಖುಷಿಯ ಬದುಕು ಸಾಧ್ಯ. ಈ ನಿಟ್ಟಿನಲ್ಲಿ ರೈತ ಬಂಧುಗಳು ಇನ್ನಾದರೂ ಅಮೃತ ಸಮಾನ ಸಾಂಪ್ರದಾಯಿಕ ಕೃಷಿ ಪದ್ಧತಿ ಅನುಸರಿಸಬೇಕು ಎಂದು ಕರ್ನಾಟಕ ರಾಜ್ಯ ರೈತ ಕಲ್ಯಾಣ ಸಂಘದ ರಾಜ್ಯಾಧ್ಯಕ್ಷ ಭೂಮಿಪುತ್ರ ಸಿ.ಚಂದನ್ ಗೌಡ ಮನವಿ ಮಾಡಿದರು.

ಹುಣಸೂರು ತಾಲೂಕಿನ ಹಳ್ಳಿಕೆರೆ ಗ್ರಾಮದಲ್ಲಿ ಸೋಮವಾರ ಸಂಘದ ವತಿಯಿಂದ ನಡೆದ 'ಮಣ್ಣಿಗೆ ಮರು ಜೀವ ಹಾಗೂ ಸಾಂಪ್ರದಾಯಿಕ ಕೃಷಿಗೆ ಚಾಲನೆ' ಅಭಿಯಾನವನ್ನು ಉದ್ಘಾಟಿಸಿ ಮಾತನಾಡಿದ ಅವರು, ಇಂದಿನಿಂದಲೇ ವಿಷಮುಕ್ತ ಕೃಷಿ ಮಾಡುವುದಾಗಿ ರೈತರು ಸಂಕಲ್ಪ ಮಾಡಬೇಕು ಎಂದು ಕೋರಿದರು.

ರಾಸಾಯನಿಕಯುಕ್ತ ಕೃಷಿಯಿಂದ ತಿನ್ನುವ ತಟ್ಟೆ ವಿಷವಾಗಿದೆ. ನೀವು ಯಾವುದೇ ಕೃಷಿ ಮಾಡಿದರೂ ಅದು ಸಂಪೂರ್ಣ ವಿಷಮುಕ್ತವಾಗಿರಬೇಕು. ಮಣ್ಣಿಗೆ ರಾಸಾಯನಿಕ ಹಾಕುವುದನ್ನು ಸ್ಥಗಿತಗೊಳಿಸಬೇಕು. ಪೂರ್ವಜರ ಮಾದರಿಯ ಸಾಂಪ್ರದಾಯಿಕ ಕೃಷಿ ಪದ್ಧತಿಯನ್ನು ಅಳವಡಿಸಿಕೊಳ್ಳಬೇಕು. ಮಣ್ಣಿನ ಆರೋಗ್ಯದ ಜೊತೆಗೆ ಕೋಟ್ಯಾಂತರ ಜನರ ಜೀವ ರಕ್ಷಿಸುವ ಸಂಕಲ್ಪ ಮಾಡಬೇಕು. ಈ ಮಹತ್ವದ ಬದಲಾವಣೆ ಹಳ್ಳಿಕೆರೆ ಗ್ರಾಮದ ರೈತಬಾಂಧವರಿಂದಲೇ ಪ್ರಾರಂಭವಾಗಬೇಕು. ಪ್ರಕೃತಿ ವಿರುದ್ಧವೇ ಯುದ್ಧ ನಡೆಸುವ ಕೃಷಿ ತ್ಯಜಿಸಿ, ಪ್ರಕೃತಿಯೊಂದಿಗೆ ಬೆರೆತು ಒಕ್ಕಲುತನ ಮಾಡುವ ಸಾಂಪ್ರದಾಯಿಕ ಕೃಷಿ ಅನುಸರಿಸುವ ಮೂಲಕ ನಿಜವಾದ ಮಣ್ಣಿನ ಮಕ್ಕಳಾಗಬೇಕು ಎಂದರು.

ಇತ್ತೀಚಿನ ದಿನಗಳಲ್ಲಿ ಮನುಕುಲವನ್ನು ಹಲವಾರು ರೋಗಗಳು ಬಾಧಿಸುತ್ತಿವೆ. ಭಾರತ ಕ್ಯಾನ್ಸರ್‌ನ ರಾಜಧಾನಿಯಾಗುತ್ತಿದೆ. ಇದಕ್ಕೆ ರಾಸಾಯನಿಕಯುಕ್ತ ಆಹಾರ ಉತ್ಪನ್ನಗಳ ಸೇವನೆಯೂ ಪ್ರಮುಖ ಕಾರಣ. ಕೀಟನಾಶಕ, ಕಳೆ ನಾಶಕಗಳ ಬಳಕೆಯಿಂದ ದೇಶದ ಜನ ಕ್ಯಾನ್ಸರ್ ಮಾರಕ ರೋಗಕ್ಕೆ ಬಲಿಯಾಗುತ್ತಿದ್ದಾರೆ. ಆದ್ದರಿಂದ ಸರ್ಕಾರ ಕೂಡಲೇ ಎಚ್ಚೆತ್ತುಕೊಂಡು ರಾಸಾಯನಿಕ ಕೃಷಿಗೆ ಸಂಪೂರ್ಣ ಕಡಿವಾಣ ಹಾಕಬೇಕು ಎಂದು ಅಗ್ರಹಿಸಿದರು.

ರಾಸಾಯನಿಕ ಬಳಕೆ ನಿಲ್ಲಿಸುವುದರಿಂದ ಭೂಮಿ ಬರಡಾಗುವುದನ್ನು ತಪ್ಪಿಸಿ, ಮಣ್ಣಿನ ಫಲವತ್ತತೆಯನ್ನು ದೀರ್ಘಕಾಲದವರೆಗೆ ಉಳಿಸಿಕೊಳ್ಳಬಹುದು. ಸಾವಯವ ಕೃಷಿಯು ನಿಸರ್ಗ ಸ್ನೇಹಿಯಾಗಿದ್ದು, ಪರಿಸರವನ್ನು ಮಾಲಿನ್ಯದಿಂದ ರಕ್ಷಿಸುತ್ತದೆ. ಎರೆಹುಳು ಗೊಬ್ಬರ, ಗೋಮೂತ್ರ, ಬೇವಿನ ಹಿಂಡಿಯಂತಹ ಸ್ಥಳೀಯ ಸಂಪನ್ಮೂಲಗಳ ಬಳಕೆಯಿಂದ ಕೃಷಿ ವೆಚ್ಚವೂ ಕಡಿಮೆಯಾಗುತ್ತದೆ. ವಿಷಮುಕ್ತ ಆಹಾರ ರೋಗಮುಕ್ತ ಮತ್ತು ಸುಖೀ ಜೀವನಕ್ಕೆ ಸಹಕಾರಿಯಾಗುತ್ತದೆ. ಈ ಮೂಲಕ ಸಮಾಜದಲ್ಲಿ ನಿಜವಾಗಿ ಖುಷಿ ನೆಲೆಸುತ್ತದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ರೈತ ಕಲ್ಯಾಣ ಸಂಘದ ರಾಜ್ಯ, ಜಿಲ್ಲಾ, ತಾಲೂಕು ಮಟ್ಟದ ಪದಾಧಿಕಾರಿಗಳು, ಗ್ರಾಮದ ಮುಖಂಡರು, ಯಜಮಾನರು ಸೇರಿದಂತೆ ರೈತ ಬಾಂಧವರು ಉಪಸ್ಥಿತರಿದ್ದರು.

ಮೈಸೂರು ಸೈಕಲ್ ದಿನದಲ್ಲಿ ಪರಿಸರ ಪ್ರೇಮಿಗಳ ಸಂದೇಶ



ಮೈಸೂರಿನ ಸರಸ್ವತಿಪುರಂನಲ್ಲಿ ಮೈಸೂರು ಮಹಾನಗರ ಪಾಲಿಕೆ ವತಿಯಿಂದ ಆಯೋಜಿಸಿದ್ದ ಸೈಕಲ್ ಡೇ ನಲ್ಲಿ ಪಾಲ್ಗೊಂಡ ಮಕ್ಕಳು ಹಾಗೂ ಸಾರ್ವಜನಿಕರಿಗೆ ಸ್ಮರಣಿಕೆ ವಿತರಿಸಲಾಯಿತು.


ಮೈಸೂರು,ಮೇ 11(ಎಂಟಿವೈ)– ವಾಯು ಮಾಲಿನ್ಯ ತಡೆಗಟ್ಟುವುದರೊಂದಿಗೆ ಸೈಕಲ್ ಸವಾರಿ ಉತ್ತೇಜಿಸುವ ನಿಟ್ಟಿನಲ್ಲಿ ಮೈಸೂರು ಮಹಾನಗರ ಪಾಲಿಕೆ ಆಯೋಜಿಸಿದ್ದ 4ನೇ ಆವೃತ್ತಿಯ 'ಮೈಸೂರು ಸೈಕಲ್ ದಿನ'ದಲ್ಲಿ ಹಲವು ಮಂದಿ ಪಾಲ್ಗೊಂಡು ಗಮನ ಸೆಳೆದರು.

ಮೈಸೂರಿನ ಸರಸ್ವತಿಪುರಂ ಬೇಕಿಂಗ್ ಪಾಯಿಂಟ್ ಸರ್ಕಲ್ ವೃತ್ತದಲ್ಲಿ ಜಿಐಜೆಡ್ ಮತ್ತು ಇಎಸ್‌ಎಎಫ್ ಸಹಯೋಗದಲ್ಲಿ ಆಯೋಜಿಸಲಾಗಿದ್ದ ಈ ಕಾರ್ಯಕ್ರಮದಲ್ಲಿ ವಿವಿಧ ವಯೋಮಾನದ ಪರಿಸರ ಪ್ರೇಮಿಗಳು ಪಾಲ್ಗೊಂಡು ಸೈಕಲ್ ರ್‍ಯಾಲಿಯಲ್ಲಿ ಪಾಲ್ಗೊಂಡರು. ಸೈಕಲ್ ಡೇ ಅಂಗವಾಗಿ 5 ಕಿ.ಮಿ ಸೈಕಲ್ ರ್‍ಯಾಲಿ ನಡೆಸಲಾಯಿತು. ನಂತರ ನಡೆದ 'ಓಪನ್ ಸ್ಟ್ರೀಟ್' ಚಟುವಟಿಕೆ ಹಾಗೂ ಸಾಂಪ್ರದಾಯಿಕ ಆಟೋಟ ಸ್ಪರ್ಧೆಯನ್ನು ನಡೆಸಲಾಯಿತು. ಸಾರ್ವಜನಿಕರು, ಮೈಸೂರು ನಗರ ಪೊಲೀಸ್, ಸಂಚಾರಿ ಪೊಲೀಸ್, ಎನ್‌ಸಿಸಿ ಕೆಡೆಟ್‌ಗಳು, ಪ್ರಮುಖ ಶಿಕ್ಷಣ ಸಂಸ್ಥೆಗಳು ಹಾಗೂ ವಿವಿಧ ಸರ್ಕಾರಿ ಇಲಾಖೆಗಳ ಸಮನ್ವಯ ದೊಂದಿಗೆ ಈ ಕಾರ್ಯಕ್ರಮವು ಯಶಸ್ವಿಯಾಗಿ ನೆರವೇರಿತು.

ದೇಶ - ವಿದೇಶ

ಅಮೆರಿಕ ತಿರಸ್ಕರಿಸಿದ ಶಾಂತಿ ಪ್ರಸ್ತಾವನೆಯನ್ನು ಸಮರ್ಥಿಸಿಕೊಂಡ ಇರಾನ್

ಟೆಹ್ರಾನ್: ಅಮೆರಿಕದೊಂದಿಗಿನ ಸಂಘರ್ಷವನ್ನು ಕೊನೆಗೊಳಿಸಲು ಮತ್ತು ಹೊರ್ಮುಜ್ ಜಲಸಂಧಿಯನ್ನು ಮುಕ್ತಗೊಳಿಸಲು ಇರಾನ್ ನೀಡಿರುವ ಪ್ರಸ್ತಾವನೆಯು ನ್ಯಾಯಬದ್ಧ ಮತ್ತು ಉದಾರವಾದುದು ಎಂದು ಇರಾನ್ ಸೋಮವಾರ ಪ್ರತಿಪಾದಿಸಿದೆ.



ಇರಾನ್ ವಿದೇಶಾಂಗ ಸಚಿವಾಲಯದ ವಕ್ತಾರ ಇಸ್ಮಾಯಿಲ್ ಬಘಾಯ್ ಅವರು ತಮ್ಮ ಬೇಡಿಕೆಗಳನ್ನು ಮಾಧ್ಯಮಗಳ ಮುಂದೆ ವಿವರಿಸಿದ್ದಾರೆ.

ಅಮೆರಿಕ–ಇರಾನ್ ನಡುವೆ ನಡೆಯುತ್ತಿರುವ ಯುದ್ಧವನ್ನು ತಕ್ಷಣವೇ ನಿಲ್ಲಿಸುವುದು. ಅಮೆರಿಕ ಹೇರಿರುವ ಆರ್ಥಿಕ ದಿಗ್ಬಂಧನಗಳನ್ನು ಹಿಂಪಡೆಯುವುದು. ಅಕ್ರಮವಾಗಿ ಮುಟ್ಟುಗೋಲು ಹಾಕಿಕೊಂಡಿರುವ ಇರಾನ್‌ನ ಆಸ್ತಿಗಳನ್ನು ಬಿಡುಗಡೆ ಮಾಡುವುದು. ಹೊರ್ಮುಜ್ ಜಲಸಂಧಿಯಲ್ಲಿ ಹಡಗುಗಳ ಸುರಕ್ಷಿತ ಸಂಚಾರಕ್ಕೆ ಅವಕಾಶ ನೀಡುವುದು. ಲೆಬನಾನ್ ಸೇರಿದಂತೆ ಇಡೀ ಪ್ರದೇಶದಲ್ಲಿ ಶಾಂತಿ ಸ್ಥಾಪಿಸುವುದು ಶಾಂತಿ ಪ್ರಸ್ತಾವನೆಯ ಅಂಶಗಳು ಎಂದು ಬಘಾಯ್ ವಿವರಿಸಿದ್ದಾರೆ.

ಇರಾನ್‌ನ ಈ ಪ್ರಸ್ತಾವನೆಯನ್ನು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ತಳ್ಳಿಹಾಕಿದ್ದಾರೆ. ಇರಾನ್‌ನ ಪ್ರತಿಕ್ರಿಯೆಯನ್ನು ಸಂಪೂರ್ಣವಾಗಿ ಸ್ವೀಕಾರಾರ್ಹವಲ್ಲ ಎಂದಿರುವ ಅವರು, ಈ ಕುರಿತು ಸಾಮಾಜಿಕ ಮಾಧ್ಯಮ 'ಟ್ರೂತ್ ಸೋಷಿಯಲ್'ನಲ್ಲಿ ಬರೆದುಕೊಂಡಿದ್ದಾರೆ

ಮನೆಯಲ್ಲಿರಬೇಕಾದ ಹೆಣ್ಣು ಮಕ್ಕಳಿಗೆ ಶಿಕ್ಷಣದ ಅಗತ್ಯವೇನಿದೆ?

ಬಿಹಾರ ಶಿಕ್ಷಣ ಸಚಿವ ಮಿಥಿಲೇಶ್ ವಿವಾದಾತ್ಮಕ ಹೇಳಿಕೆ


ಪಾಟ್ನಾ: ಒಂದು ಕಡೆ ಪ್ರಧಾನಿ ನರೇಂದ್ರ ಮೋದಿ ಅವರು ಮಹಿಳೆಯರ ಹಕ್ಕುಗಳಿಗಾಗಿ ನಾರಿ ವಂದನ್‌ಗೆ ಕಟಿಬದ್ಧರಾಗಿರುವುದಾಗಿ ಹೇಳುತ್ತಿದ್ದಾರೆ. ಮತ್ತೊಂದು ಕಡೆ ಬಿಹಾರದ ನೂತನ ಶಿಕ್ಷಣ ಸಚಿವ ಮಿಥಿಲೇಶ್ ತಿವಾರಿ ಅವರು ಹೆಣ್ಣು ಮಕ್ಕಳಿಗೆ ಶಿಕ್ಷಣದ ಅಗತ್ಯವೇನಿದೆ ಎಂದು ಪ್ರಶ್ನಿಸಿದ್ದಾರೆ.



ಬಿಹಾರ ಶಿಕ್ಷಣ ಸಚಿವ ಮಿಥಿಲೇಶ್ ತಿವಾರಿ ಅವರು ಹೆಣ್ಣು ಮಕ್ಕಳ ಶಿಕ್ಷಣದ ಬಗ್ಗೆ ನೀಡಿದ ಹೇಳಿಕೆ ವಿರುದ್ಧ ಇದೀಗ ಇಂಟರ್ನೆಟ್ ನಲ್ಲಿ ತೀವ್ರ ಆಕ್ರೋಶ ವ್ಯಕ್ತವಾಗುತ್ತಿದೆ. ಸಾರ್ವಜನಿಕ ಸಂವಾದದ ಸಂದರ್ಭದಲ್ಲಿ ವರದಿಗಾರರೊಂದಿಗೆ ಮಾತನಾಡಿದ ತಿವಾರಿ, ಹೆಣ್ಣುಮಕ್ಕಳಿಗೆ ಶಿಕ್ಷಣದ ಅಗತ್ಯವೇನಿದೆ ಎಂದು ಪ್ರಶ್ನಿಸಿದ್ದು, ಪ್ರತಿಭಟನೆ ಅಥವಾ ಸಾರ್ವಜನಿಕ ಕಾರ್ಯಕ್ರಮಗಳಿಗೆ ಹೋಗುವ ಬದಲು ಹೆಣ್ಣುಮಕ್ಕಳು ಮನೆಯೊಳಗೆ ಇರಬೇಕು ಎಂದು ಹೇಳಿದ ವಿಡಿಯೋ ಕ್ಲಿಪ್ ಇದೀಗ ವೈರಲ್ ಆಗಿದ್ದು, ಮಹಿಳೆಯರ ಆಕ್ರೋಶಕ್ಕೆ ಕಾರಣವಾಗಿದೆ.

ಭೀಕರ ಅಪಘಾತ: ತೆಲುಗು ಯುವ ನಟ ಭರತ್ ಕಾಂತ್ ಸಾವು

ತೆಲಂಗಾಣ: ತೆಲಂಗಾಣದ ಹೈದರಾಬಾದ್‌ನ ಆದಿಬಟ್ಲಾ ಪೊಲೀಸ್ ಠಾಣೆ ವ್ಯಾಪ್ತಿಯ ಹೊರ ವರ್ತುಲ ರಸ್ತೆಯ ನಿರ್ಗಮನ ಸಂಖ್ಯೆ 12ರ ಬಳಿ ನಡೆದ ರಸ್ತೆ ಅಪಘಾತದಲ್ಲಿ ತೆಲುಗು ನಟ ಭರತ್ ಕಾಂತ್ ಮತ್ತು ಮತ್ತೊಬ್ಬ ವ್ಯಕ್ತಿ ಸಾವಿಗೀಡಾಗಿದ್ದಾರೆ.



ತಡರಾತ್ರಿ ಅಪಘಾತ ಸಂಭವಿಸಿದೆ. ಅಧಿಕಾರಿಗಳು ಪ್ರಕರಣ ದಾಖಲಿಸಿಕೊಂಡು ಶವಗಳನ್ನು ಮರಣೋತ್ತರ ಪರೀಕ್ಷೆಗೆ ಕಳುಹಿಸಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ಆದಿಬಟ್ಲಾ ಪೊಲೀಸರ ಪ್ರಕಾರ, 'ನಿನ್ನೆ ರಾತ್ರಿ ಔಟರ್ ರಿಂಗ್ ರೋಡ್‌ನ ನಿರ್ಗಮನ ಸಂಖ್ಯೆ 12ರಲ್ಲಿ ಭರತ್ ಕಾಂತ್ ಅವರಿದ್ದ ಕಾರು ಟ್ರಕ್‌ಗೆ ಡಿಕ್ಕಿ ಹೊಡೆದಿದೆ. ನಾವು ಪ್ರಕರಣ ದಾಖಲಿಸಿದ್ದೇವೆ. ಶವಗಳನ್ನು ಮರಣೋತ್ತರ ಪರೀಕ್ಷೆಗೆ ಸ್ಥಳಾಂತರಿಸಿದ್ದೇವೆ ಮತ್ತು ಈ ವಿಷಯದ ಬಗ್ಗೆ ತನಿಖೆ ನಡೆಸುತ್ತಿದ್ದೇವೆ' ಎಂದು ತಿಳಿಸಿದ್ದಾರೆ.

ಮೃತಪಟ್ಟಿರುವ ಎರಡನೇ ವ್ಯಕ್ತಿಯ ಗುರುತನ್ನು ಇನ್ನೂ ಅಧಿಕೃತವಾಗಿ ಬಹಿರಂಗಪಡಿಸಲಾಗಿಲ್ಲ.

ಭರತ್ ಕಾಂತ್ 2021ರಲ್ಲಿ ತೆರೆಕಂಡ 'ಗ್ರಾಮಮ್' ಮತ್ತು 2024ರಲ್ಲಿ ತೆರೆಕಂಡ ಟೆನೆಂಟ್ ಚಿತ್ರಗಳಲ್ಲಿ ನಟಿಸಿದ್ದರು. ಮತ್ತು ಹೆಚ್ಚು ಜನಪ್ರಿಯತೆ ಗಳಿಸಿದ್ದರು. ಅವರು ಗೀತಾಂಜಲಿ ಮತ್ತು ಪಾರ್ವತಿ ಪರಮೇಶ್ವರಾಲು ಮುಂತಾದ ವೆಬ್ ಸರಣಿಗಳಲ್ಲಿಯೂ ಕಾಣಿಸಿಕೊಂಡಿದ್ದರು.

ಸುವೇಂದು ಆಪ್ತನ ಕೊಲೆ ಪ್ರಕರಣ ಯುಪಿಐ ಪಾವತಿಯಿಂದ ಮಹತ್ವದ ಸುಳಿವು; ಮೂವರ ಬಂಧನ

ಕೋಲ್ಕತ್ತಾ: ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಸುವೇಂದು ಅಧಿಕಾರಿ ಅವರ ಆಪ್ತ ಸಹಾಯಕ ಚಂದ್ರನಾಥ್ ರಥ್ ಅವರ ಹತ್ಯೆಗೆ ಸಂಬಂಧಿಸಿದಂತೆ ಉತ್ತರ ಪ್ರದೇಶದಿಂದ ಮೂವರನ್ನು ಬಂಧಿಸಲಾಗಿದೆ ಎಂದು ಪೊಲೀಸರು ಸೋಮವಾರ ತಿಳಿಸಿದ್ದಾರೆ.

ಮೇ 6 ರ ರಾತ್ರಿ ಉತ್ತರ 24 ಪರಗಣ ಜಿಲ್ಲೆಯ ಮಧ್ಯಮಗ್ರಾಮ್‌ನಲ್ಲಿ ನಡೆದ ಭೀಕರ ಹತ್ಯೆಯ ತನಿಖೆ ನಡೆಸುತ್ತಿರುವ ವಿಶೇಷ ತನಿಖಾ ತಂಡ(ಎಸ್‌ಐಟಿ) ಮೂವರು ಹಂತಕರನ್ನು ಬಂಧಿಸಿದೆ.


ಪೊಲೀಸರ ಪ್ರಕಾರ, ತನಿಖಾಧಿಕಾರಿಗಳು ಡಿಜಿಟಲ್, ಯುಪಿಐ ಪಾವತಿ ಪುರಾವೆಗಳು ಮತ್ತು ಅಂತರರಾಜ್ಯ ಸಂಪರ್ಕಗಳನ್ನು ಪತ್ತೆಹಚ್ಚಿ ಆರೋಪಿಗಳನ್ನು ಗುರುತಿಸಿದ್ದಾರೆ.

ಬಂಧಿತ ಆರೋಪಿಗಳನ್ನು ಬಿಹಾರದ ಬಕ್ಸಾರ್ ಜಿಲ್ಲೆಯ ಪಾಂಡಿಯಪಟ್ಟಿ ನಿವಾಸಿ ವಿಶಾಲ್ ಶ್ರೀವಾಸ್ತವ ಮತ್ತು ಇತರ ಇಬ್ಬರು ಉತ್ತರ ಪ್ರದೇಶದವರು ಎಂದು ಗುರುತಿಸಲಾಗಿದೆ. ಆರೋಪಿಗಳಲ್ಲಿ ಒಬ್ಬರು ಶಾರ್ಪ್ ಶೂಟರ್ ಎಂದು ತನಿಖಾಧಿಕಾರಿಗಳು ಶಂಕಿಸಿದ್ದಾರೆ.

ಹಂತಕರು ಪಶ್ಚಿಮ ಬಂಗಾಳದ ಹೊರಗಿನವರು ಎಂದು ತನಿಖೆಯಿಂದ ತಿಳಿದುಬಂದಿದೆ ತಾಂತ್ರಿಕ ಕಣ್ಗಾವಲು, ಡಿಜಿಟಲ್ ಟ್ರ್ಯಾಕಿಂಗ್ ಮತ್ತು ಇತರ ಮಾಹಿತಿಗಳ ಆಧಾರದ ಮೇಲೆ, ಎಸ್‌ಐಟಿ ತಂಡವನ್ನು ಉತ್ತರ ಪ್ರದೇಶ ಮತ್ತು ಬಿಹಾರಕ್ಕೆ ಕಳುಹಿಸಲಾಗಿತ್ತು ಬಂಧಿತ ಆರೋಪಿಗಳನ್ನು ಪಶ್ಚಿಮ ಬಂಗಾಳಕ್ಕೆ ಕರೆತರಲಾಗುವುದು ಎಂದು ಅಧಿಕಾರಿ ಪಿಟಿಐಗೆ ತಿಳಿಸಿದ್ದಾರೆ.

ಅಪರೂಪದ ಫಂಗಸ್‌ನಿಂದ ಬಳಲುತ್ತಿದ್ದ ಭಾರತೀಯ ಟೆಕ್ಕಿ ಸಾವು!

ಕ್ಯಾಲಿಫೋರ್ನಿಯಾ: ಕ್ಯಾಲಿಫೋರ್ನಿಯಾದಲ್ಲಿ 37 ವರ್ಷದ ಭಾರತೀಯ ತಂತ್ರಜ್ಞಾನ ವೃತ್ತಿ ಪರರೊಬ್ಬರು ವ್ಯಾಲಿ ಫೀವರ್ ಎಂಬ ಅಪರೂಪದ ಶಿಲೀಂಧ್ರ ಸೋಂಕಿನಿಂದ ಬಳಲಿ ಸಾವನ್ನಪ್ಪಿದ್ದಾರೆ ಎಂದು ಅವರ ಕುಟುಂಬ ಸ್ಥಾಪಿಸಿದ ನಿಧಿ ಸಂಗ್ರಹಣೆಯಲ್ಲಿ ತಿಳಿದುಬಂದಿದೆ.



ಚಿರಂಜೀವಿ ಕೊಲ್ಲಾ ಮೃತ ವ್ಯಕ್ತಿ. ಈ ಅಪರೂಪದ ಶಿಲೀಂಧ್ರ ಸೋಂಕು ಅವರ ಶ್ವಾಸಕೋಶದ ಮೇಲೆ ತೀವ್ರ ಪರಿಣಾಮ ಬೀರಿ ಉಸಿರಾಟದ ವೈಫಲ್ಯಕ್ಕೆ ಕಾರಣವಾಗಿದೆ. ಚಿರಂಜೀವಿ ಕೊಲ್ಲ ಮೇ 5 ರಂದು ಕ್ಯಾಲಿಫೋರ್ನಿಯಾದ ವಾಲ್ನಟ್ ಕ್ರೀಕ್‌ನಲ್ಲಿ ಸುಮಾರು ಒಂದು ತಿಂಗಳು ತೀವ್ರ ನಿಗಾ ಘಟಕದಲ್ಲಿ ಕಳೆದ ನಂತರ ನಿಧನರಾದರು ಎಂದು ಅವರ ಸೋದರಸಂಬಂಧಿ ರಾಮ ಕೋಟೇಶ್ವರ ರಾವ್ ತಿಳಿಸಿದ್ದಾರೆ.

ಕೊಲ್ಲಾ ಅವರು ಮೃದುಭಾಷಿ ಮತ್ತು ಉತ್ತಮ ವ್ಯಕ್ತಿ ಎಂದು ನಿಧಿಸಂಗ್ರಹಣೆದಾರರು ಬಣ್ಣಿಸಿದ್ದಾರೆ, ಅವರನ್ನು ಸಹೋದ್ಯೋಗಿಗಳು ಮತ್ತು ಸ್ನೇಹಿತರು ಮತ್ತು ಸಂಬಂಧಿಕರು ಆಳವಾಗಿ ಗೌರವಿಸುತ್ತಿದ್ದರು ಮತ್ತು ಪ್ರೀತಿಸುತ್ತಿದ್ದರು. "ಅವರು ಎಂದಿಗೂ ತಮ್ಮ ಧ್ವನಿಯನ್ನು ಎತ್ತುತ್ತಿರಲಿಲ್ಲ, ಯಾರನ್ನೂ ಸಣ್ಣದಾಗಿ ಭಾವಿಸದ ರೀತಿಯ ವ್ಯಕ್ತಿಯಾಗಿದ್ದರು" ಎಂದು ಪೋಸ್ಟ್‌ನಲ್ಲಿ ಹೇಳಲಾಗಿದೆ.

ಜನ ಸೇವೆಗೆ ಬಿಜೆಪಿ ಅನಿವಾರ್ಯ; ಜನಾಭಿಪ್ರಾಯ ಮೂಡಿಸಿ

ಪ್ರಶಿಕ್ಷಣ ಮಹಾಭಿಯಾನ ಜಿಲ್ಲಾ ಮಟ್ಟದ ಪ್ರಶಿಕ್ಷಣ ವರ್ಗ ಕಾರ್ಯಕ್ರಮ ಉದ್ಘಾಟಿಸಿದ ಸಂಸದ ಯದುವೀರ್

ಮಡಿಕೇರಿ/ಕುಶಾಲನಗರ, ಮೇ 11– ರಾಜ್ಯ ಸರಕಾರ ಕುರ್ಚಿ ಕಿತ್ತಾಟದಲ್ಲಿ ಜನರ ಜ್ವಲಂತ ಸಮಸ್ಯೆಗಳನ್ನು ಮರೆತಿದ್ದು, ಜನ ಸೇವೆಗೆ ಬಿಜೆಪಿ ಅನಿವಾರ್ಯ ಎಂಬ ಜನಾಭಿಪ್ರಾಯ ಹೊರಹೊಮ್ಮಬೇಕಿದೆ. ಆ ನಿಟ್ಟಿನಲ್ಲಿ ಪಕ್ಷದ ಕಾರ್ಯಕರ್ತರಾಗಿ ಎಲ್ಲರೂ ಶ್ರಮಿಸೋಣ ಎಂದು ಸಂಸದ ಯದುವೀರ್ ತಿಳಿಸಿದ್ದಾರೆ.

ಕೂಡುಮಂಗಳೂರು ಗ್ರಾ.ಪಂ ವ್ಯಾಪ್ತಿ ಚಿಕ್ಕತ್ತೂರಿನ ಖಾಸಗಿ ಸಭಾಂಗಣದಲ್ಲಿ ನಡೆದ ಪಂಡಿತ್ ದೀನದಯಾಳ್ ಉಪಾಧ್ಯಾಯ ಪ್ರಶಿಕ್ಷಣ ಮಹಾಭಿಯಾನ ಜಿಲ್ಲಾ ಮಟ್ಟದ ಪ್ರಶಿಕ್ಷಣ ವರ್ಗ ಕಾರ್ಯಕ್ರಮ ಉದ್ಘಾಟಿಸಿ, ಜಿಲ್ಲಾ ಮಟ್ಟದಿಂದ ರಾಷ್ಟ್ರ ಮಟ್ಟದವರೆಗೆ ಪ್ರತಿ ಹಂತದಲ್ಲಿ ಈ ಕಾರ್ಯಕ್ರಮ ನಡೆಯಲಿದ್ದು, ಕಾರ್ಯಕರ್ತರ ವ್ಯಕ್ತಿತ್ವ ರೂಪಿಸಲು, ಶಿಸ್ತು ಮೂಡಿಸಲು ಸಹಕಾರಿಯಾಗಲಿದೆ ಎಂದು ಹೇಳಿದರು.


ದೀನದಯಾಳ್ ಉಪಾಧ್ಯಾಯ ಪ್ರಶಿಕ್ಷಣ ಮಹಾಭಿಯಾನ ಜಿಲ್ಲಾ ಪ್ರಶಿಕ್ಷಣ ಕಾರ್ಯಕ್ರಮವನ್ನು ಸಂಸದ ಯದುವೀರ್ ಉದ್ಘಾಟಿಸಿದರು.

ಕೇವಲ ಅಧಿಕಾರ ಗಳಿಸುವುದು ಮಾತ್ರ ನಮ್ಮ ಉದ್ದೇಶವಲ್ಲ. ಉತ್ತಮ ಸೇವೆ ಸಲ್ಲಿಸಲು ಅಧಿಕಾರ ನಮಗೆ ಒಂದು ಸಾಧನ ವಷ್ಟೆ. ರಾಜ್ಯ ಸರಕಾರ ಕುರ್ಚಿ ಕಿತ್ತಾಟದಲ್ಲಿ ಜನರ ಜ್ವಲಂತ ಸಮಸ್ಯೆಗಳನ್ನು ಮರೆತಿದೆ. ಈ ಸರಕಾರಕ್ಕೆ ಪರ್ಯಾಯವಾಗಿ ಜನ ಸೇವೆಗೆ ಬಿಜೆಪಿ ಅನಿವಾರ್ಯ ಎಂಬ ಜನಾಭಿಪ್ರಾಯ ಹೊರಹೊಮ್ಮಬೇಕಿದೆ. ಆ ನಿಟ್ಟಿನಲ್ಲಿ ನಾವೆಲ್ಲರೂ ಶ್ರಮಿಸಬೇಕಿದೆ. ಜಿಲ್ಲೆಯಲ್ಲೂ ಮತ್ತೆ ಬಿಜೆಪಿ ವೈಭವ ಮರುಕಳಿಸುವಂತಾಗಬೇಕಿದೆ ಎಂದು ಆಶಯ ವ್ಯಕ್ತಪಡಿಸಿದರು.

ರಾಷ್ಟ್ರೀಯ ಕಾರ್ಯಕಾರಿಣಿ ಸಮಿತಿ ಮಾಜಿ ಕಾರ್ಯದರ್ಶಿ ಶಾಸಕ ಸಿ.ಟಿ.ರವಿ ಮಾತನಾಡಿ, ಬೇರೆ ಪಕ್ಷಗಳಂತೆ ಬಿಜೆಪಿ ಪಕ್ಷಕ್ಕೆ ಮಾಲೀಕರಿಲ್ಲ. ಬಿಜೆಪಿಯಲ್ಲಿ ಕಾರ್ಯಕರ್ತರೆ ಪಕ್ಷದ ಮಾಲೀಕರಾಗಿದ್ದಾರೆ. ಕಾರ್ಯಕರ್ತರನ್ನೇ ನಾಯಕನ್ನಾಗಿ ಬೆಳೆಸುವ ವ್ಯವಸ್ಥೆಯನ್ನು ಬಿಜೆಪಿ ಪಕ್ಷ ಅಳವಡಿಸಿಕೊಂಡಿದೆ. ಕಾರ್ಯಕರ್ತರು ಎಷ್ಟೇ ಹಿರಿಯರಾದರೂ, ಅನುಭವಿಗಳಾದರೂ ಕೂಡ ಕಾಲಕಾಲಕ್ಕೆ ಅವರನ್ನು ಮತ್ತಷ್ಟು ಹುರಿಗೊಳಿಸುವ ಅಗತ್ಯವಿದೆ. ಅದರ ಅಂಗವಾಗಿ ಈ ಪ್ರಶಿಕ್ಷಣ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದು ಹೇಳಿದರು.

ಬಿಜೆಪಿ ಜಿಲ್ಲಾಧ್ಯಕ್ಷ ನಾಪಂಡ ರವಿ ಕಾಳಪ್ಪ ಮಾತನಾಡಿ, ಪ್ರಶಿಕ್ಷಣ ಕಾರ್ಯಕ್ರಮದ ಬಗ್ಗೆ ವಿವರಿಸಿದರು. ಮಾಜಿ ಶಾಸಕ ಅಪ್ಪಚ್ಚು ರಂಜನ್, ವಿಧಾನಪರಿಷತ್ ಮಾಜಿ ಸದಸ್ಯ ಎಂ.ಪಿ.ಸುನಿಲ್ ಸುಬ್ರಮಣಿ, ಬಿಜೆಪಿ ಮಾಜಿ ಜಿಲ್ಲಾಧ್ಯಕ್ಷ ರಾಬಿನ್ ದೇವಯ್ಯ, ದಕ್ಷಿಣ ಕನ್ನಡ ಜಿಲ್ಲೆಯ ಪ್ರಭಾರಿ ಬಿ.ಬಿ. ಭಾರತೀಶ್, ಕಾರ್ಯಕ್ರಮ ಸಂಯೋಜಕ ಮನು ಮುತ್ತಪ್ಪ, ಮೈಸೂರು ವಿಭಾಗದ ಸಂಯೋಜಕ ರಾಜೇಶ್, ಪ್ರಮುಖರಾದ ಸ್ವಾಮಿ, ಫಣೀಶ್, ಕಾರ್ಯಾಗಾರದ ಪ್ರಬಂಧಕ ಜಿಲ್ಲಾ ಬಿಜೆಪಿ ಯುವ ಮೋರ್ಚಾ ಕಾರ್ಯದರ್ಶಿ ರಕ್ಷಿತ್ ಮಾವಜಿ, ಸುಮನ್ ಗೌಡ, ಪ್ರವೀಣ್ ಮಲ್ಲಜಿರ, ನವನೀತ್ ಪೊನ್ನೆಟ್ಟಿ, ರಾಮನಾಥನ್ ಮತ್ತಿತರರು ಉಪಸ್ಥಿತರಿದ್ದರು.

ವಿದ್ಯುತ್ ತಂತಿ ತಗುಲಿ ಬಾಲಕಿಗೆ ಗಾಯ

ಮಡಿಕೇರಿ, ಮೇ 11–ಮನೆ ಮಹಡಿಯಲ್ಲಿ ಬಾಲಕಿ ಆಟವಾಡುತ್ತಿದ್ದಾಗ ವಿದ್ಯುತ್ ತಂತಿ ತಗುಲಿ ಗಾಯಗೊಂಡಿರುವ ಘಟನೆ ಕುಶಾಲನಗರದ ಗುಮ್ಮನಕೊಲ್ಲಿಯಲ್ಲಿ ನಡೆದಿದೆ. ಗುಮ್ಮನಕೊಲ್ಲಿಯ ಉಮೇಶ್ ಎಂಬವರ ಪುತ್ರಿ ಸಾನ್ವಿ (14) ಗಾಯಗೊಂಡವರಾಗಿದ್ದಾರೆ.



ಕಟ್ಟಡಕ್ಕೆ ಹೊಂದಿಕೊಂಡಂತೆ ವಿದ್ಯುತ್ ತಂತಿ ಹಾದು ಹೋಗಿದ್ದು, ಇದರಿಂದ ಈ ಘಟನೆ ಸಂಭವಿಸಿದೆ ಎಂದು ಅಂದಾಜಿಸಲಾಗಿದೆ. ಕುಶಾಲನಗರ ಸರಕಾರಿ ಆಸ್ಪತ್ರೆಯಲ್ಲಿ ಪ್ರಥಮ ಚಿಕಿತ್ಸೆ ನೀಡಿ, ಹೆಚ್ಚಿನ ಚಿಕಿತ್ಸೆಗಾಗಿ ಮೈಸೂರಿನ ಖಾಸಗಿ ಆಸ್ಪತ್ರೆಗೆ ಸ್ಥಳಾಂತರಿಸಲಾಗಿದೆ.

ಡಾ.ಸಹನಾ ಎಸ್.ಹಾದಿಮನಿ ಹೆಚ್ಚುವರಿ ಜಿಲ್ಲಾಧಿಕಾರಿ

ಮಡಿಕೇರಿ, ಮೇ 11–ಕೊಡಗು ಜಿಲ್ಲೆಗೆ ಹೆಚ್ಚುವರಿ ಜಿಲ್ಲಾಧಿಕಾರಿಯಾಗಿ ಡಾ. ಸಹನಾ ಎಸ್.ಹಾದಿಮನಿ ಅವರು ಇತ್ತೀಚೆಗೆ ಅಧಿಕಾರ ವಹಿಸಿಕೊಂಡಿದ್ದಾರೆ.

2014ನೇ ಬ್ಯಾಚಿನ ಕೆಎಎಸ್ ಅಧಿಕಾರಿಯಾದ ಸಹನಾ ಎಸ್.ಹಾದಿಮನಿ ಅವರು ಹಿಂದೆ 6 ವರ್ಷಗಳ ಕಾಲ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವಿಶೇಷ ಭೂ ಸ್ವಾಧೀನ ಅಧಿಕಾರಿಯಾಗಿ ಕರ್ತವ್ಯ ನಿರ್ವಹಿಸಿದ್ದರು. ಇದಕ್ಕೂ ಮೊದಲು ಶಿವಮೊಗ್ಗ ಮಹಾನಗರ ಪಾಲಿಕೆಯಲ್ಲಿ ಆಡಳಿತ ಅಧಿಕಾರಿಯಾಗಿ ಕರ್ತವ್ಯ ನಿರ್ವಹಿಸಿದ್ದರು.


ಡಾ.ಸಹನಾ ಎಸ್.ಹಾದಿಮನಿ

ಅಕ್ರಮ ಭೂ ಪರಿವರ್ತನೆಗೆ ಕಡಿವಾಣ ಹಾಕಲು ಆಗ್ರಹ


ಕರ್ನಲ್ ಸಿ.ಪಿ. ಮುತ್ತಣ್ಣ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದರು.

ವಿರಾಜಪೇಟೆ: ಕೊಡಗಲ್ಲಿ ವಿಶ್ರಾಂತಿ ಮಂದಿರಕ್ಕಾಗಿ ಅಕ್ರಮ ಭೂ ಪರಿವರ್ತನೆಗೆ ಅನುಮತಿ ನೀಡಿರುವವರ ವಿರುದ್ಧ ಕ್ರಮ ಜರುಗಿಸುವಂತೆ ಕಾವೇರಿ ಉಳಿಸಿ ಅಭಿಯಾನದ ಗೌರವ ಕಾರ್ಯದರ್ಶಿ ನಿವೃತ್ತ ಕರ್ನಲ್ ಸಿ.ಪಿ. ಮುತ್ತಣ್ಣ ಆಗ್ರಹಿಸಿದ್ದಾರೆ.

ಸೋಮವಾರಪೇಟೆ ತಾಲೂಕಿನ ಕಿರಗಂದೂರು ಗ್ರಾಪಂ ವ್ಯಾಪ್ತಿಯ ಕಂದಾಯ ಅಧಿಕಾರಿಗಳು ಸುಮಾರು 40 ಎಕರೆ ಜಾಗವನ್ನು ಅಕ್ರಮ ಭೂ ಪರಿವರ್ತನೆ ನಡೆಸಲು ಅನುಮತಿ ನೀಡಿದ್ದಾರೆ. ಈ ಅಕ್ರಮ ಭೂ ಪರಿವರ್ತನೆಯನ್ನು ರದ್ದುಗೊಳಿಸುವಂತೆ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಗಿದೆ. ಜಿಲ್ಲಾಧಿಕಾರಿಗಳೂ ಇದಕ್ಕೆ ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ ಎಂದು ಸುದ್ದಿಗೋಷ್ಠಿಯಲ್ಲಿ ಹೇಳಿದರು.

ಭೂ ಪರಿವರ್ತನೆಯಿಂದ ಕೊಡಗಿನ ಹಸಿರು ವನ್ಯ ಸಂಪತ್ತುಗಳು ಕಡಿಮೆಯಾಗಿ ಕಾವೇರಿ ನೀರಿನ ಹರಿವಿನ ಪ್ರಮಾಣ ಕುಸಿಯುತ್ತಿದೆ. ಈ ರೀತಿ ಭೂ ಪರಿವರ್ತನೆಯಾಗುತ್ತಿದ್ದರೆ, ಕೆಲವೇ ವರ್ಷದಲ್ಲಿ ಗೋಣಿಕೊಪ್ಪ ವಿರಾಜಪೇಟೆ ನಿಶ್ಚಿತವಾಗಿ ಮಹಾನಗರವಾಗುತ್ತದೆ. ಇದೇ ರೀತಿ ಸೋಮವಾರಪೇಟೆ ಮಡಿಕೇರಿ, ಕುಶಾಲನಗರವೂ ನಗರಗಳಂತೆ ಬೆಳೆದು, ಕೊನೆಗೆ ಕಾವೇರಿ ನೀರು ಕೊಡಗಿನ ಜನರ ಆಂತರಿಕ ಬಳಕೆಗೆ ಮಾತ್ರ ಸೀಮಿತವಾಗುತ್ತದೆ. ಕಾವರಿಯನ್ನೇ ಅವಲಂಬಿಸಿರುವ ಜಿಲ್ಲೆಗಳಿಗೆ ಹಾಗೂ ಬೆಂಗಳೂರಿಗೆ ಕಾವೇರಿ ನೀರು ಮರೀಚಿಕೆಯಾಗುತ್ತದೆ ಎಂದು ದೂರಿದರು.

ದಕ್ಷಿಣ ಕೊಡಗಿನ ಮುಗ್ಗಟಗೇರಿ ಗ್ರಾಮದಲ್ಲಿ ಪೊನ್ನಂಪೇಟೆ ಹುದಿಕೇರಿ ರಸ್ತೆ ಸಮೀಪ 4 ಎಕರೆ ಗದ್ದೆಯನ್ನು ಮಣ್ಣು ಹಾಕಿ ಮುಚ್ಚಿ, ಅಕ್ರಮ ವಸತಿ ಬಡಾವಣೆ ನಿರ್ಮಾಣಕ್ಕೆ ಸಿದ್ದತೆ ಸಾಗಿದೆ. ಇದನ್ನು ಕೃಷಿ ಭೂಮಿ ಎಂದು ಕಂದಾಯ ಇಲಾಖೆ ಘೋಷಿಸಿದೆ ಈ ಬಗ್ಗೆ ತನಿಖೆಯಾಗಬೇಕು. ಕೊಡಗನ್ನು ಉಳಿಸುವ ನಿಟ್ಟಿನಲ್ಲಿ ಈ ಭೂ ಪರಿವರ್ತನೆ ಮಾಡಿ ಬೃಹತ್ ಸ್ಥಿರಾಸ್ತಿ ಯೋಜನೆಗಳನ್ನು ಕೈ ಬಿಡುವಂತೆ ಹಾಗೂ ಹೂಡಿಕೆದಾರರಿಂದ ಪಡೆದಿರುವ ಹಣ ಹಿಂದಿರುಗಿಸಬೇಕು ಎಂದು ಒತ್ತಾಯಿಸಿದ್ದಾರೆ. ಮಾಳೇಟಿರ ಕಾಳಯ್ಯ, ಮಾಳೇಟಿರ ಶ್ರೀನಿವಾಸ, ಮಾಳೇಟಿರ ನಂಜಪ್ಪ, ಮಡಿಕೇರಿಯ ಮೊದೂರಿನ ಶಿವಶಂಕರ್ ಪತ್ರಿಕಾಗೋಷ್ಠಿಯಲ್ಲಿ ಇದ್ದರು.

ಪೈಸಾರಿ ಜಾಗ ಸ್ಥಳೀಯರಿಗೆ ನೀಡಲು ಎಐಟಿಯುಸಿ ಆಗ್ರಹ

ಮಡಿಕೇರಿ: ಸೋಮವಾರಪೇಟೆ ತಾಲೂಕಿನ ಮಾದಾಪುರ ಗ್ರಾಪಂ ವ್ಯಾಪ್ತಿಯ ಕುಂಬೂರು ಗ್ರಾಮದಲ್ಲಿ ಲಭ್ಯವಿರುವ ಪೈಸಾರಿ ಜಾಗವನ್ನು ಸ್ಥಳೀಯ ಅರ್ಜಿದಾರರಿಗೆ ಮಾತ್ರ ಹಂಚಿಕೆ ಮಾಡಬೇಕೆಂದು ಎಐಟಿಯುಸಿ ಸಂಘಟನೆಯ ಜಿಲ್ಲಾಧ್ಯಕ್ಷ ಹೆಚ್.ಎಂ. ಸೋಮಪ್ಪ ಆಗ್ರಹಿಸಿದ್ದಾರೆ.


ಹೆಚ್.ಎಂ. ಸೋಮಪ್ಪ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು.

ಜಿಲ್ಲೆಯ ಬೇರೆ ಬೇರೆ ಗ್ರಾ.ಪಂ ವ್ಯಾಪ್ತಿಯ ಫಲಾನುಭವಿಗಳಿಗೆ ನಿವೇಶನ ನೀಡಬೇಕೆಂದು ಒತ್ತಾಯಿಸಿ ಬಹುಜನ ಕಾರ್ಮಿಕ ಸಂಘ ಲಕ್ಕೇರಿ ಪೈಸಾರಿಯಲ್ಲಿ 9 ದಿನಗಳಿಂದ ನಡೆಸುತ್ತಿರುವ ಅಹೋರಾತ್ರಿ ಪ್ರತಿಭಟನೆ ಅರ್ಥ ಹೀನವಾಗಿದೆ. ಯಾವುದೇ ಕಾರಣಕ್ಕೂ ಮಾದಾಪುರ ಗ್ರಾಪಂ ವ್ಯಾಪ್ತಿಯ ಅರ್ಜಿದಾರರನ್ನು ಹೊರತುಪಡಿಸಿ ಬೇರೆಯವರಿಗೆ ನಿವೇಶನ ನೀಡಬಾರದೆಂದು ಒತ್ತಾಯಿಸಿದರು.

ಮಾದಾಪುರ ಗ್ರಾ.ಪಂ ವ್ಯಾಪ್ತಿಯ 500ಕ್ಕೂ ಹೆಚ್ಚು ಅರ್ಜಿದಾರರು ನಿವೇಶನ ಲಭಿಸುತ್ತದೆ ಎನ್ನುವ ನಿರೀಕ್ಷೆಯಲ್ಲಿದ್ದಾರೆ. ಈ ನಡುವೆ ಬಹುಜನ ಕಾರ್ಮಿಕ ಸಂಘ ಲಕ್ಕೇರಿ ಪೈಸಾರಿಯಲ್ಲಿ ಪ್ರತಿಭಟನೆ ನಡೆಸುತ್ತಿರುವುದು ಜನರ ಹಾದಿ ತಪ್ಪಿಸುವ ಯತ್ನವಾಗಿದೆ. ಅಲ್ಲಿ 30–40 ವರ್ಷಗಳಿಂದ 15ರಿಂದ 20 ಕುಟುಂಬಗಳು ಉಪ ಕೃಷಿ ಕಾರ್ಯ ಮಾಡುತ್ತಾ ಜೀವನ ಸಾಗಿಸುತ್ತಿದ್ದಾರೆ. ಈ ಕುಟುಂಬಗಳು ತಮ್ಮ ಸ್ವಾಧೀನದಲ್ಲಿರುವ ಜಾಗದ ಆರ್‌ಟಿಸಿಯನ್ನೂ ಹೊಂದಿದ್ದಾರೆ. ಕೆಲವು ವರ್ಷಗಳ ಹಿಂದೆ ಚೆಸ್ಕಾಂ ಇಲಾಖೆ 13 ಕೆ.ವಿ ಸಾಮರ್ಥ್ಯದ ವಿದ್ಯುತ್ ಮಾರ್ಗ ಇದೇ ಪ್ರದೇಶದಿಂದ ಹಾದು ಹೋಗುವುದರಿಂದ ಈ ಪ್ರದೇಶದಲ್ಲಿ ಯಾವುದೇ ಕೃಷಿ ಚಟುವಟಿಕೆ ನಡೆಸಬಾರದು ಹಾಗೂ ಮರಗಳನ್ನು ಬೆಳೆಸಬಾರದೆಂದು ಮುನ್ಸೂಚನೆ ನೀಡಿದೆ ಈ ರೀತಿ ಗೊಂದಲದ ವಾತಾವರಣ ಇರುವಂಥ ಸಂದರ್ಭದಲ್ಲಿ ಅದೇ ಜಾಗದಲ್ಲೇ ನಿವೇಶನವನ್ನಾಗಿ ನೀಡಬೇಕೆಂದು ಬಹುಜನ ಕಾರ್ಮಿಕ ಸಂಘ ಪ್ರತಿಭಟನೆ ನಡೆಸುತ್ತಿರುವುದು ಸರಿಯಲ್ಲ ಎಂದು ಸೋಮಪ್ಪ ಅಭಿಪ್ರಾಯ ವ್ಯಕ್ತಪಡಿಸಿದರು.

ಬಡವರು ನೀಡಿರುವ ಅರ್ಜಿಗಳನ್ನು ಕಂದಾಯ ಅಧಿಕಾರಿಗಳು ತಕ್ಷಣ ಪರಿಶೀಲಿಸಿ ನಿವೇಶನ ಮಂಜೂರಾತಿಗೆ ಕ್ರಮ ಕೈಗೊಳ್ಳಬೇಕು. ಒಂದು ವೇಳೆ ವಿದ್ಯುತ್ ಮಾರ್ಗ ಅಡ್ಡಿಯಾದರೆ, ಮಾದಾಪುರ ಗ್ರಾ.ಪಂ ವ್ಯಾಪ್ತಿಯಲ್ಲಿ ಲಭ್ಯವಿರುವ ಪರ್ಯಾಯ ಪೈಸಾರಿ ಜಾಗವನ್ನು ಗುರುತಿಸಿ ನಿವೇಶನ ನೀಡಬೇಕೆಂದು ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಎಐಟಿಯುಸಿ ಸಂಘಟನೆಯ ಕಾರ್ಯಕರ್ತರಾದ ಫಿಲೋಮಿನಾ ಡಿಸೋಜ, ಶಾಂತಿ ಯೋಗೇಶ್, ಪಾರ್ವತಿ ಮಂಜು ಹಾಗೂ ಲತಾ ಕೊರಗಪ್ಪ ಉಪಸ್ಥಿತರಿದ್ದರು.

ನಾಳೆ ಅರೆಭಾಷೆ ಗಡಿನಾಡ ಉತ್ಸವ

ಮಡಿಕೇರಿ: ಅರೆಭಾಷೆ ಸಂಸ್ಕೃತಿ ಮತ್ತು ಸಾಹಿತ್ಯ ಅಕಾಡೆಮಿ ವತಿಯಿಂದ ಕೆದಮುಳ್ಳೂರಿನ ಅರೆಭಾಷೆ, ಸಂಸ್ಕೃತಿ ಮತ್ತು ಅಭಿವೃದ್ಧಿ ಸಂಘದ ಸಂಯುಕ್ತಾಶ್ರಯದಲ್ಲಿ ಅರೆಭಾಷೆ ಗಡಿನಾಡ ಉತ್ಸವ ಮೇ 13 ರಂದು ಬೆಳಗ್ಗೆ 9 ಗಂಟೆಗೆ ತೋರ ಸಮುದಾಯ ಭವನದಲ್ಲಿ ನಡೆಯಲಿದೆ.

ಶಾಸಕ ಎ.ಎಸ್.ಪೊನ್ನಣ್ಣ, ಸಾಹಿತ್ಯ ಅಕಾಡೆಮಿ ಅಧ್ಯಕ್ಷ ಸದಾನಂದ ಮಾವಜಿ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಟಿ.ಎಂ.ಧರ್ಮಜ ಉತ್ತಪ್ಪ, ವಿರಾಜ ಪೇಟೆ ಗೌಡ ಸಮಾಜದ ಅಧ್ಯಕ್ಷ ಮುಕ್ಕಾಟಿ ವಾಸು ಗಣಪತಿ, ಕೆದಮುಳ್ಳೂರು ಅರೆಭಾಷೆ ಸಂಸ್ಕೃತಿ ಮತ್ತು ಅಭಿವೃದ್ಧಿ ಸಂಘದ ಅಧ್ಯಕ್ಷ ಪೊಕ್ಕುಳಂಡ್ರ ಎಸ್.ದಿನೇಶ್, ಕೆದಮುಳ್ಳೂರು ಸಮಾಜ ಸೇವಕ ಗೌಡುದಾರೆ ಚೋಟು ಬಿದ್ದಪ್ಪ, ಮಡಿಕೇರಿ ಕೊಡಗು ಗೌಡ ಸಮಾಜದ ನಿರ್ದೇಶಕ ತೋಟಂಬೈಲು ಕುಮಾರ, ನರಿಯಂದಡ ಅಯ್ಯಪ್ಪ ಯುವಕ ಸಂಘದ ಅಧ್ಯಕ್ಷ ಬೊಳಿಯಂಡ್ರ ಹರಿಪ್ರಸಾದ್, ಕೆದಮುಳ್ಳೂರು ಜಾನಪದ ವಿಭಾಗದ ರಾಜ್ಯ ಪ್ರಶಸ್ತಿ ಪುರಸ್ಕೃತ ಕೆ.ಬಿ. ಅಮ್ಮುಣಿ ಇತರರು ಪಾಲ್ಗೊಳ್ಳಲಿದ್ದಾರೆ.

ಸದಸ್ಯ ಸಂಚಾಲಕ ಸೂದನ ಎಸ್.ಈರಪ್ಪ, ಪೊಳಕಂಡ ಎಂ.ಸಂದೀಪ್, ಮೋಹನ್ ಪೊನ್ನಚನ, ಸದಸ್ಯರಾದ ಚಂದ್ರಶೇಖರ್ ಪೇರಾಲು, ಪಿ.ಎಸ್.ಕಾರ್ಯಪ್ಪ, ಕುದುಪಜೆ ಕೆ.ಪ್ರಕಾಶ್, ತೇಜಕುಮಾರ್ ಕುಡೆಕಲ್ಲು, ಲೋಕೇಶ್ ಊರುಬೈಲು, ಡಾ.ಎನ್.ಎ. ಜ್ಞಾನೇಶ್, ಚಂದ್ರಾವತಿ ಬಡ್ಡಡ್ಕ, ಲತಾ ಪ್ರಸಾದ್ ಕುದ್ಪಾಜೆ, ವಿನೋದ್ ಮೂಡಗದ್ದೆ ಅವರು ಪಾಲ್ಗೊಳ್ಳಲಿದ್ದಾರೆ. ನಂತರ ಸಾಧಕರಿಗೆ ಸನ್ಮಾನ, ಸ್ಥಳೀಯರಿಂದ ಸಾಂಸ್ಕೃತಿಕ ಕಾರ್ಯಕ್ರಮ ಸಾಮಾಜಿಕ ಜಾಲತಾಣದ ಖ್ಯಾತ ಹಾಸ್ಯ ಕಲಾವಿದ ಜೀವನ್ ಕೆರಮೋಲೆ ಅವರಿಂದ ನಗೆ ಚಟಾಕಿ ಕಾರ್ಯಕ್ರಮ ನಡೆಯಲಿದೆ ಎಂದು ಅಕಾಡೆಮಿಯ ಪ್ರಕಟಣೆ ತಿಳಿಸಿದೆ.

ಇಂಡೋ ನೇಪಾಳ ಇಂಟರ್‌ಗೆಲ್ ಫೈಟಿಂಗ್‌ನಲ್ಲಿ ಕೊಡಗಿಗೆ ಐದು ಪದಕ

ಮಡಿಕೇರಿ: ಇಂಡಿಯನ್ ಇಂಟರ್‌ಗೆಲ್ ಫೈಟಿಂಗ್ ಅಸೋಸಿಯೇಷನ್ ವತಿಯಿಂದ ಉತ್ತರ ಪ್ರದೇಶದ ಸಹರಂಗಪುರದಲ್ಲಿ ನಡೆದ ಮೊದಲ ಇಂಡೋ ನೇಪಾಳ ಇಂಟರ್‌ಗೆಲ್ ಫೈಟಿಂಗ್ ಚಾಂಪಿಯನ್‌ಶಿಪ್‌ನಲ್ಲಿ ಕರ್ನಾಟಕ ಇಂಟರ್‌ಗೆಲ್ ಫೈಟಿಂಗ್ ಸಿಸ್ಟಮ್ ಅಸೋಸಿಯೇಷನ್‌ನ ಜಿಲ್ಲೆಯ ಐವರು ವಿದ್ಯಾರ್ಥಿ ಗಳು ಪದಕ ಗೆದ್ದು ಸಾಧನೆ ಮಾಡಿದ್ದಾರೆ.

ಜೆ.ಮಿಥೇಶ್ ಚಿನ್ನದ ಪದಕ, ಪಿ.ಆರ್, ಯಶಸ್, ಎಸ್.ಎಸ್. ಪಶುಪತಿ ಅರಸ್, ಯಶಸ್ಮಿತ್ ಗೌಡ ಬೆಳ್ಳಿ ಪದಕ ಹಾಗೂ ಪ್ರಜ್ವಲ್, ಪ್ರದೀಪ್ ರಾಥೋಡ್ ಕಂಚಿನ ಪದಕ ಗೆದ್ದಿದ್ದಾರೆ. ಕರ್ನಾಟಕ ಇಂಟರ್‌ಗೆಲ್ ಫೈಟಿಂಗ್ ಸಿಸ್ಟಮ್ ಅಸೋಸಿಯೇಷನ್‌ನ ಅಧ್ಯಕ್ಷ ಎನ್.ಸಿ ಸುದರ್ಶನ್ ಹಾಗೂ ಪ್ರಧಾನ ಕಾರ್ಯದರ್ಶಿ ಪಲಂಗೋಟು ಪಿ.ಆರ್ ಯಶಸ್ ಮಾರ್ಗದರ್ಶನದಲ್ಲಿ ವಿದ್ಯಾರ್ಥಿಗಳು ಈ ಸಾಧನೆ ಮಾಡಿದ್ದಾರೆ.

ಅರಣ್ಯ ಇಲಾಖೆ ನಿರ್ಲಕ್ಷ್ಯದಿಂದ ಮಹದೇಶ್ವರ ಬೆಟ್ಟದ ಸುತ್ತಮುತ್ತ ಕಾಡು ಪ್ರಾಣಿಗಳ ಹಾವಳಿ

ಮಹದೇಶ್ವರಬೆಟ್ಟದಲ್ಲಿ ರೈತರ ಪ್ರತಿಭಟನೆ

ಚಾಮರಾಜನಗರ: ಅರಣ್ಯ ಇಲಾಖೆ ನಿರ್ಲಕ್ಷ್ಯದಿಂದ ಮಲೆ ಮಹದೇಶ್ವರ ಬೆಟ್ಟದ ಸುತ್ತಮುತ್ತಲಿನ ಗ್ರಾಮಗಳಲ್ಲಿ ಕಾಡು ಪ್ರಾಣಿಗಳ ಹಾವಳಿ ಹೆಚ್ಚಾಗಿದ್ದು, ಗ್ರಾಮಸ್ಥರು ಹಾಗೂ ಮಾದಪ್ಪ ಭಕ್ತರ ಜೀವ ಹಾನಿಯಾಗುತ್ತಿದೆ ಎಂದು ಆರೋಪಿಸಿ ಮಲೆ ಮಹದೇಶ್ವರ ಬೆಟ್ಟದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಸಿರು ಸೇನೆಯಿಂದ ಪ್ರತಿಭಟನೆ ನಡೆಯಿತು.


ಮಹದೇಶ್ವರಬೆಟ್ಟದಲ್ಲಿ ರೈತ ಸಂಘ ಹಸಿರು ಸೇನೆಯಿಂದ ಪ್ರತಿಭಟನೆ ನಡೆಸಿದರು.

ಬೆಟ್ಟದ ಕೊಳ್ಳೇಗಾಲ ಮುಖ್ಯ ರಸ್ತೆಯ ಗೇಟ್ ಸಮೀಪ ಸಮಾವೇಶಗೊಂಡ ರೈತ ಸಂಘದ ಮುಖಂಡರು ಹಾಗೂ ಸ್ಥಳೀಯ ನಿವಾಸಿಗಳು ಸರ್ಕಾರ ಹಾಗೂ ಅರಣ್ಯ ಇಲಾಖೆ ಅಧಿಕಾರಿಗಳ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ರೈತ ಸಂಘದ ಹಿರಿಯ ಮುಖಂಡ ಚಂಗಡಿ ಕರಿಯಪ್ಪ ಮಾತನಾಡಿ, ಬೇರೆ ಅರಣ್ಯ ಪ್ರದೇಶದಿಂದ ಚಿರತೆಗಳನ್ನು ಮಲೆ ಮಹದೇಶ್ವರಬೆಟ್ಟ ವ್ಯಾಪ್ತಿಗೆ ಬಿಟ್ಟಿರುವುದರಿಂದ ಇಬ್ಬರು ಅಮಾಯಕರನ್ನು ಚಿರತೆ ಬಲಿ ಪಡೆದಿದೆ. ಈ ಸಾವಿಗೆ ಅರಣ್ಯ ಇಲಾಖೆಯ ಅಧಿಕಾರಿಗಳ ನಿರ್ಲಕ್ಷ್ಯವೇ ಕಾರಣ ಎಂದು ಆರೋಪಿಸಿದರು.

ಕಾಡು ಪ್ರಾಣಿಗಳ ಹಾವಳಿ ತಡೆಗಟ್ಟುವಂತೆ ಈ ಹಿಂದೆಯೇ ಕರ್ನಾಟಕ ರಾಜ್ಯ ರೈತ ಸಂಘದ ವತಿಯಿಂದ ಪ್ರತಿಭಟನೆ ನಡೆಸಲಾಗಿತ್ತು. ಸಾರ್ವಜನಿಕರಿಗೆ ಹಾಗೂ ಭಕ್ತಾದಿಗಳಿಗೆ ತೊಂದರೆ ನೀಡುತ್ತಿರುವ ಚಿರತೆಯನ್ನು ಸ್ಥಳಾಂತರ ಮಾಡುವಂತೆ ಆಗ್ರಹಿಸಲಾಗಿತ್ತು. ಈ ವೇಳೆ ಚಿರತೆ ಸೆರೆ ಹಿಡಿಯುವುದಾಗಿ ಭರವಸೆ ನೀಡಿದ್ದೀರಿ. ಆದರೆ ಕಾಟಚಾರಕ್ಕೆ ಒಂದು ಚಿರತೆಯನ್ನು ಮಾತ್ರ ಸೆರೆ ಹಿಡಿಯಲಾಗಿದೆ. ಇದಾದ ನಂತರ ಚಿರತೆಯೊಂದು ಮುಖ್ಯರಸ್ತೆಯ ರಂಗಸ್ವಾಮಿ ಒಡ್ಡು ಹಾಗೂ ಕಲ್ಲಿನ ಬಂಡೆಗಳ ಮೇಲೆ ಕುಳಿತು ಸಾರ್ವಜನಿಕರಿಗೆ ದರ್ಶನ ನೀಡಿದೆ. ಈ ವೇಳೆ ಸಾಮಾಜಿಕ ಜಾಲ ತಾಣಗಳಲ್ಲಿ ವೈರಲ್ ಆಗಿತ್ತು ಇಲಾಖೆ ಅಧಿಕಾರಿಗಳ ವಿರುದ್ಧ ಆಕ್ರೋಶ ಹೊರ ಹಾಕಿದ್ದಾರೆ. ಯಾವುದೇ ಕ್ರಮ ಕೈಗೊಳ್ಳದೆ ಇರುವುದರಿಂದ ಮತ್ತೊಂದು ಅನಾಹುತ ಸಂಭವಿಸಿ ಬಾಲಕ ಮೃತಪಟ್ಟಿದ್ದಾನೆ ಎಂದು ದೂರಿದರು.

ಮಲೆ ಮಹದೇಶ್ವರಬೆಟ್ಟ ಇನ್ಸ್‌ಪೆಕ್ಟರ್ ಜಗದೀಶ್ ಸೂಕ್ತ ಪೊಲೀಸ್ ಬಂದೋಬಸ್ತ್ ಒದಗಿಸಿದ್ದರು. ಪ್ರತಿಭಟನೆಯಲ್ಲಿ ಮಲೆ ಮಹದೇಶ್ವರ ಬೆಟ್ಟದ ಸುತ್ತಮುತ್ತಲಿನ ಗ್ರಾಮಸ್ಥರು, ಯುವ ಮುಖಂಡ ಅಮೋಘ ರಾವ್ ಸೇರಿದಂತೆ ರೈತ ಸಂಘದ ಮುಖಂಡರು ಉಪಸ್ಥಿತರಿದ್ದರು.

ನಾಗಮಲೆಗೆ ತಾತ್ಕಾಲಿಕ ನಿರ್ಬಂಧ

ಕಾಡು ಪ್ರಾಣಿಗಳ ಹಾವಳಿಗೆ ಈಗಾಗಲೇ ಸೂಕ್ತ ಕ್ರಮ ವಹಿಸಲಾಗಿದೆ. ತಾತ್ಕಾಲಿಕವಾಗಿ ಚಾರಣಕ್ಕೆ ಬರುವುದನ್ನು ನಿರ್ಬಂಧ ವಿಧಿಸಲಾಗಿದೆ. ಅಗತ್ಯ ಕ್ರಮ ವಹಿಸಿದ ನಂತರ ನಾಗಮಲೆ ಕ್ಷೇತ್ರಕ್ಕೆ ತೆರಳಲು ಅವಕಾಶ ಕಲ್ಪಿಸಲಾಗುವುದು ಎಂದು ಕಾವೇರಿ ವನ್ಯಜೀವಿ ಧಾಮದ ಡಿಸಿಎಫ್ ಸುರೇಂದ್ರ ಹೇಳಿದರು.

ಮೂಲ ಸೌಲಭ್ಯಕ್ಕೆ ತೊಂದರೆ ಇಲ್ಲ: ಮಲೆ ಮಹದೇಶ್ವರ ಬೆಟ್ಟ ಗ್ರಾಪಂ ವ್ಯಾಪ್ತಿಯ ಇಂಡಿಗನತ್ತ ಹಾಗೂ ಸುತ್ತಮುತ್ತಲಿನ ಗ್ರಾಮಗಳಿಗೆ ವಿದ್ಯುತ್ ಸಂಪರ್ಕ ನೀಡಲು ಈಗಾಗಲೇ ಕೇಂದ್ರ ಸರ್ಕಾರಕ್ಕೆ ಮನವಿ ಸಲ್ಲಿಸಲಾಗಿದೆ. ಕೆಲವು ಗ್ರಾಮಗಳಿಗೆ ಈಗಾಗಲೇ ಅನುಮತಿ ದೊರೆತಿದ್ದು ಕೆಲವು ಗ್ರಾಮಗಳಿಗೆ ಅನುಮತಿ ನೀಡಿದ ನಂತರ ವಿದ್ಯುತ್ ಸೌಲಭ್ಯ ಕಲ್ಪಿಸಲು ಕ್ರಮ ವಹಿಸಲಾಗುವುದು. ಇನ್ನು ಅರಣ್ಯ ಇಲಾಖೆಯಿಂದ ಕಚ್ಚಾ ರಸ್ತೆ ನಿರ್ಮಾಣ ಮಾಡಿ ಸಾರ್ವಜನಿಕರಿಗೆ ಅನುಕೂಲ ಕಲ್ಪಿಸಲಾಗುವುದು ಎಂದು ಭರವಸೆ ನೀಡಿದರು.

ಇನ್ನು ಮುಂದೆ ಭಕ್ತಾದಿಗಳಿಗೆ ಯಾವುದೇ ತೊಂದರೆಯಾಗದಂತೆ ಅಧಿಕಾರಿಗಳ ಮಾರ್ಗದರ್ಶನದಲ್ಲಿ ಅಗತ್ಯ ಕ್ರಮ ವಹಿಸಲಾಗುವುದು ಚಾರಣಕ್ಕೆ ಅವಕಾಶ ನೀಡಿದ ನಂತರ ಗೈಡ್ ಹಾಗೂ ಗಸ್ತು ಸಿಬ್ಬಂದಿಗಳನ್ನು ಹೆಚ್ಚಳ ಮಾಡುವುದಾಗಿ ತಿಳಿಸಿದರು.

ಬಾಲಕನ ಕುಟುಂಬಕ್ಕೆ 20 ಲಕ್ಷ ಪರಿಹಾರ

ಚಾಮರಾಜನಗರ: ಜಿಲ್ಲೆಯ ಮಲೆ ಮಹದೇಶ್ವರಸ್ವಾಮಿ ಬೆಟ್ಟದ ನಾಗಮಲೆಯಲ್ಲಿ ಭಾನುವಾರ ಬೆಳಗ್ಗೆ ಚಿರತೆ ದಾಳಿಯಿಂದ ಮೃತಪಟ್ಟ ಬಾಲಕನ ಕುಟುಂಬಕ್ಕೆ 20 ಲಕ್ಷ ರೂ.ಗಳ ಪರಿಹಾರವನ್ನು ಅರಣ್ಯ ಇಲಾಖೆ ಘೋಷಣೆ ಮಾಡಿದೆ.



ಮಲೆ ಮಹದೇಶ್ವರ ಬೆಟ್ಟದಿಂದ ನಾಗಮಲೆಗೆ ಹೋಗುವ ವೇಳೆ ಚಿರತೆ ದಾಳಿ ನಡೆಸಿತ್ತು. ಈ ವೇಳೆ ಬಾಲಕ ಸಾವನ್ನಪ್ಪಿದ್ದ. ಸದ್ಯ ಅರಣ್ಯ ಇಲಾಖೆ ಬಾಲಕನ ಕುಟುಂಬಸ್ಥರಿಗೆ 20 ಲಕ್ಷ ಪರಿಹಾರ ಘೋಷಣೆ ಮಾಡಿದ್ದು, ಈಗಾಗಲೇ 5 ಲಕ್ಷ ರೂ ಚೆಕ್ ನೀಡಲಾಗಿದೆ.

ಇನ್ನುಳಿದ ಹಣವನ್ನು ಅಕೌಂಟ್ ಮಾಹಿತಿ ಪಡೆದು ಶೀಘ್ರದಲ್ಲಿಯೇ ಕಳುಹಿಸಲು ಅಧಿಕಾರಿಗಳು ತಿಳಿಸಿದ್ದಾರೆ.

ವಿಜೃಂಭಣೆಯ ಶ್ರೀರಾಮ ಪಟ್ಟಾಭಿಷೇಕ


ಶ್ರೀ ಸೀತಾರಾಮ ಕಲ್ಯಾಣೋತ್ಸವ, ಶ್ರೀ ರಾಮಪಟ್ಟಾಭಿಷೇಕ ಮಹೋತ್ಸವ ಹಾಗೂ ಹನುಮಂತೋತ್ಸವ ವಿಜೃಂಭಣೆಯಿಂದ ನಡೆಯಿತು.

ಚಾಮರಾಜನಗರ: ನಗರದ ಚಿಕ್ಕ ಅಂಗಡಿ ಬೀದಿಯ ಶ್ರೀ ಸೀತಾರಾಮಮಂದಿರದಲ್ಲಿ ದಾಸ ಬಣಜಿಗರ ಸಂಘದ ಆಶ್ರಯದಲ್ಲಿ ಮೇ 8 ರಿಂದ ಮೇ 10 ರವರೆಗೆ ಮೂರು ದಿನಗಳ ಕಾಲ ಶ್ರೀ ಸೀತಾರಾಮ ಕಲ್ಯಾಣೋತ್ಸವ, ಶ್ರೀ ರಾಮಪಟ್ಟಾಭೀಷೇಕ ಮಹೋತ್ಸವ ಹಾಗೂ ಹನುಮಂತೋತ್ಸವ ವಿಜೃಂಭಣೆಯಿಂದ ನೆರವೇರಿತು.

ಶ್ರೀ ರಾಮಪಟ್ಟಾಭೀಷೇಕ ಮಹೋತ್ಸವದ ಅಂಗವಾಗಿ ಮೂರು ದಿನಗಳ ಕಾಲ ಮುಂಜಾನೆ ಮತ್ತು ಸಂಜೆ ದೇವರಿಗೆ ಅರ್ಚನೆ, ಅಭಿಷೇಕ ಸೇರಿದಂತೆ ವಿವಿಧ ಧಾರ್ಮಿಕ ಕಾರ್ಯಗಳು ನೆರವೇರಿತು. ಚಾಮರಾಜನಗರ ಸೇರಿದಂತೆ ಜಿಲ್ಲೆಯ ವಿವಿಧ ಭಾಗಗಳಿಂದ ಆಗಮಿಸಿದ್ದ ಭಕ್ತರು ದೇವರ ದರ್ಶನ ಪಡೆದು ಪ್ರಸಾದ ಸವಿದರು.

ಶ್ರೀರಾಮಪಟ್ಟಾಭೀಷೇಕ ಮಹೋತ್ಸವದ ಅಂಗವಾಗಿ ಶ್ರೀರಾಮಮಂದಿರ ಸೇರಿದಂತೆ ಚಿಕ್ಕ ಅಂಗಡಿ ಬೀದಿ ವಿದ್ಯುತ್ ದೀಪಗಳಿಂದ ಕಂಗೊಳಿಸುತಿತ್ತು. ಶುಕ್ರವಾರ ರಾತ್ರಿ ನಡೆದ ಶ್ರೀ ರಾಮಕಲ್ಯಾಣೋತ್ಸವ ಹಾಗೂ ಶನಿವಾರ ಮಧ್ಯಾಹ್ನ ನಡೆದ ಶ್ರೀರಾಮಪಟ್ಟಾಭೀಷೇಕವನ್ನು ನೆರೆದಿದ್ದ ಭಕ್ತ ಸಮೂಹ ಕಣ್ತುಂಬಿಸಿಕೊಂಡರು.

ಸಂಜೆ ವಿವಿಧ ಬಗೆಯ ಹೂವುಗಳಿಂದ ಅಲಂಕೃತಗೊಂಡ ಪಲ್ಲಕ್ಕಿ ಉತ್ಸವ ಆಕರ್ಷಣೀಯವಾಗಿತ್ತು. ಶ್ರೀ ಸೀತಾರಾಮ ಭಾವಚಿತ್ರ ಹೊತ್ತ ಅಲಂಕೃತ ಪಲ್ಲಕ್ಕಿ ಉತ್ಸವ ನಗರದ ಪ್ರಮುಖ ಬೀದಿಗಳಲ್ಲಿ ನೆರವೇರಿತು. ಮಹಿಳೆಯರು ಸೇರಿದಂತೆ ಯುವಕರು ಪಲ್ಲಕ್ಕಿ ಉತ್ಸವ ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದರು.

ಮಾರನೆ ದಿನ ಭಾನುವಾರ ಹನುಮಂತೋತ್ಸವದ ಅಂಗವಾಗಿ ಹನುಮಂತ ಮೂರ್ತಿಯ ಮೆರವಣಿಗೆ ನಡೆಯಿತು. ಮೆರವಣಿಗೆಯುದ್ದಕ್ಕೂ ಯುವಕರು ಪರಸ್ಪರ ಬಣ್ಣಗಳನ್ನು ಎರೆಚುತ್ತಾ ಓಕಳಿ ಆಚರಿಸುವ ಮೂಲಕ ಮೂರು ದಿನಗಳು ನಡೆದ ಶ್ರೀ ರಾಮಪಟ್ಟಾಭೀಷೇಕಕ್ಕೆ ತೆರೆ ಎಳೆಯಲಾಯಿತು.

ಧಾರ್ಮಿಕ ಕಾರ್ಯಗಳಲ್ಲಿ ದಾಸ ಬಣಜಿಗ ಸಂಘದ ಅಧ್ಯಕ್ಷ, ಪದಾಧಿಕಾರಿಗಳು, ಯುವಕರು, ಮಹಿಳೆಯರು, ಸಮುದಾಯದ ಹಿರಿಯ, ಕಿರಿಯ ಮುಖಂಡರು ಭಾಗವಹಿಸಿದ್ದರು.

ಆಟೋ ಪಲ್ಟಿ: ಆರು ಮಂದಿಗೆ ಗಾಯ

ಕೊಳ್ಳೇಗಾಲ: ಆಟೋವೊಂದು ಚಾಲಕನ ನಿಯಂತ್ರಣ ತಪ್ಪಿ ಪಲ್ಟಿಯಾದ ಪರಿಣಾಮ ಆರು ಮಂದಿ ಪ್ರಯಾಣಿಕರು ಸಣ್ಣ ಪುಟ್ಟ ಗಾಯಗೊಂಡಿರುವ ಘಟನೆ ತಾಲೂಕಿನ ಸರಗೂರು ಸಮೀಪದಲ್ಲಿ ಇಂದು ಬೆಳಗ್ಗೆ ಸಂಭವಿಸಿದೆ.

ಸತ್ತೇಗಾಲ ಗ್ರಾಮದ ಪುಟ್ಟಮ್ಮ(60), ಮನೀಶ್(14), ಲಕ್ಷ್ಮಮ್ಮ(58), ಚಾಲಕ ಮಧು(55), ಪಟ್ಟಣದ ಮಂಜುಳಾ(35) ಹಾಗೂ ಮತ್ತೀಪುರ ಗ್ರಾಮದ ಮಹದೇವಮ್ಮ(70) ಸಣ್ಣ ಪುಟ್ಟ ಗಾಯಗಳಾಗಿ ಹೆಚ್ಚಿನ ಅಪಾಯದಿಂದ ಪಾರಾಗಿದ್ದಾರೆ.

ಸತ್ತೇಗಾಲ ಕಡೆಯಿಂದ ಕೊಳ್ಳೇಗಾಲಕ್ಕೆ ಪ್ರಯಾಣಿಕರನ್ನು ತುಂಬಿಕೊಂಡು ಬರುತ್ತಿದ್ದ ಪ್ಯಾಸೆಂಜರ್ ಆಟೋ, ಸರಗೂರು ಸಮೀಪದ ರಸ್ತೆಯಲ್ಲಿ ನಿಯಂತ್ರಣ ತಪ್ಪಿದ ಪರಿಣಾಮ ಪಲ್ಟಿಯಾಯಿತು. ಆಟೋ ಪಲ್ಟಿಯಾಗುತ್ತಿದ್ದಂತೆ ತಕ್ಷಣ ಗಾಯಾಳುಗಳನ್ನು ಕೊಳ್ಳೇಗಾಲ ಆಸ್ಪತ್ರೆಗೆ ಪ್ರಾಥಮಿಕ ಚಿಕಿತ್ಸೆ ಕೊಡಿಸಿ ನಂತರ ಚಾ.ನಗರ ಜಿಲ್ಲಾಸ್ಪತ್ರೆಗೆ ಹೆಚ್ಚಿನಚಿಕಿತ್ಸೆಗಾಗಿ ರವಾನಿಸಲಾಗಿದೆ. ಈಸಂಬಂಧ ಗ್ರಾಮಾಂತರ ಪೊಲೀಸರು ಪ್ರಕರಣ ದಾಖಲಿಸಿಕೊಂಡು ಮುಂದಿನ ಕ್ರಮಕೈಗೊಂಡಿದ್ದಾರೆ.


ಗಾಯಾಳುಗಳಿಗೆ ಕೊಳ್ಳೇಗಾಲದ ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡುತ್ತಿರುವುದು.

ಕೊಳ್ಳೇಗಾಲದ ಸರಗೂರು ಸಮೀಪ ಆಟೋ ಮಗುಚಿ ಬಿದ್ದ ಗಾಯಾಳುಗಳಿಗೆ ಕೊಳ್ಳೇಗಾಲ ಆಸ್ಪತ್ರೆಯಲ್ಲಿನ ವೈದ್ಯರು, ಸಿಬ್ಬಂದಿ ಪ್ರಾಥಮಿಕ ಚಿಕಿತ್ಸೆ ನೀಡಿದರು.

ಸಮಸಮಾಜ ಕಟ್ಟಿದಾಗ ಅಂಬೇಡ್ಕರ್ ಕನಸು ನನಸಾಗಲು ಸಾಧ್ಯ



ಚಾಮರಾಜನಗರ : ಬಾಬಾ ಸಾಹೇಬ್ ಡಾ.ಬಿ.ಆರ್.ಅಂಬೇಡ್ಕರ್ ಅವರು ಸಂವಿಧಾನ ಮೂಲಕ ಸಾಕಾರಗೊಳಿಸಲು ಸಮಸಮಾಜ ಕನಸನ್ನು ಪ್ರಯತ್ನಿಸಿದರು. ನಾವೆಲ್ಲರೂ ಸಮ ಸಮಾಜ ಕಟ್ಟಿದಾಗ ಮಾತ್ರ ಅಂಬೇಡ್ಕರ್ ಅವರ ಕನಸು ಸಂಪೂರ್ಣವಾಗಿ ನನಸಾಗಿಸಲು ಸಾಧ್ಯ ಎಂದು ಚಲನಚಿತ್ರ ನಟ, ಪ್ರಗತಿಪರ ಚಿಂತಕ ಚೇತನ್ ಅಹಿಂಸಾ ಹೇಳಿದರು.

ನಗರದ ಡಾ.ಬಿ.ಆರ್.ಅಂಬೇಡ್ಕರ್ ಬಡಾವಣೆಯಲ್ಲಿ ಬಡಾವಣೆಯ ಯಜಮಾನರು, ಕುಲಸ್ಥರು ಹಾಗೂ ಸರ್ವೋದಯ ಡಾ. ಬಿ.ಆರ್.ಅಂಬೇಡ್ಕರ್ ಸೇವಾ ಸಮಿತಿ ವತಿಯಿಂದ ನಡೆದ ಡಾ.ಬಿ.ಆರ್.ಅಂಬೇಡ್ಕರ್ ರವರ 135ನೇ ಜನ್ಮದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಜಾತಿ ತಾರತಮ್ಯ, ಅಸ್ಪೃಶ್ಯತೆ ಇಂದಿಗೂ ಅಲ್ಲಲ್ಲಿ ಕಂಡು ಬರುತ್ತಿದೆ. ಸಮಸಮಾಜದ ಕನಸು ಇನ್ನೂ ಪೂರ್ಣವಾಗಿ ನನಸಾಗಿಲ್ಲ. ಅದಕ್ಕಾಗಿ ಹೋರಾಟ ನಡೆಯುತ್ತಲೇ ಇದೆ. ದೇಶದಲ್ಲಿ ಕೇವಲ ಕೆಲವರ ಕೈಯಲ್ಲಿ ಸಂಪತ್ತು ಇರದೆ ಆರ್ಥಿಕ ಸಮಾನತೆ ಇರ ಬೇಕಿದೆ. ಉತ್ತಮ ಸಮಾಜ ಕಟ್ಟಬೇಕು ಅದು ನಮ್ಮೆಲ್ಲರ ಜವಾಬ್ದಾರಿ ಅದನ್ನು ಅಂಬೇಡ್ಕರ್ ಅವರು ಮಾಡಿ ತೋರಿಸಿದ್ದಾರೆ. ಅ ದಿಕ್ಕಿನಲ್ಲಿ ನಾವೆಲ್ಲರೂ ಸಾಗಬೇಕು ಎಂದರು.

ಅಂಬೇಡ್ಕರ್, ಕಾನ್ಶಿರಾಂ ಅವರ ವಿಚಾರಗಳನ್ನು ಬಹಳ ಗಟ್ಟಿಯಾಗಿ ರಾಜ್ಯಕ್ಕೆ ಉಳಿಸಿರೋದು ಇದೇ ಚಾಮರಾಜನಗರದ ಜನತೆ. ರಾಜ್ಯಕ್ಕೆ ರಾಜಕೀಯ ಒಂದು ಪರ್ಯಾಯ ಶಕ್ತಿ ಹುಟ್ಟುತ್ತೆ. ಅಂಬೇಡ್ಕರ್ ಅವರ ಸಂವಿಧಾನದಿಂದ ದೇಶಕ್ಕೆ ಒಳ್ಳೆಯದು ಆಗಿದೆ. ಅವರನ್ನು ಸಂವಿಧಾನ ಶಿಲ್ಪಿಗೆ ಸೀಮಿತ ಮಾಡಿರುವುದು ಬಹಳ ನೋವಿನ ಸಂಗತಿಯಾಗಿದೆ. ಅವರು ಒಂದು ಸಂವಿಧಾನ ಅಲ್ಲ 100 ದೇಶಗಳ ಸಂವಿಧಾನ ಬರೆಯುವ ಸಾಮಾರ್ಥ್ಯ ಅವರಲ್ಲಿತ್ತು ಎಂದರು.

ಮಲ್ಲಪ್ಪ ನಿಧನ



ಕೊಳ್ಳೇಗಾಲ, ಮೇ 11– ಶಿಕ್ಷಕ ಶಿವಮೂರ್ತಿ ಅವರ ತಂದೆ ಮಲ್ಲಪ್ಪ (92) ಸೋಮವಾರ ನಿಧನರಾದರು. ಮೃತರು ಪತ್ನಿ ಸುಂದ್ರಮ್ಮ, ನಾಲ್ಕು ಮಕ್ಕಳು ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ.

ಮೃತರ ನಿಧನಕ್ಕೆ ಮಾಜಿ ಶಾಸಕಿ ಪರಿಮಳ ನಾಗಪ್ಪ, ಡಾ. ಪ್ರೀತನ್ ನಾಗಪ್ಪ, ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಗುರುಸ್ವಾಮಿ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ನಿರ್ಗಮಿತ ಅಧ್ಯಕ್ಷ ಕೃಷ್ಣೆಗೌಡ, ಬಡ್ತಿ ಮುಖ್ಯ ಶಿಕ್ಷಕರ ಸಂಘದ ಅಧ್ಯಕ್ಷ ಶಿವಮಲ್ಲು, ಗ್ರಾಪಂನ ಮಾಜಿ ಅಧ್ಯಕ್ಷ ಚಿಕ್ಕಸ್ವಾಮಿ, ಕಾಮಗೆರೆ ಮಧು, ಬೇಕರಿ ರವಿ, ರಾಮಾಪುರ ವಿಶ್ವ ಸೇರಿದಂತೆ ಹಲವು ಗಣ್ಯರು ಸಂತಾಪ ಸೂಚಿಸಿದ್ದಾರೆ. ತಾಲೂಕಿನ ಕೊಂಗರಹಳ್ಳಿ ಗ್ರಾಮದ ಅವರ ಜಮೀನಿನಲ್ಲಿ ಮೇ 12ರ ಮದ್ಯಾಹ್ನ 1 ಗಂಟೆಗೆ ಅಂತ್ಯಕ್ರಿಯೆ ಜರುಗಲಿದೆ.

ಗಾಂಜಾ ಮಾರಾಟ; ನಾಲ್ವರಿಗೆ 4 ವರ್ಷಗಳ ಜೈಲು ಶಿಕ್ಷೆ

ಮೈಸೂರು, ಮೇ 11(ಎಂಕೆ)– ಪ್ರತ್ಯೇಕ ಪ್ರಕರಣಗಳಲ್ಲಿ ಗಾಂಜಾ ಮಾರಾಟ ಸಂಬಂಧ ನಾಲ್ವರು ಆರೋಪಿಗಳಿಗೆ 4 ವರ್ಷಗಳ ಕಠಿಣ ಶಿಕ್ಷೆ ಹಾಗೂ ದಂಡ ವಿಧಿಸಿ ಮೈಸೂರಿನ 7ನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ಆದೇಶಿಸಿದೆ.

2023ರ ಸೆ.25ರಂದು ಸಂಜೆ 4.30ರ ವೇಳೆ ಬೆಂಗಳೂರು–ಮೈಸೂರು ಹಳೆ ಹೈವೇ ಪಕ್ಕದ ರಾಯಲ್ ಫಂಕ್ಷನ್‌ಗೆ ಹೋಗುವ ರಸ್ತೆಯಲ್ಲಿನ ಪೋತರಾಜು ಬಿಲ್ಡಿಂಗ್ ಬಳಿಯಲ್ಲಿ ಆರೋಪಿಯು 2 ಕೆ.ಜಿ. 568 ಗ್ರಾಂ ತೂಕದ ಗಾಂಜಾ ಸೊಪ್ಪನ್ನು ಬೆಂಗಳೂರು ಕಡೆಯಿಂದ ಬರುವ ಟ್ರಕ್ ಡ್ರೈವರ್‌ಗಳಿಗೆ ಮತ್ತು ಮೊಹಲ್ಲಾದ ಹುಡುಗರಿಗೆ ಮಾರಾಟ ಮಾಡಲೆಂದು ವಿಂಗಡಿಸುತ್ತಾ ನಿಂತಿದ್ದು ತನಿಖೆಯಿಂದ ದೃಢಪಟ್ಟ ಮೇರೆಗೆ ಆರೋಪಿ ವಿರುದ್ಧ ತನಿಖಾಧಿಕಾರಿ ಕೆ.ಎಸ್.ನಿರಂಜನ್ ನ್ಯಾಯಾಲಯಕ್ಕೆ ದೋಷಾರೋಪಣಾ ಪತ್ರ ಸಲ್ಲಿಸಿದ್ದರು.

ಹಾಗೆಯೇ 2023ರ ಮೇ 28ರಂದು ಬೆಳಗ್ಗೆ 9 ಗಂಟೆ ಸಮಯದಲ್ಲಿ ಮೂವರು ಆರೋಪಿಗಳು 5 ಕೆ.ಜಿ 918 ಗ್ರಾಂ ಮಾದಕ ವಸ್ತು ಗಾಂಜಾವನ್ನು ಅಕ್ರಮವಾಗಿ ಮಾರಾಟ ಮಾಡುವ ಸಲುವಾಗಿ ಪ್ಯಾಸೆಂಜರ್ ಆಟೋ(ಕೆಎ 03 ಎ.ಬಿ.4616)ದಲ್ಲಿ ಯಾವುದೇ ಪರವಾನಿಗೆ ಇಲ್ಲದೇ ಕಾನೂನು ಬಾಹಿರವಾಗಿ ಸಾಗಾಣಿಕೆ ಮಾಡುತ್ತಿರುವುದು ತನಿಖೆಯಿಂದ ದೃಢಪಟ್ಟ ಮೇರೆಗೆ ಆರೋಪಿಗಳ ವಿರುದ್ಧ ತನಿಖಾಧಿಕಾರಿ ಎಸ್.ಡಿ.ಸುರೇಶ್‌ಕುಮಾರ್, ನ್ಯಾಯಾಲಯಕ್ಕೆ ದೋಷಾರೋಪಣಾ ಪತ್ರ ಸಲ್ಲಿಸಿದ್ದರು.

ಈ ಎರಡು ಪ್ರಕರಣಗಳ ವಿಚಾರಣೆ ನಡೆಸಿದ ಮೈಸೂರಿನ 7ನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ನ್ಯಾಯಾಧೀಶರಾದ ಎಂ.ರಮೇಶ, ಎನ್‌ಡಿಪಿಎಸ್ ಕಾಯ್ದೆಯಡಿ ಆರೋಪಿಗಳಿಗೆ 4 ವರ್ಷಗಳ ಕಠಿಣ ಶಿಕ್ಷೆ ಮತ್ತು 40 ಸಾವಿರ ದಂಡ ವಿಧಿಸಿ ಆದೇಶಿಸಿದ್ದಾರೆ. ಸರ್ಕಾರದ ಪರವಾಗಿ ಸರ್ಕಾರಿ ಅಭಿಯೋಜಕರಾದ ಎನ್.ಬಿ.ವಿಜಯಲಕ್ಷ್ಮಿ ವಾದ ಮಂಡಿಸಿದ್ದಾರೆ.

ಹೆಚ್ಚುವರಿ ಆಯುಕ್ತರಾಗಿ ಡಾ.ಪಿ.ಶಿವರಾಜು ಅಧಿಕಾರ ಸ್ವೀಕಾರ

ಮೈಸೂರು, ಮೇ 11(ಎಂಕೆ)– ಮೈಸೂರು ಪ್ರಾದೇಶಿಕ ಆಯುಕ್ತರ ಕಚೇರಿಯಲ್ಲಿ ಹೆಚ್ಚುವರಿ



ಆಯುಕ್ತರಾಗಿ ಕೆ.ಎ.ಎಸ್.ಸೂಪರ್ ಟೈಂ ಸ್ಕೇಲ್ ಅಧಿಕಾರಿ ಡಾ.ಪಿ.ಶಿವರಾಜು ಅಧಿಕಾರ ಸ್ವೀಕರಿಸಿದ್ದಾರೆ.

ಮೈಸೂರು ಜಿಲ್ಲೆಯ ಅಪರ ಜಿಲ್ಲಾಧಿಕಾರಿಗಳಾಗಿದ್ದ ಡಾ.ಪಿ.ಶಿವರಾಜು ಅವರನ್ನು ಇತ್ತೀಚೆಗೆ ವರ್ಗಾವಣೆ ಮಾಡಲಾಗಿತ್ತು. ಸರ್ಕಾರದ ಆದೇಶದ ಅನುಸಾರ ಕೆ.ಎ.ಎಸ್ ಸೂಪರ್ ಟೈಂ ಸ್ಕೇಲ್ ಅಧಿಕಾರಿಯಾಗಿರುವ ಅವರನ್ನು ಮೈಸೂರು ಪ್ರಾದೇಶಿಕ ಆಯುಕ್ತರ ಕಛೇರಿಯಲ್ಲಿ 'ಹೆಚ್ಚುವರಿ ಆಯುಕ್ತ' ಹುದ್ದೆಗೆ ನಿಯೋಜನೆ ಮಾಡಲಾಗಿದ್ದು, ಸೋಮವಾರ ಅಧಿಕಾರ ಸ್ವೀಕರಿಸಿದರು.

ಅರ್ಜಿ ಸಲ್ಲಿಸುವ ದಿನಾಂಕ ವಿಸ್ತರಣೆ

ಮೈಸೂರು, ಮೇ 11– ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ–1ರ ಅಲೆಮಾರಿ, ಅರೆ ಅಲೆಮಾರಿ ವಿದ್ಯಾರ್ಥಿಗಳಿಂದ 2025–26ನೇ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೂಲಕ ನೀಡಲಾಗುತ್ತಿರುವ ಶುಲ್ಕ ಮರುಪಾವತಿ ಕಾರ್ಯಕ್ರಮದ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಅಂತಿಮ ದಿನಾಂಕವನ್ನು ಪೋಷಕರು, ವಿದ್ಯಾರ್ಥಿಗಳು ಮತ್ತು ಶೈಕ್ಷಣಿಕ ಸಂಸ್ಥೆಗಳ ಮನವಿಯ ಮೇರೆಗೆ ವಿಸ್ತರಿಸಲಾಗಿದೆ.

ಅರ್ಹ ವಿದ್ಯಾರ್ಥಿಗಳು ಮೇ 16ರೊಳಗೆ https://ssp.postmatric.karnataka.gov.in/ ವೆಬ್‌ಸೈಟ್‌ನಲ್ಲಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಕಾರ್ಯಕ್ರಮಗಳ ವಿವರ, ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳು ಹಾಗೂ ವಿದ್ಯಾರ್ಥಿ ವೇತನಕ್ಕೆ ಸಂಬಂಧಿಸಿದ ಸರ್ಕಾರಿ ಆದೇಶಗಳ ಬಗ್ಗೆ ಮಾಹಿತಿಗಾಗಿ https://bcwd.karnataka.gov.in ವೆಬ್‌ಸೈಟ್ ವಿಳಾಸಕ್ಕೆ ಭೇಟಿ ನೀಡಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಇಲಾಖಾ ಸಹಾಯವಾಣಿ ದೂ.ಸಂ: 8050770004 ಅಥವಾ ಇ ಮೇಲ್: bcwdhelpline@gmail.com ಮತ್ತು ಸಹಾಯವಾಣಿ ಇಮೇಲ್ postmatrichelp@karnataka.gov.in ಹಾಗೂ ದೂ.ಸಂ: 1902 ನ್ನು ಸಂಪರ್ಕಿಸಬಹುದೆಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಎನ್‌ಐಇಐಟಿ ಬೋಧಕ– ಬೋಧಕೇತರ ಸಿಬ್ಬಂದಿ ಸೇವೆ ಮುಂದುವರೆಸಲು ಉನ್ನತ ಶಿಕ್ಷಣ ಕಾರ್ಯದರ್ಶಿ ಸೂಚನೆ

ಮೈಸೂರು,ಮೇ.11(ಎಂಟಿವೈ)– ಮೈಸೂರಿನ ಕೂರ್ಗಳ್ಳಿ ಬಳಿ ಇರುವ ಎನ್‌ಐಇಐಟಿ ಆಡಳಿತ ಮಂಡಳಿ ಖಾಯಂ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳನ್ನು ವಜಾಗೊಳಿಸಿದ್ದ ಆದೇಶವನ್ನು ರಾಜ್ಯ ಸರ್ಕಾರದ ಉನ್ನತ ಶಿಕ್ಷಣ ಇಲಾಖೆಯ ಕಾರ್ಯದರ್ಶಿಗಳು ರದ್ದು ಮಾಡಿ, ಕೂಡಲೇ ಎಲ್ಲರನ್ನ ಕೆಲಸಕ್ಕೆ ಸೇರಿಸಿಕೊಳ್ಳುವಂತೆ ಸೂಚಿಸಿದ್ದಾರೆ.

ವಿದ್ಯಾರ್ಥಿಗಳ ದಾಖಲಾತಿ ಕುಸಿತದಿಂದಾಗಿ ಮೈಸೂರಿನ ಕೂರ್ಗಳ್ಳಿ ಸಮೀಪವಿರುವ ಎನ್‌ಐಇ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ(ಎನ್‌ಐಇಐಟಿ) 2020–21ನೇ ಸಾಲಿನಿಂದ ವಿವಿಧ ಕೋರ್ಸ್‌ಗಳನ್ನು ಸ್ಥಗಿತಗೊಳಿಸಿತ್ತು ಅಲ್ಲದೆ, ಎನ್‌ಐಜಿ ಮತ್ತು ಎನ್‌ಐಇಐಟಿ ಸಂಸ್ಥೆಯನ್ನು ವಿಲೀನಗೊಳಿಸಿ, ಈ ಹಿಂದೆ ಸಂಸ್ಥೆಯಲ್ಲಿ ಬೋಧಿಸುತ್ತಿದ್ದ 50 ಕೋರ್ಸ್‌ಗಳಲ್ಲಿ ಕೇವಲ 15 ಕೋರ್ಸ್‌ಗಳಷ್ಟೇ ಮುಂದುವರೆಸಲಾಗಿತ್ತು. ಈ ಹಿನ್ನೆಲೆಯಲ್ಲಿ ಎನ್‌ಐಇಐಟಿ ಸಂಸ್ಥೆಯಲ್ಲಿದ್ದ 90 ಮಂದಿ ಬೋಧಕ–ಬೋಧಕೇತರ ಸಿಬ್ಬಂದಿಗಳ ವಜಾ ಮಾಡಲಾಗಿದೆ ಎಂದು ಈ ಹಿಂದೆ ಸಂಸ್ಥೆಯ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಪ್ರತಿಭಟನೆ ನಡೆಸಿದ್ದರು. ಈ ಪ್ರಕರಣ ನ್ಯಾಯಾಲಯ ಹಾಗೂ ಉನ್ನತ ಶಿಕ್ಷಣ ಇಲಾಖೆಯ ಕಾರ್ಯದರ್ಶಿಗಳ ಅಂಗಳ ತಲುಪಿತ್ತು.

ಇದೀಗ ಉನ್ನತ ಶಿಕ್ಷಣ ಇಲಾಖೆಯ ಕಾರ್ಯದರ್ಶಿಗಳು ಎನ್‌ಐಇಐಟಿ ಸಂಸ್ಥೆಯ ಆಡಳಿತ ಮಂಡಳಿ ಬೋಧಕ–ಬೋಧಕೇತರ ಸಿಬ್ಬಂದಿಗಳನ್ನು ವಜಾಗೊಳಿಸಿರುವುದು ಕಾನೂನು ಬಾಹಿರ ಮತ್ತು ದುರದ್ದೇಶಪೂರಿತವಾಗಿದೆ ಎಂದು ಅಭಿಪ್ರಾಯಪಟ್ಟು, ವಜಾಗೊಳಿಸಿರುವ ಆದೇಶವನ್ನು ರದ್ದು ಮಾಡಿರುವುದಲ್ಲದೆ, ಕೂಡಲೇ ಖಾಯಂ ಸಿಬ್ಬಂದಿಗಳನ್ನು ಕೆಲಸಕ್ಕೆ ಸೇರಿಸಿಕೊಳ್ಳುವಂತೆ(ಕಡತ ಸಂಖ್ಯೆ: ಇಡಿ/112/ಡಿಟಿಇ/2025) ಆದೇಶಿಸಿದ್ದಾರೆ.

ಎನ್‌ಐಜಿ ಮತ್ತು ಎನ್‌ಐಇಐಟಿ ವಿಲೀನ ಪ್ರಕ್ರಿಯೆಯಿಂದಾಗಿ 2025ರ ಜೂ.11ರಂದು 90 ಸಿಬ್ಬಂದಿಗಳನ್ನು ಕೆಲಸದಿಂದ ತೆಗೆದು ಹಾಕಲು ಎನ್‌ಐಇಐಟಿ ಸಂಸ್ಥೆ ಹೊರಡಿಸಿದ್ದ ಆದೇಶವನ್ನು ಉನ್ನತ ಶಿಕ್ಷಣ ಇಲಾಖೆಯ ಕಾರ್ಯದರ್ಶಿಗಳು ರದ್ದು ಮಾಡಿ, ವಜಾಗೊಳಿಸಲು ಉದ್ದೇಶಿಸಿದ್ದ ಎಲ್ಲಾ ಸಿಬ್ಬಂದಿಗಳನ್ನು ಸೇವಾ ವಿರಾಮವಿಲ್ಲದೆ ತಕ್ಷಣವೇ ಕರ್ತವ್ಯಕ್ಕೆ ನಿಯೋಜಿಸಿಕೊಳ್ಳಬೇಕು. ನ್ಯಾಯಾಂಗದ ಆದೇಶವನ್ನು ದಿಕ್ಕರಿಸಲು ವಜಾ ಪತ್ರಗಳನ್ನು ಜೂ.11ಕ್ಕೂ ಮೊದಲೇ ಹಿಂದಿನ ದಿನಾಂಕದಲ್ಲಿ ಸಿದ್ಧಪಡಿಸಿರುವುದು ತನಿಖೆ ವೇಳೆ ಸಾಬೀತಾಗಿದೆ. ಸಿಬ್ಬಂದಿ ವಜಾಗೊಳಿಸಿರುವುದು ಕರ್ನಾಟಕ ಶಿಕ್ಷಣ ಕಾಯ್ದೆ 1983ರ ನಿಯಮ ಉಲ್ಲಂಘನೆಯಾಗಿದೆ. ಅಲ್ಲದೆ, ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗೆ ಪೂರ್ವ ನೋಟಿಸ್ ನೀಡದೇ, ಅಹವಾಲು ಆಲಿಸದೆ ಕೆಲಸದಿಂದ ವಜಾ ಮಾಡಿರುವುದು ಸಾಮಾಜಿಕ ನ್ಯಾಯದ ವಿರುದ್ಧವಾಗಿದೆ ಎಂದು ಕಾರ್ಯದರ್ಶಿಗಳು ಅಭಿಪ್ರಾಯಪಟ್ಟಿದ್ದಾರೆ.

ಬದುಕಿಗಾಗಿ ಜಯ ಸಿಕ್ಕಿದೆ

ಎನ್‌ಐಇಐಟಿ ಸಂಸ್ಥೆ ಶಿಕ್ಷಣ ತಜ್ಞರ ದೂರದೃಷ್ಟಿಯಿಂದ ನಿರ್ಮಾಣವಾದ ಸಂಸ್ಥೆಯಾಗಿದೆ. ಆದರೆ, ಇಂದಿನ ಆಡಳಿತ ಮಂಡಳಿ ಶಿಕ್ಷಕರನ್ನು ಕೇವಲ ಲಾಭಕ್ಕಾಗಿ ಬಳಸುವ ವಸ್ತುಗಳಂತೆ ನೋಡುತ್ತಿದೆ. ನಮ್ಮ ಸೇವೆ, ಶ್ರಮಕ್ಕೆ ಸಿಕ್ಕ ಜಯ. ರಾಜ್ಯ ಸರ್ಕಾರ ವಜಾಗೊಳಿಸಿರುವ ನೌಕರರನ್ನು ಕೆಲಸಕ್ಕೆ ಸೇರಿಸಿಕೊಳ್ಳುವಂತೆ ಆದೇಶಿಸಿದ್ದರೂ ಆಡಳಿತ ಮಂಡಳಿ ಅದಕ್ಕೆ ಸ್ಪಂದಿಸಲಿಲ್ಲ. ಇದೀಗ ಉನ್ನತ ಶಿಕ್ಷಣ ಇಲಾಖೆಯ ಕಾರ್ಯದರ್ಶಿಗಳು ನೀಡಿರುವ ಆದೇಶವನ್ನು ಎನ್‌ಐಇಐಟಿ ಆಡಳಿತ ಮಂಡಳಿ ಗೌರವಿಸಬೇಕು. ಈಗಲೂ ಆಡಳಿತ ಮಂಡಳಿ ಉದ್ದಟತನ ಪ್ರದರ್ಶಿಸಿದರೆ ಕಾನೂನು ಹೋರಾಟ ಮುಂದುವರೆಸಬೇಕಾಗುತ್ತದೆ.

– ಎನ್‌ಐಇಐಟಿ ಖಾಯಂ ನೌಕರರ ಹಕ್ಕು ಹೋರಾಟ ಸಮಿತಿ

ತಜ್ಞರ ಸಲಹೆ ಪಡೆದು ಮುಂದಿನ ಕಾನೂನು ಹೋರಾಟ ಮಾಡಲಾಗುವುದು

ವಿದ್ಯಾರ್ಥಿಗಳ ದಾಖಲಾತಿ ಪ್ರಮಾಣ ಕುಸಿದ ಪರಿಣಾಮ ಎನ್‌ಐಇಐಟಿ ಸಂಸ್ಥೆಯನ್ನು ಎನ್‌ಐಇಯೊಂದಿಗೆ ವಿಲೀನ ಮಾಡಲಾಗಿದೆ. 2021ರಲ್ಲಿ ವಿದ್ಯಾರ್ಥಿಗಳ ದಾಖಲಾತಿಯನ್ನು ಸ್ಥಗಿತಗೊಳಿಸಲಾಗಿತ್ತು. ಆ ವಿದ್ಯಾರ್ಥಿಗಳು 2025ಕ್ಕೆ ಪಾಸ್‌ಔಟ್ ಆಗಿ ಹೋಗಿದ್ದಾರೆ. ಅಲ್ಲಿಯವರೆಗೂ ವರ್ಕ್‌ಲೋಡ್ ಇಲ್ಲದೇ ಇದ್ದರೂ ಸಿಬ್ಬಂದಿಗೆ ವೇತನ ನೀಡಲಾಗಿದೆ. ಅಲ್ಲದೆ, ವಿಎಸ್‌ಎಸ್(ವಾಲಂಟರಿ ಸೆಪರೇಷನ್ ಸ್ಕೀಂ)ನಡಿ 2ರಿಂದ 16 ಲಕ್ಷ ರೂ.ವರೆಗೆ ಹಣ ನೀಡಲಾಗಿದೆ. ಈ ಯೋಜನೆಯಲ್ಲಿ 20 ಮಂದಿ ಹಣ ಪಡೆದು ಸೇವೆಗೆ ಸೇರಿದ್ದರೆ, 70 ಮಂದಿ ಹಣ ಪಡೆದೂ ನ್ಯಾಯಾಲಯದ ಮೊರೆ ಹೋಗಿದ್ದರು.

ಈ ಹಿಂದೆ ಎನ್‌ಐಇಐಟಿಯಲ್ಲಿ ಕೆಲಸ ಮಾಡುತ್ತಿದ್ದ ಅರ್ಜಿದಾರರು 26/05/2025 ರಂದು ಹೈಕೋರ್ಟ್‌ನಲ್ಲಿ ದಾಖಲಿಸಿದ್ದ ಎರಡು ಪ್ರಕರಣಗಳು ಮುಕ್ತಾಯಗೊಂಡಿವೆ. ಆದರೂ, 14 ಮಂದಿ ಅರ್ಜಿದಾರರು ರಾಜ್ಯ ಸರ್ಕಾರದ ಉನ್ನತ ಶಿಕ್ಷಣ ಕಾರ್ಯದರ್ಶಿಗೆ ದೂರು ನೀಡಿದ್ದಾರೆ. ಈಗ ಕಾರ್ಯದರ್ಶಿಗಳು ಕಾನೂನಿಗೆ ವಿರುದ್ಧವಾದ ಆದೇಶವನ್ನು ಹೊರಡಿಸಿದ್ದಾರೆ. ಆ ಆದೇಶಕ್ಕೆ ಸಂಬಂಧಿಸಿದಂತೆ ಕಾನೂನು ತಜ್ಞರ ಸಲಹೆ ಪಡೆದು ಮುಂದಿನ ಕ್ರಮಗಳನ್ನು ತೆಗೆದುಕೊಳ್ಳುತ್ತೇವೆ. ಅಲ್ಲದೆ, ಅರ್ಜಿದಾರರು ಸಂಸ್ಥೆ ವಿರುದ್ಧ ಮಾಡಿರುವ ಆರೋಪಗಳೆಲ್ಲವೂ ಸುಳ್ಳು ಆರೋಪವಾಗಿದೆ.

– ಎನ್‌ಐಇ ಆಡಳಿತ ಮಂಡಳಿ

ಸರ್ಕಾರಿ ಶಾಲಾ ವಿದ್ಯಾರ್ಥಿಗೆ ಪೊಲೀಸರಿಂದ ಅಭಿನಂದನೆ



ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ 625ಕ್ಕೆ 624 ಅಂಕ ಪಡೆದ ಮೈಸೂರು ತಾಲೂಕಿನ ಇಲವಾಲದಲ್ಲಿರುವ ಕರ್ನಾಟಕ ಪಬ್ಲಿಕ್ ಸ್ಕೂಲ್(ಕೆಪಿಎಸ್)ನ ವಿದ್ಯಾರ್ಥಿನಿ ಮಾಧುರಿ ಮತ್ತು ಆಕೆಯ ತಾಯಿ ಸವಿತಾ ಅವರಿಗೆ ಲಕ್ಷ್ಮಿಪುರಂ ಪೊಲೀಸ್ ಠಾಣೆಯಲ್ಲಿ ಅಭಿನಂದಿಸಲಾಯಿತು. ಇನ್ಸ್‌ಪೆಕ್ಟರ್ ರವಿಶಂಕರ್, ಪಿಎಸ್‌ಐ ಲಕ್ಕಪ್ಪ, ಠಾಣೆಯ ಇತರೆ ಸಿಬ್ಬಂದಿ ಉಪಸ್ಥಿತರಿದ್ದರು.

ರಾಷ್ಟ್ರೀಯ ಜೂನಿಯರ್ ಬ್ಯಾಡ್ಮಿಂಟನ್ ತಂಡಕ್ಕೆ ದಿಯಾ ಭೀಮಯ್ಯ ಆಯ್ಕೆ

ಮೈಸೂರು, ಮೇ 11(ಎಂಕೆ)– ಕೊಡಗಿನ ದಿಯಾ ಭೀಮಯ್ಯಗೆ ರಾಷ್ಟ್ರೀಯ ಮಟ್ಟದ ಜೂನಿಯರ್ ಬ್ಯಾಡ್ಮಿಂಟನ್ ಚಿನ್ನದ ಪ್ರಶಸ್ತಿ ಜೊತೆಗೆ ಭಾರತ ತಂಡವನ್ನು ಜೂನಿಯರ್ ವಿಭಾಗದಲ್ಲಿ ಪ್ರತಿನಿಧಿಸುವ ಅವಕಾಶ ಲಭಿಸಿದೆ.

ಬೆಂಗಳೂರಿನ ವಸಂತನಗರದಲ್ಲಿರುವ ಕರ್ನಾಟಕ ಬ್ಯಾಡ್ಮಿಂಟನ್ ಅಕಾಡೆಮಿಯಲ್ಲಿ ಮೇ 3 ರಿಂದ 10ರವರೆಗೆ ನಡೆದ ಯೋನೆಕ್ಸ್ ಸನ್ ರೈಸ್ ಆಲ್ ಇಂಡಿಯಾ ಜೂನಿಯರ್ (19 ವರ್ಷದೊಳಗಿನ)ರ್‍ಯಾಂಕಿಂಗ್ ಬ್ಯಾಡ್ಮಿಂಟನ್ ಟೂರ್ನಮೆಂಟ್–2026ನಲ್ಲಿ ಜೂನಿಯರ್ ಬಾಲಕಿಯರ ವಿಭಾಗದ ಡಬಲ್ಸ್‌ನಲ್ಲಿ ಹರಿಯಾಣದ ಬಾರುನಿ ಪರುಸ್ವಾಲ್ ಜೊತೆಗೂಡಿದ ಭಾರತದ



ಪ್ರಥಮ ಶ್ರೇಯಾಂಕಿತೆ ಕೊಡಗಿನ ದಿಯಾ ಭೀಮಯ್ಯ ಪ್ರಥಮ ಸ್ಥಾನ ಗಳಿಸಿದ್ದಾರೆ.

ಅಂತಿಮ ಪಂದ್ಯದಲ್ಲಿ ತಮಿಳುನಾಡಿನ ಜೋಡಿ ಎ.ಎಸ್.ಅನುಷ್ಕ ಜೆನ್ನಿಫರ್ ಮತ್ತು ದೀಶಿತ ಸಿಂಘ ಗೋಪಿನಾಥ ಸಿಂಗ್ ವಿರುದ್ಧ 21–10, 22–20 ಅಂಕಗಳಿಂದ ಜಯ ಗಳಿಸಿದ್ದಾರೆ. ಈ ಮೂಲಕ ಜಪಾನಿನ ಯಟ್ಸುಶಿರೊನಲ್ಲಿ ಜೂ.26 ರಿಂದ ಜು.5 ರವರೆಗೆ ನಡೆಯಲಿರುವ ಬ್ಯಾಡ್ಮಿಂಟನ್ ಏಶಿಯ ಜೂನಿಯರ್ ಚಾಂಪಿಯನ್–2026 ಟೂರ್ನಿಯಲ್ಲಿ ಭಾರತದ ಜೂನಿಯರ್ ತಂಡವನ್ನು ಪ್ರತಿನಿಧಿಸುವ ನೇರ ಅವಕಾಶ ಪಡೆದಿದ್ದಾರೆ. ಜೊತೆಗೆ ಮಿಶ್ರ ಡಬ್ಬಲ್ಸ್‌ನಲ್ಲಿ ಭಾರತದ ಜೂನಿಯರ್ ತಂಡಕ್ಕೆ ಆಯ್ಕೆ ಪಡೆಯಲು ನಡೆಯಲಿರುವ ಪ್ರಕ್ರಿಯೆಯಲ್ಲಿ ಭಾಗವಹಿಸುವ ಅವಕಾಶವನ್ನು ಸಹ ಪಡೆದುಕೊಂಡಿದ್ದಾರೆ.

ಪ್ರಧಾನಿ ಮೋದಿ ಅವರ ಮಿತ ಬಳಕೆ ಮನವಿ ಎಲ್ಲರೂ ಸ್ವಾಗತಿಸಬೇಕು: ಹೆಚ್‌ಡಿಡಿ

ಬೆಂಗಳೂರು: ಪ್ರಧಾನಿ ನರೇಂದ್ರ ಮೋದಿ ಅವರ ಮಿತ ಬಳಕೆ ಮನವಿಯನ್ನು ಎಲ್ಲರೂ ಸ್ವಾಗತ ಮಾಡಬೇಕು ಎಂದು ಮಾಜಿ ಪ್ರಧಾನಿ ದೇವೇಗೌಡ ಕರೆ ನೀಡಿದ್ದಾರೆ.



ಬೆಂಗಳೂರಿನಲ್ಲಿ ಮಾತನಾಡಿದ ಅವರು, ತೆಲಂಗಾಣದಲ್ಲಿ ಮೋದಿ ಕೆಲವು ಸಲಹೆ ಕೊಟ್ಟಿದ್ದಾರೆ. ದೇಶದ 150 ಕೋಟಿ ಜನರಿಗೆ ಮೋದಿ ಮನವಿ ಮಾಡಿದ್ದಾರೆ. ಅಂತಾರಾಷ್ಟ್ರೀಯ ಮಟ್ಟದಲ್ಲಿ ಆಗಿರುವ ಸಂಘರ್ಷದಿಂದ ಆಗಿರುವ ಕೆಟ್ಟ ದುಷ್ಪರಿಣಾಮವಿದು. ಹೀಗಾಗಿ ಮೋದಿ ಅವರ ಮನವಿಯನ್ನ ಸ್ವಾಗತ ಮಾಡಬೇಕು ಎಂದಿದ್ದಾರೆ. ಅಮೆರಿಕಾ–ಇಸ್ರೇಲ್–ಇರಾನ್ ನಡುವೆ ಕದನ ಆಗ್ತಿದೆ. ಅದರಿಂದ ದುಷ್ಪರಿಣಾಮ ಆಗಿದೆ. ಈ ಹಿನ್ನಲೆ ಮೋದಿ ಅವರು ಬಳಕೆ ಮಾಡೋವಾಗ ನಿಧಾನವಾಗಿ, ಎಚ್ಚರಿಕೆಯಿಂದ ಮಾಡಿ ಅಂತ ಹೇಳಿದ್ದಾರೆ ಎಂದು ಮೋದಿ ಹೇಳಿಕೆ ಸಮರ್ಥಿಸಿಕೊಂಡಿದ್ದಾರೆ.

ಮೂರನೇ ಪುಟದಿಂದ

ದೇವರಾಜ ಮಾರುಕಟ್ಟೆ, ಲ್ಯಾನ್ಸ್‌ಡೌನ್ ಬಿಲ್ಡಿಂಗ್ ಸಂರಕ್ಷಣೆ ಮಾಡಬೇಕು

ಪ್ರಶ್ನೆಯೊಂದಕ್ಕೆ ಪ್ರತಿಕ್ರಿಯಿಸಿದರು. ದೇವರಾಜ ಮಾರುಕಟ್ಟೆಯ ಒಂದು ಭಾಗ ಕುಸಿದಿತ್ತು ಎಂಬುದಕ್ಕೆ ಪ್ರತಿಕ್ರಿಯಿಸಿ, ಅದು ಯಾವ ರೀತಿ ಕುಸಿದಿತ್ತು ಎಂಬುದು ಎಲ್ಲರಿಗೂ ಗೊತ್ತಿದೆ. ರಾತ್ರೋರಾತ್ರಿ ಡ್ರಿಲಿಂಗ್ ಮೂಲಕ ಕೆಡವಿದ್ದರು ಎಂಬುದು ಎಲ್ಲಗೂ ಗೊತ್ತಿದೆ. ಆ ಸಂಬಂಧ ವಿಡಿಯೋಗಳು ಇವೆ. ಇದಾದ ಬಳಿಕ ದೊಡ್ಡ ಮಟ್ಟದಲ್ಲಿ ಸಾಕಷ್ಟು ಬಾರಿ ಮಳೆ ಸುರಿದಿದೆ. ಅಂತಹ ಮಳೆ ಬಂದಾಗಲೂ ಕಟ್ಟಡ ಸದೃಢವಾಗಿದೆ. ಇಂದಿನ ಆಧುನಿಕ ಕಾಲದ ಸೌಲಭ್ಯಗಳನ್ನು ಸಂರಕ್ಷಣೆ ಪ್ರಕ್ರಿಯೆ ವೇಳೆ ಮಾರುಕಟ್ಟೆಯಲ್ಲಿ ಒದಗಿಸಲು ಅವಕಾಶ ವಿದೆ. ಸಂರಕ್ಷಣೆ ಕಾರ್ಯಕ್ಕೆ ಅಗತ್ಯ ಸಹಕಾರ ನೀಡಲು ಸಮಸ್ತ ವ್ಯಾಪಾರಸ್ಥರು ತಯಾರಿದ್ದಾರೆ ಎಂದು ಹೇಳಿದರು.



ಬೇರೆ ಬೇರೆ ಸ್ಥಳದಲ್ಲಿ ಮಾರ್ಕೆಟ್ ಸ್ಥಾಪಿಸಿ: ವಾಣಿವಿಲಾಸ ಮಾರುಕಟ್ಟೆ ಸೇರಿದಂತೆ ಇನ್ನಿತರ ಮಾರುಕಟ್ಟೆಗಳ ಬಗ್ಗೆ ಪರಿಶೀಲಿಸಬೇಕಿದೆ ಎಂದು ಪ್ರಶ್ನೆಯೊಂದಕ್ಕೆ ಪ್ರತಿಕ್ರಿಯಿಸಿದ ಅವರು, ಕೋರ್ಟ್ ನಿರ್ದೇಶನದಿಂದ ಸರ್ಕಾರ ಪ್ರೇರಣೆಗೊಂಡು ಮಾರುಕಟ್ಟೆ ಸಂರಕ್ಷಣೆ ಮಾಡುವ ಮೂಲಕ ಎಲ್ಲಾ ಪಾರಂಪರಿಕ ಕಟ್ಟಡಗಳ ಸಂರಕ್ಷಣೆ ಮಾಡಬಹುದು. ನಗರ ಬೆಳೆಯುತ್ತಿರುವ ಹಿನ್ನೆಲೆಯಲ್ಲಿ ಬೇರೆ ಬೇರೆ ಜಾಗಗಳಲ್ಲಿ ಸಹ ಮಾರುಕಟ್ಟೆ ನಿರ್ಮಿಸಬೇಕಿದೆ. ಇದು ಗ್ರೇಟರ್ ಮೈಸೂರು ಯೋಜನೆಯಲ್ಲಿ ಇದೆಯೋ ಇಲ್ಲವೋ ಮಾಹಿತಿ ಇಲ್ಲ. ಆದರೆ ಇಲ್ಲವಾದರೆ ಇದನ್ನು ಅಳವಡಿಸಿಕೊಳ್ಳಬೇಕು ಎಂದು ಅಭಿಪ್ರಾಯಪಟ್ಟರು.

ಮೈಸೂರಿನಲ್ಲಿರುವ ಪಾರಂಪರಿಕ ಕಟ್ಟಡಗಳನ್ನು ಸಂರಕ್ಷಣೆ ಮಾಡಬೇಕೆಂಬ ಹೋರಾಟದಲ್ಲಿ ಸಂಸದನಾಗುವ ಮುಂಚಿನಿಂದಲೂ ತೊಡಗಿಸಿ ಕೊಂಡಿದ್ದೇನೆ. ಪಾರಂಪರಿಕತೆ ಉಳಿಸಿ ಕೊಂಡೇ ನಗರದ ಅಭಿವೃದ್ಧಿ ಮಾಡಬೇಕಿದೆ. ನಮ್ಮ ರಾಷ್ಟ್ರದಲ್ಲಿ ಪಾರಂಪರಿಕ ಕಟ್ಟಡಗಳನ್ನು ಸಂರಕ್ಷಣೆ ಮಾಡಿರುವುದಕ್ಕೆ ಸಾಕಷ್ಟು ಉದಾಹರಣೆಗಳು ಇವೆ. ಅದಕ್ಕೆ ಅಗತ್ಯವಾದ ತಂತ್ರಜ್ಞಾನ ಹಾಗೂ ತಜ್ಞರು ಇದ್ದಾರೆ ಎಂದರು. ಮೈಸೂರು ಮಹಾನಗರ ಪಾಲಿಕೆ ದೇವರಾಜ ಮಾರುಕಟ್ಟೆ ಬಾಡಿಗೆದಾರರ ಸಂಘ ಅಧ್ಯಕ್ಷ ಪೈ.ಎಸ್.ಮಹದೇವ್, ಪದಾಧಿಕಾರಿಗಳಾದ ಪಿ.ಎನ್.ಸುಬ್ರಮಣಿ, ಮಂಜುನಾಥ್, ಆನಂದ್‌ಕುಮಾರ್, ಅಮರ್‌ನಾಥ್, ಹಿರಾಚಂದ್, ಕೆ.ವಿ.ಶ್ರೀನಿವಾಸ್ ಹಾಗೂ ವ್ಯಾಪಾರಸ್ಥರು ಹಾಜರಿದ್ದರು.

ಸಂಪೂರ್ಣವಾಗಿ ಪಾರಂಪರಿಕ ಕಟ್ಟಡವಲ್ಲ

ದೇವರಾಜ ಮಾರುಕಟ್ಟೆಯು ಸಂಪೂರ್ಣವಾಗಿ ಪಾರಂಪರಿಕ ಕಟ್ಟಡವಲ್ಲ. ಸುಮಾರು ಏಳು ಎಕರೆ ವಿಸ್ತೀರ್ಣ ಹೊಂದಿರುವ ಮಾರುಕಟ್ಟೆ ಸುತ್ತ ಹದಿನೈದು ಅಡಿ ಅಳತೆಯಲ್ಲಿ ಚೌಕಾಕಾರವಾಗಿ ನಿರ್ಮಿಸಿರುವ ಕಟ್ಟಡ ಮಾತ್ರ ಪಾರಂಪರಿಕ ಸೌಧವಾಗಿದೆ. ಅದರ ಮಧ್ಯ ಭಾಗದಲ್ಲಿರುವ ಸುಮಾರು ಐದು ಎಕರೆ ವಿಸ್ತೀರ್ಣದ ಕಲ್ನಾರ್ ಶೀಟ್ ಕಟ್ಟಡವು ಸಾಮಾನ್ಯ ನಿರ್ಮಾಣವಾಗಿದೆ. ಈ ಜಾಗದಲ್ಲಿ ನಾನು ಮೇಯರ್ ಹಾಗೂ ಕೆ.ಎಸ್.ರಾಯ್ಕರ್ ಆಯುಕ್ತರಾಗಿದ್ದ ವೇಳೆ ಪಾರ್ಕಿಂಗ್ ಸಹಿತ 2 ಸಾವಿರ ಸುಸಜ್ಜಿತ ಮಳಿಗೆಗಳ ಕಟ್ಟಡ ನಿರ್ಮಿಸಲು ನಕ್ಷೆ ತಯಾರಿಸಿ, ಸರ್ಕಾರಕ್ಕೆ ಕಳುಹಿಸಲಾಗಿತ್ತು. ಆದರೆ ಅನುಮತಿ ಸಿಗದ ಕಾರಣ ಯೋಜನೆ ನೆನೆಗುದಿಗೆ ಬಿತ್ತು.



- ಸಂದೇಶ್ ಸ್ವಾಮಿ, ಮಾಜಿ ಮೇಯರ್

ಮೋದಿ ಪ್ರಧಾನಿಯೇ ಇಲ್ಲ ಬಿಜೆಪಿ ಅಧ್ಯಕ್ಷರೋ... ವಿಪಕ್ಷ ನಾಯಕರೋ

ದ್ವೇಷಾಸೂಯೆಗಳನ್ನು ವ್ಯಕ್ತಪಡಿಸುವ ಭಾಷಣಗಳ ಮೂಲಕ ಮಣ್ಣುಪಾಲು ಮಾಡುತ್ತಿದ್ದಾರೆ. ಬೆಂಗಳೂರಿಗೆ ಬಂದಿದ್ದ ಮೋದಿಯವರು ಇನ್ನೂ ಪಂಚ ರಾಜ್ಯಗಳ ಚುನಾವಣಾ ರ್‍ಯಾಲಿಗಳ ಗುಂಗಿನಲ್ಲಿಯೇ ಇದ್ದಂತೆ ಕಂಡರು ಎಂದು ಅವರು ಕುಟುಕಿದ್ದಾರೆ.

'2024–25ರಲ್ಲಿಯೇ ಭಾರತವನ್ನು 5 ಟ್ರಿಲಿಯನ್ ಡಾಲರ್ ಆರ್ಥಿಕತೆಯ ದೇಶ ಮಾಡುವೆ ಎಂದು ಕೊಚ್ಚಿಕೊಂಡಿದ್ದ, ಭಾರತದ ಅಭಿವೃದ್ಧಿ ರಥ ನಾಗಾಲೋಟದಿಂದ ಮುಂದೋಡುತ್ತಿದೆ ಎಂದು ಬೀಗಿದ್ದ ಮತ್ತು ದೇಶದ ಬಡತನವನ್ನು ನಿರ್ಮೂಲನೆ ಮಾಡಿ ಆಗಿದೆ ಎಂದು ತನ್ನ ಬೆನ್ನನ್ನು ತಾನೇ ಚಪ್ಪರಿಸಿಕೊಂಡಿದ್ದ ಮೋದಿ ಅವರು ಈಗ ಚಿನ್ನ ಖರೀದಿಸಬೇಡಿ, ಪೆಟ್ರೋಲ್ ಮತ್ತು ಖಾದ್ಯ ಎಣ್ಣೆ ಕಡಿಮೆ ಬಳಸಿ, ವಿದೇಶ ಪ್ರವಾಸ ಮಾಡಬೇಡಿ ಮತ್ತು ಗೊಬ್ಬರ ಬಳಕೆ ತಗ್ಗಿಸಿ ಎಂದು ಬೇಡಿಕೊಳ್ಳುತ್ತಿರುವುದು ಯಾವ ಅಭಿವೃದ್ಧಿಯ ಲಕ್ಷಣ ಎನ್ನುವುದನ್ನು ಅವರೇ (ಮೋದಿ) ಸ್ಪಷ್ಟಪಡಿಸಬೇಕು ಎಂದು ಸಿದ್ದರಾಮಯ್ಯ ಒತ್ತಾಯಿಸಿದ್ದಾರೆ.

ಪೆಟ್ರೋಲ್, ಡೀಸೆಲ್, ಅಡುಗೆ ಅನಿಲ, ಖಾದ್ಯತೈಲ ಎಲ್ಲವೂ ದುಬಾರಿಯಾಗಿ ದೇಶದ ಜನರ ನಿತ್ಯದ ಜೀವನ ನಿರ್ವಹಣೆಗಾಗಿ ಪರದಾಡುವಂತಹ ಪರಿಸ್ಥಿತಿ ನಿರ್ಮಾಣಕ್ಕೆ ದೇಶದ ಎಡಬಿಡಂಗಿ ವಿದೇಶಾಂಗ ನೀತಿ ಕಾರಣ ಎನ್ನುವುದನ್ನು ಅರಿತುಕೊಳ್ಳುವಷ್ಟು ಜನತೆ ಪ್ರಬುದ್ಧರಾಗಿದ್ದಾರೆ. ಇರಾನ್ ವಿರುದ್ಧ ಇಸ್ರೇಲ್ ಮತ್ತು ಅಮೆರಿಕ ಜಂಟಿಯಾಗಿ ನಡೆಸುತ್ತಿರುವ ಯುದ್ಧದ ನಡುವೆ ಭಾರತ ಸಿಕ್ಕಿಹಾಕಿಕೊಂಡು ಒದ್ದಾಡುತ್ತಿದೆ. ಇಂತಹ ಸಂದರ್ಭದಲ್ಲಿ ನ್ಯಾಯ ಮತ್ತು ನೀತಿಯ ಪರವಾಗಿ ಗಟ್ಟಿಯಾದ ನಿಲುವು ತೆಗೆದುಕೊಂಡಿದ್ದರೆ ಭಾರತ ಇಂದಿನ ದುಸ್ಥಿತಿಯನ್ನು ಎದುರಿಸುತ್ತಿರಲಿಲ್ಲ. ಮೋದಿಯವರೇ, ಈ ವೈಫಲ್ಯಕ್ಕೆ ಯಾರನ್ನು ದೂರುತ್ತೀರಿ ಜವಾಹರಲಾಲ್ ನೆಹರೂ ಅವರನ್ನೇ ಕಾಂಗ್ರೆಸ್ ಪಕ್ಷವನ್ನೇ ಎಂದು ಪ್ರಶ್ನಿಸಿದ್ದಾರೆ.

ಕಾಂಗ್ರೆಸ್ ಆಡಳಿತದಲ್ಲಿ ಕರ್ನಾಟಕದ ಆರ್ಥಿಕ ಪರಿಸ್ಥಿತಿ ಸುಭದ್ರವಾಗಿದೆ. ದೇಶದ ತಲಾ ಆದಾಯ 2.11 ಲಕ್ಷ ಆಗಿದ್ದರೆ ಕರ್ನಾಟಕದ್ದು 4.33 ಲಕ್ಷ. ದೇಶದ ಜಿಡಿಪಿ ಬೆಳವಣಿಗೆಯ ದರ ಶೇಕಡ 7.4 ಆಗಿದ್ದರೆ, ಕರ್ನಾಟಕದ್ದು ಶೇಕಡ 8.1 ಆಗಿದೆ. ದೇಶದ ಜಿಡಿಪಿಯಲ್ಲಿ ಕರ್ನಾಟಕದ ಪಾಲು ಶೇಕಡ 9.19 ಆಗಿದೆ. ಜಿಎಸ್‌ಟಿ ಸಂಗ್ರಹದಲ್ಲಿ ಮಹಾರಾಷ್ಟ್ರದ ನಂತರ ಕರ್ನಾಟಕದ್ದೇ ಅತ್ಯಧಿಕ ಪಾಲು ಎಂದು ಮೋದಿ ವಿರುದ್ಧ ಸಿದ್ದರಾಮಯ್ಯ ವಾಗ್ದಾಳಿ ನಡೆಸಿದ್ದಾರೆ.

ಮೋದಿ ಅವರೇ, ಕರ್ನಾಟಕವು ಅಭಿವೃದ್ಧಿಯ ಪಥದಲ್ಲಿ ವೇಗದಲ್ಲಿ ಸಾಗುತ್ತಿರುವುದಕ್ಕೆ ಇನ್ನೇನು ಪುರಾವೆ ಬೇಕು? ಮುಂದಿನ ಬಾರಿ ನಮ್ಮ ಸರ್ಕಾರದ ವಿರುದ್ಧ ಆರೋಪ ಮಾಡುವಾಗ ಸ್ವಲ್ಪ ಪೂರ್ವ ತಯಾರಿ ಮಾಡಿಕೊಂಡು ಬನ್ನಿ. ದೇಶದ ಪ್ರಧಾನಿಯವರ ಬಾಯಲ್ಲಿ ಸುಳ್ಳು ಹೇಳಿಕೆಗಳು ಶೋಭೆಯಲ್ಲ ಎಂದು ಕುಟುಕಿದ್ದಾರೆ.

ಮೋದಿಯವರು ತಮ್ಮ ಪಕ್ಷದ ವಿಶ್ವಾಸದ್ರೋಹದ ಚರಿತ್ರೆಯನ್ನು ಒಮ್ಮೆ ನೆನಪುಮಾಡಿಕೊಂಡಿದ್ದರೆ ಅವರು ಖಂಡಿತ ಕಾಂಗ್ರೆಸ್ ಪಕ್ಷದ ಮೇಲೆ ವಿಶ್ವಾಸದ್ರೋಹದ ಆರೋಪವನ್ನು ಮಾಡುತ್ತಿರಲಿಲ್ಲ. ಬಿಎಸ್‌ಪಿ, ಟಿಎಂಸಿ, ಡಿಎಂಕೆ, ಎಐಡಿಎಂಕೆ, ಪಿಡಿಪಿ, ಶಿವಸೇನಾ, ಅಕಾಲಿದಳ, ನ್ಯಾಷನಲ್ ಕಾನ್ಫರೆನ್ಸ್ ಸೇರಿದಂತೆ ಬಿಜೆಪಿ ಜೊತೆ ಮೈತ್ರಿ ಮಾಡಿಕೊಂಡು ವಿಶ್ವಾಸದ್ರೋಹಕ್ಕೊಳಗಾದ ಪ್ರಾದೇಶಿಕ ಪಕ್ಷಗಳ ಪಟ್ಟಿ ಬೆಳೆಯುತ್ತಲೇ ಇದೆ. ಇನ್ನೊಂದೆಡೆ ಕಾಂಗ್ರೆಸ್ ಮತ್ತು ಇತರ ಪಕ್ಷಗಳ ನಾಯಕರನ್ನು ಬ್ಲಾಕ್‌ಮೇಲ್ ಮಾಡಿ ಅವರು ತಮ್ಮ ಪಕ್ಷಗಳಿಗೆ ವಿಶ್ವಾಸದ್ರೋಹ ಎಸಗುವಂತೆ ಮಾಡಿ, ಜೊತೆಯಲ್ಲಿ ಸೇರಿಸಿಕೊಂಡ ವಿರೋಧ ಪಕ್ಷದ ನಾಯಕರ ಪಟ್ಟಿಯೂ ಬೆಳೆಯುತ್ತಿದೆ. ಇಂತಹ ವಿಶ್ವಾಸದ್ರೋಹಿ ಪಕ್ಷದ ನಾಯಕರಾದ ಮೋದಿಯವರು ಕಾಂಗ್ರೆಸ್ ಪಕ್ಷದ ವಿರುದ್ಧ ವಿಶ್ವಾಸದ್ರೋಹದ ಆರೋಪ ಮಾಡುತ್ತಿರುವುದನ್ನು ನೋಡಿ ದೇಶದ ಜನರೇ ಅಪಹಾಸ್ಯ ಮಾಡುತ್ತಿದ್ದಾರೆ ಎಂದಿದ್ದಾರೆ.

ಕರ್ನಾಟಕದ ಬಿಜೆಪಿಯ ಸ್ಥಿತಿ ಬುಟ್ಟಿಯಲ್ಲಿ ಕೂಡಿ ಹಾಕಿರುವ ಏಡಿಗಳಂತಾಗಿದೆ. ಒಬ್ಬರ ಕಾಲನ್ನು ಮತ್ತೊಬ್ಬರು ಎಳೆದುಕೊಂಡು ರಾಜಕೀಯ ಹರಾಕಿರಿ ನಡೆಸುತ್ತಿದ್ದಾರೆ. ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪ ಮತ್ತು ಅವರ ಕುಟುಂಬಕ್ಕೆ ಎದುರಾಗಿ ಪಕ್ಷದೊಳಗೆ ಅರ್ಧ ಡಜನ್ ಗುಂಪುಗಳಿವೆ. ಈ ಗುಂಪುಗಳ ನಾಯಕರು ಯಡಿಯೂರಪ್ಪ ವಿರುದ್ಧ ನೂರಾರು ಆರೋಪಗಳನ್ನು ಮಾಡಿದ್ದರೂ ಅವರ ವಿರುದ್ಧ ಶಿಸ್ತಿನ ಕ್ರಮ ಕೈಗೊಳ್ಳುವ ಧೈರ್ಯ 56 ಇಂಚಿನ ಎದೆಯಳತೆಯ ನಾಯಕರಲ್ಲಿ ಇಲ್ಲ. ರಾಜ್ಯ ಬಿಜೆಪಿ ಅಧ್ಯಕ್ಷರ ಮಾತಿಗೆ ಆ ಪಕ್ಷದಲ್ಲಿ ಕವಡೆಕಾಸಿನ ಕಿಮ್ಮತ್ತಿಲ್ಲ ಎಂದು ಸಿದ್ದರಾಮಯ್ಯ ಕಾಲೆಳೆದಿದ್ದಾರೆ.

ಪಕ್ಷವೇ ಅವಮಾನತುಗೊಳಿಸಿದ್ದ ನಾಯಕರ ಕಾಲಿಗೆಬಿದ್ದು ಕರೆತಂದು ಚುನಾವಣಾ ಪ್ರಚಾರ ಮಾಡುವಷ್ಟರ ಮಟ್ಟಿಗೆ ರಾಜ್ಯದ ಬಿಜೆಪಿಯ ಸ್ಥಿತಿ ಕೆಟ್ಟುಹೋಗಿದೆ. ಇಂತಹವರು ಕಾಂಗ್ರೆಸ್ ಪಕ್ಷಕ್ಕೆ ಬುದ್ಧಿ ಹೇಳಲು ಹೊರಟಿದ್ದಾರೆ. ಪ್ರಧಾನಿಯವರೇ ಮೊದಲು ಕುಸಿದು ಬೀಳುತ್ತಿರುವ ನಿಮ್ಮ ಮನೆಯನ್ನು ಭದ್ರಮಾಡಿಕೊಳ್ಳಿ, ನಂತರ ನಮ್ಮ ಬಗ್ಗೆ ಮಾತನಾಡಿ ಎಂದು ಸಿದ್ದರಾಮಯ್ಯ ಆಕ್ರೋಶ ಹೊರಹಾಕಿದ್ದಾರೆ.

ತಮಿಳ್ನಾಡಿನಿಂದ ತಂದಿರುವ ಬಗ್ಗೆ ಶಂಕೆ; ಎನ್‌ಐಎಯಿಂದ ಪರಿಶೀಲನೆ

ಪ್ರಾಥಮಿಕ ತನಿಖೆಯಿಂದ ಜಿಲೆಟಿನ್ ಕಡ್ಡಿಗಳನ್ನು ಉದ್ದೇಶಪೂರ್ವಕವಾಗಿಯೇ ಇರಿಸಲಾಗಿದೆ ಎಂಬ ಅಂಶ ಬೆಳಕಿಗೆ ಬಂದಿದೆ. ಈ ಹಿನ್ನೆಲೆಯಲ್ಲಿ ರಾಷ್ಟ್ರೀಯ ತನಿಖಾ ದಳ (ಎನ್‌ಐಎ) ರಕ್ಷಣಾ ಸಂಶೋಧನೆ ಮತ್ತು ವಿಶ್ಲೇಷಣಾ ವಿಭಾಗ (ಆರ್‌ಎಡಬ್ಲ್ಯೂ–ರಾ) ಜೊತೆ ಕೇಂದ್ರ ಗುಪ್ತಚರ ಇಲಾಖೆ ಅಧಿಕಾರಿಗಳು ತನಿಖೆ ಕೈಗೊಂಡಿದ್ದಾರೆ. ಕೇಂದ್ರ ಸರ್ಕಾರ ಪ್ರಕರಣವನ್ನು ಗಂಭೀರವಾಗಿ ತೆಗೆದುಕೊಂಡಿದ್ದು, ಭದ್ರತಾ ವೈಫಲ್ಯ ಎಂಬುದಾಗಿ ಪರಿಗಣಿಸಲಾಗಿದೆ.

ಪ್ರಧಾನಿ ಅವರನ್ನು ಗುರಿಯಾಗಿಸಿ ನಡೆಸಿರುವ ವ್ಯವಸ್ಥಿತ ಸಂಚು ಎಂಬುದು ಮೇಲ್ನೋಟಕ್ಕೆ ಕಂಡುಬಂದಿರುವುದರಿಂದ ರಾಜ್ಯದಲ್ಲಿ ಭದ್ರತಾ ಉಸ್ತುವಾರಿ ವಹಿಸಿದ್ದ ಹಿರಿಯ ಪೊಲೀಸ್ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮಕ್ಕೆ ಸಿದ್ಧತೆ ನಡೆದಿದೆ.

ರಾಜ್ಯ ಗುಪ್ತಚರ ವಿಭಾಗದ ಎಡಿಜಿಪಿ ಲಾಬೂರಾಮ್, ಬೆಂಗಳೂರು ದಕ್ಷಿಣ ಜಿಲ್ಲಾ ಎಸ್‌ಪಿ ಶ್ರೀನಿವಾಸ್‌ಗೌಡ ಸೇರಿದಂತೆ ಪ್ರಧಾನಿಗಳ ಭದ್ರತಾ ಉಸ್ತುವಾರಿ ವಹಿಸಿದ್ದ ಪೊಲೀಸ್ ಅಧಿಕಾರಿಗಳಿಗೆ ಶಿಸ್ತು ಕ್ರಮದ ಭೀತಿ ಎದುರಾಗಿದೆ. ಎನ್‌ಐಎ ಡಿವೈಎಸ್‌ಪಿ ನೇತೃತ್ವದ ತಂಡ ಸ್ಫೋಟಕ ಪತ್ತೆಯಾದ ವಡೇರಹಳ್ಳಿಗೇಟ್ ಸಮೀಪದ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದೆ.

ಎನ್‌ಐಎ ಅಧಿಕಾರಿಗಳು ಬೆಂಗಳೂರು ದಕ್ಷಿಣ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶ್ರೀನಿವಾಸ್‌ಗೌಡ ಅವರಿಂದ ಘಟನೆಯ ಸಂಪೂರ್ಣ ಮಾಹಿತಿ ಪಡೆದುಕೊಂಡಿದ್ದಾರೆ.

ಪ್ರಧಾನಿ ಅವರ ಭದ್ರತೆ ಜವಾಬ್ದಾರಿ ಹೊಂದಿರುವ ಎನ್‌ಎಸ್‌ಜಿ ಪಡೆಯ ಮುಖ್ಯಸ್ಥರು ರಾಜ್ಯ ಪೊಲೀಸ್ ಇಲಾಖೆಯಿಂದ ತನಿಖಾ ಪ್ರಗತಿಯ ವರದಿ ತರಿಸಿಕೊಂಡಿದ್ದಾರೆ.

ಆಘಾತಕಾರಿ ಸಂಗತಿ : ರಾಮನಗರ ಡಿವೈಎಸ್‌ಪಿ ಶ್ರೀನಿವಾಸ್ ನೇತೃತ್ವದಲ್ಲಿ ನಡೆಯುತ್ತಿರುವ ಪ್ರಾಥಮಿಕ ತನಿಖೆಯಲ್ಲಿ ಕೆಲವು ಆಘಾತಕಾರಿ ಅಂಶಗಳು ವ್ಯಕ್ತವಾಗಿದ್ದು, ಜಿಲೆಟಿನ್ ಕಡ್ಡಿಗಳಿದ್ದ ಬಾಕ್ಸ್‌ಗಳನ್ನು ದುಷ್ಕರ್ಮಿಗಳು ಉದ್ದೇಶಪೂರ್ವಕವಾಗಿ ಇಟ್ಟಿದ್ದಾರೆ ಎಂಬುದು ದೃಢಪಟ್ಟಿದೆ.

ಸ್ಫೋಟಕಗಳನ್ನು ಯಾವ ನಿರ್ದಿಷ್ಟ ಸಮಯದಲ್ಲಿ ತಂದು ಇರಿಸಲಾಗಿತ್ತು. ಯಾರು ಇಟ್ಟಿದ್ದಾರೆ ಎಂಬ ಬಗ್ಗೆ ಇನ್ನೂ ಸ್ಪಷ್ಟವಾಗಿಲ್ಲ. ಸ್ಫೋಟಕ ಪತ್ತೆಯಾದ ಜಾಗದಲ್ಲಿ ಸಿಸಿಟಿವಿ ಕ್ಯಾಮೆರಾಗಳು ಇಲ್ಲದಿರುವುದು ತನಿಖಾ ತಂಡಕ್ಕೆ ದೊಡ್ಡ ಸವಾಲಾಗಿ ಪರಿಣಮಿಸಿದೆ. ಆದಾಗ್ಯೂ, ರಸ್ತೆಯ ಪ್ರವೇಶ ಮತ್ತು ನಿರ್ಗಮನ ಸ್ಥಳಗಳ ಸಿಸಿಟಿವಿ ದೃಶ್ಯಾವಳಿಗಳನ್ನು ಪೊಲೀಸರು ಪರಿಶೀಲಿಸುತ್ತಿದ್ದಾರೆ.

ಸಿಸಿ ಕ್ಯಾಮರಾ ಪರಿಶೀಲನೆ : ಒಂದು ತಂಡ ಘಟನಾ ಸ್ಥಳದ ಸುತ್ತಮುತ್ತಲಿನ ಸಿಸಿಟಿವಿಗಳ ಪರಿಶೀಲನೆ ಮಾಡುತ್ತಿದ್ದು, ಮತ್ತೊಂದು ತಂಡ ಸ್ಥಳಕ್ಕೆ ಜಿಲೆಟಿನ್ ಕಡ್ಡಿ ಹೇಗೆ ಬಂತು, ಯಾರು ತಂದು ರಸ್ತೆ ಪಕ್ಕ ಹಾಕಿದ್ದಾರೆ ಎಂಬ ಬಗ್ಗೆ ತನಿಖೆ ನಡೆಸುತ್ತಿದೆ. ಸ್ಫೋಟಕ ಕಡ್ಡಿಗಳನ್ನು ವಿಧ್ವಂಸಕ ಕೃತ್ಯಕ್ಕೆ ಬಳಸಲಾಗಿತ್ತೇ ಅಥವಾ ಕ್ವಾರಿಗೆ ತೆಗೆದುಕೊಂಡು ಹೋಗುವಾಗ ಪೊಲೀಸರನ್ನು ಕಂಡು ಭಯದಿಂದ ಜಿಲೆಟಿನ್ ಕಡ್ಡಿಗಳಿದ್ದ ಬಾಕ್ಸ್ ಎಸೆದು ಹೋಗಿದ್ದಾರೆಯೇ ಎಂಬ ಬಗ್ಗೆಯೂ ತನಿಖೆ ಚುರುಕುಗೊಳಿಸಲಾಗಿದೆ.

ಜಿಲೆಟಿನ್ ಕಡ್ಡಿ ಬಳಸುವ ಕಲ್ಲು ಕ್ವಾರಿ ಮಾಲೀಕರು ಹಾಗೂ ಕಾರ್ಮಿಕರ ಕುರಿತು ತನಿಖಾ ತಂಡಗಳು ಮಾಹಿತಿ ಕಲೆ ಹಾಕುತ್ತಿದ್ದು, ಸುತ್ತಮುತ್ತಲ ಗೋದಾಮುಗಳ ತಪಾಸಣೆ ನಡೆಸಲಾಗುತ್ತಿದೆ. ಕಗ್ಗಲಿಪುರ ಠಾಣೆ ಪೊಲೀಸ್ ಮತ್ತು ಎನ್‌ಐಎ ತಂಡ ಜಂಟಿಯಾಗಿ ಅನುಮಾನಾಸ್ಪದ ವ್ಯಕ್ತಿಗಳ ಚಲನವಲನದ ಮೇಲೆ ನಿಗಾ ಇಟ್ಟಿವೆ.

ಅಧಿಕಾರಿಗಳಿಂದ ಮಾಹಿತಿ ಸಂಗ್ರಹ : ಕೃತ್ಯದ ಹಿಂದೆ ಅಂತರರಾಜ್ಯ ಅಥವಾ ಅಂತರಜಿಲ್ಲಾ ನಂಟು ಇದೆಯೇ ಎಂಬ ಕುರಿತು 'ರಾ' ಅಧಿಕಾರಿಗಳು ಮಾಹಿತಿ ಕಲೆಹಾಕುತ್ತಿದ್ದಾರೆ. ಅತ್ಯಂತ ಬಿಗಿ ಭದ್ರತೆ ನಡುವೆಯೂ ಭದ್ರತಾ ಲೋಪ ಸಂಭವಿಸಿರುವುದು ಕೇಂದ್ರ ಮತ್ತು ರಾಜ್ಯದ ಭದ್ರತಾ ಏಜೆನ್ಸಿಗಳಲ್ಲಿ ಆತಂಕ ಮೂಡಿಸಿದ್ದು, ಆರೋಪಿಗಳ ಪತ್ತೆಗೆ ಬಲೆ ಬೀಸಲಾಗಿದೆ. ಪ್ರಕರಣ ಸಂಬಂಧ 3 ತಂಡಗಳು ಪ್ರತ್ಯೇಕವಾಗಿ ಜಿಲಿಟಿನ್ ಕಡ್ಡಿ ಹಾಗೂ ಬೆಂಕಿ ಪೊಟ್ಟಣ ಪತ್ತೆಯಾದ ಬೆಂಗಳೂರು ದಕ್ಷಿಣ ಜಿಲ್ಲೆಯ ಕಗ್ಗಲೀಪುರ ಸಮೀಪವಿರುವ ವಡೇರಹಳ್ಳಿ ಕೆರೆಗೆ ಭೇಟಿ ಕೊಟ್ಟು ಸ್ಥಳೀಯ ಪೊಲೀಸರಿಂದ ಮಾಹಿತಿ ಪಡೆಯುತ್ತಿದೆ.

ಭಾರತ ಎಂದಿಗೂ ಯಾರ ಮುಂದೆಯೂ ತಲೆಬಾಗದು



ಜಗತ್ತಿಗೆ ತನ್ನ ಸಾಮರ್ಥ್ಯವನ್ನು ತೋರಿಸಿತು. ಜಾಗತಿಕ ಶಕ್ತಿಗಳು ಆರ್ಥಿಕ ನಿರ್ಬಂಧಗಳನ್ನು ಹೇರಿದರೂ ಭಾರತ ಎದೆಗುಂದದೆ ಮೇ 13ರಂದು ಮತ್ತೆರಡು ಪರೀಕ್ಷೆಗಳನ್ನು ನಡೆಸಿ ಇಚ್ಛಾಶಕ್ತಿಯನ್ನು ಪ್ರದರ್ಶಿಸಿತು ಎಂದು ಮೋದಿ ಹೇಳಿದ್ದಾರೆ. ಸೋಮನಾಥ ಮಂದಿರದ ಪುನರ್ ನಿರ್ಮಾಣದಿಂದ ಹಿಡಿದು ಅಯೋಧ್ಯೆಯ ರಾಮ ಮಂದಿರದವರೆಗೆ ಕೆಲವು ರಾಜಕೀಯ ಶಕ್ತಿಗಳು ದೇಶದ ಘನತೆಗಿಂತ ತುಷ್ಟೀಕರಣಕ್ಕೇ ಆದ್ಯತೆ ನೀಡಿವೆ ಎಂದು ಪ್ರಧಾನಿ ಆರೋಪಿಸಿದ್ದಾರೆ. ಸರ್ದಾರ್ ಪಟೇಲ್ ಮತ್ತು ಬಾಬು ರಾಜೇಂದ್ರ ಪ್ರಸಾದ್ ಅವರು ಸೋಮನಾಥ ಮಂದಿರ ಮರುನಿರ್ಮಾಣಕ್ಕೆ ಶ್ರಮಿಸಿದಾಗ ಅಂದಿನ ಪ್ರಧಾನಿ ಜವಾಹರಲಾಲ್ ನೆಹರೂ ಅವರು ವಿರೋಧ ವ್ಯಕ್ತಪಡಿಸಿದ್ದನ್ನು ಮೋದಿ ಉಲ್ಲೇಖಿಸಿದ್ದಾರೆ. ಸೋಮನಾಥ ಮಂದಿರದ 75ನೇ ವರ್ಷದ ಸ್ಮರಣಾರ್ಥ ವಿಶೇಷ ಅಂಚೆ ಚೀಟಿಯನ್ನು ಪ್ರಧಾನಿ ಬಿಡುಗಡೆ ಮಾಡಿದರು.

ಜಕ್ಕಹಳ್ಳಿಯಲ್ಲಿ ನೂತನ ಅಂಬೇಡ್ಕರ್ ಪ್ರತಿಮೆ ಅನಾವರಣ

● ಜನಗಣತಿಯಲ್ಲಿ ಕುಟುಂಬದ ಸಂಪೂರ್ಣ ಮಾಹಿತಿ ನೀಡಿ ● ಸಮಾಜ ಸುಧಾರಕರು ಒಂದು ಜಾತಿಗೆ ಸೀಮಿತರಲ್ಲ: ಎಂಎಲ್‌ಸಿ ಶಿವಕುಮಾರ್ ಅಭಿಪ್ರಾಯ

ಹೆಚ್.ಡಿ.ಕೋಟೆ, ಮೇ 11– ಪ್ರಸಕ್ತ ಸಾಲಿನಲ್ಲಿ ಪೂರ್ಣ ಪ್ರಮಾಣದ ಜನಗಣತಿ ನಡೆಯಲಿದ್ದು, ಎಲ್ಲಾ ಜನಾಂಗದವರು ತಮ್ಮ ಕುಟುಂಬದ ಸಂಪೂರ್ಣ ಮಾಹಿತಿ ನೀಡಬೇಕು ಎಂದು ವಿಧಾನಪರಿಷತ್ ಸದಸ್ಯ ಶಿವಕುಮಾರ್ ತಿಳಿಸಿದರು.

ತಾಲೂಕಿನ ಹ್ಯಾಂಡ್‌ಪೋಸ್ಟ್ ಬಳಿಯ ಜಕ್ಕಹಳ್ಳಿಯಲ್ಲಿ ನೂತನವಾಗಿ ನಿರ್ಮಿಸಿರುವ ಡಾ.ಬಿ.ಆರ್.ಅಂಬೇಡ್ಕರ್ ಪ್ರತಿಮೆ ಅನಾವರಣ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, 1931ರ ನಂತರ ಕೇಂದ್ರ ಸರ್ಕಾರ ಪೂರ್ಣ ಪ್ರಮಾಣದ ಜನಗಣತಿಗೆ ಮುಂದಾಗಿದ್ದು, 2027ಕ್ಕೆ ಮುಕ್ತಾಯವಾಗಲಿದೆ. ಹೀಗಾಗಿ ಎಲ್ಲರೂ ಸಂಪೂರ್ಣ ಮಾಹಿತಿ ನೀಡಬೇಕು ಎಂದರು.

ಈ ಹಿಂದಿನ ಗಣತಿ ಪ್ರಕಾರ ಎಸ್‌ಸಿ, ಎಸ್‌ಟಿ ಸಮುದಾಯ ಶೇ.30 ರಷ್ಟಿತ್ತು. ಈ ಜನಗಣತಿ ಬಳಿಕ ಶೇ.40ರಿಂದ 45ರಷ್ಟು ಆಗುವ ನಿರೀಕ್ಷೆ ಇದೆ. ಇಷ್ಟು ದೊಡ್ಡ ಸಮುದಾಯಕ್ಕೆ ಕೇವಲ ಶೇ.15ರಷ್ಟು ಮೀಸಲಾತಿ ನೀಡಲಾಗಿದ್ದು, ಕೇಂದ್ರ ಸರ್ಕಾರ ಶೇ.21ಕ್ಕೆ ಏರಿಕೆ ಮಾಡುತ್ತೇವೆ ಎನ್ನುತ್ತಿದೆ. ಆದರೆ ಈ ಪ್ರಮಾಣ ಶೇ.35ರಷ್ಟು ಆಗಬೇಕು. ಇದಕ್ಕಾಗಿ ನಾವು ಹೋರಾಟ ಮಾಡಬೇಕು. ಈ ಹೋರಾಟ ಜಕ್ಕಹಳ್ಳಿ ಗ್ರಾಮದಿಂದಲೇ ಆರಂಭವಾಗಲಿ ಎಂದು ಕರೆ ನೀಡಿದರು.



ಜಕ್ಕಹಳ್ಳಿಯಲ್ಲಿ ಅಂಬೇಡ್ಕರ್ ಪ್ರತಿಮೆ ಅನಾವರಣಗೊಳಿಸಲಾಯಿತು.

ಜಕ್ಕಹಳ್ಳಿ ಒಂದು ಮಾದರಿ ಗ್ರಾಮವಾಗಿದೆ. ವೀರಶೈವ ಲಿಂಗಾಯತ ಮತ್ತು ದಲಿತ ಸಮುದಾಯ ಒಟ್ಟಿಗೆ ಸೇರಿ ಇಲ್ಲಿ ಅಂಬೇಡ್ಕರ್ ಅವರ ಪ್ರತಿಮೆ ನಿರ್ಮಿಸಿರುವುದು ನಿಜಕ್ಕೂ ಶ್ಲಾಘನೀಯ. ನಿಜವಾದ ಬಸವ ಅನುಯಾಯಿಗಳು ಇಲ್ಲಿದ್ದಾರೆ. ಈ ಕ್ಷಣವನ್ನು ಸುವರ್ಣಾಕ್ಷರದಲ್ಲಿ ಬರೆದಿಡಬೇಕು ಎಂದರು.

ಕಾರ್ಯಕ್ರಮದ ಸಾನಿಧ್ಯ ವಹಿಸಿ ಮಾತನಾಡಿದ ಉರಿಲಿಂಗಿ ಪೆದ್ದಿ ಮಠದ ಜ್ಞಾನಪ್ರಕಾಶ್ ಸ್ವಾಮೀಜಿ, ಅಂಬೇಡ್ಕರ್ ಅವರ ಚಿಂತನೆಗಳು, ತತ್ವಗಳು ಕೇವಲ ಮೂರ್ತಿಗಳಲ್ಲಿ, ಫ್ಲೆಕ್ಸ್‌ಗಳಲ್ಲಿ ವಿಜೃಂಭಿಸಿದರೆ ನಿಮ್ಮಂತ ನತದೃಷ್ಟ ಸಮುದಾಯ ಯಾರೂ ಇಲ್ಲ. ಅಂಬೇಡ್ಕರ್ ಅವರು ವಿಜೃಂಭಿಸುವ, ಆರಾಧಿಸುವ, ಆಚರಿಸುವ ವಸ್ತುವಲ್ಲ. ಅಂಬೇಡ್ಕರ್ ಎಂದರೆ ಅನುಸರಣೆ. ಅವರನ್ನು ನಾವು ಅನುಸರಿಸಬೇಕು ಎಂದರು.

ಮಾಜಿ ಸಚಿವ ಎನ್.ಮಹೇಶ್ ಮಾತನಾಡಿ, ಗ್ರಾಮದವರೆಲ್ಲಾ ಒಟ್ಟಾಗಿ ಸೇರಿ ಹಣ ಹಾಕಿ ಅಂಬೇಡ್ಕರ್ ಪ್ರತಿಮೆ ನಿರ್ಮಿಸಿರುವುದು ಸ್ವಾಭಿಮಾನದ ಬದುಕನ್ನು ಕಟ್ಟಿಕೊಳ್ಳುವ ಪ್ರಕ್ರಿಯೆಯಾಗಿದೆ. ಇದು ಸ್ವಾವಲಂಬನೆಯ ಪ್ರತೀಕ. ಹಾಗಾಗಿ ಈ ಗ್ರಾಮದಲ್ಲಿ ನೈಜ ಅಂಬೇಡ್ಕರ್ ಅನುಯಾಯಿಗಳು ಇದ್ದಾರೆ ಎಂದು ಹೇಳಲು ಹೆಮ್ಮೆ ಅನಿಸುತ್ತದೆ ಎಂದರು.

> "ದೇಶದ ಚರಿತ್ರೆ ಇರುವ ಪಠ್ಯಗಳು ಇಲ್ಲದಿರುವುದರಿಂದ ಮಕ್ಕಳು ದಾರಿ ತಪ್ಪುತ್ತಿದ್ದಾರೆ. ರಾಜ್ಯ ಹಾಗೂ ಕೇಂದ್ರ ಸರ್ಕಾರಗಳು ಮಕ್ಕಳನ್ನು ಮೌಲ್ಯಯುತ ಶಿಕ್ಷಣದಿಂದ ವಂಚಿಸುತ್ತಿವೆ. 1ನೇ ತರಗತಿ ಯಿಂದ ಪಿಹೆಚ್‌ಡಿವರೆಗೆ ಅಂಬೇಡ್ಕರ್ ಅವರ ಓದು, ಬರಹ ಮತ್ತು ಅವರ ಜೀವನ ಚರಿತ್ರೆ ಮಕ್ಕಳಿಗೆ ಕೊಡಬೇಕಿತ್ತು. ಆದರೆ, ಶಿಕ್ಷಣದಲ್ಲಿ ನೀಡಿಲ್ಲ. ಹಾಗಾಗಿ ಪಠ್ಯಗಳಲ್ಲಿ ಅಂಬೇಡ್ಕರ್ ಅವರನ್ನು ಮರೆ ಮಾಚಲಾಗಿದೆ. ಈಗಾಗಿ ನಮಗೆ ಸಂವಿಧಾನದ ಅರಿವು ಕಡಿಮೆಯಾಗಿದೆ. ಹಾಗಾಗಿ ಪಠ್ಯದಲ್ಲಿ ಅಂಬೇಡ್ಕರ್ ಅವರನ್ನು ಸೇರಿಸಬೇಕು.
> –ಪುರುಷೋತ್ತಮ್, ಮಾಜಿ ಮಹಾಪೌರ.

ಕಾರ್ಯಕ್ರಮದಲ್ಲಿ ದಸಂಸ ಜಿಲ್ಲಾ ಸಂಚಾಲಕ ಬೆಟ್ಟಯ್ಯ ಕೋಟೆ, ಜಿಪಂ ಮಾಜಿ ಸದಸ್ಯರಾದ ಹೆಚ್.ಸಿ.ಮಂಜುನಾಥ್, ವೆಂಕಟಸ್ವಾಮಿ, ಪುರಸಭಾ ಮಾಜಿ ಸದಸ್ಯ ಹೆಚ್.ಸಿ.ನರಸಿಂಹಮೂರ್ತಿ, ಶಾಸಕ ಅನಿಲ್ ಚಿಕ್ಕಮಾದು ಅವರ ಪತ್ನಿ ಸೌಮ್ಯ, ಸಮಾಜ ಸೇವಕ ಎಸ್.ವಿ. ವೆಂಕಟೇಶ್, ಅಕ್ಕ ಅಕಾಡೆಮಿಯ ಡಾ.ಶಿವ ಕುಮಾರ್, ಜೆಡಿಎಸ್ ಮುಖಂಡ ಜಯಪ್ರಕಾಶ್ ಚಿಕ್ಕಣ್ಣ, ನಿವೃತ್ತ ಅರಣ್ಯ ಇಲಾಖೆ ಅಧಿಕಾರಿ ಪರಮೇಶ್ವರ, ಶಿಕ್ಷಕ ಸೋಮಯ್ಯ, ಮುಖಂಡರಾದ ಪುಟ್ಟರಾಜು, ಲಿಂಗಯ್ಯ, ಯೋಗೇಶ್, ಜೆ.ಪಿ.ನಾಗರಾಜು, ಕೆಂಡಗಣ್ಣಸ್ವಾಮಿ, ಯೂಸುಫ್, ಸುರೇಶ್, ಜವರಯ್ಯ, ಮಾಧರಾಜು, ಇಟ್ನ ರಾಜಣ್ಣ, ರಾಜು, ಜಯಲಕ್ಷ್ಮಿ, ಆನಂದ್, ನಾಗ ರಾಜು, ಪ್ರತಿಮೆ ನಿರ್ಮಾಣ ಸಮಿತಿಯ ಮುರಳೀಧರ್, ಬಸವರಾಜು, ಮಲ್ಲೇಶ್, ರವೀಂದ್ರ, ನಾಗಮಲೆ, ರಾಜಶೇಖರ ಮೂರ್ತಿ, ನಾಗರಾಜು, ಪುಟ್ಟ ರಾಜು, ಕುಮಾರ್, ಶಿವಣ್ಣ, ಸೋಮಣ್ಣ, ಮುತ್ತಯ್ಯ, ಜೆ.ಪಿ. ಶಿವರಾಜು, ಮಾದರಾಜು, ನೀಲಕಂಠಯ್ಯ, ಶಾಂತರಾಜು, ನಿವೃತ್ತ ಪೊಲೀಸ್ ಅಧಿಕಾರಿಗಳಾದ ಗೋಪಯ್ಯ, ಶಾಂತರಾಜು, ನಿವೃತ್ತ ಶಿಕ್ಷಕ ನೀಲಕಂಠಯ್ಯ, ವಕೀಲ ಪರಶಿವಮೂರ್ತಿ ಇತರರಿದ್ದರು.

ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನ

ಹುಣಸೂರು, ಮೇ 11– ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿಯಲ್ಲಿ ಶೇ.70ಕ್ಕಿಂತ ಹೆಚ್ಚು ಅಂಕ ಪಡೆದ ತಾಲೂಕಿನ ಗಾಣಿಗ ಸಮಾಜದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ವಿದ್ಯಾರ್ಥಿ ವೇತನಕ್ಕೆ ಅರ್ಜಿ ಆಹ್ವಾನಿಸಲಾಗಿದೆ.

ವಿದ್ಯಾರ್ಥಿಗಳ ಪೋಷಕರು ಹುಣಸೂರು ತಾಲೂಕಿನ ನಗರ ಮತ್ತು ಗ್ರಾಮಾಂತರ ನಿವಾಸಿಗಳಾಗಿರಬೇಕು. ವಿದ್ಯಾರ್ಥಿಗಳು ಅರ್ಜಿಯೊಂದಿಗೆ ಆಧಾರ್ ಕಾರ್ಡ್ ಜೆರಾಕ್ಸ್, ಅಂಕಪಟ್ಟಿ, ಶಾಲಾ ಮುಖ್ಯ ಶಿಕ್ಷಕರು ಅಥವಾ ಪ್ರಾಂಶುಪಾಲರಿಂದ ದೃಢೀಕರಿಸಿ ಮೇ 25ರೊಳಗೆ ಅರ್ಜಿ ಸಲ್ಲಿಸುವಂತೆ ಪ್ರಧಾನ ಕಾರ್ಯದರ್ಶಿ ಪ್ರಸಾದ್ ಮನವಿ ಮಾಡಿದ್ದಾರೆ. ಹೆಚ್ಚಿನ ಮಾಹಿತಿಗೆ ಮೊ. 9844633309, 9844435657, 9448343561 ಸಂಪರ್ಕಿಸುವಂತೆ ಪ್ರಕಟಣೆ ತಿಳಿಸಿದೆ.

ತಿ.ನರಸೀಪುರ: ವಿವಿಧೆಡೆ ಮನೆ ಕಳ್ಳತನ

ಲಕ್ಷಾಂತರ ರೂ. ಮೌಲ್ಯದ ಚಿನ್ನಾಭರಣ, ಸಾವಿರಾರು ರೂ. ಕಳವು

ತಿ.ನರಸೀಪುರ, ಮೇ 11– ತಾಲೂಕಿನ ಹೆಳವರಹುಂಡಿ ಹಾಗೂ ಹೊಸೂರುಂಡಿ ಗ್ರಾಮದ 2 ಮನೆಗಳಲ್ಲಿ ಕಳ್ಳತನ ನಡೆದಿರುವ ಸಂಬಂಧ ತಿ.ನರಸೀಪುರ ಪಟ್ಟಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.



ಹೆಳವರಹುಂಡಿ ಗ್ರಾಮದ ನಿವಾಸಿ ಅಡುಗೆ ನವೀನ್ ಹಾಗೂ ಹೊಸೂರುಂಡಿ ಗ್ರಾಮದ ನಿವಾಸಿ ಮಹೇಶ್ ಎಂಬುವರ ಮನೆಯಲ್ಲಿ ಕಳ್ಳತನ ನಡೆದಿದ್ದು, ಮಹೇಶ್ ಮನೆಯಲ್ಲಿ 40 ಗ್ರಾಂ ಚಿನ್ನ ಹಾಗೂ ನವೀನ್ ಮನೆಯಲ್ಲಿ 30 ಸಾವಿರ ರೂ. ಕಳ್ಳತನ ಮಾಡಲಾಗಿದೆ.

ವೃತ್ತಿಯಲ್ಲಿ ಗಾರೆ ಕೆಲಸ ಮಾಡುತ್ತಿದ್ದ ಮಹೇಶ್ ಗ್ರಾಮದ ಮನೆಯೊಂದರಲ್ಲಿ ನಡೆಯುತ್ತಿದ್ದ ತೊಟ್ಟಿಲು ಶಾಸ್ತ್ರ ಕಾರ್ಯಕ್ರಮಕ್ಕೆ ಕುಟುಂಬ ಸಮೇತರಾಗಿ ತೆರಳಿದ್ದ ವೇಳೆ ಮನೆಗೆ ನುಗ್ಗಿರುವ ದುಷ್ಕರ್ಮಿಗಳು ಚಿನ್ನಾಭರಣ ದೋಚಿ ಪರಾರಿ ಯಾಗಿದ್ದಾರೆ. ಹೆಳವರಹುಂಡಿ ಗ್ರಾಮದ ನವೀನ್ ಮನೆ ಬಾಗಿಲು ಮೀಟಿರುವ ಕಳ್ಳರು ಮನೆಯಲ್ಲಿದ್ದ 30 ಸಾವಿರ ರೂ. ಕದ್ದೊಯ್ದಿದ್ದಾರೆ. ಈ ಸಂಬಂಧ ಪಟ್ಟಣ ಪೊಲೀಸ್ ಠಾಣೆಯಲ್ಲಿ ಪ್ರತ್ಯೇಕ ಪ್ರಕರಣ ದಾಖಲಾಗಿದ್ದು, ಶ್ವಾನದಳದೊಂದಿಗೆ ಸ್ಥಳಕ್ಕಾಗಮಿಸಿದ ಪೊಲೀಸರು ಪರಿಶೀಲನೆ ನಡೆಸಿ ದುಷ್ಕರ್ಮಿಗಳ ಪತ್ತೆಗೆ ಬಲೆ ಬೀಸಿದ್ದಾರೆ. ವೃತ್ತ ನಿರೀಕ್ಷಕ ಧನಂಜಯ, ಎಎಸ್‌ಐ ಚೆಲುವರಾಜು, ಶಂಕರ್, ಇಸ್ಮಾಯಿಲ್ ಭೇಟಿ ನೀಡಿ ಪರಿಶೀಲಿಸಿದರು.

ಹುಣಸೂರಲ್ಲಿ ಎಸ್‌ಪಿ ನೇತೃತ್ವದಲ್ಲಿ ಜನಸಂಪರ್ಕ ಸಭೆ

ಮದ್ಯ ಮಾರಾಟ, ಸಂಚಾರ ಸೇರಿ ಹಲವು ಸಮಸ್ಯೆ ಅನಾವರಣ

ಹುಣಸೂರು, ಮೇ 11– ನಗರದ ಅಂಬೇಡ್ಕರ್ ಭವನದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ ಅವರ ನೇತೃತ್ವದಲ್ಲಿ ಪೊಲೀಸ್ ಇಲಾಖೆಯಿಂದ ನಡೆದ ಜನಸಂಪರ್ಕ ಸಭೆಯಲ್ಲಿ ಸಾರ್ವಜನಿಕರಿಂದ ತಾಲೂಕಿನ ಸಮಸ್ಯೆಗಳು ಅನಾವರಣಗೊಂಡವು.

ಮೈಸೂರು ಜಿಲ್ಲಾ ಮಾಹಿತಿ ಮತ್ತು ಮಾನವ ಹಕ್ಕು ಸಂರಕ್ಷಣಾ ಸಮಿತಿ ಜಿಲ್ಲಾಧ್ಯಕ್ಷ ಇಂಟೆಕ್ ರಾಜು ಮಾತನಾಡಿ, ನಗರ ವ್ಯಾಪ್ತಿ ಸಂಚಾರ ದಟ್ಟಣೆ ಹೆಚ್ಚಾಗಿದ್ದು, ನಿರಂತರವಾಗಿ ಅಪಘಾತಗಳು ಸಂಭವಿಸುತ್ತಿವೆ. ನಗರದ ಕಲ್ಪತರು, ಕೋರ್ಟ್, ಕಲ್ಕುಣಿಕೆ ಸೇರಿದಂತೆ ಪ್ರಮುಖ ವೃತ್ತಗಳಲ್ಲಿ ಸಿಗ್ನಲ್ ಲೈಟ್ ಅಳವಡಿಸಲು ಒತ್ತಾಯಿಸಿದರು.

ಇದಕ್ಕೆ ಪ್ರತಿಕ್ರಿಯಿಸಿದ ಎಸ್ಪಿ ಸಂಚಾರ ಸಮಸ್ಯೆ ಪರಿಹರಿಸಲು ಸ್ಥಳೀಯ ಆಡಳಿತದೊಂದಿಗೆ ಚರ್ಚಿಸಲಾಗುವುದು. ಅಲ್ಲದೇ ಇಲಾಖೆ ವತಿಯಿಂದ ಸಿಗ್ನಲ್ ಲೈಟ್ ಅಳವಡಿಸಲು ಕ್ರಮ ಕೈಗೊಳ್ಳಲಾಗುವುದು ಎಂದರು.



ಸಭೆಯಲ್ಲಿ ಎಸ್ಪಿ ಮಲ್ಲಿಕಾರ್ಜುನ ಬಾಲದಂಡಿ ಮಾತನಾಡಿದರು.

ಮುಖಂಡ ನಿಲುವಾಗಿಲು ಪ್ರಭಾಕರ್ ಮಾತನಾಡಿ, ನಗರದ ಸಾರ್ವಜನಿಕ ಆಸ್ಪತ್ರೆಯಲ್ಲಿ ಸೆಕ್ಯೂರಿಟಿ ಸಿಬ್ಬಂದಿ ಇಲ್ಲದ ಕಾರಣ ರಾತ್ರಿ ವೇಳೆ ಓರ್ವ ಪೊಲೀಸ್ ಪೇದೆಯನ್ನು ಕರ್ತವ್ಯಕ್ಕೆ ನಿಯೋಜಿಸಲು ಕೋರಿದರು. ಅಲ್ಲದೇ ಗ್ರಾಮೀಣ ಭಾಗದಲ್ಲಿ ಮನೆ ಮನೆಗೆ ಪೊಲೀಸ್ ಕಾರ್ಯಕ್ರಮದಡಿ ಪೊಲೀಸರು ಪ್ರತಿ ಮನೆಗೆ ಭೇಟಿ ನೀಡುತ್ತಿರುವುದು ಗ್ರಾಮೀಣರಲ್ಲಿ ಆತಂಕಕ್ಕೆ ಕಾರಣವಾಗಿದೆ. ಇಲಾಖೆಯಿಂದ ಸಮೀಕ್ಷೆ ನಡೆಯುತ್ತಿದೆಯೇ? ಗ್ರಾಮೀಣರು ಮಾಹಿತಿ ನೀಡುವುದು ಕಡ್ಡಾಯವೇ ಎಂದು ಪ್ರಶ್ನಿಸಿದರು.

ಇದಕ್ಕುತ್ತರಿಸಿದ ಎಸ್ಪಿ, ಪೊಲೀಸ್ ಇಲಾಖೆ ಹಮ್ಮಿಕೊಂಡಿರುವ ಈ ಕಾರ್ಯಕ್ರಮ ಗ್ರಾಮದಲ್ಲಿ ಪ್ರತಿ ಮನೆಯವರ ಕುರಿತು ಅರಿತುಕೊಳ್ಳುವುದಾಗಿದೆ. ಹೊರ ಊರಿನಿಂದ ಬಂದವರಿಗೆ ಆಶ್ರಯ ನೀಡಿದ್ದರೆ ಅದರ ಕುರಿತು ಮಾಹಿತಿ ತಿಳಿದುಕೊಳ್ಳುವ ಉದ್ದೇಶ ಹೊಂದಲಾಗಿದೆ. ಅಲ್ಲದೇ ಗ್ರಾಮದ ಕುಟುಂಬಗಳ ಪರಿಸ್ಥಿತಿಯನ್ನು ಇಲಾಖೆ ಅರಿತುಕೊಂಡಿದ್ದರೆ ಅದಕ್ಕೆ ತಕ್ಕಂತೆ ಶಾಂತಿ ಮತ್ತು ಕಾನೂನು ಸುವ್ಯವಸ್ಥೆ ಕಾಪಾಡಿಕೊಳ್ಳಲು ಸಾಧ್ಯವಾಗಲಿದೆ. ಪೊಲೀಸರು ಕೇಳುವ ಪ್ರಶ್ನೆಗಳಿಗೆ ಉತ್ತರ ನೀಡುವುದು ಕಡ್ಡಾಯವೇನಲ್ಲ ಎಂದು ತಿಳಿಸಿದರು.

ದಲಿತ ಮುಖಂಡ ನಿಂಗರಾಜ ಮಲ್ಲಾಡಿ ಮಾತನಾಡಿ, ಗ್ರಾಮೀಣ ಭಾಗಗಳಲ್ಲಿ ಫ್ಲೆಕ್ಸ್ ಹಾವಳಿ ಹೆಚ್ಚಾಗಿದ್ದು, ನಿಗದಿತ ಅವಧಿಯಲ್ಲಿ ತೆರವುಗೊಳಿಸಲು ಸ್ಥಳೀಯ ಆಡಳಿತಕ್ಕೆ ಸೂಚನೆ ನೀಡಿ. ತಾಲೂಕಿನ ಕೆಲವೆಡೆ ಇಂದಿಗೂ ಹೋಟೆಲ್, ದೇವಸ್ಥಾನ, ಕ್ಷೌರದ ಅಂಗಡಿಗಳಿಗೆ ದಲಿತರಿಗೆ ನಿರ್ಬಂಧಗಳಿದ್ದು, ಬಹಿರಂಗವಾಗಿಯೇ ಅಸ್ಪೃಶ್ಯತೆ ಆಚರಣೆಯಲ್ಲಿದೆ. ಇದರಿಂದ ದಲಿತರು ಬಾಧಿತರಾಗುತ್ತಿದ್ದಾರೆ. ಕೂಡಲೇ ಅಂತಹ ಗ್ರಾಮಗಳನ್ನು ಗುರುತಿಸಿ ಜನರಲ್ಲಿ ಜಾಗೃತಿ ಮೂಡಿಸಿ ಅಸ್ಪೃಶ್ಯತೆ ಆಗದಂತೆ ಪೊಲೀಸ್ ಇಲಾಖೆ ಕ್ರಮ ವಹಿಸಬೇಕು ಎಂದರು.

ನಗರಸಭೆ ಮಾಜಿ ಅಧ್ಯಕ್ಷ ಹೆಚ್.ವೈ. ಮಹದೇವು ಮಾತನಾಡಿ, ನಗರದ ಪ್ರಮುಖ ಪ್ರದೇಶಗಳಲ್ಲಿ ರಾತ್ರಿ ವೇಳೆ ಮದ್ಯ ವ್ಯಸನಿಗಳು ಕುಡಿದು ಖಾಲಿ ಬಾಟಲಿಗಳನ್ನು ಬಿಸಾಡಿ ಹೋಗುತ್ತಾರೆ. ಅಲ್ಲದೇ ಕೆಲ ಮುಖ್ಯ ರಸ್ತೆಗಳಲ್ಲಿ ಬೈಕ್ ಸವಾರರು ವ್ಹೀಲಿಂಗ್ ಮಾಡುವ ಮೂಲಕ ಕಿರಿಕಿರಿ ಉಂಟು ಮಾಡುತ್ತಿದ್ದಾರೆ. ಅಲ್ಲದೇ ತಾಲೂಕಿನಲ್ಲಿ ಅಕ್ರಮ ಗಾಂಜಾ ಮಾರಾಟಕ್ಕೆ ಕಡಿವಾಣ ಹಾಕಬೇಕು ಎಂದರು.

ದಸಂಸ ಮಹಿಳಾ ಸಂಚಾಲಕಿ ಮಹದೇವಮ್ಮ ಮಾತನಾಡಿದರು. ಸಭೆಯಲ್ಲಿ ಎಸ್ಪಿ ಮಲ್ಲಿಕಾರ್ಜುನ ಬಾಲದಂಡಿ ಸಾರ್ವಜನಿಕರಿಂದ ಸಮಸ್ಯೆಗಳನ್ನು ಆಲಿಸಿ, ಸೂಕ್ತ ಪರಿಹಾರ ಕಲ್ಪಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಈ ವೇಳೆ ಡಿವೈಎಸ್ಪಿ ರವಿ, ಇನ್ಸ್‌ಪೆಕ್ಟರ್‌ಗಳಾದ ಪುನೀತ್, ಸಂತೋಷ್ ಕಶ್ಯಪ್ ಮತ್ತು ಪೊಲೀಸ್ ಅಧಿಕಾರಿಗಳು ಹಾಗೂ ಮುಖಂಡರಾದ ಪುಟ್ಟರಾಜು, ನೆರಳಕುಪ್ಪೆ ಮಹದೇವು, ಗಣಪತಿ, ರೇಣುಕಾ, ಸಯ್ಯಾದ್ ಯುನೂಸ್ ಇತರರಿದ್ದರು.

ಮೇ 15, ಶ್ರೀಶನೇಶ್ವರಸ್ವಾಮಿ ಜಯಂತಿ



ತಿ.ನರಸೀಪುರ, ಮೇ 11– ಇಲ್ಲಿನ ತ್ರಿವೇಣಿ ಸಂಗಮದ ದಡದಲ್ಲಿರುವ ಶ್ರೀಬಳ್ಳೇಶ್ವರ ಸ್ವಾಮಿ, ಸಾಯಿ ಬಾಬಾ ಆಲಯದಲ್ಲಿರುವ ಶ್ರೀಶನೇಶ್ವರಸ್ವಾಮಿಯವರ 21ನೇ ಜಯಂತಿ ಮಹೋತ್ಸವ ಮೇ 15 ಮತ್ತು 16ರಂದು ನಡೆಯಲಿದೆ ಎಂದು ಪ್ರಕಟಣೆ ತಿಳಿಸಿದೆ.

ಮೇ 15 ರಂದು ಸಂಜೆ 5ರಿಂದ 6ರವರೆಗೆ ಸಲ್ಲುವ ಶುಭ ಗೋಧೂಳಿ ಲಗ್ನದಲ್ಲಿ ಅನ್ನೋದಕ ದೇವಾಲಯ ಪ್ರವೇಶ ಶೈವಾಸ್ವಸ್ತಿಮಂತ್ರ ಪಠಣ, ಮಹಾಗಣಪತಿ ಪೂಜಾ ಪೂರ್ವಕ ಶೈವಾಸ್ವಸ್ತಿ ಪುಣ್ಯಾಹ ವಾಚನ ಪಂಚಗವ್ಯ ಸಾಧನ ರಕ್ಷ ಪೂಜೆ, ರಕ್ಷ ಬಂಧನ, ವಾಸ್ತು ರಾಕ್ಷೆಘ್ನ ದೇವತ ಆರಾಧನೆ, ವಾಸ್ತು ಹೋಮ, ವಾಸ್ತು ಬಲಿ ವಿರಾಮಗಳು ನಡೆಯಲಿದೆ.

ಮೇ 16ರಂದು ಪ್ರಾತ: ದೇವತಾ ಆರಾಧನಾ ಪೂರ್ವಕ ಕಳಸ ಸ್ಥಾಪನೆ. ಉಮಾ ಮಹೇಶ್ವರ ದೇವತಾ ಆರಾಧನಾ ಪ್ರಧಾನ ಜೇಷ್ಠ ದೇವತಾ ಸಹಿತ ಶ್ರೀಶನೇಶ್ವರಸ್ವಾಮಿ ದೇವತಾ ನ್ಯಾಸಪೂರ್ವ ಆರಾಧನ ಪ್ರಧಾನ ಹೋಮ ಸಲ್ಲುವ ಶುಭ ಲಗ್ನದಲ್ಲಿ ಮಹಾಪೂರ್ಣಹುತಿ ಶ್ರೀಸ್ವಾಮಿಯವರಿಗೆ ಏಕವಾರ ರುದ್ರಾಭಿಷೇಕ, ಮಹಾ ಕುಂಭಾಭಿಷೇಕ ಉಪಚಾರ ಪೂಜೆ ರಾಜೋಪಾಚಾರ ಅರ್ಮಿರ್ ನಿವೇದನೆ ಮಹಾ ಮಂಗಳಾರತಿ, ನೈವೇದ್ಯ, ತೀರ್ಥಪ್ರಸಾದ ವಿನಿಯೋಗ ಮುಂತಾದ ಕಾರ್ಯಕ್ರಮಗಳು ಶೈವಾಗಮ ರೀತ್ಯಾ ನಡೆಯಲಿದೆ. ಮಧ್ಯಾಹ್ನ 1.30 ಗಂಟೆಗೆ ಬದನಾಳು ದಿಲೀಪ್ ಕುಮಾರ್ ಶಾಸ್ತ್ರಿ ಅವರಿಂದ ಹರಿಕಥೆ ಏರ್ಪಡಿಸಲಾಗಿದೆ. ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಶ್ರೀಸ್ವಾಮಿಯವರ ಕೃಪೆಗೆ ಪಾತ್ರರಾಗುವಂತೆ ದೇವಸ್ಥಾನದ ಭಕ್ತ ಮಂಡಲಿ ಹಾಗೂ ವಿದ್ವಾನ್ ಆರ್. ಅರುಣ್ ಕುಮಾರ್ (8618185926) ಹಾಗೂ ವೇದಾವತಿ (7892852705) ಮನವಿ ಮಾಡಿದ್ದಾರೆ.

ಕೆ.ಆರ್.ನಗರದಲ್ಲಿ ನಾಲ್ವಡಿಯವರ ಭವನ ನಿರ್ಮಾಣವಾಗಲಿ

ಕಸಾಪ ತಾಲೂಕು ಅಧ್ಯಕ್ಷ ಜಿ.ಡಿಂಡಿಮ ಶಂಕರ್

ಕೆ.ಆರ್.ನಗರ, ಮೇ 11– ತಾಲೂಕಿಗೆ ಸಾಕಷ್ಟು ಕೊಡುಗೆ ನೀಡಿದ ಮೈಸೂರು ಅರಸರಾದ ನಾಲ್ವಡಿ ಕೃಷ್ಣರಾಜ ಒಡೆಯರ್ ಭವನವನ್ನು ಪಟ್ಟಣದಲ್ಲಿ ನಿರ್ಮಾಣ ಮಾಡದಿರುವುದು ಬೇಸರ ತಂದಿದೆ ಎಂದು ಕನ್ನಡ ಸಾಹಿತ್ಯ ಪರಿಷತ್ ತಾಲೂಕು ಅಧ್ಯಕ್ಷ ಜಿ.ಡಿಂಡಿಮ ಶಂಕರ್ ತಿಳಿಸಿದರು.

ನಗರದ ಕನ್ನಡ ಸಾಹಿತ್ಯ ಪರಿಷತ್ ಘಟಕದಿಂದ ಪಟ್ಟಣದ ರೋಟರಿ ಭವನದಲ್ಲಿ ಆಯೋಜಿಸಿದ್ದ ಪರಿಷತ್‌ನ 112ನೇ ಸಂಸ್ಥಾಪನಾ ದಿನಾಚರಣೆಯಲ್ಲಿ ಮಾತನಾಡಿದ ಅವರು, ಹಳೇ ಮೈಸೂರು ಭಾಗದಲ್ಲಿ ಜನ ನೆಮ್ಮದಿಯಾಗಿ ಬದುಕಲು ನಾಲ್ವಡಿ ಕೃಷ್ಣರಾಜ ಒಡೆಯರ್ ಕಾರಣ. ಆದರೆ ಅವರ ಹೆಸರಿನಲ್ಲಿ ತಾಲೂಕಿನಲ್ಲಿ ಸಾಹಿತ್ಯ ಭವನ ನಿರ್ಮಿಸಲು ಸಾಧ್ಯವಾಗುತ್ತಿಲ್ಲ. ಜನಪ್ರತಿನಿಧಿಗಳಲ್ಲಿ ಒಡೆಯರ್ ಬಗ್ಗೆ ಹೆಚ್ಚಿನ ಆಸಕ್ತಿ ಮೂಡಬೇಕು. ಅವರ ಹೆಸರಿನಲ್ಲಿ ಭವನ ಸ್ಥಾಪನೆಯಾಗಬೇಕು ಎಂದು ಒತ್ತಾಯಿಸಿದರು.

ಕಾವೇರಿ ನದಿ ನೀರು ಪಡೆಯಲು ನಮಗೆ ಚೋಳರ ಕಾಲದಿಂದಲೂ ಅಡ್ಡಗಾಲು ಇತ್ತು. ಅರಮನೆ ವೈಭವಕ್ಕಿಂತ ಜನರ ಸಮಸ್ಯೆಯೇ ಮುಖ್ಯ ಎಂದು ತಿಳಿದ ಒಡೆಯರ್ ಅವರು ವಿಶೇಷ ತಂತ್ರಜ್ಞಾನ ಬಳಸಿ ಕಾವೇರಿ ನದಿಗೆ ಕನ್ನಂಬಾಡಿ ಕಟ್ಟೆ ನಿರ್ಮಿಸಿದರು. ಅವರ ಅಧಿಕಾರಾವಧಿಯಲ್ಲಿ ಹಲವು ಕೈಗಾರಿಕೆಗಳು ಸ್ಥಾಪನೆಯಾಗಿದ್ದು, ಜನರ ಬದುಕಿಗೆ ಅಡಿಪಾಯ ಹಾಕಿದರು. ಪ್ರತಿವರ್ಷ ನಡೆಯುವ ಪರಿಷತ್ತಿನ ಸಂಸ್ಥಾಪನಾ ದಿನದಂದು ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಸೇವೆ ನಮಗೆ ನೆನಪಾಗುತ್ತದೆ. ಅನ್ನ, ನೀರು, ರಸ್ತೆ, ಬೆಳಕು ಕೊಟ್ಟು ಕೆ.ಆರ್.ನಗರ ಪಟ್ಟಣವನ್ನು ನಿರ್ಮಿಸಿದ ಕೀರ್ತಿ ಒಡೆಯರ್ ಅವರಿಗೆ ಸಲ್ಲುತ್ತದೆ ಎಂದರು.



ಕಸಾಪ 112ನೇ ಸಂಸ್ಥಾಪನಾ ದಿನಾಚರಣೆ ನಡೆಯಿತು.

ನಾಲ್ವಡಿ ಕೃಷ್ಣರಾಜ ಒಡೆಯರ್ ಅವರು ಕೇವಲ ಆಡಳಿತ, ಅಭಿವೃದ್ಧಿಗೆ ಮಾತ್ರ ಒತ್ತು ಕೊಡದೆ ಕನ್ನಡ ಸಾಹಿತ್ಯ ಕ್ಷೇತ್ರಕ್ಕೆ ಅಪಾರ ಕೊಡುಗೆ ನೀಡಿದ್ದಾರೆ. ಕನ್ನಡ ಭಾಷೆ, ನೆಲ, ಜಲದ ವಿಷಯದಲ್ಲಿ ಹೆಚ್ಚಿನ ಕಾಳಜಿ ವಹಿಸಿದ್ದ ಅವರು ಕನ್ನಡ ಸಾಹಿತ್ಯ ಪರಿಷತ್ ಸ್ಥಾಪನೆ ಮಾಡುವ ಮೂಲಕ ಕನ್ನಡಿಗರ ಅಸ್ತಿತ್ವಕ್ಕೆ ಹೆಚ್ಚಿನ ಶಕ್ತಿ ತುಂಬಿದರು. ಅವರು ಹಾಕಿಕೊಟ್ಟ ಭದ್ರ ಬುನಾದಿಯಿಂದ ಇಂದು ಕೂಡ ಸಾಹಿತ್ಯ ಪರಿಷತ್ ತನ್ನ ವ್ಯಾಪ್ತಿಯನ್ನು ವಿಸ್ತರಿಸುತ್ತಿದೆ ಎಂದರು.

ಕಸಾಪ ಗೌರವಾಧ್ಯಕ್ಷ ಡಾ.ಡಿ.ನಟರಾಜ್, ಗೌರವ ಕಾರ್ಯದರ್ಶಿ ಸಿ.ಆರ್.ಉದಯ ಕುಮಾರ್, ಉಪಾಧ್ಯಕ್ಷ ರಾಮಕೃಷ್ಣ, ಕೋಶಾಧ್ಯಕ್ಷ ಕೆ.ಎಲ್.ಭಾಸ್ಕರ್, ನಗರ ಅಧ್ಯಕ್ಷ ಸಿ.ವಿ. ಮೋಹನಕುಮಾರ್, ಸಾಹಿತಿ ಪ್ರಭಾಕರ್, ನಿವೃತ್ತ ಪ್ರಾಂಶುಪಾಲ ಕೃಷ್ಣ ಮಾತನಾಡಿದರು. ಮಹಿಳಾ ಪ್ರತಿನಿಧಿ ಕೆ.ಪಿ.ಭಾರತಿ, ರೋಟರಿ ಕಾರ್ಯದರ್ಶಿ ಪುರುಷೋತ್ತಮ್, ಖಜಾಂಚಿ ಅಶೋಕ್, ನಿವೃತ್ತ ಶಿಕ್ಷಕ ಚಂದ್ರಶೇಖರ್, ಸಿ.ವಿ.ಮೋಹನ ಕುಮಾರ್, ನಿವೃತ್ತ ಉಪನ್ಯಾಸಕ ಕೃಷ್ಣ ಇದ್ದರು.

ಧನಗಳ್ಳಿಯಲ್ಲಿ ನೂತನ ಬಸವ ಮಂದಿರ ಉದ್ಘಾಟನೆ



ಮೈಸೂರು ತಾಲೂಕಿನ ಧನಗಳ್ಳಿಯಲ್ಲಿ ನೂತನ ಬಸವ ಮಂದಿರ ಹಾಗೂ ಶ್ರೀಬಸವೇಶ್ವರ ಪ್ರತಿಮೆಯನ್ನು ಬರಡನಪುರ ಸ್ವಾಮೀಜಿ ಅವರೊಂದಿಗೆ ಶಾಸಕ ಜಿ.ಟಿ.ದೇವೇಗೌಡ ಉದ್ಘಾಟಿಸಿದರು. ಈ ವೇಳೆ ಮುಖಂಡರಾದ ಬಸವರಾಜ್, ಮಹದೇವಪ್ಪ, ಕೆಂಡಗಣ್ಣಸ್ವಾಮಿ, ಶಿವಶಂಕರ, ಶಿವಮಲ್ಲು, ಕುಮಾರ, ಬಸವಣ್ಣ, ಸ್ವಾಮಿ ಇತರರಿದ್ದರು.

1.5 ಕೆಜಿ ತೂಕದ ಗಾಂಜಾ ಗಿಡ ವಶ

ಹನಗೋಡು, ಮೇ 11– ಮನೆ ಹಿತ್ತಲಿನಲ್ಲಿ ಬೆಳೆದಿದ್ದ ಸುಮಾರು 1.5 ಕೆಜಿ ತೂಕದ ಗಾಂಜಾ ಗಿಡವನ್ನು ವಶಪಡಿಸಿಕೊಳ್ಳುವಲ್ಲಿ ಅಬಕಾರಿ ಇಲಾಖೆ ಅಧಿಕಾರಿಗಳು ಯಶಸ್ವಿಯಾಗಿದ್ದಾರೆ.



ಗಾಂಜಾ ಗಿಡವನ್ನು ವಶಪಡಿಸಿಕೊಂಡಿರುವುದು.

ಇಲ್ಲಿನ ತುಂಡು ಹೆಬ್ಬಳ್ಳ ನಿವಾಸಿ ಚಿನ್ನಂಕ ಬೋವಿ ಅವರ ಪುತ್ರ ರಾಜು ಬೋವಿ ಮನೆ ಹಿತ್ತಲಿನಲ್ಲಿ ಗಾಂಜಾ ಗಿಡ ಬೆಳೆದಿರುವ ಬಗ್ಗೆ ಬಂದ ಖಚಿತ ಮಾಹಿತಿ ಮೇರೆಗೆ ಅಬಕಾರಿ ಇನ್ಸ್‌ಪೆಕ್ಟರ್ ಧರ್ಮರಾಜು ನೇತೃತ್ವದಲ್ಲಿ ಸಿಬ್ಬಂದಿ ದಾಳಿ ನಡೆಸಿದ ವೇಳೆ ಮನೆ ಹಿತ್ತಲಿನಲ್ಲಿ ಬೆಳೆದಿದ್ದ ಗಾಂಜಾ ಗಿಡ ಪತ್ತೆಯಾಗಿದೆ. ಈ ವೇಳೆ ದಾಳಿ ಸುಳಿವರಿತ ಆರೋಪಿ ಪರಾರಿಯಾಗಿದ್ದು, ಪತ್ತೆಗೆ ಕ್ರಮ ವಹಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಕಾರ್ಯಾಚರಣೆಯಲ್ಲಿ ಅಬಕಾರಿ ನಿರೀಕ್ಷಕರಾದ ಎಸ್.ಎನ್.ಯೋಗೀಶ್, ಜಯಂತಿ, ಸಿಬ್ಬಂದಿಗಳಾದ ರವಿಸ್ವಾಮಿ, ಪುಟ್ಟಸ್ವಾಮಿ, ಚಾಲಕ ರಾಮಚಂದ್ರ ಭಾಗವಹಿಸಿದ್ದರು.

ಹೆಜ್ಜೇನು ದಾಳಿ; 20 ಮಂದಿಗೆ ಗಾಯ

ಹೆಚ್.ಡಿ.ಕೋಟೆ, ಮೇ 11– ಹೆಜ್ಜೇನು ದಾಳಿಗೆ 20 ಮಂದಿ ಗಾಯಗೊಂಡಿರುವ ಘಟನೆ ಪಟ್ಟಣದ ಶ್ರೀ ಆದಿಚುಂಚನಗಿರಿ ಸಮುದಾಯ ಭವನದ ಬಳಿ ಸೋಮವಾರ ನಡೆದಿದೆ.

ಇಂದು ಮಧ್ಯಾಹ್ನ ಇದ್ದಕ್ಕಿದಂತೆಯೇ ಹೆಜ್ಜೇನುಗಳು ಶ್ರೀಆದಿಚುಂಚನಗಿರಿ ಸಮುದಾಯ ಭವನದ ಬಳಿಯ ಕೋಟೆ, ಹ್ಯಾಂಡ್ ಪೋಸ್ಟ್ ಮುಖ್ಯ ರಸ್ತೆಯಲ್ಲಿ ಸಂಚರಿಸುತ್ತಿದ್ದ ವಾಹನ ಸವಾರರು ಹಾಗೂ ಪಾದಚಾರಿಗಳ ಮೇಲೆ ದಾಳಿ ನಡೆಸಿದ್ದು, ಇದರಿಂದ 20 ಮಂದಿ ಗಾಯಗೊಂಡಿದ್ದಾರೆ ಎನ್ನಲಾಗಿದೆ. ಇದೀಗ ಇವರೆಲ್ಲಾ ಪಟ್ಟಣದ ಸಾರ್ವಜನಿಕ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.



ಗಾಯಾಳುಗಳು ಚಿಕಿತ್ಸೆ ಪಡೆಯುತ್ತಿರುವುದು.

ನಂ.ಗೂಡು ನಗರಸಭೆಗೆ 119.49 ಕೋಟಿ ಬಜೆಟ್ ಮಂಡನೆ

● 118.52 ಕೋಟಿ ಖರ್ಚು ● 97.33 ಲಕ್ಷ ರೂ. ಉಳಿತಾಯ: ಡಿಸಿ ಲಕ್ಷ್ಮಿಕಾಂತರೆಡ್ಡಿ

ನಂಜನಗೂಡು, ಮೇ 11– ಇಲ್ಲಿನ ನಗರಸಭೆ 2026–27ನೇ ಸಾಲಿಗೆ 119 ಕೋಟಿ 49 ಲಕ್ಷ 39 ಸಾವಿರದ ಬಜೆಟ್ ಅನ್ನು ನಗರಸಭೆ ಆಡಳಿತಾಧಿಕಾರಿಯೂ ಆದ ಜಿಲ್ಲಾಧಿಕಾರಿ ಲಕ್ಷ್ಮಿಕಾಂತರೆಡ್ಡಿ ಸೋಮವಾರ ಮಂಡಿಸಿದರು.

ನಂತರ ಮಾತನಾಡಿದ ಅವರು, 2026–27ನೇ ಸಾಲಿನಲ್ಲಿ ನಗರಸಭೆಗೆ ಮಂಜೂರಾಗಿರುವ ಕೇಂದ್ರ ಮತ್ತು ರಾಜ್ಯ ಸರ್ಕಾರದ ಅನುದಾನ, ನಗರಸಭೆ ಆಸ್ತಿ ತೆರಿಗೆ ಸೇರಿದಂತೆ ಸುಮಾರು 119 ಕೋಟಿ 49 ಲಕ್ಷ 39 ಸಾವಿರ ಆದಾಯವನ್ನು ನಿರೀಕ್ಷಿಸಲಾಗಿದ್ದು, ಅದರಲ್ಲಿ ನಗರಸಭೆ ವ್ಯಾಪ್ತಿಗೆ ಒಳಪಡುವ ಬಡಾವಣೆಗಳಿಗೆ ರಸ್ತೆ, ಚರಂಡಿ, ವಿದ್ಯುತ್ ದೀಪ ಮತ್ತು ಸ್ವಚ್ಛತೆ ಸೇರಿದಂತೆ ಮೂಲ ಸೌಕರ್ಯಗಳನ್ನು ಒದಗಿಸುವ ಸಲುವಾಗಿ 118 ಕೋಟಿ 52 ಲಕ್ಷ 6 ಸಾವಿರ ವೆಚ್ಚವಾಗಲಿದ್ದು, 97 ಲಕ್ಷ 33 ಉಳಿತಾಯವಾಗಲಿದೆ ಎಂದು ಮಾಹಿತಿ ನೀಡಿದರು.

ಕಳೆದ ಬಾರಿ ಆಸ್ತಿ ತೆರಿಗೆಯಲ್ಲಿ 14 ಕೋಟಿವರೆಗೆ ಆದಾಯ ನಿರೀಕ್ಷೆ ಹೊಂದಲಾಗಿತ್ತು. ಈ ಬಾರಿ ಸರ್ಕಾರ 'ಬಿ' ಖಾತೆಗೆ ಅವಕಾಶ ಕಲ್ಪಿಸಿರುವುದರಿಂದ ಸುಮಾರು 15 ಕೋಟಿವರೆಗೆ ಆದಾಯ ನಿರೀಕ್ಷಿಸಲಾಗಿದೆ. ಅಲ್ಲದೆ 'ಬಿ' ಖಾತಾ ಆಂದೋಲನದಿಂದ ಏಪ್ರಿಲ್ ತಿಂಗಳಲ್ಲೇ ಸುಮಾರು ನಾಲ್ಕು ಕೋಟಿ ಆಸ್ತಿ ತೆರಿಗೆ ನಗರಸಭೆಗೆ ಬಂದಿದೆ ಎಂದರು.



ನಗರಸಭೆ ಸಭಾಂಗಣದಲ್ಲಿ ಜಿಲ್ಲಾಧಿಕಾರಿ ಲಕ್ಷ್ಮಿಕಾಂತರೆಡ್ಡಿ ಬಜೆಟ್ ಮಂಡಿಸಿದರು. ಈ ವೇಳೆ ಶಾಸಕ ದರ್ಶನ್ ಧ್ರುವನಾರಾಯಣ್ ಉಪಸ್ಥಿತರಿದ್ದರು.

ಶಾಸಕ ದರ್ಶನ್ ಧ್ರುವನಾರಾಯಣ್ ಮಾತನಾಡಿ, ಕಾಂಗ್ರೆಸ್ ಸರ್ಕಾರ 'ಬಿ' ಖಾತೆಗೆ ಅವಕಾಶ ಕಲ್ಪಿಸಿರುವುದರಿಂದ ನಂಜನಗೂಡು ನಗರಸಭೆಯಲ್ಲಿ ಅತೀ ಹೆಚ್ಚು ತೆರಿಗೆ ಸಂಗ್ರಹವಾಗಿದೆ. ಅಲ್ಲದೆ ನಗರಸಭೆಗೆ ಹೆಚ್ಚಿನ ಆದಾಯದ ಮೂಲಗಳನ್ನು ನಿರ್ಮಿಸುವ ಸಲುವಾಗಿ ಈ ಬಾರಿ ಬಜೆಟ್‌ನಲ್ಲಿ ನಗರದ ಎಂಜಿಎಸ್ ರಸ್ತೆಯಲ್ಲಿರುವ ವಾಣಿಜ್ಯ ಕಟ್ಟಡದ ಅಭಿವೃದ್ಧಿಗಾಗಿ ಅನುದಾನ ಮೀಸಲಾಗಿದೆ. ಜೊತೆಗೆ ನಗರಸಭೆ ಆದಾಯದ ಮೂಲಗಳನ್ನು ಹೆಚ್ಚು ಮಾಡಲು ಕ್ರಮ ಕೈಗೊಳ್ಳಲಾಗಿದೆ ಎಂದರು.

ನಂಜನಗೂಡು ನಗರಸಭೆಗೆ 2006ರಿಂದಲೂ ಒಳಚರಂಡಿ ವ್ಯವಸ್ಥೆ ಕಲ್ಪಿಸಲು ಸಾಧ್ಯವಾಗಿಲ್ಲ. ಈ ಬಾರಿ ಹಸಿರು ನ್ಯಾಯಾಧೀಕರಣದ ನಿರ್ದೇಶನದ ಮೇರೆಗೆ ರಾಜ್ಯ ಸರ್ಕಾರ 21 ಕೋಟಿ ಅನುದಾನ ನೀಡಿದ್ದು, ಈ ಪೈಕಿ ನಗರಸಭೆಗೆ ಒಳಪಡುವ ಹೊಸ ಬಡಾವಣೆಗಳಲ್ಲಿ ಒಳ ಚರಂಡಿ ವ್ಯವಸ್ಥೆ ಕಲ್ಪಿಸಲಾಗುವುದು. ಅಲ್ಲದೇ ಹೊಸ ಬಡಾವಣೆಗಳಲ್ಲಿ ನಾಗರಿಕರಿಗೆ ಮೂಲ ಸೌಕರ್ಯ ಒದಗಿಸುವ ಸಲುವಾಗಿ ಕ್ಷೇತ್ರಕ್ಕೆ ಮಂಜೂರಾದ 50 ಕೋಟಿ ಮುಖ್ಯಮಂತ್ರಿಗಳ ವಿಶೇಷ ಅನುದಾನದಲ್ಲಿ ಸುಮಾರು 10 ಕೋಟಿಗಳನ್ನು ಮೀಸಲಿಡಲಾಗಿದೆ. ಈಗಾಗಲೇ ಯೋಜನೆ ಸಿದ್ಧಪಡಿಸಲಾಗಿದೆ. ಶೀಘ್ರ ಗುದ್ದಲಿ ಪೂಜೆ ನೆರವೇರಿಸಲಾಗುವುದು ಎಂದರು.

ದಳ್ಳಾಳಿಗಳ ಹಾವಳಿ ತಡೆಗಟ್ಟಿ: ನಗರಸಭೆಯಲ್ಲಿ ದಲ್ಲಾಳಿಗಳ ಹಾವಳಿ ಹೆಚ್ಚಾಗಿರುವ ಬಗ್ಗೆ ಸಾರ್ವಜನಿಕರು ಪದೇ ಪದೇ ದೂರು ನೀಡುತ್ತಿದ್ದಾರೆ. ಈ ಬಗ್ಗೆ ಅಧಿಕಾರಿಗಳಿಗೆ ಸಾಕಷ್ಟು ಎಚ್ಚರಿಕೆ ನೀಡಿದರೂ ದಳ್ಳಾಳಿಗಳ ಹಾವಳಿ ತಡೆಗಟ್ಟುವಲ್ಲಿ ವಿಫಲರಾಗಿದ್ದಾರೆ. ಆದ್ದರಿಂದ ಅಧಿಕಾರಿಗಳಿಗೆ ಇದು ಕೊನೆಯ ಎಚ್ಚರಿಕೆ. ದಳ್ಳಾಳಿಗಳನ್ನು ಕಚೇರಿಯ ಹೊರಗಿಟ್ಟು ಕೆಲಸ ನಿರ್ವಹಿಸಲು ಮುಂದಾಗಬೇಕು. ಇಲ್ಲದಿದ್ದರೇ ನೀವೇ ಬೇರೆಡೆಗೆ ವರ್ಗಾವಣೆ ಮಾಡಿಸಿಕೊಂಡು ಹೋಗಬಹುದು. ಒಂದು ವೇಳೆ ಇದೇ ಚಾಳಿ ಮುಂದುವರೆದಲ್ಲಿ ಅಂತಹವರ ಮೇಲೆ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

ನಗರಸಭಾ ಆಯುಕ್ತ ಎಂ.ಬಸವರಾಜು ಮಾತನಾಡಿ, ನಗರಸಭೆಯ ವಿವಿಧ ಬಡಾವಣೆಗಳಲ್ಲಿ ಸಿಸಿಟಿವಿ ಅಳವಡಿಕೆಗೆ 40 ಲಕ್ಷ, ವಾಣಿಜ್ಯ ಮಳಿಗೆ ನಿರ್ಮಾಣ ಕಾಮಗಾರಿಗೆ 1.50 ಕೋಟಿ, ಪತ್ರಕರ್ತರ ಕಲ್ಯಾಣ ನಿಧಿಗೆ 5 ಲಕ್ಷ, ರಸ್ತೆ ಮತ್ತು ಪಾದ ಚಾರಿ ಮಾರ್ಗ ಮತ್ತು ಚರಂಡಿ ಅಭಿವೃದ್ಧಿಗೆ 5 ಕೋಟಿ, ಬೀದಿ ದೀಪ ವಿದ್ಯುತ್ ಕಂಬಗಳ ಕಾಮಗಾರಿಗೆ 1 ಕೋಟಿ, ಸಾರ್ವಜನಿಕ ಶೌಚಾಲಯ ನಿರ್ಮಾಣಕ್ಕೆ 65 ಲಕ್ಷ, ಸ್ಮಶಾನ ಮತ್ತು ವಿದ್ಯುತ್ ಚಿತಾಗಾರ ಕಾಮಗಾರಿಗೆ 4 ಕೋಟಿ, ಪೌರ ಕಾರ್ಮಿಕ ಗೃಹ ಭಾಗ್ಯ ಯೋಜನೆಗೆ ಸಹಾಯಧನ 25 ಲಕ್ಷ, ಮಳೆ ನೀರಿನ ಚರಂಡಿ ಮತ್ತು ಸೇತುವೆ ದುರಸ್ತಿಗೆ 2.50 ಕೋಟಿ, ಉದ್ಯಾನವನ ಅಭಿವೃದ್ಧಿಗಾಗಿ 75 ಲಕ್ಷ, ಒಳಚರಂಡಿ ದುರಸ್ತಿ ಮತ್ತು ನಿರ್ವಹಣೆಗೆ 20 ಕೋಟಿ ಅನುದಾನ ಮೀಸಲಿಡಲಾಗಿದೆ ನಾಗರಿಕರಿಗೆ ಮೂಲ ಸೌಕರ್ಯಗಳನ್ನು ಒದಗಿಸುವ ಮೂಲಕ ಸ್ವಚ್ಛ ನಗರಸಭೆ, ಮಾದರಿ ನಗರಸಭೆಯನ್ನಾಗಿ ರೂಪಿಸಲು ಯೋಜನೆ ಸಿದ್ಧಪಡಿಸಲಾಗಿದೆ ಎಂದರು.

ಈ ವೇಳೆ ನಗರಸಭೆಯ ಎಇಇ ಮಹೇಶ್ ಕುಮಾರ್, ಎಇ ಸಮಂತ್, ಅಧಿಕಾರಿಗಳಾದ ಪಾತುಲಿಂಗಪ್ಪ ಇದ್ದರು.



ಶ್ರೀತ್ರಿಪುರ ಸುಂದರಿ ಅಮ್ಮನವರಿಗೆ ಬೆಣ್ಣೆ ಅಲಂಕಾರ

ಮೂಗೂರಿನ ಶ್ರೀತ್ರಿಪುರ ಸುಂದರಿ ಅಮ್ಮನವರ ದೇಗುಲದಲ್ಲಿ ಸೋಮವಾರ ಅಮ್ಮನವರಿಗೆ ಬೆಣ್ಣೆ ಅಲಂಕಾರ ಮಾಡಿ ವಿಶೇಷ ಪೂಜೆ ಸಲ್ಲಿಸಲಾಯಿತು. ಈ ವೇಳೆ ದೇವಾಲಯದ ಅರ್ಚಕ ಎಂ.ಡಿ.ಸುಂದ್ರಪ್ಪ, ರವಿ, ರಮೇಶ್ ಇನ್ನಿತರರಿದ್ದರು.

ಭ್ರಷ್ಟ ಅಧಿಕಾರಿಗಳ ಮುಖ್ಯಮಂತ್ರಿ, ಮುಖ್ಯ ಕಾರ್ಯದರ್ಶಿಗಳೇ ರಕ್ಷಿಸುತ್ತಿದ್ದಾರೆ

● ಮಾಜಿ ಸಚಿವ ಸಾ.ರಾ.ಮಹೇಶ್ ಗಂಭೀರ ಆರೋಪ ● ಭ್ರಷ್ಟರಿಗೆ ಬೇಕು ಬೇಕಾದಂತೆ ಕ್ಲೀನ್‌ಚಿಟ್ ನೀಡಲಾಗುತ್ತಿದೆ

ಮೈಸೂರು, ಮೇ 11(ಎಂಕೆ)– ರಾಜ್ಯ ಸರ್ಕಾರ ಭ್ರಷ್ಟ ಅಧಿಕಾರಿಗಳನ್ನು ರಕ್ಷಿಸುವ ಕೆಲಸ ಮಾಡುತ್ತಿದೆ. ಅದರಲ್ಲೂ ಮುಖ್ಯಮಂತ್ರಿ ಹಾಗೂ ಸರ್ಕಾರದ ಮುಖ್ಯ ಕಾರ್ಯದರ್ಶಿಯವರೇ ಭ್ರಷ್ಟ ಅಧಿಕಾರಿಗಳನ್ನು ರಕ್ಷಣೆ ಮಾಡುತ್ತಿದ್ದಾರೆ ಎಂದು ಮಾಜಿ ಸಚಿವ ಸಾ.ರಾ.ಮಹೇಶ್ ಗಂಭೀರ ಆರೋಪ ಮಾಡಿದರು.

ಮೈಸೂರಿನ ಖಾಸಗಿ ಹೋಟೆಲ್‌ನಲ್ಲಿ ಸೋಮವಾರ ಪತ್ರಿಕಾಗೋಷ್ಠಿಯನ್ನು ದ್ದೇಶಿಸಿ ಮಾತನಾಡಿದ ಅವರು, ವ್ಯಭಿಚಾರ, ದರೋಡೆ, ಭ್ರಷ್ಟಾಚಾರ ಮೂರರಲ್ಲೂ ಭಾಗಿಯಾದ ಅಧಿಕಾರಿಗಳಿಗೆ ರಾಜ್ಯ ಸರ್ಕಾರ ಕ್ಲೀನ್ ಚಿಟ್ ನೀಡುವುದಾದರೆ ಶಿಕ್ಷೆ ಕೊಡುವುದಾದರೂ ಯಾರಿಗೆ ಮುಖ್ಯಮಂತ್ರಿಗಳೇ ಎಂದು ಪ್ರಶ್ನಿಸಿದರು.

ಐಎಎಸ್ ಅಧಿಕಾರಿ ರೋಹಿಣಿ ಸಿಂಧೂರಿ ಅವರ ಹೆಸರು ಪ್ರಸ್ತಾಪಿಸದೆ, ಬಟ್ಟೆ ಬ್ಯಾಗ್ ಹಗರಣ ಏನಾಯಿತು. ಕೊರೊನಾ ಸಂದರ್ಭದಲ್ಲಿ ಚಾಮರಾಜನಗರದಲ್ಲಿ ಆಕ್ಸಿಜನ್ ಕೊರತೆಯಿಂದ ಅಮಾಯಕರು ಸಾವನ್ನಪ್ಪಲು ಪ್ರಮುಖ ಕಾರಣ ಯಾರು ಎಂಬುದನ್ನು ತನಿಖೆ ಮಾಡಿ ತಪ್ಪಿತಸ್ಥರನ್ನು ಶಿಕ್ಷಿಸುವ ಬದಲು ರಕ್ಷಿಸುವ ಕೆಲಸವನ್ನು ರಾಜ್ಯ ಸರ್ಕಾರ ಮಾಡುತ್ತಿದೆ ಎಂದು ಹರಿಹಾಯ್ದರು.

ಹಿರಿಯ ಪೊಲೀಸ್ ಅಧಿಕಾರಿ ರಾಮಚಂದ್ರರಾವ್ ಮೇಲೆ ಗುರುತರ ಆರೋಪಗಳು ಕೇಳಿ ಬಂದಿವೆ. ಆದರೂ ಅವರ ಅಮಾನತು ರದ್ದುಪಡಿಸಿ ಮತ್ತೆ ಕರ್ತವ್ಯಕ್ಕೆ ನಿಯೋಜಿಸಿರುವುದರ ಔಚಿತ್ಯವೇನು. ಇದೆಲ್ಲವನ್ನು ಗಮನಿಸಿದರೆ ನೇರವಾಗಿ ಮುಖ್ಯಮಂತ್ರಿಗಳು ಮತ್ತು ಸರ್ಕಾರದ ಮುಖ್ಯ ಕಾರ್ಯದರ್ಶಿಗಳೇ ಭ್ರಷ್ಟ ಅಧಿಕಾರಿಗಳನ್ನು ರಕ್ಷಣೆ ಮಾಡುತ್ತಿದ್ದಾರೆ ಎಂಬುದು ಸ್ಪಷ್ಟವಾಗಿದೆ ಎಂದು ಕಿಡಿಕಾರಿದರು.

ಈ ವೇಳೆ ಶಾಸಕ ಜಿ.ಡಿ.ಹರೀಶ್ ಗೌಡ, ವಿಧಾನ ಪರಿಷತ್ ಸದಸ್ಯ ಸಿ.ಎನ್.ಮಂಜೇಗೌಡ, ಮಾಜಿ ಶಾಸಕ ಹಾಗೂ ಜೆಡಿಎಸ್ ಜಿಲ್ಲಾಧ್ಯಕ್ಷ ಅಶ್ವಿನ್ ಕುಮಾರ್, ಮಾಜಿ ಮೇಯರ್‌ಗಳಾದ ಆರ್.ಲಿಂಗಪ್ಪ ಎಂ.ಜೆ.ರವಿಕುಮಾರ್, ಸೋಮಣ್ಣ, ಜೆಡಿಎಸ್ ನಗರಾಧ್ಯಕ್ಷ ಎಸ್‌ಬಿಎಂ ಮಂಜು, ಮುಖಂಡರಾದ ಚೆಲುವೇಗೌಡ, ಹೆಚ್.ಕೆ.ರಮೇಶ್, ಅಭಿಷೇಕ್, ಮೈಸೂರು ನಗರ ಯುವ ಜೆಡಿಎಸ್ ಅಧ್ಯಕ್ಷ ಮದನ್ ಮಹದೇಶ್ ಮತ್ತಿತರರಿದ್ದರು.



ಜನತಾದಳ ಪ್ರೀಮಿಯರ್ ಲೀಗ್(ಜೆಪಿಎಲ್)ನ ಮೈಸೂರು ಜಿಲ್ಲೆ ತಂಡ(ಒಡೆಯರ್ ವಾರಿಯರ್ಸ್)ದ ಪೋಸ್ಟರ್ ಅನ್ನು ಮಾಜಿ ಸಚಿವ ಸಾ.ರಾ.ಮಹೇಶ್ ಬಿಡುಗಡೆ ಮಾಡಿದರು. ಈ ವೇಳೆ ಶಾಸಕರಾದ ಜಿ.ಡಿ.ಹರೀಶ್‌ಗೌಡ, ಸಿ.ಎನ್.ಮಂಜೇಗೌಡ, ಜಿಲ್ಲಾಧ್ಯಕ್ಷ ಅಶ್ವಿನ್ ಕುಮಾರ್, ನಗರಾಧ್ಯಕ್ಷ ಎಸ್‌ಬಿಎಂ ಮಂಜು ಮತ್ತಿತರರಿದ್ದರು.

ಮೇ 13 ಮತ್ತು 17 ರಂದು ಜನರೊಂದಿಗೆ ಜನತಾದಳ...

ಮೇ 13ರಂದು ವರುಣ ಮತ್ತು ಮೇ 17ರಂದು ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರದಲ್ಲಿ ಜನರೊಂದಿಗೆ ಜನತಾದಳ ಕಾರ್ಯಕ್ರಮ ಆಯೋಜನೆ ಮಾಡಿದ್ದು, ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರದಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಭಾಗವಹಿಸಲಿದ್ದಾರೆ ಎಂದು ಮಾಜಿ ಸಚಿವ ಸಾ.ರಾ.ಮಹೇಶ್ ತಿಳಿಸಿದರು. ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ನೇತೃತ್ವದಲ್ಲಿ ರಾಜ್ಯಾದ್ಯಂತ ನಡೆಯುತ್ತಿರುವ ಜನರೊಂದಿಗೆ ಜನತಾದಳ ಕಾರ್ಯಕ್ರಮ ಈಗಾಗಲೇ 75 ವಿಧಾನಸಭಾ ಕ್ಷೇತ್ರಗಳಲ್ಲಿ ನಡೆದಿದ್ದು, ಚಾಮುಂಡೇಶ್ವರಿ ಕ್ಷೇತ್ರದಲ್ಲಿ ನಡೆಯುವ ಕಾರ್ಯಕ್ರಮ ಮೈಸೂರು ಜಿಲ್ಲೆಯಲ್ಲಿ ನಡೆಯುವ ಜನರೊಂದಿಗೆ ಜನತಾದಳದ ಸಮಾರೋಪ ಸಮಾರಂಭವಾಗಿರಲಿದೆ ಎಂದರು.

ಜೆಪಿಎಲ್: ಹಾಗೆಯೇ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರ ಹುಟ್ಟುಹಬ್ಬದ ಅಂಗವಾಗಿ ಮೇ 16, 17 ಮತ್ತು 18 ರಂದು ಬೆಂಗಳೂರಿನಲ್ಲಿ ಜನತಾದಳ ಪ್ರೀಮಿಯರ್ ಲೀಗ್(ಜೆಪಿಎಲ್) ಆಯೋಜಿಸಿದ್ದು, ರಾಜ್ಯದ ಎಲ್ಲಾ ಜಿಲ್ಲೆಗಳ ತಂಡಗಳೂ ಭಾಗವಹಿಸಲಿವೆ. ಇದೇ ವೇಳೆ ಮೈಸೂರು ಜಿಲ್ಲೆ ತಂಡ(ಒಡೆಯರ್ ವಾರಿಯರ್ಸ್)ದ ಪೋಸ್ಟರ್ ಬಿಡುಗಡೆ ಮಾಡಿದರು.

ನನ್ನ ರಾಜಕೀಯ ಹುಟ್ಟು–ಸಾವು ಎರಡೂ ಕೆ.ಆರ್.ನಗರ ಕ್ಷೇತ್ರದಲ್ಲೇ...!

ಮುಂಬರುವ ವಿಧಾನಸಭೆ ಚುನಾವಣೆಯಲ್ಲಿ ಸಾ.ರಾ.ಮಹೇಶ್ ಚಾಮುಂಡೇಶ್ವರಿ ಕ್ಷೇತ್ರದಲ್ಲಿ ಸ್ಪರ್ಧಿಸುತ್ತಾರೆಂಬ ವಿಚಾರ ಮುನ್ನೆಲೆಗೆ ಬಂದಿರುವ ಹಿನ್ನೆಲೆಯಲ್ಲಿ ಪ್ರತಿಕ್ರಿಯಿಸಿದ ಅವರು, ನಾನು ಕೆ.ಆರ್.ನಗರ ಕ್ಷೇತ್ರದಲ್ಲಿ ಮಾತ್ರವೇ ಸ್ಪರ್ಧಿಸುತ್ತೇನೆ. ಯಾವುದೇ ಕಾರಣಕ್ಕೂ ಬೇರೆ ಕ್ಷೇತ್ರದಲ್ಲಿ ಸ್ಪರ್ಧಿಸುವುದಿಲ್ಲ. ನನ್ನ ರಾಜಕೀಯ ಹುಟ್ಟು–ಸಾವು ಎರಡೂ ಕೂಡ ಕೆ.ಆರ್.ನಗರ ಕ್ಷೇತ್ರದಲ್ಲಿ ಮಾತ್ರ. ಹಾಗೆಯೇ ನಾನು ಬದುಕಿರುವವರೆಗೂ ನನ್ನ ಕುಟುಂಬದ ಯಾರೊಬ್ಬರು ಸಹ ಚುನಾವಣೆಗೆ ಸ್ಪರ್ಧಿಸುವುದಿಲ್ಲ. ಒಂದು ವೇಳೆ ನನ್ನ ಕುಟುಂಬದ ಯಾರಾದರೂ ಚುನಾವಣೆಗೆ ಸ್ಪರ್ಧಿಸಿದರೆ ನಾನು ಆ ಕೂಡಲೇ ರಾಜಕೀಯ ನಿವೃತ್ತಿ ಪಡೆಯುತ್ತೇನೆ ಎಂದು ಸ್ಪಷ್ಟಪಡಿಸಿದರು.

ಹಾಗೆಯೇ ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರದ ಅಭ್ಯರ್ಥಿ ಗೊಂದಲ ಕುರಿತು ಪ್ರತಿಯಿಸಿ, ಮುಂಬರುವ ಚುನಾವಣೆಯಲ್ಲಿ ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರದಿಂದ ಸಮರ್ಥ ಅಭ್ಯರ್ಥಿಯೇ ಸ್ಪರ್ಧಿಸಲಿದ್ದಾರೆ. ಕ್ಷೇತ್ರವನ್ನು ಉಳಿಸಿಕೊಳ್ಳುವ ನಿಟ್ಟಿನಲ್ಲಿ ಸೂಕ್ತ ಸಮಯದಲ್ಲಿ ಸೂಕ್ತ ನಿರ್ಧಾರಗಳನ್ನು ಜೆಡಿಎಸ್ ವರಿಷ್ಠರು ತೆಗೆದುಕೊಳ್ಳಲಿದ್ದಾರೆ ಎಂದು ತಿಳಿಸಿದರು.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ	(ದೂ: 2521923)
ಕರ (ತ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್	(ದೂ: 2422871)
ರೆಬೆಲ್ (ತೆ)	4 ಪ್ರದರ್ಶನಗಳು
ಬಾಲಾಜಿ	(ದೂ: 2497199)
ಡಕಾಯಿಟ್ (ಹಿ)	3 ಪ್ರದರ್ಶನಗಳು
ಮಹದೇಶ್ವರ	(ಮೊ:9900820093)
ಕೆಡಿ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಕೋಟಿಗೊಬ್ಬ (ಕ)	4 ಪ್ರದರ್ಶನಗಳು
ರಾಜಕಮಲ್	
ಪೆಟ್ರಿಯೋಟ್ (ಮ)	4 ಪ್ರದರ್ಶನಗಳು
ಸಂಗಂ	
ಕರ (ತ)	4 ಪ್ರದರ್ಶನಗಳು
ಲಿಡೋ	
ಮಾಣಿಕ್ಯ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
–	–
ಪ್ರಭಾ	
ಪುನೀತ್ ನಿವಾಸ (ಕ)	4 ಪ್ರದರ್ಶನಗಳು

ಅರ್ಜಿ ಆಹ್ವಾನ

ಮೈಸೂರು, ಮೇ 11– ಚಾಮರಾಜನಗರ ಜಿಲ್ಲೆ ಹನೂರು ತಾಲೂಕು ರಾಮಾಪುರದಲ್ಲಿರುವ ಜೆಎಸ್‌ಎಸ್ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯಕ್ಕೆ ಅರ್ಜಿ ಆಹ್ವಾನಿಸಲಾಗಿದೆ 5 ರಿಂದ 10ನೇ ತರಗತಿಯವರೆಗೆ ವ್ಯಾಸಂಗ ಮಾಡುವ ವಿದ್ಯಾರ್ಥಿಗಳಿಗೆ ಇಲ್ಲಿ ಪ್ರವೇಶಾವಕಾಶವಿರುತ್ತದೆ. ಅರ್ಜಿಯನ್ನು ನೇರವಾಗಿ ಕಚೇರಿಯಿಂದ ಪಡೆಯಬಹುದು ಅಥವಾ ಮೊಬೈಲ್‌ನಲ್ಲಿ ಸಂಪರ್ಕಿಸಿದರೆ ವಾಟ್ಸಪ್ ಮೂಲಕ ಕಳುಹಿಸಿಕೊಡಲಾಗುವುದು. ಹೆಚ್ಚಿನ ಮಾಹಿತಿಗೆ ದೂ. 0821–2548212, ಮೊ. 9449994081 ಸಂಪರ್ಕಿಸಬಹುದು.

ಮಹಿಳಾ ಶಿಕ್ಷಣ ಕ್ರಾಂತಿಗೆ ಸಾವಿತ್ರಿಬಾಯಿ ಫುಲೆ ಕೊಡುಗೆ ಕಾರಣ

ಗುರುವಂದನಾ ಕಾರ್ಯಕ್ರಮದಲ್ಲಿ ನಾಟಕಕಾರ್ತಿ ಡಾ.ಸುಜಾತ ಅಕ್ಕಿ ಅಭಿಮತ



ಮೈಸೂರಿನ ತಿಲಕ್‌ನಗರದಲ್ಲಿರುವ ಹೆಲೆನ್ ಕೆಲ್ಲರ್ ಸರ್ಕಾರಿ ಶ್ರವಣದೋಷವುಳ್ಳ ಮಕ್ಕಳ ಶಿಕ್ಷಕರ ತರಬೇತಿ ಕೇಂದ್ರ ಆವರಣದಲ್ಲಿ ಗುರುವಂದನಾ ಮತ್ತು ಸ್ನೇಹ ಸಮ್ಮಿಲನ ಕಾರ್ಯಕ್ರಮ ನಡೆಯಿತು.

ಮೈಸೂರು,ಮೇ 11(ಪಿಎಂ)– ಅಂದು ಸಾವಿತ್ರಿಬಾಯಿ ಫುಲೆ ಅವರು ಜ್ಯೋತಿಬಾ ಫುಲೆ ಅವರ ಬೆಂಬಲದೊಂದಿಗೆ ನೀಡಿದ ಕೊಡುಗೆ, ಹೋರಾಟ ಹಾಗೂ ತ್ಯಾಗವೇ ಇಂದಿನ ಮಹಿಳಾ ಶಿಕ್ಷಣ ಕ್ರಾಂತಿಗೆ ಕಾರಣ ಎಂದು ನಾಟಕಕಾರ್ತಿ ಹಾಗೂ ಪ್ರಾಧ್ಯಾಪಕಿ ಡಾ.ಸುಜಾತ ಅಕ್ಕಿ ಹೇಳಿದರು.

ಮೈಸೂರಿನ ತಿಲಕ್‌ನಗರದಲ್ಲಿರುವ ಹೆಲೆನ್ ಕೆಲ್ಲರ್ ಸರ್ಕಾರಿ ಶ್ರವಣದೋಷವುಳ್ಳ ಮಕ್ಕಳ ಶಿಕ್ಷಕರ ತರಬೇತಿ ಕೇಂದ್ರ ಆವರಣದಲ್ಲಿ 2001ರಿಂದ 2026ರವರೆಗಿನ ಹಳೆಯ ವಿದ್ಯಾರ್ಥಿಗಳ ಬಳಗದ ವತಿಯಿಂದ ಶನಿವಾರ ಹಮ್ಮಿಕೊಂಡಿದ್ದ 'ಗುರುವಂದನಾ ಹಾಗೂ ಸ್ನೇಹ ಸಮ್ಮಿಲನ' ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಶಿಕ್ಷಣ ಕ್ಷೇತ್ರದಲ್ಲಿ ಮಹಿಳೆಯರ ಪಾತ್ರ ಅಪಾರ. ಇದಕ್ಕೆ ಸಾವಿತ್ರಿಬಾಯಿ ಫುಲೆ ಅವರ ಹೋರಾಟ ಮತ್ತು ತ್ಯಾಗವೇ ಕಾರಣ. ವಿಶೇಷ ಮಕ್ಕಳ ಶಿಕ್ಷಣ ಕ್ಷೇತ್ರದ ಸೇವೆಯು ಮಹತ್ವದ್ದಾಗಿದೆ ಎಂದು ತಿಳಿಸಿದರು.

ಹಿರಿಯ ರಂಗಭೂಮಿ ಕಲಾವಿದೆ ಹಾಗೂ ವಿಶೇಷ ಮಕ್ಕಳ ಶಿಕ್ಷಕಿ ಇಂದಿರಾ ನಾಯರ್ ಮಾತನಾಡಿ, 2001ರಲ್ಲಿ ಈ ತರಬೇತಿ ಕೇಂದ್ರ ಆರಂಭವಾದ ದಿನಗಳು ಇನ್ನೂ ಮನಸ್ಸಿನಲ್ಲಿ ಹಸಿರಾಗಿವೆ. ಅಂದಿನ ಶಿಕ್ಷಕರ ಸಮರ್ಪಣೆ, ಶಿಸ್ತು ಮತ್ತು ಪರಿಶ್ರಮ ಇಂದಿನ ತಲೆಮಾರಿನ ಶಿಕ್ಷಕರಿಗೆ ಮಾದರಿಯಾಗಬೇಕು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮೈಸೂರು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಆರ್.ರಾಘವೇಂದ್ರ ಮಾತನಾಡಿ, ವಿಶೇಷ ಅಗತ್ಯವುಳ್ಳ ಮಕ್ಕಳ ಭವಿಷ್ಯ ರೂಪಿಸುವ ಶಿಕ್ಷಕರನ್ನು ತಯಾರಿಸುವುದು ನಿಜಕ್ಕೂ ಪವಿತ್ರ ಕಾರ್ಯ. ಹಳೆಯ ವಿದ್ಯಾರ್ಥಿಗಳು ತಮ್ಮ ಗುರುಗಳನ್ನು ಸ್ಮರಿಸಿ ಗೌರವಿಸುತ್ತಿರುವುದು ಸಮಾಜಕ್ಕೆ ಉತ್ತಮ ಮಾದರಿ ಎಂದು ಶ್ಲಾಘಿಸಿದರು.

ಇದೇ ವೇಳೆ ಕಳೆದ ಎರಡೂವರೆ ದಶಕಗಳಿಂದ ಸಾವಿರಾರು ವಿಶೇಷ ಶಿಕ್ಷಕರನ್ನು ರೂಪಿಸಿದ 28ಕ್ಕೂ ಹೆಚ್ಚು ಹಿರಿಯ ಹಾಗೂ ಪ್ರಸ್ತುತ ಶಿಕ್ಷಕರಿಗೆ ಗುರುವಂದನೆ ಸಲ್ಲಿಸಲಾಯಿತು. ಈ ವೇಳೆ ಆಶಾ ವಿ.ಹಿರೇಮಠ, ಎನ್.ಆರ್.ವಿಜಯ್, ಎಸ್.ಗಿರೀಶ್, ಅನ್ನಪೂರ್ಣ, ಡಾ.ಸಂಗೀತಾ, ಮಂಜುಳಾ ಪಾಟೀಲ್, ಸಿಸ್ಟರ್ ಲೀನಾ ಹಾಗೂ ಎ.ಸುರೇಶ್ ಸೇರಿದಂತೆ ಗುರುವೃಂದದವರನ್ನು ಸನ್ಮಾನಿಸಲಾಯಿತು.

ಸ್ನೇಹ ಸಮ್ಮಿಲನ ಕಾರ್ಯಕ್ರಮದಲ್ಲಿ 2001ರಿಂದ 2026ರವರೆಗಿನ ವಿವಿಧ ಸಾಲಿನ ವಿದ್ಯಾರ್ಥಿಗಳು ಒಂದೇ ವೇದಿಕೆಯಲ್ಲಿ ಸೇರಿ ತರಬೇತಿ ದಿನಗಳ ನೆನಪು ಹಂಚಿಕೊಂಡರು. ಈ ವೇಳೆ ಅಂಧ ಮಕ್ಕಳ ಶಾಲೆಯ ಅಧೀಕ್ಷಕ ಕೆ.ಎಸ್.ಸತೀಶ್, ಶ್ರವಣ ದೋಷವುಳ್ಳ ಮಕ್ಕಳ ಶಾಲೆಯ ಅಧೀಕ್ಷಕ ಮೀರಜ್, ಹೆಚ್.ಹೆಚ್.ಮುರುಳಿ, ರಂಗನಾಥ್, ತಾರಾಮಣಿ, ಎ.ಸುರೇಶ್, ಡಾ.ಶಾಂಭವಿ ಸ್ವಾಮಿ, ಕನ್ಯಾ ಮತ್ತಿತರರಿದ್ದರು.

ರಾಜ್ಯದ ಅರಿವು ಕೇಂದ್ರಗಳ ಮೇಲ್ವಿಚಾರಕರಿಗೆ ತರಬೇತಿ

ಅರಿವು ಕೇಂದ್ರಗಳು ಗ್ರಾಮದ ಜ್ಞಾನ ಕೇಂದ್ರಗಳು

ಪಂಚಾಯತ್ ರಾಜ್ಯ ಇಲಾಖೆಯ ಉಪ ನಿರ್ದೇಶಕ ಕೃಷ್ಣಕುಮಾರ್ ಅಭಿಪ್ರಾಯ

ಮೈಸೂರು, ಮೇ 11– ಗ್ರಾಮ ಪಂಚಾಯಿತಿಗಳ ಜ್ಞಾನ ಭಂಡಾರಗಳಾಗಿರುವ ರಾಜ್ಯದ 5949 ಅರಿವು ಕೇಂದ್ರಗಳು ಉಳಿದ ರಾಜ್ಯಗಳಿಗೆ ಮಾದರಿಯಾಗುವಂತೆ ಕಾರ್ಯ ನಿರ್ವಹಿಸುತ್ತಿರುವುದು ರಾಜ್ಯಕ್ಕೆ ಹೆಮ್ಮೆಯ ವಿಷಯವಾಗಿದೆ ಎಂದು ಪಂಚಾಯತ್ ರಾಜ್ಯ ಇಲಾಖೆಯ ಉಪ ನಿರ್ದೇಶಕ (ಅಭಿವೃದ್ಧಿ) ಕೃಷ್ಣಕುಮಾರ್ ಅಭಿಪ್ರಾಯಪಟ್ಟರು.

ಗುರುವಾರ ಇಲ್ಲಿನ ಅಬ್ದುಲ್ ನಜೀರ್ ಸಾಬ್ ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯಿತಿ ರಾಜ್ ತರಬೇತಿ ಕೇಂದ್ರದಲ್ಲಿ ಗೋಥೆ ಸಂಸ್ಥೆ ಹಾಗೂ ಇಂಡಿಯಾ ಫೌಂಡೇಷನ್ ಫಾರ್ ದಿ ಆರ್ಟ್ಸ್ ಸಂಸ್ಥೆಯ ಸಹಯೋಗದಲ್ಲಿ ಏರ್ಪಡಿಸಲಾಗಿದ್ದ ರಾಜ್ಯದ ಅರಿವು ಕೇಂದ್ರಗಳ ಮೇಲ್ವಿಚಾರಕರುಗಳಿಗೆ ಬುನಾದಿ ಮತ್ತು ಸ್ವ–ಅನ್ವೇಷಣೆ ತರಬೇತಿ ಉದ್ಘಾಟಿಸಿ ಮಾತನಾಡಿದರು.

21 ಸಂಸ್ಥೆಗಳ ಒಡಂಬಡಿಕೆಯೊಂದಿಗೆ ಆರಂಭವಾಗಿರುವ ಈ ಅರಿವು ಕೇಂದ್ರಗಳನ್ನು ಅಭಿವೃದ್ಧಿಪಡಿಸುವ ಜವಾಬ್ದಾರಿ ಆಯಾ ಕೇಂದ್ರಗಳ ಮೇಲ್ವಿಚಾರಕರ ಮೇಲಿದೆ ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಪಂಚಾಯತ್ ರಾಜ್ ಇಲಾಖೆಯ ಉಪ ನಿರ್ದೇಶಕ (ಆಡಳಿತ) ಬಿ.ಕೆ.ಮನು ಮಾತನಾಡಿ, ಅರಿವು ಕೇಂದ್ರಗಳು ಕೇವಲ ಗ್ರಂಥಾಲಯ ಕೆಲಸವಷ್ಟೆ ನಿರ್ವಹಿಸುತ್ತಿಲ್ಲ, ಅದರ ಜೊತೆಗೆ ಸ್ಥಳೀಯ ಪರಂಪರೆ, ಇತಿಹಾಸ, ಸಂಪ್ರದಾಯ, ಸಂಸ್ಕೃತಿಯ ಮೇಲೆ ಬೆಳಕು ಚೆಲ್ಲುವ ಹಾಗೂ ದಾಖಲೀಕರಣ ಮಾಡುವ ಕೆಲಸದಲ್ಲಿ ತೊಡಗಬೇಕು ಎಂದು ಹೇಳಿದರು.

ಇಂಡಿಯಾ ಫೌಂಡೇಷನ್ ಫಾರ್ ದಿ ಆರ್ಟ್ಸ್ ಸಂಸ್ಥೆಯ ಕಾರ್ಯಕ್ರಮ ನಿರ್ವಾಹಕ ಕೃಷ್ಣಮೂರ್ತಿ ಟಿ.ಎನ್ ಮಾತನಾಡಿ, ಅರಿವು ಕೇಂದ್ರಗಳ ಮೇಲ್ವಿಚಾರಕರಿಗೆ ಮೂರು ಹಂತಗಳಲ್ಲಿ ತರಬೇತಿ ನಡೆಯುತ್ತಿದ್ದು, ಈ ತರಬೇತಿಗಳ ಮೂಲಕ ಅವರಲ್ಲಿ ಹೊಸತನ ನೀಡಿ ಗ್ರಂಥಾಲಯ ನಿರ್ವಹಣೆಗೆ ಪೂರಕ ಜ್ಞಾನ ಕಟ್ಟಿಕೊಡುವ ಉದ್ದೇಶ ಹೊಂದಲಾಗಿದೆ ಎಂದು ಹೇಳಿದರು.

ತರಬೇತಿ ವಿಭಾಗದ ಉಪ ನಿರ್ದೇಶಕ ಕೆ.ಎಸ್.ಮನೋಜ್‌ಕುಮಾರ್, ಗೋಥೆ ಸಂಸ್ಥೆಯ ಮಾಹಿತಿ ಸಂವಹನ ಅಧಿಕಾರಿ ಶೇಷಗಿರಿ ಕುಲಕರ್ಣಿ ಮಾತನಾಡಿದರು.

ಭೂ ಮತ್ತು ನೀರು ಸಂಪನ್ಮೂಲ ಬೋಧಕ ಡಾ.ಪ್ರಮೋದ ಎಮ್. ಚಾಂದಕವಟೆ ತರಬೇತಿ ಸಹಾಯಕಿ ಶ್ವೇತಾ ಕೆ.ಎಮ್, ಸಂಪನ್ಮೂಲ ವ್ಯಕ್ತಿಗಳಾದ ದೀಪಕ್, ಅರುಣ ಬಿ.ಟಿ. ಕಿಶನ್ ರಾವ್ ಕುಲಕರ್ಣಿ, ಕೊಟ್ರೇಶ.ಬಿ, ಸಂಜನಾ ರಂಗರಾಜ, ಪ್ರಶಾಂತ ಬೆಳ್ಳಿ ಇದ್ದರು. ಡಾ.ಪ್ರಮೋದ ಎಮ್. ಚಾಂದಕವಟೆ ಕಾರ್ಯಕ್ರಮ ನಿರ್ವಹಿಸಿ ವಂದಿಸಿದರು.



ಮೈಸೂರಿನ ಅಬ್ದುಲ್ ನಜೀರ್‌ಸಾಬ್ ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ತರಬೇತಿ ಕೇಂದ್ರದಲ್ಲಿ ಗುರುವಾರ ರಾಜ್ಯದ ಅರಿವು ಕೇಂದ್ರಗಳ ಮೇಲ್ವಿಚಾರಕರುಗಳಿಗೆ ಐಎಫ್‌ಎ ಹಾಗೂ ಗೋಥೆ ಸಂಸ್ಥೆಯ ಆಶ್ರಯದಲ್ಲಿ ಏರ್ಪಡಿಸಲಾಗಿದ್ದ ಬುನಾದಿ ಮತ್ತು ಸ್ವ–ಅನ್ವೇಷಣೆ ತರಬೇತಿಯನ್ನು ಪಂಚಾಯತ್ ರಾಜ್ಯ ಇಲಾಖೆಯ ಉಪನಿರ್ದೇಶಕ (ಅಭಿವೃದ್ಧಿ) ಕೃಷ್ಣಕುಮಾರ್ ಉದ್ಘಾಟಿಸಿದರು.

ಪ್ರತಿಭಾ ಪುರಸ್ಕಾರ; ಸಾಧಕರಿಗೆ ಸನ್ಮಾನ



ಮೈಸೂರು, ಮೇ 11– ಮೈಸೂರಿನ ಸರಸ್ವತಿಪುರಂನಲ್ಲಿರುವ ಶ್ರೀ ಅಂಕಾಳ ಪರಮೇಶ್ವರಿ ನೌಕರರ ಸಂಘದ ವತಿಯಿಂದ ಎಸ್.ಎಸ್.ಎಲ್.ಸಿ ಹಾಗೂ ಪಿ.ಯು.ಸಿ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ಇನ್ನಿತರ ಕ್ಷೇತ್ರದಲ್ಲಿ ಸಾಧನೆಗೈದವರಿಗೆ ಸನ್ಮಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಂಘದ ಅಧ್ಯಕ್ಷರು ಹಾಗೂ ಕಲಬುರಗಿ ಜಿಲ್ಲೆ, ಆಳಂದ ತಾಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿ ವಿ. ರಂಗಸ್ವಾಮಿಶೆಟ್ಟಿ ವಹಿಸಿದ್ದರು. ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಶಿಕ್ಷಣ ಸಮಾಜದಲ್ಲಿ ಗೌರವಯುತ ಬದುಕು ಕಟ್ಟಿಕೊಡುವ ಮೂಲಕ ಸಮಾನತೆ ತಂದುಕೊಡುವಲ್ಲಿ ಪ್ರಮುಖಪಾತ್ರ ವಹಿಸುತ್ತದೆ. ಅಲ್ಲದೆ ಸ್ವಾಭಿಮಾನದ ಬದುಕು ನಿರ್ವಹಿಸಲು ಸಾಧ್ಯ ಎಂದರು. ಪ್ರತಿಭಾನ್ವಿತ ಮಕ್ಕಳಿಗೆ ಪುರಸ್ಕಾರ ಮಾಡುವ ಜೊತೆಗೆ 24ಮನೆ ತೆಲುಗುಶೆಟ್ಟರ ಜನಾಂಗದವರು ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದವರಿಗೆ ಸನ್ಮಾನಿಸಲಾಯಿತು. ಜಿಲ್ಲಾ ಪಂಚಾಯ್ತಿ ಮಾಜಿ ಸದಸ್ಯರಾದ ಎನ್. ಮಹದೇವ್, ಇಂದ್ರಶೆಟ್ಟರು, ಮಂಜುನಾಥ್, ಗೋಪಾಲಶೆಟ್ಟಿ, ಶ್ರೀನಿವಾಸ್, ಕೋಮಲ, ಆನಂದಶೆಟ್ಟಿ, ನಾಗಶೆಟ್ಟಿ ಮತ್ತಿತರರು ಉಪಸ್ಥಿತರಿದ್ದರು.

ಮೈಸೂರಿನಲ್ಲಿ ಯಕ್ಷ ಸಂಭ್ರಮ



ಮೈಸೂರು, ಮೇ 11–ದಕ್ಷಿಣ ಕನ್ನಡ ಜಿಲ್ಲೆಯ ತೆಂಕು ತಿಟ್ಟಿನ ಜನಪ್ರಿಯ ಶ್ರೀ ಕೋದಂಡರಾಮ ಕೃಪಾ ಪೋಷಿತ ಯಕ್ಷಗಾನ ಮಂಡಳಿಯ ಪ್ರಸಿದ್ಧ ಕಲಾವಿದರಿಂದ ಮೈಸೂರು ನಗರದಲ್ಲಿ ಎರಡು ಯಕ್ಷಗಾನ ಪ್ರದರ್ಶನಗಳು ನಡೆಯಲಿವೆ.

ಮೇ 17 ಭಾನುವಾರ ಜಗನ್ಮೋಹನ ಅರಮನೆಯ ಸಭಾಂಗಣದಲ್ಲಿ ಸಂಜೆ 5.30 ರಿಂದ ಶ್ರೀರಾಮಾಂಜನೇಯ, ಸುದರ್ಶನ ವಿಜಯ, ರಕ್ತ ರಾತ್ರಿ ಪ್ರಸಂಗಗಳು ಪ್ರದರ್ಶನಗೊಳ್ಳಲಿವೆ. ಮೇ 18 ರಂದು ವಿಜಯನಗರ 3ನೇ ಹಂತದಲ್ಲಿರುವ ಆಶಾ ಪ್ರಕಾಶ ಶೆಟ್ಟಿ ಬಂಟರ ಭವನದಲ್ಲಿ ಸಂಜೆ 5.30 ರಿಂದ ದಮಯಂತಿ ಪುನಃ ಸ್ವಯಂವರ, ಶ್ರೀನಿವಾಸ ಕಲ್ಯಾಣ ಪ್ರಸಂಗಗಳು ಪ್ರದರ್ಶನ ಗೊಳ್ಳಲಿವೆ. ಪ್ರವೇಶ ಉಚಿತ. ಮಾಹಿತಿಗೆ ಸಂಪರ್ಕಿಸಿ : 9449264920.

ಪ್ರತಿಭಾ ಭಾರತಿ ಪುರಸ್ಕಾರಕ್ಕೆ ಅರ್ಜಿ ಆಹ್ವಾನ

ಮೈಸೂರು, ಮೇ 11–ಮೈಸೂರಿನ ಎಸ್‌ಬಿ ಎಕ್ಸಲೆನ್ಸ್ ಎಜುಕೇಷನ್ ಅಂಡ್ ಚಾರಿಟಬಲ್ ಟ್ರಸ್ಟ್ ವತಿಯಿಂದ 2026ನೇ ಸಾಲಿನಲ್ಲಿ ಎಸ್‌ಎಸ್‌ಎಲ್‌ಸಿ ಮತ್ತು ದ್ವಿತಿಯ ಪಿಯುಸಿ ಪರೀಕ್ಷೆಯಲ್ಲಿ ಶೇ.93ರಷ್ಟು ಅಂಕ ಗಳಿಸಿರುವ ಸರ್ಕಾರಿ ಶಾಲಾ, ಕಾಲೇಜಿನ ವಿದ್ಯಾರ್ಥಿ, ವಿದ್ಯಾರ್ಥಿನಿಯರು ಹಾಗೂ ಖಾಸಗಿ, ಅನುದಾನಿತ ಶಾಲಾ, ಕಾಲೇಜಿನಲ್ಲಿ ವಿದ್ಯಾರ್ಥಿ, ವಿದ್ಯಾರ್ಥಿನಿಯರು ಶೇ.95ರಷ್ಟು ಅಂಕ ಗಳಿಸಿರುವವರಿಗೆ ಪ್ರತಿಭಾ ಭಾರತಿ ಪುರಸ್ಕಾರ ನೀಡಿ ಸನ್ಮಾನಿಸಲಾಗುವುದು.

ಆಸಕ್ತ ವಿದ್ಯಾರ್ಥಿಗಳು ಅಂಕಪಟ್ಟಿಗಳೊಂದಿಗೆ ವಿಳಾಸ ಹೆಚ್.ದಕ್ಷಿಣಮೂರ್ತಿ, ನಂ 237, ಸಿಐಟಿಬಿ 2ನೇ ಹಂತ ಕುವೆಂಪುನಗರ ಮೈಸೂರು 570023ಗೆ ಕಳುಹಿಸಬೇಕು. ಹೆಚ್ಚಿನ ಮಾಹಿತಿಗಾಗಿ 9448570069 ಸಂಪರ್ಕಿಸಲು ಪ್ರಕಟಣೆ ಮೂಲಕ ಅಧ್ಯಕ್ಷರು ಕೋರಿದ್ದಾರೆ.

ಉಚಿತ ಕಣ್ಣಿನ ಶಸ್ತ್ರ ಚಿಕಿತ್ಸಾ ಶಿಬಿರ




ಮೈಸೂರು, ಮೇ 11–ಮೈಸೂರಿನ ಎನ್‌ಜೆಎಸ್ ಚಾರಿಟಬಲ್ ಟ್ರಸ್ಟ್, ಮೈಸೂರು ವೀರಶೈವ ಸಜ್ಜನ ಸಂಘ ಹಾಗೂ ಕೊಯಮತ್ತೂರು ಅರವಿಂದ ಕಣ್ಣಿನ ಆಸ್ಪತ್ರೆ ವತಿಯಿಂದ ಮೇ 17ರಂದು ಬೆಳಗ್ಗೆ 7.30ರಿಂದ ಮಧ್ಯಾಹ್ನ 12.30ರವರೆಗೆ ಮಂಡಿ ಮೊಹಲ್ಲಾದ ಕಂಠಿ ಮಲ್ಲಣ್ಣ ಕಲ್ಯಾಣ ಮಂದಿರದಲ್ಲಿ ಉಚಿತ ಕಣ್ಣಿನ ಶಸ್ತ್ರ ಚಿಕಿತ್ಸಾ ಶಿಬಿರ ಆಯೋಜಿಸಲಾಗಿದೆ ಹೆಚ್ಚಿನ ಮಾಹಿತಿಗಾಗಿ 9448753597 ಸಂಪರ್ಕಿಸಿ ಎಂದು ಪ್ರಕಟಣೆ ತಿಳಿಸಿದೆ.

ಬಂಡೀಪುರ: ಕಳ್ಳ ಬೇಟೆ ತಡೆ ಶಿಬಿರಗಳಿಗೆ ಮೂಲ ಸೌಕರ್ಯ

● ಕುಡಿಯುವ ನೀರು, ಸೋಲಾರ್ ದೀಪ, ಬೋರ್‌ವೆಲ್, ವಾಚರ್‌ಗಳ ವಾಸ್ತವ್ಯಕ್ಕೆ ಅಗತ್ಯ ಕ್ರಮ

● ಸಫಾರಿಯಿಂದ ಬಂದ ಆದಾಯ, ಇಲಾಖಾ ಅನುದಾನ, ಸಿಎಸ್‌ಆರ್ ಫಂಡ್‌ನಲ್ಲಿ ಎಪಿಸಿಗಳ ದುರಸ್ತಿ





ಮರಳಹಳ್ಳ ಕಳ್ಳಬೇಟೆ ತಡೆ ಶಿಬಿರ

ಮೈಸೂರು, ಮೇ 11(ಎಂಟಿವೈ)– ಅರಣ್ಯ ಸಂರಕ್ಷಣೆಯೊಂದಿಗೆ ಕಳ್ಳ ಬೇಟೆ ತಡೆಗಟ್ಟಲು ಪ್ರಮುಖ ಪಾತ್ರ ವಹಿಸುವ ಕಳ್ಳ ಬೇಟೆ ತಡೆ ಶಿಬಿರ (ಆಂಟಿ ಪೋಚಿಂಗ್ ಕ್ಯಾಂಪ್)ಗಳಿಗೆ ಮೂಲ ಸೌಲಭ್ಯ ಕಲ್ಪಿಸುವ ನಿಟ್ಟಿನಲ್ಲಿ ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದಲ್ಲಿ ಕ್ರಮ ಕೈಗೊಳ್ಳಲಾಗಿದೆ.

ದಟ್ಟ ಅರಣ್ಯ ಪ್ರದೇಶದ ಆಯಕಟ್ಟಿನ ಸ್ಥಳ ಅಂತರ ರಾಜ್ಯ ಗಡಿ ವ್ಯಾಪ್ತಿ ಬಳಿ ಹಾಗೂ ಕಾಡಂಚಿನ ಗಡಿ ಭಾಗಕ್ಕೆ ಹೊಂದಿಕೊಂಡಂತೆ ಸೂಕ್ಷ್ಮ ಸ್ಥಳಗಳಲ್ಲಿ ಕಳ್ಳ ಬೇಟೆ ತಡೆ ಶಿಬಿರವನ್ನು ಸ್ಥಾಪಿಸಲಾಗಿದ್ದು, ದಿನದ 24 ಗಂಟೆಯೂ ಅರಣ್ಯ ಸಂರಕ್ಷಣೆಗೆ ಒತ್ತು ನೀಡಿ ಕಾರ್ಯ ನಿರ್ವಹಿಸಲು ಸಿಬ್ಬಂದಿಗಳನ್ನು ನಿಯೋಜಿಸಲಾಗಿದೆ. ಈ ಕಳ್ಳ ಬೇಟೆ ತಡೆ ಶಿಬಿರಗಳೇ ಅರಣ್ಯ ಸಂರಕ್ಷಣೆಯಲ್ಲಿ ಮಹತ್ವದ ಪಾತ್ರ ವಹಿಸುತ್ತಿದ್ದು, ಅಲ್ಲಿನ ಸಿಬ್ಬಂದಿಗಳಿಗೆ ಸೌಲಭ್ಯ ನೀಡದೇ ಕೆಲಸ ಮಾಡಿಸಿಕೊಳ್ಳಲಾಗುತ್ತಿದೆ ಎಂಬ ಆರೋಪ ಕೇಳಿಬಂದಿತ್ತು. ಇದೀಗ ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದಲ್ಲಿರುವ 53 ಕಳ್ಳ ಬೇಟೆ ತಡೆ ಶಿಬಿರವನ್ನು ಹಂತ ಹಂತವಾಗಿ ಅಭಿವೃದ್ಧಿಪಡಿಸುವುದರೊಂದಿಗೆ ಅಲ್ಲಿನ ಸಿಬ್ಬಂದಿಗಳಿಗೆ ಮೂಲ ಸೌಲಭ್ಯ ಒದಗಿಸಲು ಕ್ರಮ ಕೈಗೊಳ್ಳಲಾಗಿದೆ.

> 
>
> ಅರಣ್ಯ ಸಂರಕ್ಷಣೆಯಲ್ಲಿ ಕಳ್ಳ ಬೇಟೆ ತಡೆ ಶಿಬಿರ ಮತ್ತು ಅಲ್ಲಿನ ವಾಚರ್‌ಗಳು ಪ್ರಮುಖ ಪಾತ್ರ ವಹಿಸಲಿದ್ದಾರೆ. ಈ ಹಿನ್ನೆಲೆಯಲ್ಲಿ ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದಲ್ಲಿರುವ ಕಳ್ಳ ಬೇಟೆ ತಡೆ ಶಿಬಿರಕ್ಕೆ ಪ್ರಮುಖವಾಗಿ ಮೂಲ ಸೌಲಭ್ಯ ಒದಗಿಸುವ ಉದ್ದೇಶದೊಂದಿಗೆ ಅಗತ್ಯ ಕ್ರಮ ಕೈಗೊಳ್ಳಲಾಗಿದೆ. ಬಂಡೀಪುರ ಅರಣ್ಯ ವ್ಯಾಪ್ತಿಯಲ್ಲಿ ಒಟ್ಟು 53 ಕಳ್ಳ ಬೇಟೆ ತಡೆ ಶಿಬಿರಗಳಿದ್ದು, ಅವುಗಳನ್ನು ಹಂತ ಹಂತವಾಗಿ ಅಭಿವೃದ್ಧಿಪಡಿಸಿ, ಅಲ್ಲಿನ ಸಿಬ್ಬಂದಿಗಳಿಗೆ ವಾಸ್ತವ್ಯಕ್ಕೆ ಉತ್ತಮ ವಾತಾವರಣ ಕಲ್ಪಿಸುವ ಉದ್ದೇಶ ಹೊಂದಲಾಗಿದೆ. ಇದಕ್ಕಾಗಿ ಸಫಾರಿಯಿಂದ ಬರುವ ಆದಾಯ, ಇಲಾಖಾ ಅನುದಾನದೊಂದಿಗೆ ಕೆಲವು ಖಾಸಗಿ ಸಂಸ್ಥೆಗಳ ಸಿಎಸ್‌ಆರ್ ಅನುದಾನವನ್ನು ಬಳಸಿಕೊಳ್ಳಲಾಗುತ್ತಿದೆ. ಈಗಾಗಲೇ ಐಸಿಐಸಿಐ ಫೌಂಡೇಷನ್ ವತಿಯಿಂದ ಸಿಎಸ್‌ಆರ್ ಅನುದಾನದಡಿ 2ಕೆವಿ ಸೌರ ಶಕ್ತಿ ಸಾಮರ್ಥ್ಯದ ವ್ಯವಸ್ಥೆ ಮಾಡಿಕೊಟ್ಟಿದೆ. ಇದೀಗ ಶಿಬಿರದ ಸಿಬ್ಬಂದಿಗಳಿಗೆ ಉತ್ತಮ ಕುಡಿಯುವ ನೀರು ಪೂರೈಸಲು ಸೋಲಾರ್ ಬೋರ್‌ವೆಲ್ ವ್ಯವಸ್ಥೆಯನ್ನು ಮಾಡಲಾಗಿದೆ.
>
> -ಎಸ್.ಪ್ರಭಾಕರನ್, ನಿರ್ದೇಶಕರು, ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶ

ಶಿಬಿರದ ಅಭಿವೃದ್ಧಿ: ಕಳ್ಳ ಬೇಟೆ ತಡೆ ಶಿಬಿರಕ್ಕೆ ಪ್ರಮುಖವಾಗಿ ಗುಣಮಟ್ಟದ ಮೇಲ್ಛಾವಣಿ ವ್ಯವಸ್ಥೆ ಒದಗಿಸಿ ಕಟ್ಟಡವನ್ನು ಬಲಪಡಿಸುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಲಾಗಿದೆ. ಸಫಾರಿಯಿಂದ ಬಂದ ಆದಾಯ, ಇಲಾಖೆಯ ಅನುದಾನ ಹಾಗೂ ಸಿಎಸ್‌ಆರ್ ಅನುದಾನವನ್ನು ಬಳಸಿಕೊಂಡು ಕಳ್ಳ ಬೇಟೆ ತಡೆ ಶಿಬಿರವನ್ನು ಅಭಿವೃದ್ಧಿಪಡಿಸಲಾಗುತ್ತಿದೆ. ಅರಣ್ಯ ಪ್ರದೇಶದೊಳಗಿರುವ ಕಳ್ಳ ಬೇಟೆ ತಡೆ ಶಿಬಿರಕ್ಕೆ ವಿದ್ಯುತ್ ಸಂಪರ್ಕ ಇಲ್ಲದ ಕಾರಣ ಇದೀಗ ಸೋಲಾರ್ ಶಕ್ತಿಯನ್ನು ಬಳಸಿಕೊಂಡು ಕಳ್ಳ ಬೇಟೆ ತಡೆ ಶಿಬಿರಕ್ಕೆ ದಿನದ 24 ತಾಸು ಸೌರ ವಿದ್ಯುತ್ ಸೌಲಭ್ಯ ಸಿಗುವಂತೆ ಮಾಡಲಾಗಿದೆ.

2ಕೆವಿ ಸಾಮರ್ಥ್ಯದ ಸೌರ ಪ್ಯಾನಲ್‌ಗಳನ್ನು ಅಳವಡಿಸಿ ಸೌರ ಶಕ್ತಿಯಿಂದ ಉತ್ಪಾದನೆಯಾಗುವ ವಿದ್ಯುತ್ತನ್ನು ಬೃಹತ್ ಬ್ಯಾಟರಿಗಳ ಮೂಲಕ ಶಿಬಿರಕ್ಕೆ ವಿದ್ಯುತ್ ಸಂಪರ್ಕ ನೀಡಲಾಗುತ್ತದೆ. ಇದಲ್ಲದೇ ಶಿಬಿರದಲ್ಲಿ ವಾಸ್ತವ್ಯ ಹೂಡುವ ವಾಚರ್ ಸೇರಿದಂತೆ ಸಿಬ್ಬಂದಿಗಳಿಗೆ ಶುದ್ಧ ಕುಡಿಯುವ ನೀರು ಪೂರೈಸಲು ಸೋಲಾರ್ ಬೋರ್‌ವೆಲ್ ವ್ಯವಸ್ಥೆ ಮಾಡಲಾಗಿದೆ.

ಇದರೊಂದಿಗೆ ಕಳ್ಳ ಬೇಟೆ ತಡೆ ಶಿಬಿರದ ಕಟ್ಟಡಕ್ಕೆ ಹೊಸದಾಗಿ ಬಣ್ಣ ಹೊಡೆದು ಹೊಸ ರೂಪ ನೀಡಲಾಗಿದೆ ಅಲ್ಲದೇ ಸಿಬ್ಬಂದಿಗಳು ವಾಸ್ತವ್ಯಕ್ಕೆ ಹಾಸಿಗೆ ಸೌಲಭ್ಯ ಒದಗಿಸಲಾಗಿದ್ದು, ಅರಣ್ಯ ಪ್ರದೇಶದಲ್ಲಿ ಅರಣ್ಯ ಸಂಪತ್ತು ಸಂರಕ್ಷಣೆ ಮಾಡುವ ಸಿಬ್ಬಂದಿಗಳ ಹಿತ ಕಾಯಲು ಹಂತ ಹಂತವಾಗಿ ಕ್ರಮ ಕೈಗೊಂಡು ಎಲ್ಲಾ 53 ಕಳ್ಳ ಬೇಟೆ ತಡೆ ಶಿಬಿರವನ್ನು ಅಭಿವೃದ್ಧಿ ಪಡಿಸುವುದಕ್ಕೆ ಮುಂದಾಗಿರುವುದು ಮುಂಚೂಣಿ ಸಿಬ್ಬಂದಿಗಳಲ್ಲಿ ಸಂತಸ ಮನೆ ಮಾಡಿದೆ.

ಶ್ರೀ ಕೃಷ್ಣ ಟೆಂಪಲ್‌ನ ಬ್ರಹ್ಮರಥೋತ್ಸವ; ಡಾ.ವಸುಂಧರ ದೊರೆಸ್ವಾಮಿಗೆ ಸನ್ಮಾನ



ಹಿರಿಯ ಭರತನಾಟ್ಯ ಕಲಾವಿದೆ ಡಾ.ವಸುಂಧರ ದೊರೆಸ್ವಾಮಿ ಅವರಿಗೆ ಜೀವಮಾನ ಸಾಧನೆ ಪ್ರಶಸ್ತಿ ನೀಡಿ ಭಾನುವಾರ ಸನ್ಮಾನಿಸಲಾಯಿತು.

ಮೈಸೂರು, ಮೇ 11(ಎಸ್‌ಪಿಎನ್)– ಶ್ರೀ ಕೃಷ್ಣ ಟೆಂಪಲ್‌ನ 35ನೇ ವರ್ಷದ ಬ್ರಹ್ಮ ರಥೋತ್ಸವ ಹಾಗೂ ಶ್ರೀ ಕೃಷ್ಣಗಾನ ಸಭಾದ ಸಿಲ್ವರ್ ಜೂಬಿಲಿ ಹಾಗೂ ಜಾನಕಿ ಆಳ್ವಾರ್ ಸ್ಮರಣಾರ್ಥ ಏರ್ಪಡಿಸಿದ್ದ ಕಾರ್ಯಕ್ರಮದಲ್ಲಿ ಹಿರಿಯ ಭರತನಾಟ್ಯ ಕಲಾವಿದೆ ಡಾ.ವಸುಂಧರ ದೊರೆಸ್ವಾಮಿ ಅವರಿಗೆ ಜೀವಮಾನ ಸಾಧನೆ ಪ್ರಶಸ್ತಿ ನೀಡಿ ಭಾನುವಾರ ಸನ್ಮಾನಿಸಲಾಯಿತು.

ಮೈಸೂರು ಗೋಕುಲಂನ ಆಳ್ವಾರ್ ಕಲಾ ಭವನದಲ್ಲಿ ಶ್ರೀ ಕೃಷ್ಣಗಾನ ಸಭಾದಲ್ಲಿ ಶ್ರೀ ಕೃಷ್ಣಸೇವಾ ಸಮಿತಿ ಚಾರಿಟಬಲ್ ಟ್ರಸ್ಟ್ ಮತ್ತು ಶ್ರೀ ಕೃಷ್ಣಗಾನ ಸಭಾ ಸಹಯೋಗದೊಂದಿಗೆ ಏರ್ಪಡಿಸಿದ್ದ ಕಾರ್ಯಕ್ರಮದಲ್ಲಿ ಡಾ.ವಸುಂಧರ ದೊರೆಸ್ವಾಮಿ ಅವರನ್ನು ಉದ್ಯಮಿ ಜಗನ್ನಾಥ್‌ಶೆಣೈ ಸನ್ಮಾನಿಸಿ, ಶುಭಹಾರೈಸಿದರು. ಈ ವೇಳೆ ಬಿ.ಎಸ್.ಶ್ರೀಧರ ರಾಜ ಅರಸ್, ಟ್ರಸ್ಟಿ ಜೆ.ಮಹೇಶ್ ಸೇರಿದಂತೆ ಇತರ ಸದಸ್ಯರಿದ್ದರು.

ಪಂಜಾಬ್ ಕಿಂಗ್ಸ್‌ಗೆ ಸತತ 4ನೇ ಸೋಲು

ಡೆಲ್ಲಿ ಕ್ಯಾಪಿಟಲ್ಸ್ ಪ್ಲೇ ಆಫ್ ಕನಸು ಜೀವಂತ



ಧರ್ಮಶಾಲಾ, ಮೇ 11– ಐಪಿಎಲ್ ಟೂರ್ನಿ ಆರಂಭದಲ್ಲಿ ಸತತ ಗೆಲುವುಗಳೊಂದಿಗೆ ಅಂಕಪಟ್ಟಿಯಲ್ಲಿ ಅಗ್ರಸ್ಥಾನಕ್ಕೇರಿ, ಗೆಲುವಿನ ನಾಗಾಲೋಟದಲ್ಲಿ ತೇಲಾಡುತ್ತಿದ್ದ ಪಂಜಾಬ್ ಕಿಂಗ್ಸ್ ಇದೀಗ ಸತತ 4 ಸೋಲುಗಳಿಂದ ಕಂಗೆಟ್ಟಿದೆ.

ಇಲ್ಲಿನ ಹಿಮಾಚಲ ಪ್ರದೇಶ ಕ್ರಿಕೆಟ್ ಅಸೋಸಿಯೇಷನ್ ಕ್ರೀಡಾಂಗಣದಲ್ಲಿ ನಡೆದ ಪಂದ್ಯಾವಳಿಯ 55ನೇ ಪಂದ್ಯದಲ್ಲಿ ಡೆಲ್ಲಿ ವಿರುದ್ಧ ಮತ್ತೊಂದು ಸೋಲು ಅನುಭವಿಸಿದ ಪಂಜಾಬ್ ಕಿಂಗ್ಸ್ ಅಂಕಪಟ್ಟಿಯಲ್ಲಿ 4ನೇ ಸ್ಥಾನದಲ್ಲಿ ಮುಂದುವರೆದರೆ, ನಾಯಕ ಅಕ್ಷರ್ ಪಟೇಲ್, ಡೇವಿಡ್ ಮಿಲ್ಲರ್ ಅವರ ಅರ್ಧಶತಕಗಳ ನೆರವಿನಿಂದ ಭರ್ಜರಿ ಜಯ ಗಳಿಸಿದ ಡೆಲ್ಲಿ 7ನೇ ಸ್ಥಾನ ಅಲಂಕರಿಸಿದೆ. ಈ ಗೆಲುವಿನೊಂದಿಗೆ ಡೆಲ್ಲಿ ಕ್ಯಾಪಿಟಲ್ಸ್ ಪ್ಲೇ ಆಫ್ ಕನಸು ಜೀವಂತವಾಗಿಟ್ಟುಕೊಂಡಿದೆ.

ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಪಂಜಾಬ್ ಕಿಂಗ್ಸ್ 20 ಓವರ್‌ಗಳಲ್ಲಿ 5 ವಿಕೆಟ್ ನಷ್ಟಕ್ಕೆ 210 ರನ್ ಗಳಿಸಿತು. ನಂತರ ಗೆಲುವಿನ ಗುರಿ ಬೆನ್ನತ್ತಿದ ಡೆಲ್ಲಿ ಕ್ಯಾಪಿಟಲ್ಸ್ 19 ಓವರ್‌ಗಳಲ್ಲಿ 7 ವಿಕೆಟ್ ನಷ್ಟಕ್ಕೆ ಇನ್ನೂ 1 ಓವರ್ ಬಾಕಿ ಇರುವಂತೆಯೇ 216 ರನ್ ಗಳಿಸಿ ಗೆಲುವಿನ ನಗೆ ಬೀರಿತು.

ಪಂಜಾಬ್ ಪರ ಇನ್ನಿಂಗ್ಸ್ ಆರಂಭಿಸಿದ ಪ್ರಿಯಾಂಶ್ ಆರ್ಯ ಹಾಗೂ ಪ್ರಭ್‌ಸಿಮ್ರಾನ್ ಸಿಂಗ್ ಮೊದಲ ವಿಕೆಟ್‌ಗೆ 78 ರನ್‌ಗಳ ಉತ್ತಮ ಆರಂಭ ಒದಗಿಸಿದರು. ಈ ವೇಳೆ 18 ರನ್ ಗಳಿಸಿದ್ದ ಪ್ರಭ್‌ಸಿಮ್ರಾನ್ ಸಿಂಗ್ ವಿಕೆಟ್ ಒಪ್ಪಿಸಿದರು. ಈ ವೇಳೆ 33 ಎಸೆತಗಳಲ್ಲಿ 6 ಸಿಕ್ಸರ್, 2 ಬೌಂಡರಿ ಒಳಗೊಂಡ 56 ರನ್ ಗಳಿಸಿ ಉತ್ತಮವಾಗಿ ಆಡುತ್ತಿದ್ದ ಪ್ರಿಯಾಂಶ್ ಆರ್ಯ ಕೂಡ ನಿರ್ಗಮಿಸಿದರು. ನಂತರ ಬಂದ ನಾಯಕ ಶ್ರೇಯಸ್ ಅಯ್ಯರ್ 36 ಎಸೆತಗಳಲ್ಲಿ 3 ಸಿಕ್ಸರ್, 5 ಬೌಂಡರಿ ಒಳಗೊಂಡ 59 ರನ್ ಗಳಿಸಿ ಅಜೇಯರಾಗಿ ಉಳಿದರು. ಇವರಿಗೆ ಉತ್ತಮ ಸಾಥ್ ನೀಡಿದ ಕೂಪರ್ ಕನೋಲಿ 38 ರನ್ ಗಳಿಸಿ ಔಟಾದರು. ಅಂತಿಮವಾಗಿ ಸೂರ್ಯಾಂಶ್ ಶೆಡ್ಜ್ 8 ಎಸೆತಗಳಲ್ಲಿ ತಲಾ 2 ಸಿಕ್ಸರ್, ಬೌಂಡರಿ ಒಳಗೊಂಡ ಅಜೇಯ 21 ರನ್ ಗಳಿಸಿ ತಂಡದ ಮೊತ್ತವನ್ನು 200ರ ಗಡಿ ದಾಟಿಸಿದರು. ಡೆಲ್ಲಿ ಪರ ಮಿಚೆಲ್ ಸ್ಟಾರ್ಕ್, ಮಾಧವ್ ತಿವಾರಿ ತಲಾ 2, ಮುಖೇಶ್ ಕುಮಾರ್ 1 ವಿಕೆಟ್ ಪಡೆದರು.

211 ರನ್‌ಗಳ ಬೃಹತ್ ಗೆಲುವಿನ ಗುರಿ ಬೆನ್ನತ್ತಿದ ಡೆಲ್ಲಿ ಕ್ಯಾಪಿಟಲ್ಸ್ ತಂಡದ ಮೊತ್ತ 33 ರನ್ ಆಗುವಷ್ಟರಲ್ಲಿ ಕೆ.ಎಲ್.ರಾಹುಲ್ 9, ಅಭಿಷೇಕ್ ಪೊರೆಲ್ 5, ಸಾಹಿಲ್ ಪರಾಕ್ 13 ರನ್ ಗಳಿಸಿ ನಿರ್ಗಮಿಸಿದರು. ನಂತರ ಬಂದ ಟ್ರಿಸ್ಟನ್ ಸ್ಟಬ್ಸ್ ಕೂಡ 12 ರನ್ ಗಳಿಸಿ ಬಹುಬೇಗ ವಿಕೆಟ್ ಒಪ್ಪಿಸಿದರು. ಈ ವೇಳೆ ಜೊತೆಯಾದ ನಾಯಕ ಅಕ್ಷರ್ ಪಟೇಲ್ ಹಾಗೂ ಡೇವಿಡ್ ಮಿಲ್ಲರ್ 64 ರನ್ ಗಳ ಜೊತೆಯಾಟವಾಡುವ ಮೂಲಕ ತಂಡಕ್ಕೆ ಚೇತರಿಕೆ ನೀಡಿದರು. ಆದರೆ ನಾಯಕನಿಗೆ ತಕ್ಕ ಆಟವಾಡಿದ ಅಕ್ಷರ್ ಪಟೇಲ್ 30 ಎಸೆತಗಳಲ್ಲಿ 8 ಬೌಂಡರಿ, 2 ಸಿಕ್ಸರ್ ಒಳಗೊಂಡ 56 ರನ್ ಗಳಿಸಿ ಪೆವಿಲಿಯನ್ ಸೇರಿಕೊಂಡರು. ಬಿರುಸಿನ ಅರ್ಧಶತಕ ಸಿಡಿಸಿದ ಡೇವಿಡ್ ಮಿಲ್ಲರ್ 28 ಎಸೆತಗಳಲ್ಲಿ 3 ಬೌಂಡರಿ, 4 ಸಿಕ್ಸರ್ ಒಳಗೊಂಡ 51 ರನ್ ಗಳಿಸಿ ನಿರ್ಗಮಿಸಿದರು. ನಂತರ ಕ್ರೀಸ್‌ಗೆ ಆಗಮಿಸಿದ ಅಶುತೋಷ್ ಶರ್ಮಾ 10 ಎಸೆತಗಳಲ್ಲಿ ತಲಾ 2 ಸಿಕ್ಸರ್, ಬೌಂಡರಿ ಒಳಗೊಂಡ ಬಿರುಸಿನ 24 ರನ್ ಗಳಿಸಿದರೇ, ಮಾಧವ್ ತಿವಾರಿ 18, ಔಕಿಬ್ ನಬಿ ದಾರ್ 10 ರನ್ ಗಳಿಸಿ ತಂಡಕ್ಕೆ ಭರ್ಜರಿ ಜಯ ತಂದುಕೊಟ್ಟರು. ಪಂಜಾಬ್ ಪರ ಅರ್ಶದೀಪ್ ಸಿಂಗ್‌ಮ ಯಶ್ ಠಾಕೂರ್ ತಲಾ 2, ಬೆನ್ ದ್ವಾರ್ಶುಯಿಸ್, ಮಾರ್ಕಸ್ ಸ್ಟೋಯಿನಿಸ್ ತಲಾ ಒಂದೊಂದು ವಿಕೆಟ್ ಉರುಳಿಸಿದರು. ಬ್ಯಾಟಿಂಗ್ ಹಾಗೂ ಬೌಲಿಂಗ್‌ನಲ್ಲಿ ಆಲ್‌ರೌಂಡ್ ಆಟ ಪ್ರದರ್ಶಿಸಿದ ಮಾಧವ್ ತಿವಾರಿ ಪಂದ್ಯಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು.

ಕಾಪರ್ ಕೇಬಲ್ ಕಳ್ಳತನ

ಮೈಸೂರು, ಮೇ 11(ಪಿಎಂ)– ಕಡಕೊಳ ಸಮೀಪದ ಕೆಎನ್ ಹುಂಡಿ ಬಳಿಯಲ್ಲಿ ಸೋಲಾರ್ ಪವರ್ ಪಾಯಿಂಟ್ ಜನರೇಷನ್ ಕಾಮಗಾರಿ ಸ್ಥಳದಲ್ಲಿ ಅಳವಡಿಸಿದ್ದ 9 ಕಾಯಿಲ್‌ನಷ್ಟು ಕಾಪರ್ ಕೇಬಲ್ ಕಳ್ಳತನ ಮಾಡಲಾಗಿದೆ.

ಸೆಕ್ಯೂರಿಟಿ ಸರ್ವೀಸ್ ಸಂಸ್ಥೆಯ ಶಶಿಕಾಂತ್ ಈ ಸಂಬಂಧ ದೂರು ನೀಡಿದ ಅನ್ವಯ ಮೈಸೂರು ದಕ್ಷಿಣ ಪೊಲೀಸ್ ಠಾಣೆಯಲ್ಲಿ ಮೇ 10ರಂದು ಎಫ್‌ಐಆರ್ ದಾಖಲಾಗಿದೆ. ಮೇ 7ರಂದು ರಾತ್ರಿ ಕಾಮಗಾರಿ ಸ್ಥಳದಲ್ಲಿ ಕಾಪರ್ ಕೇಬಲ್ ಕಳ್ಳತನ ಮಾಡಲಾಗಿದೆ. ಕಾಮಗಾರಿ ಸ್ಥಳದಲ್ಲಿ ಭದ್ರತೆಗಾಗಿ ಗುತ್ತಿಗೆ ಪಡೆದಿದ್ದು, ಅದರಂತೆ ನಮ್ಮ ಸೆಕ್ಯೂರಿಟಿ ಸಂಸ್ಥೆಯಿಂದ ಹಗಲು ಇಬ್ಬರು, ರಾತ್ರಿ ನಾಲ್ವರು ಸಿಬ್ಬಂದಿ ಪಾಳಿಯಲ್ಲಿ ಕರ್ತವ್ಯ ನಿರ್ವಹಿಸಲು ನೇಮಿಸಲಾಗಿದೆ. ಅದಾಗ್ಯೂ ಕಳ್ಳತನ ನಡೆದಿದ್ದು, ಸೆಕ್ಯೂರಿಟಿ ಗಾರ್ಡ್‌ಗಳನ್ನು ವಿಚಾರಿಸಿ ದೂರು ನೀಡುತ್ತಿರುವುದಾಗಿ ಶಶಿಕಾಂತ್ ದೂರಿನಲ್ಲಿ ತಿಳಿಸಿದ್ದಾರೆ.



ತಮಿಳುನಾಡು ಸಿಎಂ ವಿಜಯ್‌ಗೆ ಝಡ್ ಪ್ಲಸ್ ಭದ್ರತೆ

ಕೇಂದ್ರ ಸರ್ಕಾರ ಮಹತ್ವದ ನಿರ್ಧಾರ



ಚೆನ್ನೈ: ತಮಿಳುನಾಡು ಮುಖ್ಯಮಂತ್ರಿ ಜೋಸೆಫ್ ವಿಜಯ್‌ಗೆ ಕೇಂದ್ರ ಸರ್ಕಾರ ಝಡ್–ಪ್ಲಸ್ ಭದ್ರತೆ ನೀಡಿದೆ. ಸೋಮವಾರ ಬೆಳಿಗ್ಗೆಯಿಂದಲೇ ಒದಗಿಸಲಾಗುತ್ತಿದೆ. ಈ ವ್ಯವಸ್ಥೆಯು 24 ಗಂಟೆಗಳ ಭದ್ರತೆಯನ್ನು ಒದಗಿಸುತ್ತದೆ. ಇದರಲ್ಲಿ ಅತ್ಯಾಧುನಿಕ ಎಂಪಿಎಸ್ ಶಸ್ತ್ರಾಸ್ತ್ರಗಳನ್ನು ಹೊಂದಿರುವ 55 ಕೇಂದ್ರ ಭದ್ರತಾ ಸಿಬ್ಬಂದಿ ಸೇರಿದ್ದಾರೆ. ಮುಖ್ಯಮಂತ್ರಿಯ ಭದ್ರತಾ ತಂಡವು ಈಗ 10ಕ್ಕೂ ಹೆಚ್ಚು ಎನ್‌ಎಸ್‌ಜಿ ಕಮಾಂಡೋಗಳನ್ನು ಒಳಗೊಂಡಿದೆ. ತಮಿಳುನಾಡು ಮುಖ್ಯಮಂತ್ರಿಯ ಭದ್ರತಾ ವ್ಯವಸ್ಥೆಗಳನ್ನು ಕೇಂದ್ರ ಸರ್ಕಾರ ಗಮನಾರ್ಹವಾಗಿ ಬಿಗಿಗೊಳಿಸಿದೆ. ಈ ಭದ್ರತಾ ಪಡೆಯ ಎಲ್ಲಾ ಸದಸ್ಯರು ಸುಧಾರಿತ ಎಂಪಿ5 ಸಬ್–ಮೆಷಿನ್‌ಗನ್‌ಗಳನ್ನು ಹೊಂದಿದ್ದಾರೆ. ವಿಜಯ್ ಅವರ ಭದ್ರತೆಗಾಗಿ ಗುಂಡು ನಿರೋಧಕ ವಾಹನ ಮತ್ತು ಪೈಲಟ್ ಕಾರನ್ನು ಸಹ ಒದಗಿಸಲಾಗಿದೆ. ಇದು ಅವರ ಹಿಂದಿನ 'ವೈ' ವರ್ಗದ ಭದ್ರತೆಗಿಂತ ಮೇಲ್ದರ್ಜೆಗೇರಿಸಲಾಗಿದೆ.

'ಝಡ್–ಪ್ಲಸ್ ' ಭದ್ರತೆಯು ವಿಐಪಿಗಳಿಗೆ ಒದಗಿಸಲಾದ ಅತ್ಯುನ್ನತ ಮಟ್ಟದ ಭದ್ರತೆಯಾಗಿದೆ. ಹೆಚ್ಚಿನ ಜೀವ ಅಪಾಯದಲ್ಲಿರುವ ನಾಯಕರು ಮತ್ತು ಪ್ರಮುಖ ರಾಜಕೀಯ ವ್ಯಕ್ತಿಗಳಿಗೆ ಈ ಭದ್ರತೆಯನ್ನು ಒದಗಿಸಲಾಗುತ್ತದೆ. ಈ ಪ್ರೋಟೋಕಾಲ್ ಅಡಿಯಲ್ಲಿ, 36 ಕಮಾಂಡೋಗಳು, ಸುಧಾರಿತ ಶಸ್ತ್ರಾಸ್ತ್ರಗಳು ಮತ್ತು ಗುಂಡು ನಿರೋಧಕ ವಾಹನವನ್ನು ನಿಯೋಜಿಸಲಾಗಿದೆ. ಸೋಮವಾರ ನಡೆದ 17ನೇ ವಿಧಾನಸಭೆಯ ಉದ್ಘಾಟನಾ ಅಧಿವೇಶನದಲ್ಲಿ ವಿಜಯ್ ಭಾಗವಹಿಸಿದ್ದರು. ಹಂಗಾಮಿ ಸ್ಪೀಕರ್ ಕರುಪಯ್ಯ ಅವರು ಹೊಸದಾಗಿ ಆಯ್ಕೆಯಾದ ಶಾಸಕರಿಗೆ ಪ್ರಮಾಣ ವಚನ ಬೋಧಿಸಿದರು. ಪೆರಂಬೂರ್ ಕ್ಷೇತ್ರವನ್ನು ಪ್ರತಿನಿಧಿಸುವ ಶಾಸಕರಾಗಿ ವಿಜಯ್ ಪ್ರಮಾಣ ವಚನ ಸ್ವೀಕರಿಸಿದರು. ಇದರ ನಂತರ ಅವರ ಸಂಪುಟ ಸಚಿವರು, ವಿರೋಧ ಪಕ್ಷದ ನಾಯಕ ಉದಯನಿಧಿ ಸ್ಟಾಲಿನ್ ಮನೆಗೆ ಭೇಟಿ ನೀಡಿದ್ದರು.

ಪಂಚಭೂತಗಳಲ್ಲಿ ಸಚಿವ ಡಿ. ಸುಧಾಕರ್ ಲೀನ



ಚಿಕ್ಕಬಳ್ಳಾಪುರ: ಹಿರಿಯೂರು ಶಾಸಕರು ಹಾಗೂ ಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಸಚಿವ ಡಿ. ಸುಧಾಕರ್ ಪಂಚಭೂತಗಳಲ್ಲಿ ಲೀನವಾಗಿದ್ದಾರೆ. ತೀವ್ರ ಅನಾರೋಗ್ಯದಿಂದ ಬಳಲುತ್ತಿದ್ದ ಸಚಿವ ಡಿ ಸುಧಾಕರ್ ಅವರು ಚಿಕಿತ್ಸೆ ಫಲಿಸದೇ ನಿಧನರಾಗಿದ್ದರು.

ಇಂದು ಪಾವಗಡ ರಸ್ತೆಯ ಜೈನ ಮುಕ್ತಿಧಾಮದಲ್ಲಿ ಸಕಲ ಸರ್ಕಾರಿ ಗೌರವಗಳೊಂದಿಗೆ ಅಂತ್ಯ ಸಂಸ್ಕಾರ ನಡೆಯಿತು. ಪುತ್ರ ಸುಹಾಸ್, ಅಂತಿಮ ಕ್ರಿಯೆಗಳನ್ನು ನಡೆಸಿದರು. ಜೈನ ಸಂಪ್ರದಾಯದಂತೆ ಅಂತಿಮ ಸಂಸ್ಕಾರ ನಡೆಸಲಾಗಿದ್ದು ಸುಧಾಕರ್ ಅವರ ಪಾರ್ಥಿವ ಶರೀರಕ್ಕೆ ಪುತ್ರ ಸುಹಾಸ್ ಅಗ್ನಿ ಸ್ಪರ್ಶ ಮಾಡಿದರು. ಇದರೊಂದಿಗೆ ಸಚಿವ ಡಿ. ಸುಧಾಕರ್ ಅವರು ಪಂಚಭೂತಗಳಲ್ಲಿ ಲೀನವಾದರು. ಅಂತ್ಯ ಸಂಸ್ಕಾರದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಸ್ಪೀಕರ್ ಯುಟಿ ಖಾದರ್, ಡಿಸಿಎಂ ಡಿ.ಕೆ. ಶಿವಕುಮಾರ್ ಸೇರಿದಂತೆ ಹಲವು ಸಚಿವರು, ಶಾಸಕರು ಭಾಗಿಯಾಗಿದ್ದರು.

ಮೈಸೂರು ಮಿತ್ರ 47
ಓದುಗರ ಗಮನಕ್ಕೆ

ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.

-ಜಾಹೀರಾತು ವ್ಯವಸ್ಥಾಪಕರು

ಚಿನ್ನ, ಇಂಧನ ಬೆಲೆ ಏರಿಕೆ ಬಗ್ಗೆ ಪ್ರಧಾನಿ ಮಾತನಾಡಲಿ

ಬಿಜೆಪಿಗರಿಂದಲೇ ತ್ಯಾಗ ಪ್ರಾರಂಭವಾಗಲಿ ; ಡಿಕೆಶಿ



ಬೆಂಗಳೂರು, ಮೇ 11– ಚಿನ್ನ ಖರೀದಿ ಮಾಡಬೇಡಿ, ಇಂಧನ ಬಳಕೆ ಕಡಿಮೆ ಮಾಡಿ ಎಂದು ಸಲಹೆ ನೀಡುತ್ತಿರುವ ಪ್ರಧಾನ ಮಂತ್ರಿಗಳು, ಇವುಗಳ ಬೆಲೆ ಏರಿಕೆಯಾಗಿದ್ದು ಯಾಕೆ, ಯಾರಿಂದ ಬೆಲೆ ಏರಿಕೆಯಾಗಿದೆ ಎಂಬುದನ್ನು ವಿವರಿಸಬೇಕು ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಆಗ್ರಹಿಸಿದರು.

ಬೆಂಗಳೂರಿನ ಸರ್ಕಾರಿ ನಿವಾಸ ಕುಮಾರಪಾರ್ಕ್ ಬಳಿ ಮಾಧ್ಯಮಗಳ ಪ್ರಶ್ನೆಗಳಿಗೆ ಶಿವಕುಮಾರ್ ಅವರು ಸೋಮವಾರ ಪ್ರತಿಕ್ರಿಯೆ ನೀಡಿದರು.

ಪ್ರಧಾನಿ ನರೇಂದ್ರ ಮೋದಿ ಅವರು ಭಾನುವಾರ ದೇಶದ ಜನರಿಗೆ ಕೊಟ್ಟಿರುವ ಸಲಹೆ ಬಗ್ಗೆ ಕೇಳಿದಾಗ, ಮದುವೆ, ಮುಂಜಿ ಮಾಡುವವರಿಗೆ ಚಿನ್ನ ತೆಗೆದುಕೊಳ್ಳಬೇಡಿ ಎಂದು ಹೇಳಲು ಸಾಧ್ಯವೇ. ಅವರು ಸಲಹೆಗಳನ್ನು ನೀಡುತ್ತಾರೆ. ಹಿಂದೆ ಕೋವಿಡ್ ಬಂದಾಗ ದೀಪ ಹಚ್ಚಿಸಿ, ಚಪ್ಪಾಳೆ ತಟ್ಟಿಸಿದರು. ಅದರಿಂದ ಸಮಸ್ಯೆ ನಿಂತು ಹೋಯಿತಾ. ಮದುವೆಯಾದ ಮಹಿಳೆ ಚಿನ್ನದ ತಾಳಿ, ಸರ ಹಾಕಿಕೊಳ್ಳುವುದನ್ನು ಬೇಡ ಎನ್ನಲು ಸಾಧ್ಯವೇ. ಅವರ ಬದುಕಿನಲ್ಲಿ ಕಷ್ಟವೋ ಸುಖವೋ, ಸಾಲ ಮಾಡಿ ಚಿನ್ನ ಖರೀದಿ ಮಾಡುತ್ತಾರೆ. ಎಲ್ಲರನ್ನು ಸಾರ್ವಜನಿಕ ಸಾರಿಗೆಯಲ್ಲೇ ಓಡಾಡಿ ಎನ್ನುವುದಾದರೆ, ಕೇಂದ್ರ ಸರ್ಕಾರದ ಅಧಿಕಾರಿಗಳು ಸಾರ್ವಜನಿಕ ಸಾರಿಗೆಯಲ್ಲಿ ಓಡಾಡುವಂತೆ ಪ್ರಧಾನ ಮಂತ್ರಿಗಳು ಸೂಚಿಸಲಿ. ಅವರ ಕೇಂದ್ರ ಸಚಿವರಿಗೆ ತಾಕೀತು ಮಾಡಲಿ. ನಾವು ಮೊದಲು ನಡೆದುಕೊಂಡು ನಂತರ ಸಾಮಾನ್ಯ ಜನಕ್ಕೆ ಸಂದೇಶ ನೀಡಬೇಕು ಎಂದು ತಿರುಗೇಟು ನೀಡಿದರು.

ಬಿಜೆಪಿಗರಿಂದ ತ್ಯಾಗ ಪ್ರಾರಂಭವಾಗಲಿ: ಬಿಜೆಪಿ ಶಾಸಕರು, ನಾಯಕರು, ಕಾರ್ಯಕರ್ತರಿಂದ ತ್ಯಾಗ ಪ್ರಾರಂಭವಾಗಲಿ ಎಂದು ಡಿ.ಕೆ.ಶಿವಕುಮಾರ್ ಹೇಳಿದರು. ಜಗತ್ತಿನ ಪರಿಸ್ಥಿತಿ ಸರಿಯಿಲ್ಲ, ಕೆಲವೊಮ್ಮೆ ತ್ಯಾಗಕ್ಕೂ ಸಿದ್ಧವಾಗಿರಬೇಕೆಂಬ ಕಾರಣಕ್ಕೆ ಸಂದೇಶ ನೀಡಿದ್ದಾರೆ ಎಂದಾಗ, ಮೊದಲು ತ್ಯಾಗವನ್ನು ಕೇಂದ್ರ ಸರ್ಕಾರದ ಸಚಿವರು, ಅಧಿಕಾರಿಗಳು, ಬಿಜೆಪಿ ಆಡಳಿತ ರಾಜ್ಯಗಳಲ್ಲಿರುವ ಅಧಿಕಾರಿಗಳಿಂದ, ಅವರ ಪಕ್ಷದ ಶಾಸಕರು, ನಾಯಕರು ಹಾಗೂ ಕಾರ್ಯಕರ್ತರಿಂದ ತ್ಯಾಗ ಆರಂಭವಾಗಲಿ. ನಂತರ ಬೇರೆಯವರಿಗೆ ತ್ಯಾಗದ ಸಲಹೆ ನೀಡಲಿ ಎಂದು ತಿರುಗೇಟು ನೀಡಿದರು.

ಬೆಂಗಳೂರಿಗೆ ಗ್ಯಾರಂಟಿ ಯೋಜನೆ; ಮೇ 13ರಂದು ಪ್ರಕಟ

ನಿನ್ನೆ ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೆವಾಲ ಅವರೊಂದಿಗೆ ಜಿಬಿಎ ಸಭೆ ಮಾಡಿದ್ದೀರಿ ಎಂದು ಕೇಳಿದಾಗ, ಸುರ್ಜೆವಾಲ ಅವರ ಜೊತೆ ರಾಜಕೀಯವಾಗಿ ಸಭೆ ಮಾಡಿದ್ದೇವೆ. ಅಧಿಕಾರಿಗಳನ್ನು ಕರೆದು ಕೆಲವು ಸೂಚನೆ ನೀಡಿದ್ದು, ಬೆಂಗಳೂರು ನಗರಕ್ಕೆ ದೊಡ್ಡ ಗ್ಯಾರಂಟಿಗಳನ್ನು ನೀಡುತ್ತಿದ್ದೇವೆ. ಈ ಬಗ್ಗೆ ಮೇ 13ರಂದು ಮಾಹಿತಿ ನೀಡುತ್ತೇವೆ ಎಂದು ಡಿ.ಕೆ.ಶಿವಕುಮಾರ್ ತಿಳಿಸಿದರು.



ಬಂಗಾಳದಲ್ಲಿ ಬದಲಾವಣೆಯ ಪರ್ವ: ಗಡಿ ಸುರಕ್ಷತೆಗೆ ಆದ್ಯತೆ

ಬಿಎಸ್‌ಎಫ್‌ಗೆ ಭೂಮಿ ಹಸ್ತಾಂತರಿಸಲು ಸುವೇಂದು ಸರ್ಕಾರ ಅಸ್ತು

ಮೊದಲ ಸಂಪುಟ ಸಭೆಯಲ್ಲೇ ಮಹತ್ವದ ನಿರ್ಧಾರ

ಕೋಲ್ಕತಾ: ಪಶ್ಚಿಮ ಬಂಗಾಳದಲ್ಲಿ ಹೊಸ ಸರ್ಕಾರ ಅಧಿಕಾರಕ್ಕೆ ಬಂದ ಬಳಿಕ ಮೊದಲ ಸಚಿವ ಸಂಪುಟ ಸಭೆಯಲ್ಲೇ ಗಡಿ ಭದ್ರತೆಗೆ ಸಂಬಂಧಿಸಿದ ಮಹತ್ವದ ನಿರ್ಧಾರ ಕೈಗೊಳ್ಳಲಾಗಿದೆ.

ಮುಖ್ಯಮಂತ್ರಿ ಸುವೇಂದು ಅಧಿಕಾರಿ ನೇತೃತ್ವದಲ್ಲಿ ನಡೆದ ಮೊದಲ ಸಚಿವ ಸಂಪುಟ ಸಭೆಯಲ್ಲಿ ಭಾರತ–ಬಾಂಗ್ಲಾದೇಶ ಗಡಿ ಪ್ರದೇಶದಲ್ಲಿ ಫೆನ್ಸಿಂಗ್ ಕಾರ್ಯಕ್ಕೆ ಗಡಿ ಭದ್ರತಾ ಪಡೆ (ಬಿಎಸ್‌ಎಫ್)ಗೆ ಭೂಮಿ ಹಸ್ತಾಂತರಿಸಲು ಅನುಮೋದನೆ ನೀಡಲಾಗಿದೆ.

ಸಭೆಯ ನಂತರ ಮಾತನಾಡಿದ ಮುಖ್ಯಮಂತ್ರಿ ಸುವೇಂದು ಅಧಿಕಾರಿ ಅವರು, ಅಂತರರಾಷ್ಟ್ರೀಯ ಗಡಿಯಲ್ಲಿ ಬೇಲಿ ನಿರ್ಮಾಣಕ್ಕಾಗಿ ಸುಮಾರು 105 ಎಕರೆ ಭೂಮಿಯನ್ನು ಕೇಂದ್ರಕ್ಕೆ ವರ್ಗಾಯಿಸಲು ಒಪ್ಪಿಗೆ ನೀಡಲಾಗಿದ್ದು, ಈ ಪ್ರಕ್ರಿಯೆಯು ಮೇ 11 ರಿಂದ ಪ್ರಾರಂಭವಾಗಿ 45 ದಿನಗಳಲ್ಲಿ ಪೂರ್ಣಗೊಳ್ಳಲಿದೆ ಎಂದು ಹೇಳಿದ್ದಾರೆ.

ಗಡಿ ಪ್ರದೇಶದಲ್ಲಿ ಅಕ್ರಮ ನುಸುಳುಕೋರರ ತಡೆ ಹಾಗೂ ರಾಷ್ಟ್ರೀಯ ಭದ್ರತೆ ದೃಷ್ಟಿಯಿಂದ ಈ ಕ್ರಮ ಅತ್ಯಂತ ಅಗತ್ಯವಾಗಿದೆ ಎಂದು ಅವರು ತಿಳಿಸಿದ್ದಾರೆ.

ಇದೇ ವೇಳೆ ಹಿಂದಿನ ಸರ್ಕಾರದ ಅವಧಿಯಲ್ಲಿ ಈ ಪ್ರಕ್ರಿಯೆ ವಿಳಂಬಗೊಂಡಿತ್ತು ಎಂದು ಆರೋಪಿಸಿದ ಅವರು, ಈಗಿನ ಸರ್ಕಾರ ಗಡಿ ಭದ್ರತೆಯಲ್ಲಿ ಯಾವುದೇ ರಾಜಿ ಮಾಡಿಕೊಳ್ಳುವುದಿಲ್ಲ ಎಂದು ಸ್ಪಷ್ಟಪಡಿಸಿದರು.

ಮೊದಲ ಸಂಪುಟ ಸಭೆಯಲ್ಲೇ ಕೇಂದ್ರ ಸರ್ಕಾರದ ಹಲವು ಯೋಜನೆಗಳಿಗೆ ಗ್ರೀನ್ ಸಿಗ್ನಲ್ ನೀಡಲಾಗಿದ್ದು, ಆಯುಷ್ಮಾನ್ ಭಾರತ್ ಆರೋಗ್ಯ ಯೋಜನೆ ಮತ್ತು ಪ್ರಧಾನ ಮಂತ್ರಿ ಉಜ್ವಲ ಯೋಜನೆ 3.0 ಸೇರಿದಂತೆ ಇತರ ಕೇಂದ್ರ ಸರ್ಕಾರದ ಪ್ರಮುಖ ಯೋಜನೆಗಳನ್ನು ಜಾರಿಗೆ ತರಲು ನಿರ್ಧರಿಸಲಾಗಿದೆ ಎಂದು ತಿಳಿಸಿದ್ದಾರೆ.

ಇದಲ್ಲದೆ ಸರ್ಕಾರಿ ಉದ್ಯೋಗ ಆಕಾಂಕ್ಷಿಗಳಿಗೆ ವಯೋಮಿತಿಯಲ್ಲಿ ಐದು ವರ್ಷಗಳ ಸಡಿಲಿಕೆ ನೀಡುವ ನಿರ್ಧಾರಕ್ಕೂ ಸಂಪುಟ ಒಪ್ಪಿಗೆ ನೀಡಿದೆ. ರಾಜ್ಯದಲ್ಲಿ ಭಾರತೀಯ ನ್ಯಾಯ ಸಂಹಿತೆಯನ್ನು ಜಾರಿಗೆ ತರಲು ಮತ್ತು ಜೂನ್ 2025ರ ಜನಗಣತಿ ಪ್ರಕ್ರಿಯೆಯನ್ನು ತಕ್ಷಣವೇ ಪ್ರಾರಂಭಿಸಲು ಅನುಮೋದನೆ ನೀಡಲಾಗಿದೆ.

ಹೊಸ ಕ್ರಿಮಿನಲ್ ಕಾನೂನುಗಳಾದ ಭಾರತೀಯ ನ್ಯಾಯ ಸಂಹಿತೆ ಸೇರಿದಂತೆ ಕೇಂದ್ರದ ಕಾನೂನುಗಳನ್ನು ರಾಜ್ಯದಲ್ಲಿ ತಕ್ಷಣದಿಂದ ಜಾರಿಗೆ ತರಲು ಸಹ ನಿರ್ಧಾರ ಕೈಗೊಳ್ಳಲಾಗಿದೆ ಎಂದು ಮಾಹಿತಿ ನೀಡಿದರು. ಇದೇ ವೇಳೆ ಮುಂದಿನ ಸಚಿವ ಸಂಪುಟ ಸಭೆ ಮುಂದಿನ ವಾರ ನಡೆಯಲಿದೆ ಎಂದು ತಿಳಿಸಿದರು.